ಸಂಪುಟ: 04 ಸಂಚಿಕೆ: 117 ಪುಟಗಳು: 08 ಬುಧವಾರ 10 ಜುಲೈ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ನಿಮ್ಮ ಮನಸ್ಸನ್ನು ಯಾವಾಗಲೂ ಹೂದೋಟದಂತೆ ಇಡಿ, ಆಗ ಕಲರ್‌ಫುಲ್ ಚಿಟ್ಟೆಗಳು ನಿಮ್ಮತ್ರ ಬರುತ್ತವೆ, ನಿಮ್ಮ ಮನಸ್ಸು ಗಲೀಜಾಗಿದ್ರೆ ಬರೀ ಸೊಳ್ಳೆಗಳಷ್ಟೇ ಬರುತ್ತವೆ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಇನ್ನೆರಡು ವರ್ಷದಲ್ಲಿ 'ಎನ್‌ಡಿಎ' ಸರ್ಕಾರ ಪತನ, ಖರ್ಗೆ ಪ್ರಧಾನಿ

• ಉದಯವಾಹಿನಿ, ಯಾದಗಿರಿ

ಮುಂದಿನ ಎರಡು ವರ್ಷಗಳಲ್ಲಿ ಕೇಂದ್ರದಲ್ಲಿ ಎನ್‌ಡಿಎ ಸರ್ಕಾರ ಪತನಗೊಳ್ಳಲಿದ್ದು, ನಂತರ ಎಐಸಿಸಿ ಅಧ್ಯಕ್ಷ ಡಾ. ಮಲ್ಲಿಕಾರ್ಜುನ್ ಖರ್ಗೆ ಅವರು ಪ್ರಧಾನಮಂತ್ರಿ ಸ್ಥಾನ ಅಲಂಕರಿಸಲಿದ್ದಾರೆ ಎಂದು ಕಾಂಗ್ರೆಸ್ ಮಾಜಿ ಸಚಿವ ಬಾಬುರಾವ್ ಚಿಂಚನಸೂರ್ ಭವಿಷ್ಯ ನುಡಿದಿದ್ದಾರೆ. ಇನ್ನೆರಡು ವರ್ಷದ ನಂತರ ಕೇಂದ್ರದಲ್ಲಿ ಎನ್‌ಡಿಎ ಸರ್ಕಾರ ಇರುವುದಿಲ್ಲ. ಖರ್ಗೆ ಪ್ರಧಾನಿ ಆದರೆ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಆಗಲಿದೆ. ವಿಶೇಷವಾಗಿ ಕಲಬುರ್ಗಿ ಜಿಲ್ಲೆ ಸರ್ವಾಂಗೀಣ ಅಭಿವೃದ್ಧಿಯಾಗಲಿದೆ. ಸಮಸ್ತ ಕುಲಬಾಂಧವರಿಗೆ ಒಳ್ಳೆಯ ಕಾಲ ಬರಲಿದೆ ಎಂದು ಗುರುಮಠಕಲ್ ನಲ್ಲಿ ಮಾಜಿ ಸಚಿವ ಬಾಬುರಾವ ಚಿಂಚನಸೂರ್ ಅವರು ಹೇಳಿಕೆ ನೀಡಿದರು.

## ಸಿದ್ದರಾಮಯ್ಯ, ಪತ್ನಿ ಪಾರ್ವತಿ ವಿರುದ್ಧ ದೂರು ದಾಖಲು!

• ಉದಯವಾಹಿನಿ, ಮೈಸೂರು

ಮುಡಾದಲ್ಲಿ ನಡೆದಂತಹ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಸಂಕಷ್ಟ ಎದುರಾಗಿದ್ದು ಇದೀಗ ಈ ಒಂದು ಪ್ರಕರಣಕ್ಕೆ ಸಂಬಂಧಿಸಿದಂತೆ ಮೈಸೂರು ಜಿಲ್ಲೆಯ ವಿಜಯನಗರ ಠಾಣೆಯಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಆರ್‌ಟಿಐ ಕಾರ್ಯಕರ್ತರು ಒಬ್ಬರು ದೂರು ನೀಡಿದ್ದಾರೆ. ಹೌದು ಮುಡಾ ಪ್ರಕರಣದಲ್ಲಿ ಸೈಟ್ ಹಂಚಿಕೆಗೆ ಬಿಗ್ ಟ್ವಿಸ್ಟ್ ಸಿಕ್ಕಿದ್ದು ಸಿಎಂ ಸಿದ್ದರಾಮಯ್ಯಗೆ ಸಂಕಷ್ಟ ಎದುರಾಗಿದೆ. ಮೋಡ ಸೈಟ್ ಹಂಚಿಕೆ ವಿಚಾರದಲ್ಲಿ ನಕಲಿ ದಾಖಲೆಗಳನ್ನು ಸೃಷ್ಟಿ ಮಾಡಿದ್ದಾರೆ ಎಂದು ಆರೋಪಿಸಿ ಇದೀಗ ಸಿದ್ದರಾಮಯ್ಯ ವಿರುದ್ಧ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಮೈಸೂರಿನ ವಿಜಯನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಸಾಮಾಜಿಕ ಕಾರ್ಯಕರ್ತ ಸ್ನೇಹಮಯ ಕೃಷ್ಣರಿಂದ ಇದೀಗ ದೂರು ದಾಖಲಾಗಿದೆ. ಸಿಎಂ ಸಿದ್ದರಾಮಯ್ಯ ಹಾಗೂ ಪತ್ನಿ ಪಾರ್ವತಿ ವಿರುದ್ಧವು ದೂರು ಸಲ್ಲಿಸಿದ್ದಾರೆ. ಪ್ರಕರಣದಲ್ಲಿ ಡಿಸಿ, ತಹಸಿಲ್ದಾರ್, ಉಪನೊಂದಣಾಧಿಕಾರಿ ಮುಡಾ ಅಧಿಕಾರಿಗಳ ಶಾಮೀಲು ಎಂದು ದೂರು ದಾಖಲಿಸಿದ್ದಾರೆ. ಪೊಲೀಸರ ಜೊತೆಗೆ ರಾಜ್ಯಪಾಲ, ರಾಜ್ಯ ಮುಖ್ಯ ಕಾರ್ಯದರ್ಶಿಗೆ ಸ್ನೇಹಮಯಿ ಕೃಷ್ಣ ಅವರು ಪತ್ರ ಬರೆದಿದ್ದಾರೆ.

## ರಾಜ್ಯದಲ್ಲಿ ಸರ್ಕಾರ ಉಳಿದಿಲ್ಲ, ಮೂರು ಭಾಗಗಳಾಗಿದೆ: ಸಂಸದ

• ಉದಯವಾಹಿನಿ, ಬಾಗಲಕೋಟೆ

ರಾಜ್ಯದಲ್ಲಿ ಸಿಎಂ, ಡಿಸಿಎಂ ಕುರ್ಚಿ ಕಿತ್ತಾಟದ ವಿಚಾರಕ್ಕೆ ಇಂದು ಬಾಗಲಕೋಟೆಯಲ್ಲಿ ಪ್ರತಿಕ್ರಿಯಿಸಿದ ಸಂಸದ ಗೋವಿಂದ ಕಾರಜೋಳ, ಸಿಎಂ ಸಿದ್ದರಾಮಯ್ಯ ಆಡಳಿತ ಕುರಿತು ವ್ಯಂಗ್ಯವಾಡಿದರು. ರಾಜ್ಯದಲ್ಲಿ ಸರ್ಕಾರವಾಗಿ ಉಳಿದಿಲ್ಲ, ಮೂರು ಭಾಗಗಳಾಗಿದೆ. ಒಂದು ಸಿದ್ದರಾಮಯ್ಯನವರದ್ದು, ಎರಡನೆಯದು ಡಿ.ಕೆ. ಶಿವಕುಮಾರ್ ಗುಂಪು ಮತ್ತೊಂದು ವೀರಶೈವ ಲಿಂಗಾಯತರದೊಂದು ಗುಂಪು. ನಮಗೆ ಸಿದ್ದರಾಮಯ್ಯ ಸ್ಥಾನಗಳನ್ನು ಬಿಟ್ಟು ಕೊಡಬೇಕು ಅಂತ ಒತ್ತಾಯ ಮಾಡುತ್ತಿದ್ದಾರೆ. ಅನೇಕ ಒತ್ತಾಯಗಳನ್ನು ಮಾಧ್ಯಮಗಳ ಮೂಲಕ ನಾನು ಕೂಡ ನೋಡಿದ್ದೇನೆ' ಎಂದಿದ್ದಾರೆ. 'ಸಿದ್ದರಾಮಯ್ಯನವರು ಆಡಳಿತದ ಮೇಲೆ ಹಿಡಿತವನ್ನು ಕಳೆದುಕೊಂಡಿದ್ದಾರೆ. ಕಾಂಗ್ರೆಸ್‌ನ ಶಾಸಕರು ಮತ್ತು ಮುಖಂಡರನ್ನು ಹದ್ದುಬಸ್ತಿನಲ್ಲಿ ಇಡಲು ಅವರಿಂದ ಸಾಧ್ಯವಾಗುತ್ತಿಲ್ಲ. ಹೈಕಮಾಂಡ್‌ಗೂ ಪಕ್ಷದ ಶಾಸಕರು, ಮುಖಂಡರನ್ನು ಶಿಸ್ತಿನಲ್ಲಿಡಲು ಆಗುತ್ತಿಲ್ಲ. ರಾಜ್ಯದಲ್ಲಿ ಅಭಿವೃದ್ಧಿ ಕುಂಠಿತವಾಗಿದೆ. ಸಿದ್ದರಾಮಯ್ಯನವರಿಗೆ ನನ್ನ ಸಲಹೆ ಏನೂ ಅಂದರೆ ಒಂದು ಶಾಸಕಾಂಗ ಪಕ್ಷದ ಸಭೆ ಕರೆದು ಯಾರಿಗೆ ಬಹುಮತ ಬರುತ್ತದೆ ಎಂಬುದನ್ನು ನೋಡಿ, ಅವರಿಗೆ ಸ್ಥಾನ ಬಿಟ್ಟು ಕೊಡುವುದು ಸೂಕ್ತ' ಎಂದರು.

## ಪ್ರತಿಭಟನೆ ವೇಳೆ ನಿಖಿಲ್‌ರನ್ನು ಎಳೆದಾಡಿದ ಪೊಲೀಸರು..!

• ಉದಯವಾಹಿನಿ, ರಾಮನಗರ

ಜೆಡಿಎಸ್-ಬಿಜೆಪಿ ಕಾರ್ಯಕರ್ತರ ಪ್ರತಿಭಟನೆ ವೇಳೆ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿಯನ್ನು ಎಳೆದಾಡಿದ ಘಟನೆ ಇಂದು ನಡೆದಿದ್ದು, ನಿಖಿಲ್ ಕುಮಾರಸ್ವಾಮಿ ಪೊಲೀಸರ ವಿರುದ್ಧ ಗರಂ ಆಗಿದ್ದಾರೆ. ರಾಮನಗರ ತಾಲೂಕಿನ ಹಳ್ಳಿಮಾಳ ವ್ಯವಸಾಯೋತ್ಪನ್ನ ಮಾರುಕಟ್ಟೆ ಚುನಾವಣೆ ಮುಂದೂಡಿಕೆ ಸಂಬಂಧ ಇಂದು ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದ್ದಾರೆ. 2 ಬಾರಿ ಚುನಾವಣೆ ನಿಗದಿಯಾಗಿದ್ರೂ ಎಲೆಕ್ಷನ್ ನಡೆಸಿಲ್ಲ ಎಂದು ಕಂದಾಯ ಇಲಾಖೆ ಬಳಿ ಪ್ರತಿಭಟನೆ ನಡೆಸಲಾಗಿದೆ.ಕಂದಾಯ ಭವನಕ್ಕೆ ನುಗ್ಗಲು ಯತ್ನಿಸಿದ ಪ್ರತಿಭಟನಾಕಾರರನ್ನು ಪೊಲೀಸರು ತಡೆದಿದ್ದು, ಈ ವೇಳೆ ಪೊಲೀಸರು ಹಾಗೂ ಪ್ರತಿಭಟನಾಕಾರರ ನಡುವೆ ಮಾತಿನ ಚಕಮಕಿ ನಡೆದಿದೆ. ಈ ವೇಳೆ ನಿಖಿಲ್ ಕುಮಾರಸ್ವಾಮಿಯನ್ನು ಪೊಲೀಸರು ಎಳೆದಾಡಿದ್ದಾರೆ. ಪ್ರತಿಭಟನಾಕಾರರ ಮೇಲೆ ಪೊಲೀಸರು ಲಘು ಲಾಠಿ ಕೂಡ ಬೀಸಿದ್ದಾರೆ.

ಮಂಗಳೂರು, ಉಡುಪಿ, ಬೆಳಗಾವಿ, ಉತ್ತರಕನ್ನಡ, ಕರಾವಳಿ ಭಾಗದಲ್ಲಿ ಮಳೆಯ ಅಬ್ಬರಕ್ಕೆ ಜನ ತತ್ತರಿಸಿ ಹೋಗಿದ್ದಾರೆ. ವರುಣನ ಆರ್ಭಟಕ್ಕೆ ನದಿ, ಜಲಾಶಯಗಳು, ಹಳ್ಳಕೊಳ್ಳ ಭರ್ತಿಯಾಗಿ ಹೊಲಗದ್ದೆಗಳು ಜಲಾವೃತಗೊಂಡಿವೆ. ರಸ್ತೆಗಳು ನೀರು ತುಂಬಿ ಸಂಚಾರಕ್ಕೆ ಅಡಚಣೆಯಾಗಿದೆ. ಮನೆಗಳಿಗೆ ನೀರು ನುಗ್ಗಿ ಜನ ಜಾಗರಣೆ ಮಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಉತ್ತರ ಕನ್ನಡ, ಉಡುಪಿ ಸೇರಿದಂತೆ ಜಿಲ್ಲೆಗಳ ಹಲವೆಡೆ ಶಾಲಾ-ಕಾಲೇಜುಗಳಿಗೆ ರಜೆ ಘೋಷಣೆ ಮಾಡಲಾಗಿದೆ. ಕರಾವಳಿ, ಮಲೆನಾಡು ಜಿಲ್ಲೆಗಳಲ್ಲಿ ಪ್ರವಾಹ ಪರಿಸ್ಥಿತಿ ನಿರ್ಮಾಣವಾಗಿದೆ. ತಗ್ಗುಪ್ರದೇಶಗಳಿಗೆ ಭಾರೀ ಪ್ರಮಾಣದಲ್ಲಿ ನೀರು ನುಗ್ಗಿದ ಪರಿಣಾಮ ನೂರಾರು ಮನೆಗಳು ಜಲಾವೃತಗೊಂಡು ಜನಜೀವನ ಅಸ್ತವ್ಯಸ್ತಗೊಂಡಿದೆ.

# ಮಳೆ ಅಬ್ಬರ... ಜನ ತತ್ತರ..

• ಉದಯವಾಹಿನಿ, ಬೆಂಗಳೂರು

ಪ್ರವಾಹಪೀಡಿತ ಪ್ರದೇಶಗಳಲ್ಲಿದ್ದ ಜನರನ್ನು ಎಸ್‌ಡಿಆರ್‌ಎಫ್ ತಂಡದವರು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಿದ್ದಾರೆ. ಹಲವರನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ.ಉತ್ತರ ಕನ್ನಡ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಕಳೆದ ಒಂದು ವಾರದಿಂದ ವರುಣನ ಆರ್ಭಟ ಮುಂದುವರೆದಿದೆ.

ನದಿಗಳು ತುಂಬಿ ಹರಿಯುತ್ತಿದ್ದು, ನದಿ ತೀರದ ಜನರು ಎಚ್ಚರದಿಂದಿರುವಂತೆ ಸೂಚನೆ ನೀಡಲಾಗಿದೆ. ಬಹುತೇಕ ಶಾಲಾ-ಕಾಲೇಜುಗಳಿಗೆ ನೀಡಿರುವ ರಜೆಯನ್ನು ಮುಂದುವರೆಸಲಾಗಿದೆ.ಉಡುಪಿ ಜಿಲ್ಲೆಯಾದ್ಯಂತ ಕೂಡ ಮಳೆ ಮುಂದುವರೆದಿದೆ. ಶ್ರೀ ಕೃಷ್ಣಮಠದ ಪಾರ್ಕಿಂಗ್ ಜಾಗ ಮುಳುಗಡೆಯಾಗಿದೆ. ಅಗ್ನಿಶಾಮಕ ದಳದ ಸಿಬ್ಬಂದಿ ಇಲ್ಲೇ ಬೀಡುಬಿಟ್ಟು ನೀರು ಹೊರಹಾಕಲು ಹರಸಾಹಸ ಪಟ್ಟರು.

ವಿವಿಧೆಡೆ ಕೃತಕ ನೆರೆ ಸೃಷ್ಟಿಯಾಗಿ ಅನೇಕ ಮನೆಗಳಿಗೆ ನೀರು ನುಗ್ಗಿದೆ. ನಿನ್ನೆ ರಾತ್ರಿಯಿಡೀ ಸುರಿದ ಮಳೆಯ ಪರಿಣಾಮ ಹಲವೆಡೆ ಮನೆಗಳಿಗೆ ನೀರು ನುಗ್ಗಿ ಜನ ಮನೆಯಿಂದ ಹೊರಬರಲಾಗದಂತಹ ಪರಿಸ್ಥಿತಿ ನಿರ್ಮಾಣವಾಗಿತ್ತು. ಜಿಲ್ಲೆಯ ಎಲ್ಲಾ ಅಂಗನವಾಡಿ ಸರ್ಕಾರಿ ಅನುದಾನಿತ ಮತ್ತು ಖಾಸಗಿ

1 ಬೆಂಗಳೂರಿನ ವಾತಾವರಣದಲ್ಲಿ ಸೂರ್ಯ ಕಣ್ಮರೆಯಾಗಿದ್ದಾನೆ.

2 ಅತಿ ತಂಪಾದ ಗಾಳಿ ಬೀಸುತ್ತಿದ್ದು, ಇಂದೂ ಕೂಡಾ ಭಾರೀ ಮಳೆ ಮುನ್ಸೂಚನೆ

3 ಜುಲೈ 12ರವರೆಗೂ ಬೆಂಗಳೂರಿಗೆ ಮಳೆ






**ಶಾಲಾ ಕಾಲೇಜುಗಳಿಗೆ ರಜೆ ಘೋಷಣೆ**

ಪ್ರಾಥಮಿಕ ಪ್ರೌಢಶಾಲೆ, ಪದವಿ ಕಾಲೇಜುಗಳಿಗೆ ರಜೆ ಘೋಷಿಸಿ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಆದೇಶಿಸಿದ್ದಾರೆ.

ಭಾರಿ ಮಳೆ ಬೀಳುವ ನಿರೀಕ್ಷೆಯಲ್ಲಿ ಹವಾಮಾನ ಇಲಾಖೆ ಮುನ್ಸೂಚನೆಯಂತೆ ರೆಡ್ ಅಲರ್ಟ್ ಘೋಷಿಸಲಾಗಿತ್ತು. ದಕ್ಷಿಣ ಕನ್ನಡ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಅಗತ್ಯ ತುರ್ತು ಕ್ರಮಗಳನ್ನು ಕೈಗೊಂಡಿದೆ. ತಗ್ಗಿನ ಪ್ರದೇಶ, ಕೆರೆ, ನದಿ, ಸಮುದ್ರ ತೀರದ ನಿವಾಸಿಗಳು ಎಚ್ಚರದಿಂದಿರುವಂತೆ ಸೂಚನೆ ನೀಡಲಾಗಿದೆ. ಪ್ರವಾಸಿಗರು ಪ್ರವಾಸಿ ಸ್ಥಳಗಳಿಗೆ ತೆರಳದಂತೆ ಜಾಗೃತಿ ವಹಿಸುವುದು, ಮೀನುಗಾರರು ಮೀನುಗಾರಿಕೆಗೆ ತೆರಳದಂತೆ ಸೂಚನೆ ನೀಡಲಾಗಿದೆ.ಉತ್ತರ ಕನ್ನಡ ಜಿಲ್ಲೆಯಲ್ಲೂ ವರುಷಧಾರೆ ಮುಂದುವರೆದಿದೆ. ಜಿಲ್ಲೆಯ ಕುಮಟಾ, ಹೊನ್ನಾವರ ತಾಲ್ಲೂಕಿನ ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ.ಕರಾವಳಿಯಲ್ಲೂ ಕೂಡ ಮಳೆಯ ಅಬ್ಬರ ಮುಂದುವರೆದಿದ್ದು, ತಗ್ಗುಪ್ರದೇಶದ ನಿವಾಸಿಗಳಿಗೆ ಆತಂಕ ಮೂಡಿಸಿದೆ.

ಬೆಂಗಳೂರಿನ ವಾತಾವರಣದಲ್ಲಿ ಸೂರ್ಯ ಕಣ್ಮರೆಯಾಗಿದ್ದಾನೆ. ಬೆಳಗ್ಗೆ 10 ಗಂಟೆಯಾದರೂ, ಮುಂಜಾವಿನ ರೀತಿಯ ವಾತಾವರಣ ಇದ್ದು, ದಟ್ಟ ಮೋಡ ಕವಿದಿದೆ. ಅಲ್ಲದೆ ಅತಿ ತಂಪಾದ ಗಾಳಿ ಬೀಸುತ್ತಿದ್ದು, ಇಂದೂ ಕೂಡಾ ಮಳೆಯಾಗುವ ದಟ್ಟ ಸಾಧ್ಯತೆ ಇದೆ.

ಬೆಂಗಳೂರು ಹವಾಮಾನ ಇಲಾಖೆಯ ಪ್ರಕಾರ ರಾಜಧಾನಿಗೆ ಜುಲೈ 12ರವರೆಗೂ ಅಂದರೆ ಇನ್ನು ನಾಲ್ಕು ದಿನ ಕೆಲವು ಕಡೆ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ತಜ್ಞರಾದ ಚನ್ನಬಸವ ಪಾಟೀಲ್ ತಿಳಿಸಿದ್ದಾರೆ.ಸದ್ಯ ನಗರದಲ್ಲಿ 26.4 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದ್ದು, ಸಾಮಾನ್ಯಕ್ಕಿಂತ 2.2 ನಷ್ಟು ತಂಪು ವಾತಾವರಣ ಇದೆ. ವೃದ್ಧರು, ಅನಾರೋಗ್ಯಪೀಡಿತರಿಗೆ ಈ ವಾತಾವರಣ ಸಹಿಸುವುದು ಕಷ್ಟಕರವಾಗಿದೆ. ಬೆಂಗಳೂರು ನಗರದಲ್ಲಿ ನಿನ್ನೆ ಎಲೆಕ್ಟ್ರಾನಿಕ್ ಸಿಟಿ ಭಾಗದಲ್ಲಿ 3 ಮಿಮೀ ಮಳೆಯಾಗಿದೆ. ಬೆಳಗ್ಗೆಯಿಂದ ಮೋಡ ಕವಿದ ವಾತಾವರಣವಿತ್ತು. ಮಧ್ಯಾಹ್ನದ ನಂತರ ಭಾರೀ ಮಳೆಯಾಯಿತು. ಹೆಬ್ಬಾಳ, ಗಂಗಾನಗರ, ಕೆಂಗೇರಿ, ಜಯನಗರ, ಉತ್ತರಹಳ್ಳಿ, ಯಶವಂತಪುರ, ಮೆಜೆಸ್ಟಿಕ್ ಸೇರಿದಂತೆ ನಗರದ ಹಲವಡೆ ಮಳೆಯಾಯಿತು. ಮಳೆಯಿಂದ ರಸ್ತೆಗಳು ಜಲಾವೃತವಾಗಿದ್ದವು.

### ಉತ್ತರ ಗಡಿಭಾಗ ತತ್ತರ

ಅತ್ತ ಮಹಾರಾಷ್ಟ್ರದಲ್ಲಿ ಭಾರಿ ಮಳೆಯಾಗುತ್ತಿದ್ದು, ಉ.ಕರ್ನಾಟಕದ ಗಡಿಭಾಗದ ಬೆಳಗಾವಿ, ಚಿಕ್ಕೋಡಿಯ ಹಲವು ಪ್ರದೇಶಗಳಿಗೆ ಭಾರಿ ಪ್ರಮಾಣದಲ್ಲಿ ನೀರು ಹರಿದುಬರುತ್ತಿದ್ದು, ಆತಂಕದ ವಾತಾವರಣ ಸೃಷ್ಟಿಯಾಗಿದೆ. ಕೃಷ್ಣಾ ಸೇರಿದಂತೆ ಹಲವು ನದಿಗಳ ನೀರಿನ ಮಟ್ಟ ಏರಿಕೆಯಾಗಿದೆ. ಚಿಕ್ಕೋಡಿ ಭಾಗದ ಹಲವು ಸೇತುವೆಗಳು ಜಲಾವೃತಗೊಂಡಿದ್ದು, ಸುಗಮ ಸಂಚಾರಕ್ಕೆ ಅಡಚಣೆಯಾಗಿದೆ. ದೂಧ್‌ಗಂಗಾ, ವೇದ್‌ಗಂಗಾ ನದಿ ನೀರಿನ ಮಟ್ಟ ಏರಿಕೆಯಾಗಿ, ಚಿಕ್ಕೋಡಿಯ ಯಕ್ಸಂಬಾದ ಮಲ್ಲಾಣಿಕಿ ಬಾಬಾ ದರ್ಗಾಕ್ಕೆ ನೀರು ಹರಿದಿದೆ.

### ಪ್ರಕೃತಿ ವಿಕೋಪ ಪಡೆ ಸನ್ನದ್ಧ

ಮಲೆನಾಡು, ಕರಾವಳಿ, ಉ.ಕನ್ನಡ ಜಿಲ್ಲೆಗಳಲ್ಲಿ ಇನ್ನೂ ಐದು ದಿನ ಭಾರಿ ಮಳೆಯಾಗುವ ಮುನ್ಸೂಚನೆಯಿದ್ದು, ಸಂಭಾವ್ಯ ಅನಾಹುತಗಳನ್ನು ತಡೆಗಟ್ಟಲು ಪ್ರಕೃತಿ ವಿಕೋಪ ಪಡೆ ಸನ್ನದ್ಧವಾಗಿದೆ. ಮೈಸೂರು ರಸ್ತೆ, ಹೆಬ್ಬಾಳ ಮೇಲ್ಸೇತುವೆ, ಕಾವೇರಿ ಜಂಕ್ಷನ್, ಓಕಳಿಪುರ ಜಂಕ್ಷನ್, ಶಿವಾನಂದ ವೃತ್ತ ರೈಲ್ವೆ ಕೆಳಸೇತುವೆ ಸೇರಿದಂತೆ ವಿವಿಧೆಡೆ ನೀರು ನಿಂತು ವಾಹನ ಸವಾರರು ಪರದಾಡಿದರು.ಭಾರಿ ಮಳೆ ಪರಿಣಾಮ ಹಲವೆಡೆ ಮರಗಳು ಧರೆಗುರುಳಿ, ವಾಹನ ಸಂಚಾರಕ್ಕೆ ಅಡಚಣೆಯಾಯಿತು. ಬಿಬಿಎಂಪಿ ಸಿಬ್ಬಂದಿ ಮರಗಳನ್ನು ತೆರವು ಮಾಡಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಟ್ಟರು. ಮಳೆ ಮುಂದುವರೆಯುವ ಸಾಧ್ಯತೆ ಇದೆ.





ಉಡುಪಿಯಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಮಳೆಗಾಲಕ್ಕೆ ಅಗತ್ಯ ಸಿದ್ಧತೆ ಕೈಗೊಳ್ಳಬೇಕು. ಜೊತೆಗೆ ಬೀಳುವ ಹಂತದಲ್ಲಿರುವ ಮರಗಳನ್ನು ಕಡಿಯಬೇಕು ಎಂದು ಸೂಚಿಸಲಾಗಿತ್ತು. ಬೀಳುವ ಹಂತದಲ್ಲಿದ್ದ ಸುಮಾರು 400 ಮರಗಳನ್ನು ಕಡಿಯಲಾಗಿದ್ದು, 80 ವಿದ್ಯುತ್ ಕಂಬಗಳನ್ನು ಸ್ಥಳಾಂತರಿಸಲಾಗಿದೆ ಎಂದು ಹೇಳಿದರು. ಕೆಲವೊಂದು ತಗ್ಗು ಪ್ರದೇಶಗಳಲ್ಲಿ ನೀರು ನುಗ್ಗಿದ್ದು, ಈ ಪ್ರದೇಶದಿಂದ ಜನರನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ. ಕಳೆದ ವರ್ಷ ಮಳೆಯಿಂದಾಗಿ ಎದುರಿಸಿದ್ದ ಸಮಸ್ಯೆಗಳನ್ನು ಗಮನದಲ್ಲಿಟ್ಟುಕೊಂಡು ಈ ಬಾರಿ ಎಚ್ಚರಿಕೆವಹಿಸಲಾಗಿದೆ.

-ಲಕ್ಷ್ಮೀ ಹೆಬ್ಬಾಳಕರ್
ಉಡುಪಿ ಜಿಲ್ಲಾ ಉಸ್ತುವಾರಿ ಸಚಿವ

- ವರುಣಾಸುರನ ಅಟ್ಟಹಾಸಕ್ಕೆ ಉತ್ತರ ತತ್ತರ
- ಉಡುಪಿ ಮಳೆ ಅನಾಹುತ ತಡೆಗೆಕ್ರಮ
- ವರುಣಾರ್ಭಟಕ್ಕೆ ನಲುಗಿದ ಕರಾವಳಿ ಜಿಲ್ಲೆಗಳು
- ಜನರ ಬದುಕು ದುಸ್ತರ

ಉಕ್ಕಿ ಹರಿಯುತ್ತಿರುವ ನದಿಗಳು, ಮುಳುಗಿದ ಸೇತುವೆಗಳು

### ಜಲಾಶಯಗಳಿಗೆ ಜೀವಕಳೆ

ನಿರಂತರ ಬೀಳುತ್ತಿರುವ ಮಳೆಯಿಂದಾಗಿ ರಾಜ್ಯದ ಪ್ರಮುಖ ಜಲಾಶಯಗಳ ನೀರಿನ ಮಟ್ಟವೂ ಹೆಚ್ಚಾಗುತ್ತಿದೆ. ರಾಜ್ಯದ 14 ಪ್ರಮುಖ ಜಲಾಶಯಗಳಲ್ಲಿ ಶೇ.39ರಷ್ಟು ನೀರು ಸಂಗ್ರಹವಾಗಿದೆ. ಮುಂಗಾರು ಮಳೆ ಕೈಕೊಟ್ಟಿದ್ದ ಪರಿಣಾಮ ಕಳೆದ ಎಲ್ಲಾ ಜಲಾಶಯಗಳಲ್ಲಿ 196.87ಟಿಎಂಸಿ ಅಡಿ ನೀರು ಸಂಗ್ರಹವಾಗಿತ್ತು. ಆದರೆ, ಈ ವರ್ಷ 349.50 ಟಿಎಂಸಿ ಅಡಿ ನೀರು ಸಂಗ್ರಹವಾಗಿದೆ. ಅಂದರೆ, 153 ಟಿಎಂಸಿ ಅಡಿಯಷ್ಟು ಹೆಚ್ಚು ನೀರಿದೆ. ಕಾವೇರಿ ಜಲಾನಯನ ಭಾಗದಲ್ಲಿ ಒಳಹರಿವು ಇಳಿಮುಖವಾಗುತ್ತಿದ್ದರೆ, ಕೃಷ್ಣಾ ಕೊಳ್ಳ ಹಾಗೂ ಜಲ ವಿದ್ಯುತ್ ಉತ್ಪಾದಿಸುವ ಜಲಾಶಯಗಳ ಒಳಹರಿವು ಹೆಚ್ಚಾಗಿದೆ. ಕಾವೇರಿ ನದಿಪಾತ್ರದ ಜಲಾಶಯಗಳಿಗೆ ಶೇ.60ರಷ್ಟು ನೀರು ಸಂಗ್ರಹವಾಗಿದೆ. ಕಬಿನಿ ಜಲಾಶಯದ ಗರಿಷ್ಠ ನೀರಿನ ಸಂಗ್ರಹ ಸಾಮರ್ಥ್ಯ 19.52 ಟಿಎಂಸಿ ಅಡಿಯಷ್ಟಿದ್ದು, 18.52 ಟಿಎಂಸಿ ಅಡಿಯಷ್ಟಿದೆ.

## ಸಚಿವ ಸ್ಥಾನ ಸಿಗದಿರುವುದಕ್ಕೆ ಬೇಸರ

### ಎಲ್ಲಾ ಮೇಲ್ವರ್ಗದ ಜಾತಿಯವರಿಗೆ ಸಚಿವ ಸ್ಥಾನ ನೀಡಿಕೆ

• ಉದಯವಾಹಿನಿ, ವಿಜಯಪುರ

**ದಲಿತರೇನು ಬಿಜೆಪಿ ಪಕ್ಷಕ್ಕೆ ಓಟ್ ಹಾಕಿಲ್ಲವೇ?**

ಬಿಜೆಪಿ ಪಕ್ಷದಲ್ಲಿ ದಕ್ಷಿಣ ಭಾರತದಿಂದ ಗೆದ್ದಿರುವ ದಲಿತ ಏಕೈಕ ಹಿರಿಯ ಸಂಸದನಾದ ನನಗೆ ಸಚಿವ ಸ್ಥಾನ ಸಿಕ್ಕಿಲ್ಲವೆಂದು ಸಮುದಾಯದ ಜನ ನನಗೆ ಉಗಿಯುತ್ತಿದ್ದಾರೆ. ವೈಯಕ್ತಿಕವಾಗಿ ನನಗೂ ಬೇಸರವಾಗಿದೆ ಎಂದು ವಿಜಯಪುರ ಹಿರಿಯ ಸಂಸದ ರಮೇಶ ಜಿಗಜಿಣಗಿ ಪಕ್ಷದ ಹೈಕಮಾಂಡ್ ವಿರುದ್ಧ ಅಸಮಾಧಾನ ಹೊರ ಹಾಕಿದ್ದಾರೆ.

ಮಂಗಳವಾರ ನಗರದಲ್ಲಿ ಸಂಸದರ ಕಛೇರಿ ಉದ್ಘಾಟನೆ ಸಂದರ್ಭದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ದಲಿತರೇನು ಬಿಜೆಪಿ ಪಕ್ಷಕ್ಕೆ ಓಟ್ ಹಾಕಿಲ್ಲವೇ, ಎಲ್ಲಾ ಮೇಲ್ವರ್ಗದ ಜಾತಿಯವರಿಗೆ ಸಚಿವ ಸ್ಥಾನ ನೀಡಿದ್ದು, ಹಿರಿತನ, ದಲಿತ, ಸತತ ಏಳು ಬಾರಿ ಗೆದ್ದಿದ್ದರೂ ಸಚಿವ ಸ್ಥಾನ ನೀಡದಿರುವುದಕ್ಕೆ ಬೇಸರವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ದಲಿತ ವಿರೋಧಿ ಬಿಜೆಪಿ ಪಕ್ಷ ಸೇರಬೇಡಿ ಎಂದು ದಲಿತರು ಆಕ್ಷೇಪಿಸಿದರೂ ಬಿಜೆಪಿ ಸೇರಿದ್ದೆ. ನನಗಾಗಿ ಅಲ್ಲದಿದ್ದರೂ ದಲಿತ ಸಮುದಾಯದ ಹಕ್ಕಿಗಾಗಿ ನನಗೆ ಸಚಿವ ಸ್ಥಾನ ನೀಡಬೇಕಿತ್ತು. ದಕ್ಷಿಣ ಭಾರತದಿಂದ ಸತತ ಏಳು ಬಾರಿ ಗೆದ್ದಿರುವ ಏಕೈಕ ಹಿರಿಯ ಸಂಸದ ನಾನು. ಆದರೂ ಸಚಿವ ಸ್ಥಾನ ನೀಡಿಲ್ಲ ಎಂದರೆ ಯಾವ ನ್ಯಾಯ ಹೇಳಿ ಎಂದು ಹೈಕಮಾಂಡ್ ವಿರುದ್ಧ ಹರಿಹಾಯ್ದರು. ನಾನು ದೆಹಲಿಯಿಂದ ವಿಜಯಪುರ ನಗರಕ್ಕೆ ಬರುತ್ತಲೇ ದಲಿತರು ನನಗೆ ಉಗಿಯಲು ಆರಂಭಿಸಿದ್ದಾರೆ. ಹಿರಿತನ ಇದ್ದರೂ ಆದ್ಯತೆ ನೀಡಿಲ್ಲವೆಂದು ನನ್ನನ್ನು ಜರಿಯುತ್ತಿದ್ದಾರೆ ಎಂದು ಅಸಮಾಧಾನ ಹೊರಹಾಕಿದ್ದಾರೆ.



## ಮೈಸೂರಿನಲ್ಲಿ ಮುಡಾ ಹಗರಣ ಸಿಎಂ ವಿರುದ್ಧ ದೂರು ದಾಖಲು

### ಪ್ರಾಧಿಕಾರದ ಸೈಟು ಹಂಚಿಕೆ ಹಗರಣ ದಿನಕ್ಕೊಂದು ತಿರುವು



**ಸಿಎಂ ಸಿದ್ದುಗೆ ಕಂಟಕ**

• ಉದಯವಾಹಿನಿ, ಮೈಸೂರು

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಸೈಟು ಹಂಚಿಕೆ ಹಗರಣ ದಿನಕ್ಕೊಂದು ತಿರುವು ಪಡೆಯುತ್ತಿದೆ. ಈ ಪ್ರಕರಣ, ರಾಜ್ಯದಲ್ಲಿ ದೊಡ್ಡ ಮಟ್ಟದಲ್ಲಿ ಸುದ್ದಿಯಾಗುತ್ತಿದ್ದಂತೆಯೇ, ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಕಂಟಕವಾಗಿ ಪರಿಣಮಿಸುತ್ತಿದ್ದು, ಇದೀಗ ಸಿದ್ದರಾಮಯ್ಯ ವಿರುದ್ಧ ಮೈಸೂರಿನ ವಿಜಯನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದೂರು ದಾಖಲಾಗಿದೆ.

ನಕಲಿ ದಾಖಲೆ ಸೃಷ್ಟಿ ಮೂಲಕ ಮುಡಾ ವಂಚಿಸಿ ಕೋಟ್ಯಂತರ ಬೆಲೆಯ ನಿವೇಶನ ಪಡೆದ ಆರೋಪದಲ್ಲಿ ಸಿಎಂ ಸಿದ್ದರಾಮಯ್ಯ, ಅವರ ಪತ್ನಿ ಪಾರ್ವತಿ, ಬಾಮೈದ ಮಲ್ಲಿಕಾರ್ಜುನಸ್ವಾಮಿ, ಭೂ ಮಾಲೀಕ ಎಂದು ಹೇಳುವ ದೇವರಾಜು ಹಾಗೂ ಕುಟುಂಬದವರ ವಿರುದ್ಧ ದೂರು ದಾಖಲಾಗಿದೆ. ಇದೇ ಪ್ರಕರಣದಲ್ಲಿ ಜಿಲ್ಲಾಧಿಕಾರಿ, ತಹಸೀಲ್ದಾರ್, ಉಪ ನೋಂದಣಾಧಿಕಾರಿ ಹಾಗೂ ಮುಡಾ ಅಧಿಕಾರಿಗಳ ಶಾಮೀಲು ಬಗ್ಗೆಯು ದೂರು ಕೇಳಿಬಂದಿದೆ. ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಎಂಬವರು ದೂರು ನೀಡಿದ್ದಾರೆ. ಪೊಲೀಸರ ಜೊತೆಗೆ ರಾಜ್ಯಪಾಲ, ರಾಜ್ಯ ಮುಖ್ಯಕಾರ್ಯದರ್ಶಿ, ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿಗೂ ಪತ್ರ ಬರೆದಿದ್ದಾರೆ. ಪತ್ರದ ಮೂಲಕ ಪ್ರಕರಣ ಸಂಬಂಧ ಹಲವು ಪ್ರಶ್ನೆ ಎತ್ತಿದ್ದಾರೆ.

### ದೂರುದಾರರ ಪ್ರಶ್ನೆಗಳೇನು?

1. ಪಾರ್ವತಿ ಪ್ರಕರಣದಲ್ಲಿ ಭೂ ಸ್ವಾಧೀನದಿಂದ ಕೈಬಿಟ್ಟಿರುವ ರಾಜ್ಯಪತ್ರದ ಬಗ್ಗೆಯೇ ಅನುಮಾನ.
2. ಮೂಲ ಭೂ ಮಾಲೀಕರ ಮಗ ಎನ್ನುವ ದೇವರಾಜು ಅಸ್ತಿತ್ವದ ಬಗ್ಗೆ ಪ್ರಶ್ನೆ.1998ರಲ್ಲಿ ಭೂ ಸ್ವಾಧೀನದಿಂದ ಕೈ ಬಿಟ್ಟಿದ್ದು ನಿಜವಾದರೆ 2010ರ ವರೆಗಿನ ಆರ್‌ಟಿಸಿ ಗಳಲ್ಲಿ ಭೂ ಸ್ವಾಧೀನ ಎಂಬ ಉಲ್ಲೇಖ ಏಕಿದೆ?
3. ದೇವರಾಜು ಮತ್ತು ನಂತರ ಮಲ್ಲಿಕಾರ್ಜುನಸ್ವಾಮಿ ಅವರ ಮಾಲೀಕತ್ವ ಮತ್ತು ಸ್ವಾಧೀನದಲ್ಲಿ ಈ ಜಮೀನು ಇದ್ದಿದ್ದರೆ ಪ್ರಾಧಿಕಾರದ ಅಭಿವೃದ್ಧಿ ಕೆಲಸವನ್ನ ಏಕೆ ತಡೆದಿಲ್ಲ?
4. ಮಲ್ಲಿಕಾರ್ಜುನ ಹಾಗೂ ಪಾರ್ವತಿ ಅವರ ಹೆಸರಿಗೆ ಖಾತೆ ವರ್ಗಾವಣೆ ಮಾಡುವ ವೇಳೆ ಸ್ಥಳ ಪರಿಶೀಲನೆ ಮಾಡಲಿಲ್ಲವೇ?.
5. ಮಾಡಿದ್ದರೆ ಮುಡಾ ಅಭಿವೃದ್ಧಿ ಮಾಡಿರುವುದು ಕಂಡುಬಂದಿದ್ದರೂ ಕೃಷಿ ಭೂಮಿ ಎಂದು ಹೇಗೆ ಖಾತೆ ಮಾಡಿದರು?
6. ನಿಜವಾದ ಭೂ ಮಾಲೀಕರ ವಂಶವೃಕ್ಷ, ಜವರ ಅವರ ಮರಣ ಪ್ರಮಾಣಪತ್ರ, ಸೇರಿ ಹಲವು ದಾಖಲೆಗಳ ಉಲ್ಲೇಖ ಇಲ್ಲ ಯಾಕೆ?
7. ಕೆಸರೆ ಗ್ರಾಮದ 464ನೇ ಸರ್ವೆ ನಂಬರ್‌ನ 3.16 ಎಕರೆ ಭೂ ಸ್ವಾಧೀನ ಕೈ ಬಿಡಲು ಕಾರಣ ಏನು? ಅಂತಹ ಯಾವ ಪ್ರಭಾವವನ್ನು (ಕಾರಣವನ್ನು) ಬಳಸಿದ್ದರು?
8. 2005ರಲ್ಲೇ ಮಲ್ಲಿಕಾರ್ಜುನ ಸ್ವಾಮಿಗೆ ಅನ್ಯಕ್ರಾಂತ ಆಗಿದ್ದರೆ ಸದರಿ ಉಲ್ಲೇಖ ಆರ್‌ಟಿಸಿಗಳಲ್ಲಿ ಯಾಕೆ ಇಲ್ಲ?
9. 2004-05ನೇ ಸಾಲಿನ ಆರ್‌ಟಿಸಿಯ ಕಲಂ 10ರಲ್ಲಿ 8/92-93 ಎಂಬ ಉಲ್ಲೇಖವಿದೆ. ಇದರ ಗಮನಿಸಿದಾಗ ಮಾರಪ್ಪ ಎಂಬುವವರಿಗೆ ಸೇರಿದ ದಾಖಲೆ ಎಂದು ಗೊತ್ತಾಗುತ್ತದೆ.
10. ಮಲ್ಲಿಕಾರ್ಜುನ ಸ್ವಾಮಿಗೆ ಭೂಮಿ ಮಾರಿರುವ ದೇವರಾಜು ಕುಟುಂಬದ ವಿಳಾಸವೇ ಅಸ್ತಿತ್ವದಲ್ಲಿ ಇಲ್ಲದಿರುವುದು ದೊಡ್ಡ ಅನುಮಾನ.
11. ಪ್ರಕರಣದಲ್ಲಿ ಇಷ್ಟೆಲ್ಲ ಅನುಮಾನಗಳು ಇವೆ. ಹೀಗಾಗಿ ಪ್ರಕರಣದ ಸಮಗ್ರ ತನಿಖೆ ನಡೆಸಬೇಕು.

10 ದಿನಗಳ ಒಳಗೆ ಇದಕ್ಕೆ ಉತ್ತರ ಕೊಡಬೇಕು ಎಂದು ಆಗ್ರಹಿಸಿರು ವುದಾಗಿ ದೂರುದಾರ ಸ್ನೇಹಮಯಿ ಕೃಷ್ಣ ತಿಳಿಸಿದ್ದಾರೆ.

## ಎಸ್‌ಐಟಿ ವಿಚಾರಣೆಗೆ ಹಾಜರಾದ ಮಾಜಿ ಸಚಿವ ನಾಗೇಂದ್ರ!

### ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಬಿ.ನಾಗೇಂದ್ರ ಅವರಿಗೆ ವಿಶೇಷ ತನಿಖಾ ತಂಡ ನೋಟಿಸ್

• ಉದಯವಾಹಿನಿ, ಬೆಂಗಳೂರು



**ವಾಲ್ಮೀಕಿ ನಿಗಮದಲ್ಲಿ ಅಕ್ರಮ ಪ್ರಕರಣ**

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಬಿ.ನಾಗೇಂದ್ರ ಅವರಿಗೆ ವಿಶೇಷ ತನಿಖಾ ತಂಡ ನೋಟಿಸ್ ನೀಡಿತ್ತು.

ಈ ಹಿನ್ನೆಲೆ ಮಾಜಿ ಸಚಿವ ಬಿ.ನಾಗೇಂದ್ರ ಅವರು ಇಂದು ಬೆಂಗಳೂರಿನ ಎಸ್ ಐ ಟಿ ಕಚೇರಿಗೆ ಭೇಟಿ ನೀಡಿ ವಿಚಾರಣೆಗೆ ಹಾಜರಾಗಿದ್ದಾರೆ. ಎಸ್ ಐ ಟಿ ಅಧಿಕಾರಿಗಳು ನಾಗೇಂದ್ರ ಅವರಿಂದ ಮಹತ್ವದ ಹೇಳಿಕೆ ದಾಖಲಿಸಿಕೊಳ್ಳಲಿದ್ದಾರೆ.

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಅಕ್ರಮ ಹಾಗೂ ಹಣ ವರ್ಗಾವಣೆ ಪ್ರಕರಣದ ತನಿಖೆಗೆ ರಾಜ್ಯ ಸರ್ಕಾರ ಎಸ್‌ಐಟಿ ರಚನೆ ಮಾಡಿದ್ದು, ತನಿಖೆ ಚುರುಕುಗೊಂಡಿದೆ. ಈ ಹಿನ್ನೆಲೆಯಲ್ಲಿ ಮಾಜಿ ಸಚಿವ ಬಿ. ನಾಗೇಂದ್ರ ಹಾಗೂ ವಾಲ್ಮೀಕಿ ನಿಗಮದ ಅಧ್ಯಕ್ಷ ಬಸನಗೌಡ ದದ್ದಲ್ ಅವರಿಗೆ ನೋಟಿಸ್ ಜಾರಿ ಮಾಡಲಾಗಿತ್ತು. ವಾಲ್ಮೀಕಿ ನಿಗದಲ್ಲಿ 185 ಕೋಟಿ ಅಕ್ರಮ ನಡೆದಿದೆ ಎಂದು ನಿಗಮದ ಅಧಿಕಾರಿ ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆಗೆ ಶರಣಾಗಿದ್ದರು.

ಈ ಪ್ರಕರಣವನ್ನು ರಾಜ್ಯ ಸರ್ಕಾರ ಎಸ್ ಐಟಿ ತನಿಖೆಗೆ ವಹಿಸಿದೆ. ಇನ್ನೊಂದೆಡೆ ಸಿಬಿಐ ಹಾಗೂ ಇಡಿ ಕೂಡ ಪ್ರತ್ಯೇಕ ಕೇಸ್ ದಾಖಲಿಸಿಕೊಂಡು ತನಿಖೆ ಆರಂಭಿಸಿವೆ.

### ವಾಲ್ಮೀಕಿ ನಿಗಮದ ಹಗರಣದ ತನಿಖೆ ಅಸಮರ್ಪಕ



ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಹಗರಣದ ತನಿಖೆ ಅಸಮರ್ಪಕವಾಗಿದೆ. ಒತ್ತಡಕ್ಕೆ ಕಟ್ಟುಬಿದ್ದಂತೆ ಎಸ್ ಐಟಿ ತನಿಖೆ ನಡೆಸುತ್ತಿದೆ ಎಂದು ಬಿಜೆಪಿ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಆಕ್ಷೇಪಿಸಿದರು. ಸುದ್ದಿಗಾರರಿಗೆ ಮಂಗಳವಾರ ಪ್ರತಿಕ್ರಿಯಿಸಿದ ಅವರು, ಖಾಸಗಿ ಹೋಟೆಲ್ ನೆಕ್ಕುಂಟಿ ನಾಗರಾಜ್ ಗೆ ಮಾಜಿ ಸಚಿವ ಬಿ.ನಾಗೇಂದ್ರ ಸಂಪರ್ಕ ಒದಗಿಸಿಕೊಟ್ಟಿದ್ದರು.ನಿಗಮದ ಹಣ ಲೂಟಿ ಮಾಡಲೆಂದೇ ಈ ಅಕ್ರಮ ನಡೆದಿದೆ. ಕಾಂಗ್ರೆಸ್ ಪಕ್ಷದವರಿಗೂ ಸಂದಾಯವಾಗಿದೆ ಎಂದು ಆರೋಪಿಸಿದರು.ಭ್ರಷ್ಟಾಚಾರದಲ್ಲಿ ದೊಡ್ಡವರ ಕೈವಾಡವಿದ್ದಂತಿದೆ. ಹೀಗಾಗಿ ಸಮಗ್ರ ತನಿಖೆ ನಡೆಸುವ ಇಚ್ಛೆ ಎಸ್ ಐಟಿಗೆ ಇದ್ದಂತಿಲ್ಲ. ಈಗ ಹೊರ ಬಂದಿರುವ ಆಡಿಯೋ, ವಿಡಿಯೋ ಪೂರ್ವಾಪರ ತಿಳಿದುಕೊಳ್ಳದೆ ಏನನ್ನೂ ಹೇಳಲಾಗದು. ದೊಡ್ಡವರ ರಕ್ಷಣೆಗಾಗಿ ಈ ಆಡಿಯೋ ಬಿಟ್ಟಿದ್ದಾರೆಯೆ ? ತಿಳಿಯದು ಎಂದು ಸಿ.ಟಿ.ರವಿ ಶಂಕೆ ವ್ಯಕ್ತಪಡಿಸಿದರು.

**ಈ ದಿನದ ದರ** ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹7,320/Gram24ct ₹6,710/Gram22ct ಬೆಳ್ಳಿ: ₹93.90/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ**
**ರಾಮೋಹಳ್ಳಿ**

### ಅಖಿಳೇಶನೆನಿಪನಾವಿಶ್ವನು.

ನಿಜಗುಣರ ಪರಮಾನುಭವ ಬೋಧೆಯ ಮಾತು. ವಿಶ್ವಜೀವನ ವರ್ಣನೆ. ಸ್ಥೂಲ ಶರೀರ ಬಳಸಿ ವ್ಯವಹರಿಸುವ ಜೀವ ಚೈತನ್ಯ ವಿಶ್ವಜೀವ. ತೋರುವ ಶರೀರವುಳ್ಳವನು, ಇರುವಿಕೆ ಹುಟ್ಟುವಿಕೆ ಮುಂತಾದ ಆರು ವಿಕಾರವುಳ್ಳವನು, ಮನಸ್ಸು ಇಂದ್ರಿಯ ಶಬ್ದಾದಿ ವಿಷಯ ಎಂಬ ಮೂರು ಲೋಕಗಳಲ್ಲಿ ಸಂಚರಿಸುವವನು, ಸತ್ತ್ವಗುಣಪ್ರಧಾನವಾದ ವೈಕಾರಿಕ ಅಹಂಕಾರವುಳ್ಳವನು, ಮದುವೆ ಸಂತಾನ ಮುಂತಾದ ಸುಂದರ ಸಂಸಾರವುಳ್ಳವನು, ಅಜ್ಞಾನವನ್ನು ಆಶ್ರಯಿಸಿದವನು, ವಿಷಯಗಳ ಬೆನ್ನ ಹತ್ತುವವನು, ಇಂದ್ರಿಯ ಹಾಗೂ ವಿಷಯಗಳ ಸಂಪರ್ಕದಿಂದ ಉಂಟಾಗುವ ಅನೇಕ ವ್ಯಾಪಾರ ಮಾಡುವವನು ವಿಶ್ವಜೀವ. ಕಣ್ಣು ಮುಂತಾದ ಪಂಚ ಜ್ಞಾನೇಂದ್ರಿಯಗಳಿಗೆ, ಕೈ ಮುಂತಾದ ಪಂಚ ಕರ್ಮೇಂದ್ರಿಯಗಳಿಗೆ ಈತನೇ ಒಡೆಯ. ಮನಸ್ಸಿನ ಮೂಲಕ ಎಲ್ಲೆಡೆಗೂ ಹೋಗುವವ, ಮೂಲಾತ್ಮರೂಪದಿಂದ ಎಲ್ಲರೊಳಗೂ ಹುದುಗಿರುವವ, ಮನದ ಸಹಕಾರದಿಂದ ಇಂದ್ರಿಯಗಳ ಮೂಲಕ ಎಲ್ಲ ಕಾರ್ಯಗಳನ್ನು ಮಾಡುವವ, ಬುದ್ಧಿಯ ಮೂಲಕ ಎಲ್ಲವನ್ನು ಅರಿಯುವವ, ಎಲ್ಲ ತತ್ತ್ವಗಳಿಗೆ ಅಸ್ತಿತ್ವ ಒದಗಿಸುವವ, ಹೊಸ ಲೋಕವನ್ನೇ ಸೃಷ್ಟಿಸುವ ಸಕಲ ಶಕ್ತಿಯುಳ್ಳವ, ಜಗತ್ತನ್ನೇ ಆಳುವವ ಈ ವಿಶ್ವಜೀವ. ಮಾನವನ ವೈಜ್ಞಾನಿಕ ಕ್ರಾಂತಿ ಇದಕ್ಕೆ ನಿದರ್ಶನ!!

# ರಾಮನಗರ, ಕನಕಪುರದಲ್ಲಿ ಮೆಡಿಕಲ್ ಕಾಲೇಜು: ಡಿಕೆಶಿ

## ಶಾಸಕರು ಹಾಗೂ ಮುಖಂಡರನ್ನು ಒಳಗೊಂಡ ಡಿಸಿಎಂ ನೇತೃತ್ವದ ನಿಯೋಗ, ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರುನಾಮಕರಣ

• **ಉದಯವಾಹಿನಿ, ಬೆಂಗಳೂರು**

ರಾಮನಗರ ಜಿಲ್ಲೆಯಲ್ಲಿ ಮೆಡಿಕಲ್ ಕಾಲೇಜು ತರಬೇಕು ಎಂಬುದು ನಮ್ಮೆಲ್ಲರ ಬೇಡಿಕೆಯಾಗಿತ್ತು. ಈ ವಿಚಾರವನ್ನು ಬಜೆಟ್‌ನಲ್ಲೂ ಸೇರಿಸಲಾಗಿತ್ತು. ಸಿಬ್ಬಂದಿ ಕೊರತೆ ಎಂದು ಅನುಮತಿ ನೀಡಿಲ್ಲ ಎಂಬ ವಿಚಾರ ತಿಳಿಸಿದ್ದು, ಈ ಬಗ್ಗೆ ಗಮನಹರಿಸುತ್ತೇವೆ ಎಂದು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ತಿಳಿಸಿದರು.

ವಿಧಾನಸೌಧದಲ್ಲಿ ರಾಮನಗರ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಮುಖಂಡರನ್ನು ಒಳಗೊಂಡ ಡಿಸಿಎಂ ನೇತೃತ್ವದ ನಿಯೋಗವು ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಜಿಲ್ಲೆಯ ಮರುನಾಮಕರಣ ಪ್ರಸ್ತಾವನೆಯನ್ನು ಮುಖ್ಯಮಂತ್ರಿಗಳಿಗೆ ಮಂಗಳವಾರ ನೀಡಿದರು. ನಂತರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಡಿಸಿಎಂ ಶಿವಕುಮಾರ್ ಅವರು, ರಾಮನಗರ, ಚನ್ನಪಟ್ಟಣ, ಮಾಗಡಿ, ಕನಕಪುರ, ಹಾರೋಹಳ್ಳಿ ತಾಲ್ಲೂಕುಗಳ ಭವಿಷ್ಯ ಹಾಗೂ ಅಭಿವೃದ್ಧಿ ಗಮನದಲ್ಲಿಟ್ಟುಕೊಂಡು ರಾಮನಗರ ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರುನಾಮಕರಣ ಮಾಡಲು ತಮ್ಮ ನೇತೃತ್ವದ ಜಿಲ್ಲೆಯ ನಾಯಕರ ನಿಯೋಗವು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಪ್ರಸ್ತಾವನೆ ನೀಡಿದ್ದೇವೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ಬೆಂಗಳೂರು ನಗರ ಸೇರಿದಂತೆ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ, ಕನಕಪುರ, ರಾಮನಗರ, ಚನ್ನಪಟ್ಟಣ, ಮಾಗಡಿ ಸೇರಿದಂತೆ



ಉದಯವಾಹಿನಿ ಚಿತ್ರ

**ಸಿಸಿಟಿವಿ ಕ್ಯಾಮೆರ ಅಳವಡಿಸಲು ಸೂಚನೆ**

**ಜನರು ಮನೆಯ ಬಳಿ ಬರುವ ಕಸ ಸಂಗ್ರಹ ವಾಹನಗಳಿಗೆ ಕಸವನ್ನು ಹಾಕದೆ ರಸ್ತೆ ಬದಿ ಎಸೆಯುತ್ತಿದ್ದಾರೆ. ಈ ಕಾರಣಕ್ಕೆ ಎಲ್ ಇಡಿ ವಿದ್ಯುತ್ ದೀಪದ ಕಂಬಗಳಿಗೆ ಸಿಸಿಟಿವಿ ಕ್ಯಾಮೆರ ಅಳವಡಿಸಲು ಸೂಚನೆ ನೀಡಲಾಗಿದೆ. ಕಸ ಹಾಗೂ ಕಟ್ಟಡ ನಿರ್ಮಾಣ ತ್ಯಾಜ್ಯ ಸುರಿಯುವವರನ್ನು ಗುರುತಿಸಿ ಪ್ರಕರಣ ದಾಖಲಿಸುವ ಬಗ್ಗೆಯೂ ಸೂಚನೆ ನೀಡಲಾಗಿದೆ ಎಂದರು.**

ನಾವೆಲ್ಲರೂ ಮೂಲತಃ ಬೆಂಗಳೂರು ಜಿಲ್ಲೆಯವರು. ಆಡಳಿತಾತ್ಮಕ ದೃಷ್ಟಿಯಿಂದ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆ ಎಂದು ಹಿಂದೆ ವಿಭಾಗ ಮಾಡಲಾಯಿತು. ರಾಮನಗರವನ್ನು ಕೇಂದ್ರಾಡಳಿತವಾಗಿಟ್ಟುಕೊಂಡೇ ಜಿಲ್ಲೆಯ ಹೆಸರನ್ನು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರುನಾಮಕರಣ ಮಾಡುವುದು ಅಗತ್ಯ.

ಬೆಂಗಳೂರು ಜಾಗತಿಕ ಮನ್ನಣೆ ಹೊಂದಿದ್ದು, ಈ ಜಿಲ್ಲೆಯ ಹೆಸರು ಉಳಿಸಿಕೊಳ್ಳಲು ನನ್ನ ಮುಖಂಡತ್ವದಲ್ಲಿ ಜಿಲ್ಲೆಯ ನಾಯಕರು ಮುಖ್ಯಮಂತ್ರಿಗಳಿಗೆ ಪ್ರಸ್ತಾವನೆ ಸಲ್ಲಿಸಿದ್ದೇವೆ.

ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮಾಡುವುದರಿಂದ ಮುಂದೆ ರಾಮನಗರ, ಚನ್ನಪಟ್ಟಣ, ಮಾಗಡಿ ಸೇರಿದಂತೆ ಮೈಸೂರುವರೆಗೂ ಅಭಿವೃದ್ಧಿ ಸಾಧಿಸಲು, ಕೈಗಾರಿಕೆಗಳ ಸ್ಥಾಪನೆಗೆ ಆಹ್ವಾನಿಸಲು, ಜತೆಗೆ ಆಸ್ತಿ ಮೌಲ್ಯ ಹೆಚ್ಚಳಕ್ಕೂ ನೆರವಾಗುತ್ತದೆ. ಬೆಂಗಳೂರಿನ ಒಂದು ದಿಕ್ಕಿನಲ್ಲಿ ಆಂಧ್ರ ಪ್ರದೇಶ, ಮತ್ತೊಂದು ದಿಕ್ಕಿನಲ್ಲಿ ತಮಿಳುನಾಡು ರಾಜ್ಯದ ಗಡಿ ಬರುತ್ತದೆ. ಹೀಗಾಗಿ ಬೆಂಗಳೂರಿನ ಅಭಿವೃದ್ಧಿ ವಿಸ್ತರಣೆಗೆ ನಮಗೆ ಉಳಿದಿರುವುದು ತುಮಕೂರು ಹಾಗೂ ಈ ಭಾಗ ಮಾತ್ರ. ನಮ್ಮ ಹೆಸರನ್ನು ನಾವು ಉಳಿಸಿಕೊಳ್ಳುತ್ತಿದ್ದೇವೆ.

ಇದು ಮರುನಾಮಕರಣವಷ್ಟೇ, ಹೊಸ ಜಿಲ್ಲೆಯಲ್ಲ ಹೊಸ ಜಿಲ್ಲೆಗೆ ನೀಡಿರುವ ಪ್ರಸ್ತಾವನೆಯಲ್ಲಿ ಯಾವ ಯಾವ ಕ್ಷೇತ್ರಗಳು ಬರಲಿವೆ ಎಂಬ ಪ್ರಶ್ನೆಗೆ, ನಾವು ಯಾವುದೇ ಹೊಸ ಜಿಲ್ಲೆ ಮಾಡುತ್ತಿಲ್ಲ.

ಇರುವ ಜಿಲ್ಲೆ ಹಾಗೇ ಇರಲಿದೆ. ರಾಮನಗರ, ಚನ್ನಪಟ್ಟಣ, ಮಾಗಡಿ, ಹಾರೋಹಳ್ಳಿ, ಕನಕಪುರ – ಈ ಐದು ತಾಲ್ಲೂಕುಗಳನ್ನು ಒಳಗೊಂಡು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರುನಾಮಕಾರಣ ಮುಂದಾಗಿದ್ದೇವೆ ಎಂದು ತಿಳಿಸಿದರು. ಡೆಂಗಿ ಪ್ರಕರಣ ಹೆಚ್ಚಳದ ಕುರಿತು ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಅವರು, ಎಲ್ಲೆಂದರಲ್ಲಿ ಕಸ ಎಸೆಯುವವವರ ಪ್ರಮಾಣ ಹೆಚ್ಚಾಗುತ್ತಿದೆ. ಇದನ್ನು ತಪ್ಪಿಸಲು ಸಿಸಿಟಿವಿ ಕ್ಯಾಮೆರ ಕಣ್ಗಾವಲು ವ್ಯವಸ್ಥೆ ಮಾಡಲಾಗುವುದು.

### ವಾಲ್ಮೀಕಿ ನಿಗಮ ಹಗರಣದಲ್ಲಿ ಸಚಿವ, ಶಾಸಕರ ಪಾತ್ರವಿಲ್ಲ

**ವಾಲ್ಮೀಕಿ ನಿಗಮ ಭ್ರಷ್ಟಾಚಾರದ ಆರೋಪಿಗಳ ಸಂಭಾಷಣೆ ಆಡಿಯೋ ಸೋರಿಕೆ ಬಗ್ಗೆ ಕೇಳಿದಾಗ ನಾನು ಆ ಆಡಿಯೋವನ್ನು ಕೇಳಿಲ್ಲ. ಜೊತೆಗೆ ಮುಕ್ತವಾಗಿ ತನಿಖೆ ನಡೆಯಬೇಕು ಎಂದು ಸಚಿವರೇ ಸ್ವಯಂಪ್ರೇರಿತವಾಗಿ ರಾಜೀನಾಮೆ ನೀಡಿದ್ದಾರೆ. ಸ್ವತಃ ಸಚಿವರೇ ಇದರಲ್ಲಿ ನನ್ನ ಪಾತ್ರವಿಲ್ಲ ಎಂದು ಹೇಳಿದ್ದಾರೆ. ಅವರಿಗೂ ನೋಟೀಸ್ ನೀಡಲಾಗಿದೆ ಎಂದು ಮಾಧ್ಯಮಗಳ ಮೂಲಕ ತಿಳಿಯಿತು. ನಾನು ಇದರಲ್ಲಿ ಮೂಗು ತೂರಿಸಲು ಹೋಗುವುದಿಲ್ಲ. ಭ್ರಷ್ಟಾಚಾರದಲ್ಲಿ ನಮ್ಮ ಮಂತ್ರಿ, ಶಾಸಕರ ಪಾತ್ರವಿಲ್ಲ, ಆದರೆ ಬೇರೆಯವರು ಇದರಲ್ಲಿ ಭಾಗಿಯಾಗಿದ್ದಾರೆ ಎಂದರು.**

## ಬೆಂಗಳೂರಿನಲ್ಲಿ ನಡುರಸ್ತೆಯಲ್ಲೇ ಸುಟ್ಟುಭಸ್ಮವಾದ ಬಿಎಂಟಿಸಿ ಬಸ್!

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರಿನಲ್ಲಿ ಮತ್ತೊಂದು ಅಗ್ನಿ ದುರಂತ ಸಂಭವಿಸಿದ್ದು, ಆಕಸ್ಮಿಕವಾಗಿ ಬೆಂಕಿ ಹೊತ್ತಿಕೊಂಡ ಪರಿಣಾಮ ನಡುರಸ್ತೆಯಲ್ಲೇ ಬಿಎಂಟಿಸಿ ಬಸ್ ಹೊತ್ತಿ ಉರಿದ ಘಟನೆ ನಡೆದಿದೆ. ಬೆಂಗಳೂರಿನ ಎಂ.ಜಿ. ರಸ್ತೆಯಲ್ಲಿ ಆಕಸ್ಮಿಕವಾಗಿ ಬೆಂಕಿ ಬಿದ್ದ ಪರಿಣಾಮ ಬಿಎಂಟಿಸಿ ಬಸ್ ಹೊತ್ತು ಉರಿದಿರುವ ಘಟನೆ ನಡೆದಿದೆ. ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ಆಗಮಿಸಿದ್ದು, ಬೆಂಕಿ ನಂದಿಸುವ ಕಾರ್ಯ ನಡೆಸಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

## ಲೈಂಗಿಕ ದೌರ್ಜನ್ಯ : ಎಂಎಲ್ಸಿ ಸೂರಜ್ ರೇವಣ್ಣ ಜಾಮೀನು ಅರ್ಜಿ ವಜಾ

• **ಉದಯವಾಹಿನಿ, ಬೆಂಗಳೂರು**



ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣ ಗಂಭೀರವಾದಂತ ಕೇಸ್ ಆಗಿದೆ. ಹೀಗಾಗಿ ಜಾಮೀನು ನೀಡೋದಕ್ಕೆ ಸಾಧ್ಯವಿಲ್ಲ ಅಂತ ಎಂಎಲ್ಸಿ ಸೂರಜ್ ರೇವಣ್ಣ ಸಲ್ಲಿಸಿದ್ದಂತ ಜಾಮೀನು ಅರ್ಜಿಯನ್ನು ಕೋರ್ಟ್ ವಜಾಗೊಳಿಸಿದೆ. ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ ಸಲ್ಲಿಸಿದ್ದಂತ ಜಾಮೀನು ಅರ್ಜಿಯನ್ನು ಬೆಂಗಳೂರಿನ 42ನೇ ಎಸಿಎಂಎಂ ಕೋರ್ಟ್‌ನ ನ್ಯಾಯಮೂರ್ತಿ ಕೆಎನ್ ಶಿವಕುಮಾರ್ ಅವರು ನಡೆಸಿದರು.ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣ ಗಂಭೀರವಾದಂತ ವಿಚಾರವಾಗಿದೆ ಅಂತ ಅಭಿಪ್ರಾಯಪಟ್ಟು, ಜಾಮೀನು ಅರ್ಜಿಯನ್ನು ವಜಾಗೊಳಿಸಿದರು.

## 7 ವರ್ಷದ ಬಾಲಕ ಸೇರಿ ಇಬ್ಬರ ಮೇಲೆ ಹುಚ್ಚುನಾಯಿ ದಾಳಿ : ಆಸ್ಪತ್ರೆಗೆ ದಾಖಲು

• **ಉದಯವಾಹಿನಿ, ಬೆಂಗಳೂರು**

ಇದೀಗ ರಾಜ್ಯದಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚಾಗುತ್ತಿದ್ದು, ಇದರ ಬೆನ್ನಲ್ಲೇ ಬೆಂಗಳೂರಿನ ಎರಡು ಕಡೆ 7 ವರ್ಷದ ಬಾಲಕ ಹಾಗೂ ಇನ್ನೊಬ್ಬ ವ್ಯಕ್ತಿಗೆ ಹುಚ್ಚುನಾಯಿ ಕಡಿತದಿಂದ ಗಂಭೀರವಾದ ಗಾಯಗಳಾಗಿರುವ ಘಟನೆ ನಡೆದಿದೆ. ಹೌದು ಬೆಂಗಳೂರಿನ ನೆಲಮಂಗಲದ ಮೈಲೆನಹಳ್ಳಿಯಲ್ಲಿ 7 ವರ್ಷದ ಬಾಲಕ ಚಿರಾಯು ಮೇಲೆ ಹುಚ್ಚುನಾಯಿ ದಾಳಿ ಮಾಡಿದೆ. ಶಾಲೆಯಿಂದ ವಾಪಸ್ ಆಗುತ್ತಿದ್ದ ವೇಳೆ 7 ವರ್ಷದ ಚಿರಾಯು ಮೇಲೆ ಹುಚ್ಚುನಾಯಿ ದಾಳಿ ಮಾಡಿದೆ. ಅದೇ ರೀತಿಯಾಗಿ ಭೋವಿ ಪಾಳ್ಯದಲ್ಲಿ ಹನುಮಂತರಾಜು ಎನ್ನುವ ವ್ಯಕ್ತಿಗೆ ಹುಚ್ಚುನಾಯಿ ದಾಳಿ ಮಾಡಿದೆ. ಸದ್ಯ ಇಬ್ಬರಿಗೂ ಗಂಭೀರವಾದ ಗಾಯಗಳಾಗಿದ್ದು, ನೆಲಮಂಗಲದ ಸಾರ್ವಜನಿಕ ಆಸ್ಪತ್ರೆಯಲ್ಲಿ ದಾಖಲಿಸಲಾಗಿದೆ. ಹುಚ್ಚುನಾಯಿ ನಿಯಂತ್ರಿಸುವಂತೆ ಇದೀಗ ಗ್ರಾಮಸ್ಥರು ಆಗ್ರಹಿಸುತ್ತಿದ್ದಾರೆ.

## ಮದ್ಯ ಸೇವಿಸಿ ಶಾಲಾ ವಾಹನ ಚಲಾವಣೆ; 23 ಚಾಲಕರ ವಿರುದ್ಧ ಕೇಸ್


• **ಉದಯವಾಹಿನಿ, ಬೆಂಗಳೂರು**

ಮದ್ಯ ಸೇವಿಸಿ ಶಾಲಾ ವಾಹನ ಚಲಾಯಿಸಿದ್ದ 23 ಶಾಲಾ ವಾಹನ ಚಾಲಕರ ವಿರುದ್ಧ ಬೆಂಗಳೂರು ಸಂಚಾರಿ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಬೆಂಗಳೂರು ನಗರದಲ್ಲಿ ಬೆಳಿಗ್ಗೆಯಿಂದಲೇ ವಿಶೇಷ ಕಾರ್ಯಾಚರಣೆ ಆರಂಭಿಸಿರುವ ಸಂಚಾರಿ ವಿಭಾಗದ ಪೊಲೀಸರು, ಎಲ್ಲಾ ಶಾಲಾ ವಾಹನಗಳನ್ನು ತಡೆದು ತಪಾಸಣೆ ನಡೆಸಿದ್ದು, ಈ ವೇಳೆ 23 ಶಾಲಾ ವಾಹನ ಚಾಲಕರು ಮದ್ಯ ಸೇವಿಸಿ ವಾಹನ ಚಲಾಯಿಸುತ್ತಿರುವುದು ಪತ್ತೆಯಾಗಿದೆ. ಈ ಹಿನ್ನೆಲೆಯಲ್ಲಿ ಕುಡಿದ ಮತ್ತಿನಲ್ಲಿ ಶಾಲಾ ವಾಹನ ಚಲಾಯಿಸುತ್ತಿದ್ದ ಚಾಲಕರ ಲೈಸನ್ಸ್ ರದ್ದುಗೊಳಿಸುವಂತೆ ಆರ್ ಟಿಒ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಕಾರ್ಯಾಚರಣೆಯ ವೇಳೆ ಫಿಟ್ನೆಸ್ ಸರ್ಟಿಫಿಕೆಟ್ ಇಲ್ಲದ 11 ವಾಹನಗಳು ಪತ್ತೆಯಾಗಿದ್ದು, ಇವುಗಳ ವಿರುದ್ಧ ಶಾಲಾ ಆಡಳಿತ ಮಂಡಳಿಗೂ ನೋಟಿಸ್ ನೀಡಲು ಸೂಚಿಸಲಾಗಿದೆ ಎಂದು ತಿಳಿದುಬಂದಿದೆ.

## ಚೂಡಾರತ್ನಮ್ಮ,ಕೃಷ್ಣಕುಮಾರರ ಹರ್ಷ

• **ಉದಯವಾಹಿನಿ, ಬೆಂಗಳೂರು**

ಪುರಿ ಜಗನ್ನಾಥ ಸಾಂಸ್ಕೃತಿಕ ಮತ್ತು ಕ್ಷೇಮಾಭಿವೃದ್ಧಿ ಸಂಘ(ರಿ) ಏರ್ಪಡಿಸಿದ್ದ ಮೈಸೂರಿನ ರಥಯಾತ್ರೆ ಕಾರ್ಯಕ್ರಮದಲ್ಲಿ ಮಹಾರಾಣಿಯವರ ಭೇಟಿ, ಕುಶಲ ವಿಚಾರಣೆ ಮತ್ತು ಪೂಜಾ ಸಂಭ್ರಮದಲ್ಲಿ ಪಾಲ್ಗೊಂಡಿದ್ದು ನಮ್ಮಗಳ ಪುಣ್ಯ ವಿಶೇಷವೆಂದರು. ಮಹಾರಾಣಿಯವರು ನೇರವಾಗಿ ಗುರುತಿಸಿ ನಮ್ಮೊಂದಿಗೆ ಹಂಚಿಕೊಂಡ ಸಂತೋಷ



ಉದಯವಾಹಿನಿ ಚಿತ್ರ

ಹಾಗೂ ಶುಭಾಶಯಗಳನ್ನು ನಾವೆಂದು ಜೀವನದಲ್ಲಿ ಮರೆಯಲು ಸಾಧ್ಯವಿಲ್ಲ. ತಾಯಿ ಸೇವೆ ಮಿಗಿಲೆಂಬುದನ್ನು ಇಡೀ ಸಮಾಜವೇ ಒಪ್ಪುವ ಮಾತಾಗಿದೆ. ದಿವ್ಯ ಜ್ಞಾನದಿಂದ ಇಂತಹ ಕಾರ್ಯಗಳು ಸಮಾಜದಲ್ಲಿ ನಡೆಯುತ್ತವೆಂದು ನಮ್ಮೀರ್ವರ ಬೆನ್ನು ತಟ್ಟಿದ್ದು ಮುಂದಿನ ಕಾರ್ಯಗಳಿಗೆ ಶಕ್ತಿವರ್ಧಕ. ಹಿರಿಯರ ಸತ್ಪ್ರೇರಣೆಯ ಇಂತಹ ಮಾತುಗಳು ನಮ್ಮಂತ ಯುವಕರ ಪಾಲಿಗೆ ದಾರಿದೀಪವೆಂದು ಕೃಷ್ಣಕುಮಾರ್, ಮಾತೃಶ್ರೀ ಚೂಡಾರತ್ನಮ್ಮ ಹರ್ಷಿಸಿದರು. ಇಂತಹ ಸುದಿನಕ್ಕೆ ನಮ್ಮನ್ನು ಆಹ್ವಾನಿಸಿ, ಸದವಕಾಶವನ್ನು ಒದಗಿಸಿದ ಜಗನ್ನಾಥ ದೇವಾಲಯದ ಧರ್ಮದರ್ಶಿಗಳು, ಪದಾಧಿಕಾರಿಗಳು ಹಾಗೂ ಆಧ್ಯಾತ್ಮಿಕ ಕಾರ್ಯಗಳನ್ನು ಯಶಸ್ವಿಯಾಗಿ ಮುಂದುವರಿಸಲು ನೆರೆದಿದ್ದ ಎಲ್ಲ ಸದ್ಭಕ್ತರಿಗೆ ಹೃತ್ಪೂರ್ವಕವಾದ ಧನ್ಯವಾದಗಳನ್ನು ತಿಳಿಸಿದರು.

## ಎಲ್ಲೆಂದರಲ್ಲಿ ಕಸ ಎಸೆದ್ರೆ, ನಿಮ್ಮ ಮೇಲೆ ಕೇಸ್ ಫಿಕ್ಸ್

• **ಉದಯವಾಹಿನಿ, ಬೆಂಗಳೂರು**

ನಗರದಲ್ಲಿ ದಿನೇ ದಿನೇ ಡೆಂಗ್ಯೂ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿವೆ. ಇವುಗಳನ್ನು ನಿಯಂತ್ರಣ ಮಾಡೋದಕ್ಕೆ ಬಿಬಿಎಂಪಿ ಆರೋಗ್ಯ ಇಲಾಖೆ ಕ್ರಮವಹಿಸಿದೆ. ಇದರ ನಡುವೆ ಎಲ್ಲೆಂದರಲ್ಲಿ ಕಸ ಎಸೆಯೋದಕ್ಕೆ ಬ್ರೇಕ್ ಕೂಡ ಹಾಕೋ ಕೆಲಸ ಮಾಡಿದೆ. ಅದಕ್ಕಾಗಿ ನಗರದೆಲ್ಲೆಡೆ ಹೆಚ್ಚುವರಿ ಸಿಸಿಟಿವಿ ಅಳವಡಿಕೆಗೆ ಕ್ರಮ ಕೈಗೊಳ್ಳಲಾಗಿದ್ದು, ಎಲ್ಲೆಂದರಲ್ಲಿ ಕಸ ಎಸೆದವರನ್ನು ಪತ್ತೆ ಹಚ್ಚಿ ಪ್ರಕರಣ ದಾಖಲಿಸೋದಕ್ಕೆ ಮುಂದಾಗಿದೆ. ಇಂದು ವಿಧಾನಸೌಧದಲ್ಲಿ ರಾಮನಗರ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಹಾಗೂ ಮುಖಂಡರನ್ನು ಒಳಗೊಂಡ ಡಿಸಿಎಂ ನೇತೃತ್ವದ ನಿಯೋಗವು ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಜಿಲ್ಲೆಯ ಮರುನಾಮಕರಣ ಪ್ರಸ್ತಾವನೆಯನ್ನು ಮುಖ್ಯಮಂತ್ರಿಗಳಿಗೆ ಮಂಗಳವಾರ ನೀಡಿದರು. ಈ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದಂತ ಬೆಂಗಳೂರು ಜಿಲ್ಲಾ ಉಸ್ತುವಾರಿ ಸಚಿವ ಡಿಸಿಎಂ ಡಿ.ಕೆ ಶಿವಕುಮಾರ್, ಡೆಂಗಿ ಪ್ರಕರಣ ಹೆಚ್ಚಳದ ಬಗ್ಗೆ ಕೇಳಿದಾಗ, ಎಲ್ಲೆಂದರಲ್ಲಿ ಕಸ ಎಸೆಯುವವವರ ಪ್ರಮಾಣ ಹೆಚ್ಚಾಗುತ್ತಿದೆ. ಇದನ್ನು



ಉದಯವಾಹಿನಿ ಚಿತ್ರ

ತಪ್ಪಿಸಲು ಸಿಸಿಟಿವಿ ಕ್ಯಾಮೆರ ಕಣ್ಗಾವಲು ವ್ಯವಸ್ಥೆ ಮಾಡಲಾಗುವುದು. ಜನರು ಮನೆಯ ಬಳಿ ಬರುವ ಕಸ ಸಂಗ್ರಹ ವಾಹನಗಳಿಗೆ ಕಸವನ್ನು ಹಾಕದೆ ರಸ್ತೆ ಬದಿ ಎಸೆಯುತ್ತಿದ್ದಾರೆ. ಈ ಕಾರಣಕ್ಕೆ ಎಲ್ ಇಡಿ ವಿದ್ಯುತ್ ದೀಪದ ಕಂಬಗಳಿಗೆ ಸಿಸಿಟಿವಿ ಕ್ಯಾಮೆರ ಅಳವಡಿಸಲು ಸೂಚನೆ ನೀಡಲಾಗಿದೆ. ಕಸ ಹಾಗೂ ಕಟ್ಟಡ ನಿರ್ಮಾಣ ತ್ಯಾಜ್ಯ ಸುರಿಯುವವರನ್ನು ಗುರುತಿಸಿ ಪ್ರಕರಣ ದಾಖಲಿಸುವ ಬಗ್ಗೆಯೂ ಸೂಚನೆ ನೀಡಲಾಗಿದೆ ಎಂದರು. ಡೆಂಗಿ ನಿಯಂತ್ರಣಕ್ಕೆ ಪಾಲಿಕೆ ಹಾಗೂ ಆರೋಗ್ಯ ಇಲಾಖೆ ಜಂಟಿಯಾಗಿ ಕೆಲಸ ಮಾಡುತ್ತಿವೆ. ಎಲ್ಲಾ ಇಲಾಖೆಗಳ ಮುಖ್ಯಸ್ಥರೊಂದಿಗೆ ಮುಖ್ಯಮಂತ್ರಿಗಳು ಪ್ರತ್ಯೇಕ ಸಭೆ ನಡೆಸುತ್ತಾರೆ ಎಂದರು.

## ಉಪಕ್ರಮದಿಂದ 42 ಲಕ್ಷ ರೂ. ಗಳಿಸಿದ ಮಹಿಳಾ ಚಾಲಕರು!

• **ಉದಯವಾಹಿನಿ, ಬೆಂಗಳೂರು**

ಆಟೋ–ಹೇಲಿಂಗ್ ಅಪ್ಲಿಕೇಶನ್ 'ನಮ್ಮ ಯಾತ್ರಿ' ಆರಂಭಿಸಿದ ಮಹಿಳಾ ಶಕ್ತಿ ಉಪಕ್ರಮವು ಮಹಿಳಾ ಆಟೋ ಚಾಲಕರಿಗೆ ಈ ವರೆಗೂ ರೂ.42 ಲಕ್ಷ ಆದಾಯ ತಂದುಕೊಟ್ಟಿದೆ.

ಈ ಉಪಕ್ರಮವು ಮಹಿಳಾ ಚಾಲಕರಿಗೆ ಆರ್ಥಿಕ ಸ್ವಾತಂತ್ರ್ಯ, ಗೌರವ ಸಾಧಿಸಲು ನೆರವಾಗುತ್ತಿದ್ದು, ಆಯಪ್ ಮೂಲಕ ಮಹಿಳೆಯರು ಈ ವರೆಗೂ 4 ಲಕ್ಷ ಕಿ.ಮೀ ಚಾಲನೆ ಮಾಡಿದ್ದಾರೆ.ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ನಡೆದಿದ್ದು, ಕಾರ್ಯಕ್ರಮದಲ್ಲಿ ಮಹಿಳಾ ಚಾಲಕರನ್ನು ಗುರ್ತಿಸಿ, ಗೌರವಿಸಲಾಯಿತು.

ಕರ್ನಾಟಕದ ಸಾರಿಗೆ ಸಚಿವ, ಮುಜರಾಯಿ ಸಚಿವ ಡಾ.ರಾಮಲಿಂಗಾ ರೆಡ್ಡಿ ಮಹಿಳಾ ಆಟೋ ಚಾಲಕರನ್ನು ಸನ್ಮಾನಿಸಿದರು.

ಎಲ್ಲರಿಗೂ ಸುರಕ್ಷಿತ ಹೆಚ್ಚು ಸ್ವಾಗತಾರ್ಹ, ವಾತಾವರಣವನ್ನು ಉತ್ತೇಜಿಸುತ್ತದೆ. ಈ ಉಪಕ್ರಮವು ನಮ್ಮ ಮಹಿಳೆಯರ ಶಕ್ತಿ ಮತ್ತು ಸ್ಥಿತಿಸ್ಥಾಪಕತ್ವಕ್ಕೆ ಸಾಕ್ಷಿಯಾಗಿದೆ.

ಸಬಲೀಕರಣದತ್ತ ಅವರ ಪ್ರಯಾಣವನ್ನು ಬೆಂಬಲಿಸಲು ನಾವು ಬದ್ಧರಾಗಿದ್ದೇವೆ ಎಂದು ಹೇಳಿದರು. ನಮ್ಮ ಯಾತ್ರಿ ಸಂಸ್ಥೆಯ ಸಿಇಒ ಮಗಿಳನ್ ಸೆಲ್ವನ್ ಅವರು ಮಹಿಳಾ ಆಟೋ ಚಾಲಕರನ್ನು ಸನ್ಮಾನಿಸಿದರು ಇದೇ ವೇಳೆ ಮಹಿಳಾ ಚಾಲಕರಿಗೆ ಉಚಿತ ತರಬೇತಿ ಕಾರ್ಯಕ್ರಮಗಳು, ಪರವಾನಗಿಗಳನ್ನು ನೀಡಲು ನೆರವು, ಸಾಲವನ್ನು ಪಡೆಯಲು ಹಣಕಾಸಿನ ನೆರವು ಸೇರಿದಂತೆ ವಿವಿಧ ರೀತಿಯ ಬೆಂಬಲ ನೀಡುವುದಾಗಿಯೂ ಸಚಿವರು ಭರವಸೆ ನೀಡಿದರು. ಮಹಿಳಾ ಶಕ್ತಿ' ಉಪಕ್ರಮದಡಿಯಲ್ಲಿ ಮಹಿಳೆಯರಿಗೆ ತರಬೇತಿ ನೀಡಲಾಗುತ್ತಿದ್ದು, ಪ್ರೋಗ್ರಾಂ ಎಲೆಕ್ಟ್ರಿಕ್ ಆಟೋ ಡ್ರೈವಿಂಗ್, ಟ್ರಾಫಿಕ್ ನಿಯಮಗಳು, ಅಪ್ಲಿಕೇಶನ್ ಬಳಕೆ ಮತ್ತು ಗ್ರಾಹಕ ಸೇವಾ ಕೌಶಲ್ಯಗಳ ಕುರಿತು ಒಂದು ತಿಂಗಳು ತರಬೇತಿ ನೀಡಲಾಗುತ್ತದೆ. ತರಬೇತಿ ಪಡೆಯಲು ಇಚ್ಛಿಸುವವರು ನಮ್ಮ ಯಾತ್ರಿ ನಂಬರ್ 080–6972 4800 ಅಥವಾ WhatsApp ಮೂಲಕ 86189 63188 ಗೆ ಸಂಪರ್ಕಿಸಬಹುದು



ಉದಯವಾಹಿನಿ ಚಿತ್ರ

**ಆಟೋ ಡ್ರೈವರ್‌ಗಳಾಗುವ ಮೂಲಕ, ಈ ಮಹಿಳೆಯರು ಜೀವನೋಪಾಯವನ್ನು ಗಳಿಸುವುದಲ್ಲದೆ, ಸಾಮಾಜಿಕ ನಿಯಮಗಳನ್ನು ಮರುರೂಪಿಸುತ್ತಿದ್ದಾರೆ. ನಮ್ಮ ರಸ್ತೆಗಳಲ್ಲಿ ಅವರ ಉಪಸ್ಥಿತಿಯು ನಗರ ಚಲನಶೀಲತೆಗೆ ಹೊಸ ಆಯಾಮವನ್ನು ನೀಡುತ್ತದೆ.**

## ಲಾಲ್‌ಬಾಗ್ ಫಲಪುಷ್ಪ ಪ್ರದರ್ಶನದಲ್ಲಿ ಅಂಬೇಡ್ಕರ್ ಜೀವನ ಅನಾವರಣ

• **ಉದಯವಾಹಿನಿ, ಬೆಂಗಳೂರು**

ಆಗಸ್ಟ್ ತಿಂಗಳಲ್ಲಿ ಬೆಂಗಳೂರಿಗರ ನೆಚ್ಚಿನ ಕಾರ್ಯಕ್ರಮವಾದ ಲಾಲ್‌ಬಾಗ್ ಫಲಪುಷ್ಪ ಪ್ರದರ್ಶನ ನಡೆಯಲಿದೆ. ಈ ಬಾರಿ ಲಾಲ್‌ಬಾಗ್‌ನಲ್ಲಿ ಸ್ವಾತಂತ್ರ್ಯ ದಿನಾಚರಣೆಯ ಫಲಪುಷ್ಪ ಪ್ರದರ್ಶನವು ಆಗಸ್ಟ್ 8 ರಂದು ಆರಂಭವಾಗಲಿದ್ದು, ಆಗಸ್ಟ್ 19 ರವರೆಗೆ ನಡೆಯಲಿದೆ.

ಇಲ್ಲಿ ಗಮನಿಸಬೇಕಾದ ಸಂಗತಿಯೆಂದರೆ ಪ್ರಸಿದ್ಧ ಪುಷ್ಪ ಪ್ರದರ್ಶನದ 216 ನೇ ಆವೃತ್ತಿಯಾಗಿದ್ದು, ತೋಟಗಾರಿಕಾ ಇಲಾಖೆಯು ಈ ವರ್ಷದ ಕೇಂದ್ರ ವಿಷಯವಾಗಿ ಸಂವಿಧಾನ ಶಿಲ್ಪಿ ಡಾ ಬಿ ಆರ್ ಅಂಬೇಡ್ಕರ್ ಅವರ ಜೀವನ ಮತ್ತು ಸಾಧನೆಗಳನ್ನು ಹೂಗಳಲ್ಲಿ ಅನಾವರಣಗಳಿಸಲಿದೆ ಎಂದು ಡೆಕ್ಕನ್ ಹೆರಾಲ್ಡ್ ವರದಿ ಮಾಡಿದೆ. ಲಾಲ್‌ಬಾಗ್ ಸಸ್ಯೋದ್ಯಾನದ ಜಂಟಿ ನಿರ್ದೇಶಕ ಎಂ ಜಗದೀಶ ಸುದ್ದಿಗಾರರೊಂದಿಗೆ ಮಾತನಾಡಿ, ಬಹು ನಿರೀಕ್ಷಿತ



ಉದಯವಾಹಿನಿ ಚಿತ್ರ

ಕಾರ್ಯಕ್ರಮಕ್ಕೆ ಈಗಾಗಲೇ ಭರ್ಜರಿ ಸಿದ್ಧತೆಗಳು ನಡೆಯುತ್ತಿದ್ದು, ಮುಂದಿನ 10 ದಿನಗಳಲ್ಲಿ ಅಂತಿಮ ವಿಷಯಾಧಾರಿತ ಪರಿಕಲ್ಪನೆ ಅಂತಿಮಗೊಳ್ಳುವ ನಿರೀಕ್ಷೆಯಿದೆ ಎಂದು ಮಾಹಿತಿ ನೀಡಿದ್ದಾರೆ.

ತೋಟಗಾರಿಕಾ ಇಲಾಖೆಯು ವಿದ್ವಾಂಸರು, ಸಂಶೋಧಕರೊಂದಿಗೆ ಚರ್ಚೆಯನ್ನು ಪ್ರಾರಂಭಿಸಿದೆ. ಡಾ ಅಂಬೇಡ್ಕರ್ ಅವರ ಪರಂಪರೆಯ ಸಮಗ್ರ ಪ್ರಾತಿನಿಧ್ಯವನ್ನು ಖಚಿತಪಡಿಸಿಕೊಳ್ಳಲು ಮುಂಬರುವ ದಿನಗಳಲ್ಲಿ ಕನಿಷ್ಠ 50 ಹೆಚ್ಚುವರಿ ತಜ್ಞರೊಂದಿಗೆ ತೊಡಗಿಸಿಕೊಳ್ಳಲು ಉದ್ದೇಶಿಸಿದೆ ಎಂದು ವರದಿ ತಿಳಿಸಿದೆ. ಫಲಪುಷ್ಪ ಪ್ರದರ್ಶನ ಸಂಘಟಕರು ಡಾ. ಬಿಆರ್ ಅಂಬೇಡ್ಕರ್ ಅವರ ಜೀವನ ಪಯಣದಲ್ಲಿನ ವಿವಿಧ ಮೈಲಿಗಲ್ಲುಗಳು ಮತ್ತು ಅವರ ಪ್ರಭಾವಶಾಲಿ ಭಾಷಣಗಳನ್ನು ಚಿತ್ರಿಸುವ ವೀಡಿಯೊಗಳನ್ನು ಪ್ರದರ್ಶಿಸಲು ಲಾಲ್‌ಬಾಗ್ ಉದ್ಯಾನದಾದ್ಯಂತ ಸುಮಾರು ಎಂಟು ಪರದೆಗಳನ್ನು ಸ್ಥಾಪಿಸಲು ಯೋಜಿಸಿದ್ದಾರೆ. ಗ್ಲಾಸ್ ಹೌಸ್‌ನಲ್ಲಿ, ನಾವು ಬಾಲ್ಯದಿಂದ ಅವರ ನಂತರದ ವರ್ಷಗಳವರೆಗಿನ ಜೀವನ ಪಯಣವನ್ನು 'ಜೀವನ ದರ್ಶನ'ದಂತೆ ಚಿತ್ರಿಸುವ ಪ್ರದರ್ಶನಗಳನ್ನು ನೀಡಲು ಯೋಜಿಸಿದ್ದೇವೆ ಎಂದು ಜಗದೀಶ್ ಮಾಹಿತಿ ನೀಡಿದ್ದಾರೆ. ಹೀಗಾಗಿ ಈ ಬಾರಿ ಫಲಪುಷ್ಪ ಪ್ರದರ್ಶನದಲ್ಲಿ ಹೂಗಳಲ್ಲಿ ಅಂಬೇಡ್ಕರ್ ಅವರನ್ನು ನೋಡುವ ಜೊತೆಗೆ ಪರದೆಗಳಲ್ಲಿಯೂ ಅವರ ಭಾಷಣ ಕೇಳಬಹುದು.

**ಪುಷ್ಪ ಪ್ರದರ್ಶನದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅವರಿಗೆ ಪುಷ್ಪ ನಮನ ಸಲ್ಲಿಸಲು ನಾವು ನಿರ್ಧರಿಸಿದ್ದೇವೆ. ಆದರೆ, ನಾವು ಇನ್ನೂ ಈ ಪರಿಕಲ್ಪನೆಯನ್ನು ಅಂತಿಮಗೊಳಿಸಬೇಕಾಗಿದೆ. ಸೂಕ್ಷ್ಮವಾದ ವಿವರಗಳನ್ನು ರೂಪಿಸಬೇಕಾಗಿದೆ. ನಾವು ಅವರ ಜೀವನ ಸಾಧನೆಗಳನ್ನು ಚಿತ್ರಿಸಲು ತಜ್ಞರು, ಸಂಶೋಧಕರನ್ನು ಸಂಪರ್ಕಿಸುತ್ತಿದ್ದೇವೆ ಎಂದು ಎಂ ಜಗದೀಶ್ ಹೇಳಿದ್ದಾರೆ.**

## ಜನರ ಪ್ರಾಣ ಹೋದರೆ ಸಹಿಸಲ್ಲ : ಸಿಎಂ ಸಿದ್ದರಾಮಯ್ಯ

• **ಉದಯವಾಹಿನಿ, ಬೆಂಗಳೂರು**

ಅಧಿಕಾರಿಗಳ ಉದಾಸೀನದಿಂದ ರಸ್ತೆ ಅಪಘಾತಗಳಲ್ಲಿ ಜನರ ಅಮೂಲ್ಯ ಪ್ರಾಣ ಹೋದರೆ ಸಹಿಸುವುದಿಲ್ಲ, ನೀವು ರಸ್ತೆಗಿಳಿದು ಸುರಕ್ಷತಾ ಕ್ರಮಗಳನ್ನು ಪರೀಕ್ಷಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದರು.

ವಿಧಾನಸೌಧದಲ್ಲಿಂದು ಜಿಲ್ಲಾಧಿಕಾರಿಗಳು, ಜಿಲ್ಲಾ ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ 2ನೇ ದಿನದ ಸಭೆಯಲ್ಲಿ ಮಾತನಾಡಿದ ಅವರು, ಅಪಘಾತ ವಲಯ, ಬ್ಲಾಕ್ ಸ್ಪಾಟ್ ಗುರುತಿಸಿ ಕೈಕಟ್ಟಿ ಕುಳಿತರೆ ನಿಮ್ಮ ಜವಾಬ್ದಾರಿ ಮುಗಿಯಿತೇ ಪ್ರಶ್ನಿಸಿದರು.

ರಾಜ್ಯದಲ್ಲಿ ಕಳೆದ ಒಂದು ವರ್ಷದ ಅವಧಿಯಲ್ಲಿ 34,916 ಅಪಘಾತಗಳು ಸಂಭವಿಸಿದ್ದು, 9943 ಜನರು ಸಾವನ್ನಪ್ಪಿದ್ದಾರೆ. ಜಿಲ್ಲೆಯಲ್ಲಿರುವ ರಸ್ತೆ ಸುರಕ್ಷಾ ಸಮಿತಿಗಳು ಜಿಲ್ಲೆಯಲ್ಲಿ ಅಪಘಾತ ಪ್ರಮಾಣ ತಡೆಯಲು ಯೋಜನೆಗಳನ್ನು ರೂಪಿಸಿ ಅನುಷ್ಠಾನಕ್ಕೆ ತರಬೇಕು. ಕಂದಾಯ, ಪೊಲೀಸ್, ಸಾರಿಗೆ, ನಗರ ಪಾಲಿಕೆ ಎಲ್ಲರೂ ಸಮನ್ವಯದಿಂದ ಕಾರ್ಯ ನಿರ್ವಹಿಸಿದರೆ ಅಪಘಾತಗಳನ್ನು ನಿಯಂತ್ರಿಸಲು ಸಾಧ್ಯ. ರಸ್ತೆ ಸುರಕ್ಷತಾ ಸಪ್ತಾಹಗಳು ಕಾಟಾಚಾರಕ್ಕೆ ನಡೆಯಬಾರದು. ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡರೆ ಹಲವು ಅಪಘಾತಗಳನ್ನು ತಡೆಯಬಹುದಾಗಿದೆ. ನಿರ್ಲಕ್ಷ್ಯದಿಂದ ಜನರ ಪ್ರಾಣಹಾನಿ ಉಂಟಾಗುವುದನ್ನು ಸಹಿಸಲು ಸಾಧ್ಯವಿಲ್ಲ. ಹಾಟ್‌ಸ್ಪಾಟ್‌ಗಳನ್ನು ಗುರುತಿಸಿ ಹೆದ್ದಾರಿಗಳಲ್ಲಿ ಅಂಬ್ಯುಲೆನ್ಸ ವ್ಯವಸ್ಥೆ, ಟ್ರಾಮಾ ಸೆಂಟರ್ ನೆಟ್ವರ್ಕ್ ಮಾಡಬೇಕು ಎಂದರು.



ಉದಯವಾಹಿನಿ ಚಿತ್ರ

## ಅಕೌಂಟ್‌ಗೆ ಎರಡು ತಿಂಗಳ ಗೃಹಲಕ್ಷ್ಮಿ ಹಣ ಬರುತ್ತೆ- ಸಚಿವೆ

• **ಉದಯವಾಹಿನಿ, ಬೆಂಗಳೂರು**



ಪಾವತಿಯಾಗದೇ ಇರುವ ಜೂನ್ ತಿಂಗಳ ಗೃಹಲಕ್ಷ್ಮಿ ಯೋಜನೆಯ ಕಂತಿನ ಹಣ ಮತ್ತು ಜುಲೈ ತಿಂಗಳ ಕಂತಿನ ಎರಡೂ ಒಟ್ಟಿಗೆ ಖಾತೆಗೆ ಹಾಕಲಾಗುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಭರವಸೆ ನೀಡಿದ್ದಾರೆ. ಜೂನ್ ತಿಂಗಳ ಗೃಹಲಕ್ಷ್ಮಿ ಯೋಜನೆಯ ಕಂತಿನ ಹಣ ಇನ್ನೂ ಪಾವತಿಯಾಗದೇ ಇರುವುದು ಸಾಕಷ್ಟು ಟೀಕೆಗೆ ಗುರಿಯಾಗಿತ್ತು. ಈ ಬಗ್ಗೆ ಇದೀಗ ಮಹಿಳಾ, ಮಕ್ಕಳ ಕಲ್ಯಾಣ ಇಲಾಖೆ ಮಾಹಿತಿ ನೀಡಿದ್ದು, ಗೃಹಲಕ್ಷ್ಮಿ ಯೋಜನೆಯ ಜೂನ್ ಮತ್ತು ಜುಲೈ ತಿಂಗಳ ಕಂತಿನ ಹಣ ಶೀಘ್ರದಲ್ಲೇ ಬಿಡುಗಡೆಯಾಗಲಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಭರವಸೆ ನೀಡಿದ್ದಾರೆ. ಚುನಾವಣೆ ನೀತಿ ಸಂಹಿತೆಯಿಂದಾಗಿ ಜೂನ್ ತಿಂಗಳ ಗೃಹಲಕ್ಷ್ಮಿ ಹಣ ಸ್ವಲ್ಪ ತಡವಾಗಿದೆ. ಇನ್ನೆರಡು ದಿನಗಳಲ್ಲಿ ಬಿಡುಗಡೆಯಾಗಲಿದೆ. ಜುಲೈ ತಿಂಗಳದ್ದು ಇದೇ 15ರೊಳಗೆ ಪಾವತಿಯಾಗಲಿದೆ ಎಂದು ಇಲಾಖೆ ತಿಳಿಸಿದೆ.

## ಅನರ್ಹ ಬಿಪಿಎಲ್ ಕಾರ್ಡ್ ರದ್ದು : ಸಿಎಂ ಸಿದ್ದರಾಮಯ್ಯ ಆದೇಶ

• **ಉದಯವಾಹಿನಿ, ಬೆಂಗಳೂರು**

ಅನರ್ಹ ಬಿಪಿಎಲ್ ಕಾರ್ಡ್‌ಗಳನ್ನು ಕೈಬಿಟ್ಟು ಅರ್ಹ ಫಲಾನುಭವಿಗಳಿಗೆ ಬಿಪಿಎಲ್ ಕಾರ್ಡ್‌ಗಳನ್ನು ಒದಗಿಸಲು ತ್ವರಿತವಾಗಿ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಕೂಡಲೇ ಸಮಗ್ರ ಪರಿಶೀಲನೆ ನಡೆಸಿ ಅನರ್ಹ ಬಿಪಿಎಲ್ ಕಾರ್ಡ್ ಕೈಬಿಡಲು ಕ್ರಮ ಕೈಗೊಳ್ಳಬೇಕು. ಹಾಗೆಯೇ ಬಿಪಿಎಲ್ ಕುಟುಂಬಗಳಲ್ಲಿನ ಮೃತ ಸದಸ್ಯರ ಹೆಸರು ತೆಗೆದು ಹಾಕುವ ಪ್ರಕ್ರಿಯೆಯನ್ನು ತ್ವರಿತವಾಗಿ ಕೈಗೊಳ್ಳಬೇಕು. ಜನರನ್ನು ಅನಗತ್ಯವಾಗಿ ಅಲೆದಾಡಿಸಬಾರದು. ಅವರ ಸಮಸ್ಯೆ, ದೂರುಗಳನ್ನು ಆಲಿಸಿ ಅಗತ್ಯ ಪರಿಹಾರ ಒದಗಿಸಬೇಕು ಎಂದು ಸೂಚಿಸಿದ್ದಾರೆ.

# ಮೂಡಾ ಸೊಳ್ಳೆ ಕಚ್ಚಿಸಿಕೊಂಡ ಸಿದ್ದು: ಅಶ್ವತ್ಥನಾರಾಯಣ್

## ಡಾ. ಸಿ.ಎನ್. ಅಶ್ವತ್ಥನಾರಾಯಣ್ ಹೇಳಿಕೆ, ಸೊಳ್ಳೆ ನಿಯಂತ್ರಣಕ್ಕೆ ಬೇಕಾದ ಔಷಧಿ ಸರಿಯಾಗಿ ಬಳಸುತ್ತಿಲ್ಲ

• **ಉದಯವಾಹಿನಿ, ಬೆಂಗಳೂರು**

4 ತಿಂಗಳ ಕಾಲ ಮಳೆಗಾಲದಲ್ಲಿ ಡೆಂಗ್ಯೂ ಮತ್ತಿತರ ಕಾಯಿಲೆ ಹೆಚ್ಚಾಗಿದೆ. ಮುಖ್ಯಮಂತ್ರಿಗಳು ಮೂಡಾ ಸೊಳ್ಳೆ ಕಚ್ಚಿಸಿಕೊಂಡಿದ್ದಾರೆ. ವಾಲ್ಮೀಕಿ ನಿಗಮದ ಹಗರಣ ಅವರನ್ನು ಬಾಧಿಸುತ್ತಿದೆ. ಡೆಂಗ್ಯೂ ಸೊಳ್ಳೆ ಯಾರಿಗೆ ಕಚ್ಚಿದರೆ ನನಗೇನು ಎಂಬ ರೀತಿಯಲ್ಲಿ ಅವರು ಇವತ್ತು ವರ್ತಿಸುತ್ತಿದ್ದಾರೆ. ಇಷ್ಟು ಅನುಭವವಿರುವ ಸಿಎಂ ಒಂದು ಸಭೆ ಮಾಡಿದ್ದಾರಾ ಎಂದು ಮಾಜಿ ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥನಾರಾಯಣ್ ಕೇಳಿದರು.

ಡೆಂಗ್ಯೂ ಹರಡುವಿಕೆ ತಡೆಗಟ್ಟುವ ನಿಟ್ಟಿನಲ್ಲಿ ಸರಕಾರ ಮತ್ತು ಬಿಬಿಎಂಪಿ ನಿರ್ಲಕ್ಷ್ಯ ವಹಿಸಿವೆ. ಡೆಂಗ್ಯೂ ಹರಡುವಿಕೆ ಕುರಿತು ಪರಿಶೀಲಿಸಲು ಅವರು ಇಂದು ಓಕಳಿಪುರಂ ಚರ್ಚ್ ಬಳಿ ಇರುವ ಕೊಳೆಗೇರಿ ಪ್ರದೇಶಗಳಿಗೆ ಭೇಟಿ ನೀಡಿದ್ದರು. ಬಳಿಕ ಅವರು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದರು. ಡೆಂಗ್ಯೂ ಪ್ರಕರಣಗಳು ತೀವ್ರವಾಗಿ ಹೆಚ್ಚಾಗುತ್ತಿವೆ. ಸೊಳ್ಳೆ ನಿಯಂತ್ರಣಕ್ಕೆ ಗಮನ ಕೊಡುತ್ತಿಲ್ಲ. ಎಲ್ಲೆಡೆ ಡೆಂಗ್ಯೂ, ಚಿಕೂನ್‌ಗುನ್ಯ ಸೊಳ್ಳೆಗಳು ಮಾರಕವಾಗಿವೆ ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

**ಡೆಂಗ್ಯೂ ತಡೆಗಟ್ಟುವಲ್ಲಿ ನಿರ್ಲಕ್ಷ್ಯ**

ಡೆಂಗ್ಯೂ ಪರೀಕ್ಷೆ ಸಂಬಂಧ ಸರಿಯಾಗಿ ಲ್ಯಾಬ್‌ಗಳನ್ನೂ ಸ್ಥಾಪಿಸಿಲ್ಲ. ಸರಕಾರ, ಬಿಬಿಎಂ ಕೊಟ್ಟಿರುವ ಕರಪತ್ರದಲ್ಲಿ ಎಲ್ಲಿ ಪರೀಕ್ಷೆ ಮಾಡಿಸಬಹುದು ಎಂಬ ಮಾಹಿತಿಯೇ ಇಲ್ಲ. ಎಲ್ಲಿಯೂ ಸರಿಯಾದ ಪರೀಕ್ಷೆ ಆಗುತ್ತಿಲ್ಲ. ರಕ್ತ ಪರೀಕ್ಷೆ ಸೇರಿ ವಿವಿಧ ಪರೀಕ್ಷೆಗಳು ಎಷ್ಟು ನಡೆದಿವೆ ಎಂದು ಅವರು ಪ್ರಶ್ನೆಯನ್ನು ಮುಂದಿಟ್ಟರು. ಜನರು ಸಾಯುತ್ತಿದ್ದಾರೆ. ಸೋಂಕು ಪ್ರಮಾಣ ಹೆಚ್ಚಾಗಿದೆ. ಆದರೆ, ಮುಖ್ಯಮಂತ್ರಿಗಳು ಒಂದು ಸಭೆಯನ್ನೂ ನಡೆಸಿಲ್ಲ. ಸಮರ್ಪಕ ವ್ಯವಸ್ಥೆ ಮಾಡದೆ ಇರುವುದು ದುಃಖಕರ ಎಂದು ಟೀಕಿಸಿದರು. ಕೋವಿಡ್ ಬಂದಾಗ ನಾವು ಎಲ್ಲಾ ಅಗತ್ಯ ವ್ಯವಸ್ಥೆಗಳನ್ನು ಕೂಡಲೇ ಮಾಡಿದ್ದೆವು. ಆದರೆ, ಈಗ ಡೆಂಗ್ಯೂ ಹರಡುವಿಕೆ ತಪ್ಪಿಸಲು ಕ್ರಮ ಕೈಗೊಂಡಿಲ್ಲ ಎಂದು ಟೀಕಿಸಿದರು.ಜ್ವರ ನಿಯಂತ್ರಣಕ್ಕೆ ಕ್ಲಿನಿಕ್‌ಗಳನ್ನು ತೆರೆದಿಲ್ಲ. ರೋಗಿಗಳು ಪಾಲಿಸಬೇಕಾದ ಕ್ರಮಗಳು, ಮುನ್ನೆಚ್ಚರಿಕೆ ಕ್ರಮಗಳ ಕುರಿತು ತಿಳಿಸುವ ಪ್ರಯತ್ನ ನಡೆದಿಲ್ಲ. ರಕ್ತ ಸೇರಿ ವಿವಿಧ ಪರೀಕ್ಷೆಗಳೂ ನಡೆಯುತ್ತಿಲ್ಲ ಎಂದು ಆಕ್ಷೇಪಿಸಿದರು. ಒಬ್ಬ ಎಂಟಮಾಲಜಿಸ್ಟ್ ಅಧಿಕಾರಿಯೂ ಬಿಬಿಎಂಪಿಯಲ್ಲಿ ಇಲ್ಲ ಎಂದು ಟೀಕಿಸಿದರು.

**ಮುಖ್ಯ ಆಯುಕ್ತರಿಗೂ ಡೆಂಗ್ಯೂ ಬಂದಿದೆ. ಆದರೂ ಇನ್ನೂ ಗಮನ ವಹಿಸುತ್ತಿಲ್ಲ. ಸೊಳ್ಳೆ ನಿಯಂತ್ರಣ ವಿಚಾರದಲ್ಲಿ ಕ್ರಮ ವಹಿಸುತ್ತಿಲ್ಲ. ಸೊಳ್ಳೆ ನಿಯಂತ್ರಣಕ್ಕೆ ಬೇಕಾದ ಔಷಧಿ ಸರಿಯಾಗಿ ಬಳಸುತ್ತಿಲ್ಲ. ಬರಿಯ ನೀರು ಸ್ಪ್ರೇ ಮಾಡುತ್ತಾರೆ. ಗುತ್ತಿಗೆದಾರರಿಗೆ ಹಣ ಕೊಡದ ಕಾರಣ ಅವರೂ ಕೆಲಸ ಮಾಡುವುದಿಲ್ಲ ಎಂದು ಡಾ. ಸಿ.ಎನ್. ಅಶ್ವತ್ಥನಾರಾಯಣ್ ನುಡಿದರು.**

**ಶಿವಕುಮಾರ್ ಅವರು ಸೊಳ್ಳೆ ನಿಯಂತ್ರಣದತ್ತ ಗಮನ ಕೊಟ್ಟಿದ್ದಾರಾ ಎಲ್ಲಾ ಬೆರಕೆ, ಎಲ್ಲಾ ಲೂಟಿ ಎಂಬಂತಾಗಿದೆ. ಈ ಸರಕಾರ ಸಂಪೂರ್ಣ ನಿಷ್ಕ್ರಿಯವಾಗಿದೆ. ಈಗ ಎಷ್ಟು ಜನರಿಗೆ ಜ್ವರ ಬಂದಿದೆ ಎಂದು ಕ್ಲಿನಿಕ್‌ಗಳಲ್ಲಿ ಮಾಹಿತಿ ಪಡೆದಿದ್ದಾರಾ ಎಂದು ಪ್ರಶ್ನೆಯನ್ನು ಮುಂದಿಟ್ಟರು. ಕರ್ನಾಟಕದಲ್ಲಿ, ಬೆಂಗಳೂರಿನಲ್ಲಿ ಎಷ್ಟು ಜನರಿಗೆ ಜ್ವರ ಬಂದಿದೆ ಎಂದು ಮಾಹಿತಿ ಇದೆಯೇ ಎಂದ ಅವರು, ಇವತ್ತು ಎಷ್ಟು ಜನರ ಪರೀಕ್ಷೆ ಮಾಡುತ್ತಿದ್ದಾರೆ ಏನಾದರೂ ತಿಳಿಸಿದ್ದಾರಾ ಬರಿಯ ಉದಾಸೀನ ಇವರದು ಎಂದು ದೂರಿದರು.**

ಇವರ ಬಳಿ ಮಾಹಿತಿ ಸಂಗ್ರಹಿಸುವ ವ್ಯವಸ್ಥೆಯೇ ಇಲ್ಲ. ಸಮರ್ಪಕ ಅಂಕಿಅಂಶವೂ ಇಲ್ಲ. ಇವರ ಬಳಿ ಮಾಹಿತಿ ಇದ್ದರೆ ಅದನ್ನಾದರೂ ಹೇಳಲಿ ಎಂದು ಆಗ್ರಹಿಸಿದರು. ಡೆಂಗ್ಯೂವಿನಲ್ಲಿ 4 ವಿಧಗಳಿವೆ. ಈ ಕುರಿತು ಜನರಿಗೆ ತಿಳಿಸಿಲ್ಲ. ತಡೆಗಟ್ಟುವ ಕಡೆ, ಚಿಕಿತ್ಸೆ ಕೊಡುವ ನಿಟ್ಟಿನಲ್ಲಿ ಗಮನ ಹರಿಸಿಲ್ಲ ಎಂದು ಅವರು ಆರೋಪಿಸಿದರು.

# ರಾಮನಗರ ಜಿಲ್ಲೆಯ ಮರುನಾಮಕರಣಕ್ಕೆ ಪ್ರಸ್ತಾವನೆ

## ಅಭಿವೃದ್ಧಿ ಸಾಧಿಸಲು, ಕೈಗಾರಿಕೆಗಳ ಸ್ಥಾಪನೆಗೆ ಆಹ್ವಾನ, ಜೊತೆಗೆ ಆಸ್ತಿ ಮೌಲ್ಯ ಹೆಚ್ಚಳಕ್ಕೂ ನೆರವು : ಡಿ.ಕೆ. ಶಿವಕುಮಾರ್

• **ಉದಯವಾಹಿನಿ ರಾಮನಗರ,**

ರಾಮನಗರ, ಚನ್ನಪಟ್ಟಣ, ಮಾಗಡಿ, ಕನಕಪುರ, ಹಾರೋಹಳ್ಳಿ ತಾಲ್ಲೂಕುಗಳ ಭವಿಷ್ಯ ಹಾಗೂ ಅಭಿವೃದ್ಧಿ ಗಮನದಲ್ಲಿಟ್ಟುಕೊಂಡು ರಾಮನಗರ ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರುನಾಮಕರಣ ಮಾಡಲು ತಮ್ಮ ನೇತೃತ್ವದ ಜಿಲ್ಲೆಯ ನಾಯಕರ ನಿಯೋಗವು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಪ್ರಸ್ತಾವನೆ ನೀಡಿದ್ದೇವೆ'' ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನಸೌಧದಲ್ಲಿ ರಾಮನಗರ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಹಾಗೂ ಮುಖಂಡರನ್ನು ಒಳಗೊಂಡ ಡಿಸಿಎಂ ನೇತೃತ್ವದ ನಿಯೋಗವು ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಜಿಲ್ಲೆಯ ಮರುನಾಮಕರಣ ಪ್ರಸ್ತಾವನೆಯನ್ನು ಮುಖ್ಯಮಂತ್ರಿಗಳಿಗೆ ಮಂಗಳವಾರ ನೀಡಿದರು.

ನಂತರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಡಿಸಿಎಂ ಶಿವಕುಮಾರ್ ಅವರು, ಬೆಂಗಳೂರು ನಗರ ಸೇರಿದಂತೆ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ, ಕನಕಪುರ, ರಾಮನಗರ, ಚನ್ನಪಟ್ಟಣ, ಮಾಗಡಿ ಸೇರಿದಂತೆ ನಾವೆಲ್ಲರೂ ಮೂಲತಃ ಬೆಂಗಳೂರು ಜಿಲ್ಲೆಯವರು. ಆಡಳಿತಾತ್ಮಕ ದೃಷ್ಟಿಯಿಂದ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆ ಎಂದು ಹಿಂದೆ ವಿಭಾಗ ಮಾಡಲಾಯಿತು. ರಾಮನಗರವನ್ನು ಕೇಂದ್ರಾಡಳಿತವಾಗಿಟ್ಟುಕೊಂಡೇ

### ಇದು ಮರುನಾಮಕರಣವಷ್ಟೇ, ಹೊಸ ಜಿಲ್ಲೆಯಲ್ಲ

**ಹೊಸ ಜಿಲ್ಲೆಗೆ ನೀಡಿರುವ ಪ್ರಸ್ತಾವನೆಯಲ್ಲಿ ಯಾವ ಯಾವ ಕ್ಷೇತ್ರಗಳು ಬರಲಿವೆ ಎಂಬ ಪ್ರಶ್ನೆಗೆ, ನಾವು ಯಾವುದೇ ಹೊಸ ಜಿಲ್ಲೆ ಮಾಡುತ್ತಿಲ್ಲ. ಇರುವ ಜಿಲ್ಲೆ ಹಾಗೇ ಇರಲಿದೆ. ರಾಮನಗರ, ಚನ್ನಪಟ್ಟಣ, ಮಾಗಡಿ, ಹಾರೋಹಳ್ಳಿ, ಕನಕಪುರ - ಈ ಐದು ತಾಲ್ಲೂಕುಗಳನ್ನು ಒಳಗೊಂಡು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರುನಾಮಕಾರಣ ಮುಂದಾಗಿದ್ದೇವೆ'' ಎಂದು ತಿಳಿಸಿದರು.**

ಜಿಲ್ಲೆಯ ಹೆಸರನ್ನು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರುನಾಮಕರಣ ಮಾಡುವುದು ಅಗತ್ಯ. ಬೆಂಗಳೂರು ಜಾಗತಿಕ ಮನ್ನಣೆ ಹೊಂದಿದ್ದು, ಈ ಜಿಲ್ಲೆಯ ಹೆಸರು ಉಳಿಸಿಕೊಳ್ಳಲು ನನ್ನ ಮುಖಂಡತ್ವದಲ್ಲಿ ಜಿಲ್ಲೆಯ ನಾಯಕರು ಮುಖ್ಯಮಂತ್ರಿಗಳಿಗೆ ಪ್ರಸ್ತಾವನೆ ಸಲ್ಲಿಸಿದ್ದೇವೆ.

**ಎಲ್ಲೆಂದರಲ್ಲಿ ಕಸ ಎಸೆಯುವವರ ಮೇಲೆ ಸಿಸಿಟಿವಿ ಕ್ಯಾಮೆರ ಕಣ್ಗಾವಲು:** ಡೆಂಗಿ ಪ್ರಕರಣ ಹೆಚ್ಚಳದ ಬಗ್ಗೆ ಕೇಳಿದಾಗ, ಎಲ್ಲೆಂದರಲ್ಲಿ ಕಸ ಎಸೆಯುವವರ ಪ್ರಮಾಣ ಹೆಚ್ಚಾಗುತ್ತಿದೆ. ಇದನ್ನು ತಪ್ಪಿಸಲು ಸಿಸಿಟಿವಿ ಕ್ಯಾಮೆರ ಕಣ್ಗಾವಲು ವ್ಯವಸ್ಥೆ ಮಾಡಲಾಗುವುದು. ಜನರು ಮನೆಯ ಬಳಿ ಬರುವ ಕಸ ಸಂಗ್ರಹ ವಾಹನಗಳಿಗೆ ಕಸವನ್ನು ಹಾಕದೆ ರಸ್ತೆ ಬದಿ ಎಸೆಯುತ್ತಿದ್ದಾರೆ. ಈ ಕಾರಣಕ್ಕೆ ಎಲ್ ಇಡಿ ವಿದ್ಯುತ್ ದೀಪದ ಕಂಬಗಳಿಗೆ ಸಿಸಿಟಿವಿ ಕ್ಯಾಮೆರ ಅಳವಡಿಸಲು ಸೂಚನೆ ನೀಡಲಾಗಿದೆ. ಕಸ ಹಾಗೂ ಕಟ್ಟಡ ನಿರ್ಮಾಣ ತ್ಯಾಜ್ಯ ಸುರಿಯುವವರನ್ನು ಗುರುತಿಸಿ ಪ್ರಕರಣ ದಾಖಲಿಸುವ ಬಗ್ಗೆಯೂ ಸೂಚನೆ ನೀಡಲಾಗಿದೆ ಎಂದರು. ಡೆಂಗಿ ನಿಯಂತ್ರಣಕ್ಕೆ ಪಾಲಿಕೆ ಹಾಗೂ ಆರೋಗ್ಯ ಇಲಾಖೆ ಜಂಟಿಯಾಗಿ ಕೆಲಸ ಮಾಡುತ್ತಿವೆ. ಎಲ್ಲಾ ಇಲಾಖೆಗಳ ಮುಖ್ಯಸ್ಥರೊಂದಿಗೆ ಮುಖ್ಯಮಂತ್ರಿಗಳು ಪ್ರತ್ಯೇಕ ಸಭೆ ನಡೆಸುತ್ತಾರೆ.



☛ ಉದಯವಾಹಿನಿ ಚಿತ್ರ

### ಸಿಬ್ಬಂದಿ ಕೊರತೆ ಬಗ್ಗೆ ಗಮನಹರಿಸುತ್ತೇವೆ

**ರಾಮನಗರ ಹಾಗೂ ಕನಕಪುರ ಮೆಡಿಕಲ್ ಕಾಲೇಜಿಗೆ ಅನುಮತಿ ಸಿಕ್ಕಿಲ್ಲ ಎಂಬ ಪ್ರಶ್ನೆಗೆ, ''ರಾಮನಗರ ಜಿಲ್ಲೆಯಲ್ಲಿ ಮೆಡಿಕಲ್ ಕಾಲೇಜು ತರಬೇಕು ಎಂಬುದು ನಮ್ಮೆಲ್ಲರ ಬೇಡಿಕೆಯಾಗಿತ್ತು. ಈ ವಿಚಾರವನ್ನು ಬಜೆಟ್ ನಲ್ಲೂ ಸೇರಿಸಲಾಗಿತ್ತು. ಸಿಬ್ಬಂದಿ ಕೊರತೆ ಎಂದು ಅನುಮತಿ ನೀಡಿಲ್ಲ ಎಂಬ ವಿಚಾರ ತಿಳಿಸಿದ್ದು, ಈ ಬಗ್ಗೆ ಗಮನಹರಿಸುತ್ತೇವೆ ಎಂದು ತಿಳಿಸಿದರು.**

**ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮಾಡುವುದರಿಂದ ಮುಂದೆ ರಾಮನಗರ, ಚನ್ನಪಟ್ಟಣ, ಮಾಗಡಿ ಸೇರಿದಂತೆ ಮೈಸೂರುವರೆಗೂ ಅಭಿವೃದ್ಧಿ ಸಾಧಿಸಲು, ಕೈಗಾರಿಕೆಗಳ ಸ್ಥಾಪನೆಗೆ ಆಹ್ವಾನಿಸಲು, ಜತೆಗೆ ಆಸ್ತಿ ಮೌಲ್ಯ ಹೆಚ್ಚಳಕ್ಕೂ ನೆರವಾಗುತ್ತದೆ. ಬೆಂಗಳೂರಿನ ಒಂದು ದಿಕ್ಕಿನಲ್ಲಿ ಆಂಧ್ರ ಪ್ರದೇಶ, ಮತ್ತೊಂದು ದಿಕ್ಕಿನಲ್ಲಿ ತಮಿಳುನಾಡು ರಾಜ್ಯದ ಗಡಿ ಬರುತ್ತದೆ. ಹೀಗಾಗಿ ಬೆಂಗಳೂರಿನ ಅಭಿವೃದ್ಧಿ ವಿಸ್ತರಣೆಗೆ ನಮಗೆ ಉಳಿದಿರುವುದು ತುಮಕೂರು ಹಾಗೂ ಈ ಭಾಗ ಮಾತ್ರ. ನಮ್ಮ ಹೆಸರನ್ನು ನಾವು ಉಳಿಸಿಕೊಳ್ಳುತ್ತಿದ್ದೇವೆ.** -ಡಿ.ಕೆ. ಶಿವಕುಮಾರ್, ಡಿಸಿಎಂ

**ನಾವು ಯಾವುದೇ ಹೊಸ ಜಿಲ್ಲೆ ಮಾಡುತ್ತಿಲ್ಲ**

**ವಾಲ್ಮೀಕಿ ನಿಗಮ ಹಗರಣದಲ್ಲಿ ಸಚಿವ, ಶಾಸಕರ ಪಾತ್ರವಿಲ್ಲ:** ವಾಲ್ಮೀಕಿ ನಿಗಮ ಭ್ರಷ್ಟಾಚಾರದ ಆರೋಪಿಗಳ ಸಂಭಾಷಣೆ ಆಡಿಯೋ ಸೋರಿಕೆ ಬಗ್ಗೆ ಕೇಳಿದಾಗ ನಾನು ಆ ಆಡಿಯೋವನ್ನು ಕೇಳಿಲ್ಲ. ಜೊತೆಗೆ ಮುಕ್ತವಾಗಿ ತನಿಖೆ ನಡೆಯಬೇಕು ಎಂದು ಸಚಿವರೇ ಸ್ವಯಂಪ್ರೇರಿತವಾಗಿ ರಾಜೀನಾಮೆ ನೀಡಿದ್ದಾರೆ. ಸ್ವತಃ ಸಚಿವರೇ ಇದರಲ್ಲಿ ನನ್ನ ಪಾತ್ರವಿಲ್ಲ ಎಂದು ಹೇಳಿದ್ದಾರೆ. ಅವರಿಗೂ ನೋಟೀಸ್ ನೀಡಲಾಗಿದೆ ಎಂದು ಮಾಧ್ಯಮಗಳ ಮೂಲಕ ತಿಳಿಯಿತು.

ನಾನು ಇದರಲ್ಲಿ ಮೂಗು ತೂರಿಸಲು ಹೋಗುವುದಿಲ್ಲ. ಭ್ರಷ್ಟಾಚಾರದಲ್ಲಿ ನಮ್ಮ ಮಂತ್ರಿ, ಶಾಸಕರ ಪಾತ್ರವಿಲ್ಲ, ಆದರೆ ಬೇರೆಯವರು ಇದರಲ್ಲಿ ಭಾಗಿಯಾಗಿದ್ದಾರೆ ಎಂದರು. ಸೋರಿಕೆಯಾಗಿರುವ ಆಡಿಯೋ ಸಂಭಾಷಣೆಯಲ್ಲಿ ವಾಲ್ಮೀಕಿ ನಿಗಮದ ಹಗರಣದ ಬಗ್ಗೆ ಅಧ್ಯಕ್ಷರಿಗೆ ತಿಳಿಸೋಣ ಎಂದು ಪರಶುರಾಮ್ ಹೇಳುತ್ತಾರೆ. ಸ್ವಲ್ಪ ದಿನ ಬಿಟ್ಟು ಹೇಳೋಣ ಎಂದು ಪದ್ಮನಾಭ ಹೇಳುತ್ತಾರೆ ಎಂದು ಕೇಳಿದಾಗ ಹಗರಣದ ಬಗ್ಗೆ ಅಧ್ಯಕ್ಷರಿಗೆ ಮತ್ತು ಸಚಿವರಿಗೆ ಏನೂ ತಿಳಿದಿಲ್ಲ ಎಂಬುದು ಈ ಆಡಿಯೋ ಮೂಲಕವೇ ಸ್ಪಷ್ಟವಾಗುತ್ತಿಲ್ಲವೇ. ನಾನು ಆಡಿಯೋವನ್ನು ಕೇಳಿಸಿಕೊಂಡಿಲ್ಲ ನಿಮ್ಮಿಂದಲೇ ವಿಚಾರ ತಿಳಿಯುತ್ತಿದೆ. ನೀವು ಹೇಳುತ್ತಿರುವ ಮಾತಿನಲ್ಲೇ ಈ ಪ್ರಕರಣದಲ್ಲಿ ಅಧ್ಯಕ್ಷರು ಹಾಗೂ ಸಚಿವರ ಪಾತ್ರವಿಲ್ಲ ಎಂಬುದು ಸ್ಪಷ್ಟವಾಗಿದೆ ಎಂದರು.



## ಮಿನಿ ನ್ಯೂಸ್

### ದೇಗುಲದ ಹುಂಡಿ ಒಡೆದು ಕಳ್ಳತನ

• **ಉದಯವಾಹಿನಿ ತುಮಕೂರು**



☛ ಉದಯವಾಹಿನಿ ಚಿತ್ರ

ತಾಲ್ಲೂಕಿನ ಕೆ.ಪಾಲಸಂದ್ರ ಗ್ರಾಮದ ಬಸವೇಶ್ವರ ದೇವಸ್ಥಾನದಲ್ಲಿ ರಾತ್ರಿ ಕಳ್ಳರು ದೇಗುಲದ ಹುಂಡಿ ಒಡೆದು ಹಣ ದೋಚಿದ್ದಾರೆ. ಲಕ್ಷಾಂತರ ರೂಪಾಯಿ ಕಳ್ಳತನವಾಗಿದೆ' ಎಂದು ದೇವಸ್ಥಾನದ ಸಮಿತಿಯಿಂದ ಜಯನಗರ ಠಾಣೆಗೆ ದೂರು ನೀಡಿದ್ದು, ಪ್ರಕರಣ ದಾಖಲಿಸಲಾಗಿದೆ.

ಇದೇ ರೀತಿಯಾಗಿ ಜಯನಗರ ದಕ್ಷಿಣ ಬಡಾವಣೆಯ ವೆಂಕಟೇಶ್ವರ ಸ್ವಾಮಿ ದೇವಸ್ಥಾನದ ಹುಂಡಿ ಕಳ್ಳತನವಾಗಿತ್ತು. ಈ ಘಟನೆ ನಡೆದ ಮಾರನೇ ದಿನ ಮತ್ತೊಂದು ದೇಗುಲದ ಹುಂಡಿ ಒಡೆದಿದ್ದಾರೆ. ಈಚೆಗೆ ನಗರದ ವಿವಿಧ ಕಡೆಗಳಲ್ಲಿ ಕಳ್ಳತನ ಪ್ರಕರಣಗಳು ಹೆಚ್ಚಾಗುತ್ತಿದೆ. ದೇವಸ್ಥಾನದ ಹುಂಡಿಯನ್ನೂ ಬಿಡುತ್ತಿಲ್ಲ. ಕಳ್ಳರ ಪತ್ತೆಗೆ ಕ್ರಮಕೈಗೊಳ್ಳಬೇಕು. ಪೊಲೀಸರು ಒಂದು ಪ್ರತ್ಯೇಕ ತಂಡ ರಚಿಸಿ ಕಳ್ಳತನಕ್ಕೆ ಕಡಿವಾಣ ಹಾಕಬೇಕು' ಎಂದು ಜಯನಗರ ನಿವಾಸಿಗಳು ಒತ್ತಾಯಿಸಿದ್ದಾರೆ.

### ವಿದ್ಯಾರ್ಥಿಗಳಿಗೆ ಉಚಿತ ರಕ್ತ ಪರೀಕ್ಷೆ



☛ ಉದಯವಾಹಿನಿ ಚಿತ್ರ

• **ಉದಯವಾಹಿನಿ ಚನ್ನಪಟ್ಟಣ**

ಪಟ್ಟಣದ ಮಂಗಳವಾರಪೇಟೆ ಶಾಲೆಯ ವಿದ್ಯಾರ್ಥಿಗಳಿಗೆ ಉಚಿತವಾಗಿ ರಕ್ತದ ಗುಂಪು ಪರೀಕ್ಷೆ ಮಾಡಿಸಲಾಯಿತು. ಚಂದ್ರು ಡಯಾಗ್ನೋಸ್ಟಿಕ್ ಸೆಂಟರ್, ಎಂ.ಆರ್.ಐ, ಸ್ಕ್ಯಾನಿಂಗ್ ಸೆಂಟರ್ ಜೀವಾಮೃತ ಬ್ಲಡ್ ಬ್ಯಾಂಕ್‌ನ ವ್ಯವಸ್ಥಾಪಕರಾದ ಚಂದ್ರುರವರ ನೆರವಿನಿಂದ ಹೆಲ್ತ್ ಕ್ಯಾಂಪ್ ಮೂಲಕ ಮಂಗಳವಾರಪೇಟೆ ಪ್ರೌಢಶಾಲೆಯ 95 ವಿದ್ಯಾರ್ಥಿಗಳಿಗೆ ಉಚಿತವಾಗಿ ರಕ್ತದ ಗುಂಪು ಪರೀಕ್ಷೆಯನ್ನು ಮಾಡಲಾಯಿತು. ವ್ಯವಸ್ಥಾಪಕರಾದ ಚಂದ್ರುರವರಿಗೆ ಶಾಲೆಯ ಮುಖ್ಯ ಶಿಕ್ಷಕರಾದ ಮಂಜಪ್ಪ ಎಂ.ತಾಲ್ಲೂಕು ಕರ್ನಾಟಕ ಸೆಕೆಂಡರಿ ಶಿಕ್ಷಕ ಸಂಘದ ಅಧ್ಯಕ್ಷರಾದ ರಂಗನಾಥ ಜಿ.ಕೆ, ಸುನೀತಾ ಬಿ.ಎಸ್, ಈರಾನಾಯಕ್, ಭವ್ಯ ಶ್ರೀ ಹೆಚ್.ಎಸ್ ಸೌಮ್ಯನಾಯ್ಕ್, ಲಕ್ಷ್ಮೀ ಎಸ್, ರಶ್ಮೀ, ಪುಟ್ಟಪ್ಪ, ಟಿ.ಆರ್, ನಜ್ಮಾ ರವರು ಅಭಿನಂದನೆಗಳನ್ನು ವ್ಯಕ್ತಪಡಿಸಿದರು.

# ಎಸ್‌ಎಸ್‌ಐಬಿಎಂ ವತಿಯಿಂದ ''ಇನ್‌ಸ್ಪಿರೋ'' ಕಾಲೇಜು ಉತ್ಸವ

• **ಉದಯವಾಹಿನಿ ತುಮಕೂರು**

ಶ್ರೀ ಸಿದ್ದಾರ್ಥ ಇನ್ಸಿಟ್ಯೂಟ್ ಆಫ್ ಬ್ಯೂಸಿನೆಸ್ ಮ್ಯಾನೇಜ್‌ಮೆಂಟ್ ವತಿಯಿಂದ ಮ್ಯಾನೇಜ್‌ಮೆಂಟ್, ಟೆಕ್‌ನಿಕಲ್ ಮತ್ತು ಸಾಂಸ್ಕೃತಿಕ ಉತ್ಸವ ''ಇನ್‌ಸ್ಪಿರೋ'' ಎಸ್‌ಎಸ್‌ಐಟಿ ಕ್ಯಾಂಪ್ಸ್‌ನ ಪಿಜಿ ಸೆಮಿನಾರ್ ಹಾಲ್‌ನಲ್ಲಿ ಆಯೋಜಿಸಲಾಯಿತು.

ಎರಡು ದಿನಗಳ ಕಾರ್ಯಕ್ರಮವನ್ನು ತುಮಕೂರು ವಿಶ್ವವಿದ್ಯಾಲಯದ ರಿಜಿಸ್ಟ್ರಾರ್ ನಾಹಿದಾ ಜಮ್ ಜಮ್ ಅವರು ಉದ್ಘಾಟಿಸಿದರು. ಉದ್ಘಾಟಿಸಿದ ನಂತರ ಮಾತನಾಡಿದ ಅವರು, ಸ್ಟೀವ್ ಜಾಬ್ಸ್ ಹೇಗೆ ಆ್ಯಪಲ್ ಕಂಪನಿ ಪ್ರಾರಂಭಿಸಿದರು ಎಂಬುದನ್ನು ಕಥೆ ಹೇಳುವ ಮೂಲಕ ವಿದ್ಯಾರ್ಥಿಗಳಿಗೆ ತಿಳಿಸಿದರು. ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡಿ ಲಭ್ಯವಿರುವ ಕೌಶಲ್ಯವನ್ನು ಅಳವಡಿಸಿಕೊಳ್ಳಬೇಕು. ಇದರಿಂದ ಮುಂದಿನ ಶೈಕ್ಷಣಿಕ ಮತ್ತು ವೃತ್ತಿ ಜೀವನ ಯಶಸ್ಸು ಕಾಣಬಹುದು ಎಂದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಸಾಹೇ ವಿಶ್ವವಿದ್ಯಾಲಯದ ಕುಲಪತಿ ಡಾ ಕೆ ಬಿ ಲಿಂಗೇಗೌಡ ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಏಕೆ ಎಂಬ ಪದ ಅಳವಡಿಸಿಕೊಳ್ಳಬೇಕು. ಏಕೆ ಎಂಬುದನ್ನು





☛ ಉದಯವಾಹಿನಿ ಚಿತ್ರ

ತಿಳಿದರೆ ವಿದ್ಯಾರ್ಥಿಗಳ ಜೀವನ ಗುರಿ ಕಡೆಗೆ ಮುಂದೆ ಸಾಗಬಹುದು ಎಂದರು.

ಶ್ರೀ ಸಿದ್ದಾರ್ಥ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಎಂ.ಎಸ್. ರವಿಪ್ರಕಾಶ ಮಾತನಾಡಿ, ಎರಡು ದಿನಗಳ ಉತ್ಸವವನ್ನು ಛಾಯಾಚಿತ್ರ ಸೆರೆ ಹಿಡಿಯುವ ಮೂಲಕ ಪ್ರತಿ ಆನಂದ ಕ್ಷಣಗಳನ್ನು ಸಂಗ್ರಹಿಸಿಕೊಳ್ಳಿ. ಮುಂದಿನ ದಿನಗಳಲ್ಲಿ ಈ ಪಟಗಳು ನೆನಪಾಗಿ ಉಳಿಯುತ್ತದೆ. ಕಾರ್ಯಕ್ರಮವು ಯಶಸ್ವಿಯಾಗಲಿ ಎಂದು ಹಾರೈಸಿದರು. ಅತಿಥಿಗಳಾಗಿ ಆಗಮಿಸಿದ್ದ ತುಮಕೂರು ವಿಶ್ವವಿದ್ಯಾಲಯದ ರಿಜಿಸ್ಟ್ರಾರ್ ನಾಹಿದಾ ಜಮ್ ಜಮ್, ಸಾಹೇ ವಿಶ್ವವಿದ್ಯಾಲಯದ ಕುಲಪತಿ ಡಾ ಕೆ ಬಿ ಲಿಂಗೇಗೌಡ ಮತ್ತು ಶ್ರೀ ಸಿದ್ದಾರ್ಥ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಎಂ.ಎಸ್. ರವಿಪ್ರಕಾಶ ಅವರಿಗೆ ಗೌರವ ಸರ್ಮಪಿಸಲಾಯಿತು.

**ವಿದ್ಯಾರ್ಥಿಗಳು ಕಲಿಕೆಗೆ ಹೆಚ್ಚು ಒತ್ತು ನೀಡಬೇಕು. ಸ್ಫೂರ್ತಿದಾಯಕ ನಾಯಕರು ಹೇಗೆ ಜೀವನದಲ್ಲಿ ಸಾಧನೆ ಮಾಡಿದ್ದಾರೆ ಎಂಬುದನ್ನು ವಿದ್ಯಾರ್ಥಿಗಳು ನಿರಂತರವಾಗಿ ಅಭ್ಯಾಸ ಮಾಡಿದರೆ ಸಾಧನೆ ಮಾಡಬಹುದು ಎಂದು ಅವರು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.** - ನಾಹಿದಾ ಜಮ್ ಜಮ್

ಬಿಸ್‌ನೆಸ್ ಕ್ವಿಜ್, ಗೂಡಿ ಬ್ಯಾಗ್, ಬ್ಯ್ಲಂಡ್ ಕೋಡಿಂಗ್, ಸೇರಿದಂತೆ ಸುಮಾರು ಆರು ವಿವಿಧ ಸ್ಪರ್ಧೆಗಳನ್ನು ವಿಭಾಗದ ವತಿಯಿಂದ ಆಯೋಜಿಸಲಾಗಿತ್ತು. ಜಿಲ್ಲಾದ್ಯಂತ ಸುಮಾರು 20ಕ್ಕೂ ಹೆಚ್ಚು ಕಾಲೇಜಿನ ವಿದ್ಯಾರ್ಥಿಗಳು ಎರಡು ದಿನಗಳ ಸ್ಪರ್ಧೆಗಳಲ್ಲಿ ಭಾಗವಹಿಸಿದರು. ಎಸ್‌ಎಸ್‌ಐಬಿಎಂನ ಪ್ರಾಂಶುಪಾಲರಾದ ಡಾ ಮಮತ ಜಿ, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಐಇಸಿ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮ



☛ ಉದಯವಾಹಿನಿ ಚಿತ್ರ

• **ಉದಯವಾಹಿನಿ ಹನೂರು**

ಪಟ್ಟಣ ಪಂಚಾಯಿತಿ ಸಭಾಂಗಣದಲ್ಲಿ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಇವರ ಸಹಯೋಗದೊಂದಿಗೆ ಶ್ರೀ ವಾತ್ಸಲ್ಯ ಸೋಷಿಯಲ್ ಮತ್ತು ಕಲ್ಚರಲ್ ಸೊಸೈಟಿ (ರಿ) ಚಿತ್ರದುರ್ಗ, ನರ್ಮ್-ಐ.ಹೆಚ್.ಎಸ್.ಡಿ.ಪಿ ಯೋಜನೆಯ ಐ.ಇ.ಸಿ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮದಲ್ಲಿ ಪ್ರಮಾಣಪತ್ರ ವಿತರಣೆ ಮಾಡಿದರು.

ಬಳಿಕ ಹನೂರು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಅಶೋಕ್. ಆರ್ ಮಾತನಾಡಿ, ಮಹಿಳೆಯರು ಸ್ವ-ಉದ್ಯೋಗದಲ್ಲಿ ತೊಡಗಿಸಿಕೊಂಡರೆ ಮಾತ್ರ ಕುಟುಂಬನಿರ್ವಹಣೆ ಜೊತೆಗೆ ಆರ್ಥಿಕವಾಗಿ ಮುಂದೆ ಬರಲು ಸಾಧ್ಯ. ಹೆಣ್ಣು ಅಬಲೆಯಲ್ಲ, ಕೇವಲ ಮನೆಕೆಲಸಕ್ಕೆ ಸೀಮಿತವಾಗದೆ ಇಡೀ ಸಮಾಜದಲ್ಲಿ ಎಲ್ಲಾ ಕ್ಷೇತ್ರದಲ್ಲೂ ಇಂದು ಸಾಧನೆಯ ಹಾದಿಯಲ್ಲಿ ಸಾಗುತ್ತಿದ್ದಾರೆ ಹೀಗಾಗಿ ಉತ್ತಮ ಬದುಕುಕಟ್ಟಿಕೊಳ್ಳಲು ಸ್ವ-ಉದ್ಯೋಗಕ್ಕೆ ಅನುಕೂಲಕರವಾದ ತರಭೇತಿಯನ್ನು ಪಡೆದುಕೊಂದು ಅದರಲ್ಲಿ ಒಂದಷ್ಟು ಆದಾಯ ಪಡೆದುಕೊಂಡರೆ ಕುಟುಂಬನಿರ್ವಹಣೆಗೆ ಸಹಕಾರಿಯಾಗಲಿದೆ ಈ ನಿಟ್ಟಿನಲ್ಲಿ ಮಹಿಳೆಯರು ಬಟ್ಟೆ ವಿನ್ಯಾಸ ಬಗ್ಗೆ ತರಭೇತಿ ಹೊಂದಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದರು.

ಶ್ರೀ ವಾತ್ಸಲ್ಯ ಸೋಷಿಯಲ್ ಮತ್ತು ಕಲ್ಚರಲ್ ಸೊಸೈಟಿಯ ಕಾರ್ಯದರ್ಶಿ ಸೌಮ್ಯ ಮಾತನಾಡಿ, ಗ್ರಾಮೀಣ ಭಾಗದ ಮಹಿಳೆಯರಿಗೆ ಸ್ಯಾರಿ, ಕುಚ್ಚು ಜೋಡಣೆ ಮಾಡುವ ಕೆಲಸ ಸಹಕಾರಿಯಾಗಲಿದೆ. ಸುಮಾರು 50 ಮಹಿಳೆಯರಿಗೆ ಪ್ರಮಾಣಪತ್ರ ವಿತರಣೆ ಮಾಡಲಾಗಿದೆ ಇದನ್ನು ಸದ್ಬಳಕೆ ಮಾಡಿಕೊಂಡು ಮಹಿಳೆಯರು ಆರ್ಥಿಕವಾಗಿ ಪ್ರಗತಿಯತ್ತ ಸಾಗಬೇಕು ಎಂದರು. ಈ ಸಂದರ್ಭದಲ್ಲಿ ಸ್ಯಾರಿ,ಕುಚ್ಚು ತರಭೇತಿ ಶಿಕ್ಷಕರಾದ ಶಾರದ, ಹನೂರು ಪಟ್ಟಣ ಪಂಚಾಯಿತಿ ಸಿಬ್ಬಂಧಿ ಜಯಶೀಲ ಸೇರಿದಂತೆ ಮಹಿಳೆಯರು ಇದ್ದರು.

# ಉದ್ಯಾನ ಅಧ್ವಾನ : ಸಾಮಗ್ರಿಯೂ ಹಾಳು

• **ಉದಯವಾಹಿನಿ ಕೋಲಾರ**

ಸಮರ್ಪಕವಾಗಿ ಕಸ ವಿಲೇವಾರಿ ಮಾಡಲು ಸಾಧ್ಯವಾಗದಷ್ಟು ಅಶಕ್ತಗೊಂಡಿರುವ ಕೋಲಾರ ನಗರಸಭೆ ಇರುವ ಉದ್ಯಾನಗಳನ್ನೂ ಹಾಳುಗೆಡುವುತ್ತಿದೆ.



☛ ಉದಯವಾಹಿನಿ ಚಿತ್ರ

ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿರುವ ಉದ್ಯಾನಗಳು ಕಸದ ತೊಟ್ಟಿಯಾಗುತ್ತಿವೆ. ಉಪಕರಣಗಳು ತುಕ್ಕು ಹಿಡಿಯುವುದೊಂದೇ ಬಾಕಿ, ದಿನವೆಲ್ಲಾ ಜಂಜಾಟದ ಬದುಕು ದೂಕುವ ನಗರದ ಜನರು ವಿರಾಮ, ವಿಹಾರ, ಮಕ್ಕಳಿಗೆ ಆಟ, ಮನರಂಜನೆಗೆಂದು ಉದ್ಯಾನ ಅರಸಿ ಬರುತ್ತಾರೆ. ಆದರೆ, ಇಲ್ಲಿನ ಉದ್ಯಾನ ಅವ್ಯವಸ್ಥೆ ನೋಡಿದರೆ ಮಾರು ದೂರು ಓಡಿ ಹೋಗುವಂತಿದೆ. ನಗರದ ರೈಲ್ವೆ ನಿಲ್ದಾಣದ ಬಳಿಯ ಧರ್ಮರಾ ಯನಗರ ಬಡಾವಣೆಯಲ್ಲಿರುವ ಉದ್ಯಾನವಂತೂ ಅಧೋಗತಿಯಲ್ಲಿದೆ. ನಾಗರಿಕರ ವಾಯುವಿಹಾರ ಹಾಗೂ ಮಕ್ಕಳ ಆಟಕ್ಕೆ ಅನುಕೂಲವಾಗಲಿ ಎಂಬ ಉದ್ದೇಶ ದಿಂದ ನಿರ್ಮಾಣವಾಗಿರುವ ಈ ಉದ್ಯಾನ ಪಾಳು ಬಿದ್ದಿದೆ. ಉದ್ಯಾನದ ಪ್ರವೇಶ ದ್ವಾರದಲ್ಲೇ ಕಸದ ರಾಶಿ ಉದ್ಯಾನದ ಪ್ರವೇಶ ದ್ವಾರದಲ್ಲೇ ಕಸದ ರಾಶಿ ಬಿದ್ದಿದೆ. ಎಲ್ಲಿ ನೋಡಿದರಲ್ಲಿ ಕಸ ಕಡ್ಡಿ, ಹುಲ್ಲು ಬೆಳೆದು ಕಾಲಿಡಲಾಗದ ಪರಿಸ್ಥಿತಿ ನೆಲೆಸಿದೆ. ಹಾವುಗಳು ಸೇರಿದಂತೆ ವಿಷಜಂತುಗಳ ಆಶ್ರಯ ತಾಣವಾಗಿ ಮಾರ್ಪಟ್ಟಿದೆ. ಅಕ್ಕಪಕ್ಕದಲ್ಲೇ ಮನೆಗಳಿದ್ದು, ಈ ಪರಿಸ್ಥಿತಿ ಕಂಡು ಜನರು ಭಯಭೀತರಾಗಿದ್ದಾರೆ.ನಗರಸಭೆ ಉದ್ಯಾನ ನಿರ್ವಹಣೆಗೆಂದು ಪ್ರತಿ ವರ್ಷ ಬಜೆಟ್‌ನಲ್ಲಿ ಹಣ ಎತ್ತಿಡುತ್ತದೆ. ಆದರೆ, ಅದೆಲ್ಲಿ ಹೋಗುತ್ತದೆ ಎಂಬುದೇ ಯಕ್ಷ ಪ್ರಶ್ನೆಯಾಗಿದೆ. ಮಕ್ಕಳು ಆಟದ ಉಪಕರಣಗಳು, ಜಿಮ್ ಸಾಮಗ್ರಿಗಳು ಹಾಳಾಗುತ್ತಿದ್ದು, ಲಕ್ಷಾಂತರ ರೂಪಾಯಿ ಪೋಲು ಮಾಡಲಾಗುತ್ತಿದೆ ಎಂದು ನಾಗರಿಕರು ಆರೋಪಿಸುತ್ತಾರೆ.

# ಮಾವು ಬೆಳೆ ವಿಮೆಗೆ ನೋಂದಾಯಿಸಿಕೊಳ್ಳಲು ಕರೆ

• **ಉದಯವಾಹಿನಿ ರಾಮನಗರ**

2024-25ರ ಮುಂಗಾರು ಹಂಗಾಮಿನಲ್ಲಿ ತೋಟಗಾರಿಕೆ ಬೆಳೆಗಳ ಪೈಕಿ ರಾಮನಗರ ಜಿಲ್ಲೆಗೆ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮಾವು ಬೆಳೆಯನ್ನು ವಿಮಾ ವ್ಯಾಪ್ತಿಗೆ ಒಳಪಡಿಸಲಾಗಿದೆ.

ಜಿಲ್ಲೆಯಲ್ಲಿ ಬೆಳೆ ಸಾಲ ಪಡೆದ ರೈತರು ಹಾಗೂ ಸಾಲ ಪಡೆಯದ ರೈತರು ತಮ್ಮ ವ್ಯಾಪ್ತಿಯಲ್ಲಿರುವ ಬ್ಯಾಂಕುಗಳು, ಸಾಮಾನ್ಯ ಸೇವಾಕೇಂದ್ರ, ಗ್ರಾಮ ಒನ್ ಮೂಲಕ ನೋಂದಣಿ ಮಾಡಿಸಿಕೊಳ್ಳಬಹುದಾಗಿದೆ.

ಮಾವು ಬೆಳೆಗೆ ಗರಿಷ್ಠ ವಿಮೆ ಮೊತ್ತ 80,000 ರೂ.ಗಳು, ರೈತರು ಪಾವತಿಸಬೇಕಾದ ಮೊತ್ತ (ಶೇ.5%) 4,000 ರೂ.ಗಳು. ಬೆಳೆ ಸಾಲ ಪಡೆಯದ ರೈತರು ಅರ್ಜಿಯೊಂದಿಗೆ ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ, ಬ್ಯಾಂಕ್ ಖಾತೆ ಪಾಸ್ ಬುಕ್, ಆಧಾರ್ ಕಾರ್ಡ್ ಮತ್ತು ಸ್ವಯಂ ಘೋಷಿತ ಬೆಳೆ ವಿವರವನ್ನು ನೀಡಬೇಕು.

ವಿಮೆಗೆ ನೋಂದಾಯಿಸಲು ಇದೇ 2024ರ ಆಗಸ್ಟ್ 31 ಕೊನೆಯ ದಿನವಾಗಿದೆ. ಸರ್ಕಾರದ ಆದೇಶ ಪ್ರಕಾರ ಎಚ್.ಡಿ.ಎಫ್.ಸಿ. ಎರ್ಗೊ ಜನರಲ್ ಇನ್ಯೂರೆನ್ಸ್ ಕಂಪನಿ ಲಿ., ರಾಮನಗರ ಜಿಲ್ಲೆಗೆ ಅನುಮೋದಿತ ವಿಮಾ ಸಂಸ್ಥೆಯಾಗಿದೆ.

**ಸೂಚನೆ:**-ವಿಮೆಗೆ ನೋಂದಾಯಿಸಿರುವ ಮಾವು ಬೆಳೆಗಾರರು ಪಹಣಿಯಲ್ಲಿ ಮಾವು ಬೆಳೆ ಯನ್ನು ಕಡ್ಡಾಯವಾಗಿ ಸೆಪ್ಟೆಂಬರ್ ಅಂತ್ಯದೊಳಗೆ ಬೆಳೆ ಸಮೀಕ್ಷೆಯಲ್ಲಿ ದಾಖಲು ಮಾಡಬೇಕು ಹಾಗೂ ಸಾಲ ಪಡೆಯದ ರೈತರು ಅತಿ ಹತ್ತಿರದ ವಿಮಾ ಸಂಸ್ಥೆಗಳು, ಅಂದರೆ, ರಾಷ್ಟ್ರೀಕೃತ ಬ್ಯಾಂಕ್, ಸಹಕಾರಿ ಬ್ಯಾಂಕ್, ಪ್ರಾಥಮಿಕ ಕೃಷಿ ಸಹಕಾರ ಸಂಸ್ಥೆ (ಪಿಎಸಿಎಸ್), ಕ್ಷೇತ್ರೀಯ ಗ್ರಾಮೀಣ ಬ್ಯಾಂಕುಗಳು/ಸಾಮಾನ್ಯ ಸೇವಾ ಕೇಂದ್ರ/(ಸಿಎಸ್‌ಸಿ)/ಗ್ರಾಮ ಒನ್ ಇದರ ಮೂಲಕ ತಮ್ಮ ಬೆಳೆ ವಿಮೆ ಮಾಡಿಕೊಳ್ಳಬಹುದು.

**ಮಾವು ಬೆಳೆಗೆ ಗರಿಷ್ಠ ವಿಮೆ ಮೊತ್ತ 80,000**

ಹೆಚ್ಚಿನ ಮಾಹಿತಿಗಾಗಿ ಹಾಗೂ ನೋಂದಣಿ ಅರ್ಜಿಗಾಗಿ ಆಯಾ ಹೋಬಳಿ ರೈತಸಂಪರ್ಕ ಕೇಂದ್ರದ ಸಹಾಯಕ ತೋಟಗಾರಿಕೆ ಅಧಿಕಾರಿ ಹಾಗೂ ರಾಮನಗರ ತಾಲ್ಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಮೊ: 8971914335, ಚನ್ನಪಟ್ಟಣ ತಾಲ್ಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಮೊ: 9741037882, ಮಾಗಡಿ ತಾಲ್ಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಮೊ: 9620696196, ಕನಕಪುರ ತಾಲ್ಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಮೊ: 9632410677 ಇವರನ್ನು ಸಂಪರ್ಕಿಸುವಂತೆ ಜಿಲ್ಲಾ ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೇತುವೆ ಮೇಲಿಂದ ಕೆಳಗೆ ಬಿದ್ದ ಲಾರಿ, ತಪ್ಪಿದ ಭಾರೀ ಅನಾಹುತ

• **ಉದಯವಾಹಿನಿ ಗೌರಿಬಿದನೂರು**

ನಗರದ ಮಧುಗಿರಿ ರಸ್ತೆಯ ರೈಲ್ವೆ ಮೇಲ್ಸೇತುವೆಯಿಂದ ಸರಕು ಸಾಗಾಣಿಕೆ ಬೃಹತ್ ಲಾರಿಯೊಂದು ಚಾಲಕನ ನಿಯಂತ್ರಣ ತಪ್ಪಿ ಕೆಳಗೆ ಬಿದ್ದು ಕಾರೊಂದು ಜಖಂ ಅಗಿರುವ ಘಟನೆ ಜರುಗಿದೆ. ಮಧುಗಿರಿ ರಸ್ತೆ ಕಡೆಯಿಂದ ರೈಲ್ವೆ ಮೇಲ್ಸೇತುವೆ ಮೇಲೆ ಗೌರಿಬಿದನೂರು ಕಡೆಗೆ ಬರುತ್ತಿರುವಾಗ ಚಾಲಕನ ನಿಯಂತ್ರಣ ತಪ್ಪಿ ಸೇತುವೆ ಮೇಲಿಂದ 25 ಅಡಿಗಳ ಕೆಳಕ್ಕೆ ಬಿದ್ದರೂ ಚಾಲಕ ಪವಾಡ ಸದೃಶ ರೀತಿಯಲ್ಲಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಮಧುಗಿರಿ ರಸ್ತೆ ಕಡೆಯಿಂದ ಬರುತ್ತಿರುವಾಗ ಬೆಸ್ಕಾಂ ಕಚೇರಿ ಬಳಿ ಕಾರೊಂದಕ್ಕೆ ಡಿಕ್ಕಿ ಹೊಡೆದು ಲಾರಿ ನಿಲ್ಲಿಸದೆ ಅತಿವೇಗವಾಗಿ ಚಲಾಯಿಸಿಕೊಂಡು ರೈಲ್ವೆ ಮೇಲ್ಸೇತುವೆ ಮೇಲೆ ಬರುವ ವೇಳೆ ನಿಯಂತ್ರಣ ಕಳೆದುಕೊಂಡು ಸೇತುವೆ ತಡೆಗೋಡೆಗೆ ಡಿಕ್ಕಿ ಹೊಡೆದು ಸೇತುವೆ ಮೇಲಿಂದ ಕೆಳಗೆ ಬಿದ್ದಿದ್ದು, ಚಾಲಕ ಗಂಭೀರವಾಗಿ ಗಾಯಗೊಂಡು ಲಾರಿಯಲ್ಲೇ ಸಿಲುಕಿಕೊಂಡಿದ್ದು, ಸ್ಥಳೀಯರು ಹರಸಾಹಸ ಪಟ್ಟು ಆತನನ್ನು ಹೊರತೆಗೆದು ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿದ್ದಾರೆ.

# ಭಾರತ ರಾಕೆಟ್ ತಂತ್ರಜ್ಞಾನ ಹೊಂದಿರುವ ದೇಶ

• **ಉದಯವಾಹಿನಿ ಮೈಸೂರು**

ವಿಶ್ವದಲ್ಲಿ ರಾಕೆಟ್ ತಂತ್ರಜ್ಞಾನ ಹೊಂದಿರುವ ಕೇವಲ ಆರು ದೇಶಗಳಲ್ಲಿ ಭಾರತವೂ ಒಂದಾಗಿದೆ ಎಂಬುದು ನಮ್ಮ ಹೆಮ್ಮೆ ಎಂದು ಇಸ್ರೋ ವಿಜ್ಞಾನಿ ಎಂ.ವಿ.ರೂಪಾ ಹೇಳಿದರು. ನಗರದ ಟೆರೇಶಿಯನ್ ಬಾಲಕಿಯರ ಪ್ರೌಢಶಾಲೆ, ಮೈಸೂರ್ ಸೈನ್ಸ್ ಫೌಂಡೇಶನ್ ಸಹಯೋಗದಲ್ಲಿ ಶನಿವಾರ ವಿದ್ಯಾರ್ಥಿ-ವಿಜ್ಞಾನಿ ನೇರ ಸಂವಾದ ಕಾರ್ಯಕ್ರಮದಲ್ಲಿ ಬಾಹ್ಯಾಕಾಶ ಕಾರ್ಯಕ್ರಮಗಳ ಬಗ್ಗೆ ಉಪನ್ಯಾಸ ನೀಡಿದರು.

ಚಂದ್ರಯಾನ 1, ಚಂದ್ರಯಾನ 2, ಚಂದ್ರಯಾನ 3 ಮತ್ತು ಮಂಗಳಯಾನದಂತಹ ಯೋಜನೆಗಳು ವಿಶ್ವವನ್ನೇ ತಿರುಗಿ ನೋಡುವಂತೆ ಮಾಡಿವೆ. ಇಸ್ರೋ ಪ್ರಾರಂಭವಾದ ದಿನಗಳಲ್ಲಿ ಉಪಗ್ರಹ ಉಡಾವಣೆಗಳಿಗೆ



☛ ಉದಯವಾಹಿನಿ ಚಿತ್ರ

ಬೇರೆ ದೇಶಗಳ ಸಹಾಯ ಕೋರಬೇಕಾಗಿತ್ತು. ಇಂದು ಭಾರತ ಎಲ್ಲಾ ಹಂತಗಳಲ್ಲೂ ಸ್ವಂತವಾಗಿ ರಾಕೆಟ್ ಮತ್ತು ಉಪಗ್ರಹ ತಯಾರು ಮಾಡಿ ಉಡಾವಣೆ ಮಾಡುವ ಸಾಮರ್ಥ್ಯ ಹೊಂದಿದೆ ಎಂದು ತಿಳಿಸಿದರು.

ಬೇರೆ ದೇಶಗಳು ಭಾರತಕ್ಕೆ ಬಂದು ಅವರ ಉಪಗ್ರಹ ಉಡಾವಣೆ ಮಾಡುತ್ತಿವೆ. ಕಾರಣ ಭಾರತದ ತಂತ್ರಜ್ಞಾನವು ಅತ್ಯುನ್ನತವಾಗಿದ್ದು, ಸಫಲತೆಯ ಪ್ರಮಾಣ ಹೆಚ್ಚಾಗಿದೆ. ಭಾರತ ಇನ್ನೂ ಸಾಧಿಸಬೇಕಾದ್ದು ಬಹಳಷ್ಟು ಇದ್ದು, ಆ ನಿಟ್ಟಿನಲ್ಲಿ ದಾಪುಗಾಲು ಇಡುತ್ತಿದೆ. ಭವಿಷ್ಯದ ವಿಜ್ಞಾನಿಗಳಾದ ವಿದ್ಯಾರ್ಥಿಗಳು ಈ ನಿಟ್ಟಿನಲ್ಲಿ ಹೆಚ್ಚು ಕೆಲಸ ಮಾಡಬೇಕಾಗಿದೆ. ಭಾರತವನ್ನು ಮುಂಚೂಣಿಯ ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿಸಲು ಪಣತೊಡಬೇಕಾಗಿದೆ ಎಂದರು. ಶಾಲಾ ಆಡಳಿತಾಧಿಕಾರಿಯಾದ ಸಿಸ್ಟರ್ ಅನಿಸ್, ಎಂ.ಎಸ್.ಎಫ್ ಕಾರ್ಯದರ್ಶಿ ಜಿ.ಬಿ.ಸಂತೋಷ ಕುಮಾರ್, ಸದಸ್ಯರಾದ ಎಚ್.ವಿ.ಮುರಳೀಧರ, ಶಾಲಾ ಮುಖ್ಯ ಶಿಕ್ಷಕ ಜಾಯ್, ಎಂಎಸ್‌ಎಫ್ ಕ್ಲಬ್ ಸಂಯೋಜಕಿ ಮಮತಾ ಇದ್ದರು.

# ಅಭಿನಂದನಾ ಸಮಾರಂಭ ನಾನು ಆಯೋಜಿಸಿಲ್ಲ : ಸಂಸದ ಕೆ. ಸುಧಾಕರ್

• **ಉದಯವಾಹಿನಿ ಕೋಲಾರ**

ನೆಲಮಂಗಲದಲ್ಲಿ ಭಾನುವಾರ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರಿಗೆ ಕೃತಜ್ಞತಾ ಸಮಾರಂಭದಲ್ಲಿ ಪಾಲ್ಗೊಂಡಿದ್ದವರಿಗೆ ಉಚಿತ ಮಾಂಸಾಹಾರ, ಸಾರಾಯಿ, ಮದ್ಯ ವಿತರಿಸಲಾಯಿತು. ಈ ಘಟನೆಯ ವಿಡಿಯೋ ಕ್ಲಿಪ್ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಸುಧಾಕರ್ ವಿರುದ್ಧ ಟೀಕೆ ವ್ಯಕ್ತವಾಗಿದೆ.

ಈ ನಡುವೆ ಸಂಸದ ಸುಧಾಕರ್ ಪ್ರತಿಕ್ರಿಯಿಸಿದ್ದು, ನಾನು ಸನ್ಮಾನ ಕಾರ್ಯಕ್ರಮವನ್ನು ಆಯೋಜಿಸಿಲ್ಲ ಅಥವಾ ಅದರ ಭಾಗವೂ ಅಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ





☛ ಉದಯವಾಹಿನಿ ಚಿತ್ರ

ಸುಧಾಕರ್, ಸಾರ್ವಜನಿಕವಾಗಿ ಮದ್ಯ ಹಂಚುವುದು ಅಪರಾಧವಾಗಿದ್ದು, ಅಕ್ಷಮ್ಯವಾಗಿದೆ. ನನ್ನ 20 ವರ್ಷಗಳ ರಾಜಕೀಯ ಜೀವನದಲ್ಲಿ ನಾನು ಎಂದಿಗೂ ಮದ್ಯ ವಿತರಿಸಿಲ್ಲ. ನಾನು ಸನ್ಮಾನ ಕಾರ್ಯಕ್ರಮ ಆಯೋಜಿಸಿಲ್ಲ ಎಂದಿದ್ದಾರೆ. ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರ ಆಹ್ವಾನದ ಮೇರೆಗೆ ಪ್ರತಿಪಕ್ಷದ ನಾಯಕ ಆರ್. ಅಶೋಕ ಮತ್ತು ನಾನು ಕಾರ್ಯಕ್ರಮದಲ್ಲಿ ಭಾಗವಹಿಸಿ ಕೆಲ ಸಮಯದ ನಂತರ ವಾಪಸಾದೆವು. ಆ ನಂತರ ಬೆಳವಣಿಗೆಗಳು ನಡೆದಿವೆ ಎಂದರು. ನಾನು ಈ ಬಗ್ಗೆ ಮಾಧ್ಯಮಗಳಿಂದ ತಿಳಿದುಕೊಂಡಿದ್ದೇನೆ, ಆದರೆ ಮದ್ಯವನ್ನು ಯಾರು ವಿತರಿಸಿದರು ಎಂಬುದು ನನಗೆ ತಿಳಿದಿಲ್ಲ. ನಾನು ಸ್ಥಳೀಯ ಮುಖಂಡರನ್ನು ಕರೆದು ಈ ರೀತಿ ಮಾಡಬಾರದಿತ್ತು ಎಂದು ಹೇಳಿದ್ದೇನೆ. ಮುಂದೆ ಇಂತಹ ಘಟನೆಗಳು ನಡೆಯದಂತೆ ಎಚ್ಚರಿಕೆ ವಹಿಸುತ್ತೇವೆ ಎಂದರು.

**ನನಗೂ ಅದಕ್ಕೂ ಸಂಬಂಧವಿಲ್ಲ**

# ಸಿಎಂ ರಾಜೀನಾಮೆಗೆ ದಸಂಸ ಆಗ್ರಹ

## ಎಸ್.ಸಿ, ಎಸ್.ಟಿ. ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ವರ್ಗಾಯಿಸುವ ಮೂಲಕ ಹಣ ದುರ್ಬಳಕೆ

• **ಉದಯವಾಹಿನಿ ಮಂಡ್ಯ**

ಎಸ್.ಸಿ, ಎಸ್.ಟಿ. ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ವರ್ಗಾಯಿಸುವ ಮೂಲಕ ಹಣ ದುರ್ಬಳಕೆ ಮಾಡಿಕೊಂಡಿರುವ ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ರಾಜ್ಯ ಘಟಕದ ಅಧ್ಯಕ್ಷ ವೆಂಕಟಗಿರಿಯಯ್ಯ ಒತ್ತಾಯಿಸಿದರು. ವಾಲ್ಮೀಕಿ ನಿಗಮದಲ್ಲಿ ಬಹುಕೋಟಿ ಭ್ರಷ್ಟಾಚಾರ ಮಾಡಿದ್ದು, ಇದರ ಆರ್ಥಿಕ ಅಶಿಸ್ತಿನ ನೈತಿಕ ಹೊಣೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ಹೊರಬೇಕು ಎಂದು ಸುದ್ದಿಗೋಷ್ಠಿಯಲ್ಲಿ ಆಗ್ರಹಿಸಿದರು.

'ಪರಿಶಿಷ್ಟ ವಿರೋಧಿ ಧೋರಣೆಯ ಅನ್ಯಾಯವನ್ನು ತಡೆಯಲಾಗದ ರಾಜ್ಯ ಆಡಳಿತ ಪಕ್ಷದ ಪರಿಶಿಷ್ಟ ಮಂತ್ರಿ, ಶಾಸಕರು ಮತ್ತು ವಿರೋಧ ಪಕ್ಷದಲ್ಲಿನ ಪರಿಶಿಷ್ಟ ಶಾಸಕರುಗಳೂ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು. ಎಸ್.ಸಿ, ಎಸ್.ಟಿ, ಟಿ.ಎಸ್.ಪಿ ಅನುದಾನದ 24,282 ಕೋಟಿ ಗ್ಯಾರಂಟಿ ಯೋಜನೆಗಳಿಗೆ ವರ್ಗಾಯಿಸಲ್ಪಟ್ಟ ಅನುದಾನವನ್ನು ಮತ್ತು ವಾಲ್ಮೀಕಿ ನಿಗಮದ ಬಹುಕೋಟಿ ಹಗರಣದ 187 ಕೋಟಿ ಹಾಗೂ ಕಳೆದ ಹತ್ತು ವರ್ಷಗಳಿಂದಲೂ ಸರ್ಕಾರವೇ ವಾಪಸ್ಸು ಪಡೆದುಕೊಂಡಿರುವ 80 ಸಾವಿರ ಕೋಟಿ ಸೇರಿ ಒಟ್ಟು 105,469 ಕೋಟಿ ಅನುದಾನವನ್ನು ಮತ್ತೆ ಸೇರಿಸಿ ರಾಜ್ಯ ಪರಿಶಿಷ್ಟ ಸಮುದಾಯದ ಕುಟುಂಬಗಳಿಗೆ ತಲಾ 25 ಲಕ್ಷದಂತೆ ರಾಜ್ಯಸರ್ಕಾರ ಹಂಚಿಕೆ ಮಾಡಬೇಕು ಎಂದು ಆಗ್ರಹ ಪಡಿಸಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಬಹುಕೋಟಿ ಭ್ರಷ್ಟಾಚಾರ ಮಾಡಿಸಿ,

**ಪ್ರಸಕ್ತ ಸಾಲಿನ ರಾಜ್ಯ ಬಜೆಟ್‌ನಲ್ಲಿ 39,121,46 ಕೋಟಿ ಅನುದಾನ ಬಳಕೆಗೆ ಕ್ರಿಯಾ ಯೋಜನೆಗೆ 4 ತಿಂಗಳು ಕಳೆದರೂ ಎಸ್ಸಿ, ಎಸ್ಟಿ ರಾಜ್ಯ ಅಭಿವೃದ್ಧಿ ಪರಿಷತ್ ಸಭೆ ಕರೆದು ಅನುಮೋದಿಸದೆ ಕಳೆದ ಶುಕ್ರವಾರ ಸಭೆ ನಡೆಸಿ ಗ್ಯಾರಂಟಿ ಯೋಜನೆಗಳಿಗೆ 14.282 ಕೋಟಿ ವರ್ಗಾಯಿಸಲು ತೀರ್ಮಾನಿಸಿರುವ ಮುಖ್ಯಮಂತ್ರಿಯ ನಡೆ ಪರಿಶಿಷ್ಟ ವಿರೋಧಿ ಧೋರಣೆ' ಎಂದು ಆಕ್ರೋಶ ವ್ಯಕ್ತಡಿಸಿದರು.**



☛ ಉದಯವಾಹಿನಿ ಚಿತ್ರ

### ಅನುದಾನ ದುರ್ಬಳಕೆ

**ಎಸ್.ಸಿ, ಎಸ್.ಟಿ.,ಟಿ.ಎ.ಎಸ್.ಪಿ ಅನುದಾನದ ಸದ್ಬಳಕೆ ಮಾಡದೆ, ದುರ್ಬಳಕೆ ಮಾಡಿರುವ ಅಧಿಕಾರಿ ಮತ್ತು ಜನಪ್ರತಿನಿಧಿಗಳ ಮೇಲೆ ರಾಜ್ಯ ಪರಿಶಿಷ್ಟ ಜಾತಿ, ಪಂಗಡಗಳ ಉಪಯೋಜನಾ ಕಾಯ್ದೆ(2013) ಅನ್ವಯ ಕ್ರಿಮಿನಲ್ ಹಾಗೂ ಪರಿಶಿಷ್ಟ ಜಾತಿ, ಪಂಗಡಗಳ ದೌರ್ಜನ್ಯ ತಡೆ ಕಾಯ್ದೆಯನ್ವಯ ಪ್ರಕರಣ ದಾಖಲಿಸಿ ಜೈಲಿಗೆ ಕಳುಹಿಸಬೇಕು' ಎಂದು ಒತ್ತಾಯಿಸಿದರು.**

ಎಸ್‌ಐಟಿ ತನಿಖೆ ನಾಟಕವಾಡು ತ್ತಿರುವ ರಾಜ್ಯ ಸರ್ಕಾರವೇ ಈ ಹಗರಣವನ್ನು ಸಿಬಿಐ ತನಿಖೆಗೆ ವಹಿಸಬೇಕು. ಜೊತೆಗೆ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕು ಇಲ್ಲದಿದ್ದಲ್ಲಿ ರಾಜ್ಯದಾದ್ಯಂತ ಪ್ರತಿಭಟನೆ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಮುಖಂಡರಾದ ಬಿ.ಆನಂದ್, ಸುರೇಶ್ ಮರಳಗಾಲ, ಅನಿಲ್‌ಕುಮಾರ್ ಇದ್ದರು.

# ರೈತರ ಹಾಲಿನ ದರ ಏರಿಸುವಂತೆ ಒತ್ತಾಯ : ಪ್ರತಿಭಟನೆ

• **ಉದಯವಾಹಿನಿ ಬಾಗೇಪಲ್ಲಿ**

ರೈತರ ಹಾಲಿನ ಬೆಲೆ ಏರಿಕೆ ಮಾಡುವಂತೆ ಹಾಗೂ ಗ್ರಾಹಕರು ಖರೀದಿಸುವ ಹಾಲಿನ ದರ ಇಳಿಕೆ ಮಾಡುವಂತೆ ಆಗ್ರಹಿಸಿ ಭಾರತ ಕಮ್ಯೂನಿಸ್ಟ್ ಪಕ್ಷದ (ಮಾರ್ಕ್ಸ್‌ವಾದಿ) ತಾಲ್ಲೂಕು ಸಮಿತಿ ಮುಖಂಡರು ಪಟ್ಟಣದ ಬಸ್ ನಿಲ್ದಾಣದ ಮುಂಭಾಗ ರಸ್ತೆ ತಡೆ ನಡೆಸಿ, ಪ್ರತಿಭಟನೆ ಮಾಡಿದರು. ಪಟ್ಟಣದ ಸುಂದರಯ್ಯ ಭವನದಿಂದ ಹೊರಟ ಪ್ರತಿಭಟನಾಕಾರರು ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಪ್ರತಿಭಟನಾ ಮೆರವಣಿಗೆ ನಡೆಸಿದರು.

ಈ ವೇಳೆ ಪಕ್ಷದ ಜಿಲ್ಲಾ ಸಮಿತಿ ಕಾರ್ಯದರ್ಶಿ ಎಂ.ಪಿ.ಮುನಿವೆಂಕಟಪ್ಪ ಮಾತನಾಡಿ, ಜಿಲ್ಲೆಯ ರೈತರು ಹೈನುಗಾರಿಕೆಯನ್ನೇ ನಂಬಿದ್ದು, ಇದರಲ್ಲಿ ಮಹಿಳೆಯರ ಶ್ರಮ ಹೆಚ್ಚಿದೆ. ಕೆಎಂಎಫ್ ಅಡಿಯಲ್ಲಿ 15 ಹಾಲಿನ ಒಕ್ಕೂಟಗಳಿವೆ. ಪ್ರತಿದಿನ 78.8 ಲಕ್ಷ ಲೀಟರ್ ಹಾಲು ಸಂಗ್ರಹವಾಗುತ್ತಿದೆ. ಪಶು ಆಹಾರ ಬೆಲೆ ಏರಿಕೆ, ನಿರ್ವಹಣೆಗೆ ಹೆಚ್ಚು ಹಣವಾಗುತ್ತಿದೆ. ಆದರೆ, ಪ್ರತಿ ಲೀಟರ್ ಹಾಲಿಗೆ ಪ್ರೋತ್ಸಾಹ ಧನ ಸೇರಿ 38 ಪಾವತಿ ಮಾಡುತ್ತಿದ್ದಾರೆ. ಜತೆಗೆ ಎಂಟು ತಿಂಗಳಿನಿಂದ ಹಾಲಿನ ಪ್ರೋತ್ಸಾಹ ಧನ ನಿಲ್ಲಿಸಿದ್ದು, ಹಾಲು ಉತ್ಪಾದಕರ ಮೇಲೆ ಬರೆ ಎಳೆದಂತಾಗಿದೆ ಎಂದರು. ಸರ್ಕಾರಿ ಸ್ವಾಮ್ಯದ ನಂದಿನಿಯನ್ನು ಉಳಿಸಬೇಕಾದ ಸರ್ಕಾರ, ಬಹುರಾಷ್ಟ್ರೀಯ





☛ ಉದಯವಾಹಿನಿ ಚಿತ್ರ

**ಹಾಲು ಉತ್ಪಾದಕರ ಮೇಲೆ ಬರೆ**

ಕಂಪನಿ ಹಾಗೂ ಖಾಸಗಿ ಕಂಪನಿಗಳಿಗೆ ಅವಕಾಶ ನೀಡುತ್ತಿದೆ. ಜತೆಗೆ ಕೂಡಲೇ ಬಾಕಿ ಇರುವ ಪ್ರೋತ್ಸಾಹಧನ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದರು. ಪ್ರಾಂತ ಕೃಷಿ ಕೂಲಿಕಾರರ ಸಂಘಟನೆಯ ಮುಖಂಡ ಚನ್ನರಾಯಪ್ಪ ಮಾತನಾಡಿ, ಹಾಲಿನ ಪ್ರೋತ್ಸಾಹಧನವನ್ನು 5 ರಿಂದ 10ಕ್ಕೆ ಏರಿಕೆ ಮಾಡಬೇಕು. ಹಸುಗಳ ಬೆಲೆ ಏರಿಕೆ ಸೇರಿದಂತೆ ಉತ್ಪಾದನಾ ವೆಚ್ಚ ಹೆಚ್ಚಳ ಆಗಿರುವುದರಿಂದ ಡಾ.ಎಂ.ಎಸ್.ಸ್ವಾಮಿನಾಥನ್ ಆಯೋಗದ ಶಿಫಾರಸ್‌ನಂತೆ ಪ್ರತಿ ಲೀಟರ್ ಹಾಲಿಗೆ 50 ನಿಗದಿಪಡಿಸಬೇಕು. ಹಾಲು ಉತ್ಪಾದಕರ ಮಕ್ಕಳ ಶಿಕ್ಷಣಕ್ಕೆ ವಿದ್ಯಾರ್ಥಿನಿಲಯ ಆರಂಭಿಸಬೇಕು. ಪಶು ಆಹಾರಗಳ ಗುಣಮಟ್ಟ ಕಾಯ್ದುಕೊಳ್ಳಬೇಕು. ಪಶು ಆಹಾರಗಳ ಬೆಲೆ ಇಳಿಕೆ ಮಾಡಿ ಬೆಲೆ ಏರಿಕೆ ನಿಯಂತ್ರಣ ಮಾಡಬೇಕು. ನಂದಿನ ಹಾಲು ಮತ್ತು ಅದರ ಉತ್ಪನ್ನಗಳ ಮಾರಾಟ ಕೇಂದ್ರಗಳನ್ನು ಹೆಚ್ಚಿಸಬೇಕೆಂದು ಒತ್ತಾಯಿಸಿದರು.

ಅಂತರಾಳದಿಂದ.. EDITORIAL

# ಉಲ್ಬಣಿಸುತ್ತಿರುವ ಡೆಂಗ್ಯೂ

ರಾಜ್ಯದಲ್ಲಿ ಅದರಲ್ಲೂ ರಾಜಧಾನಿ ಬೆಂಗಳೂರಿನಲ್ಲಿ ಮಾರಕ ಡೆಂಗ್ಯೂ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಲೇ ಇದೆ. ರವಿವಾರ 159 ಡೆಂಗಿ ಪ್ರಕರಣಗಳು ಪತ್ತೆಯಾಗಿವೆ. 35 ಜನ ಆಸ್ಪತ್ರೆಗೆ ದಾಖಲಾಗಿದ್ದಾರೆ. ವ್ಯಾಪಿಸುತ್ತಿರುವ ಡೆಂಗ್ಯೂಯಿಂದ ಮೈಸೂರು, ಚಿಕ್ಕಮಗಳೂರು, ಶಿವಮೊಗ್ಗ ಹಾವೇರಿ, ಚಿತ್ರದುರ್ಗ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳು ತತ್ತರಿಸಿ ಹೋಗಿವೆ ಬೆಂಗಳೂರು ಮಹಾನಗರವೊಂದರಲ್ಲೇ 1,200ಕ್ಕಿಂತ ಹೆಚ್ಚು ಪ್ರಕರಣಗಳು ದಾಖಲಾಗಿವೆ ಕಳೆದ ವರ್ಷಕ್ಕೆ ಹೋಲಿಸಿದರೆ ಬಿಬಿಎಂಪಿ ವ್ಯಾಪ್ತಿಯಲ್ಲಿ ವರದಿಯಾಗಿರುವ ಪ್ರಕರಣಗಳ ಸಂಖ್ಯೆ ಜಾಸ್ತಿ ಸಂಬಂಧಿಸಿದವರು ಸೂಕ್ತ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದ್ದರೆ ಈ ಪರಿಸ್ಥಿತಿ ಉಂಟಾಗುತ್ತಿರಲಿಲ್ಲಮಳೆಗಾಲದಲ್ಲಿ ಸಾಮಾನ್ಯವಾಗಿ ಡೆಂಗಿ ಉಲ್ಬಣಗೊಳ್ಳುತ್ತದೆ. ಅಲ್ಲಲ್ಲಿ ಖಾಲಿ ತೊಟ್ಟಿ ತಗ್ಗು ಪ್ರದೇಶಗಳಲ್ಲಿ ನೀರು ನಿಂತಲ್ಲಿ ಸೊಳ್ಳೆಗಳ ಉತ್ಪತ್ತಿ ಹೆಚ್ಚುವುದರಿಂದ ಡಂಗಿ ಉಲ್ಬಣಗೊಳ್ಳುತ್ತದೆ. ಇದು ಪ್ರತಿವರ್ಷದ ಹಾವಳಿ.ಡೆಂಗ್ಯೂ ಪರಿಣಾಮವಾಗಿ ಸೊಳ್ಳೆಗಳ ಉತ್ಪತ್ತಿಯಾಗಿ ಆ ಸೊಳ್ಳೆಗಳು ಕಚ್ಚುವುದರಿಂದ ರಕ್ತದೊತ್ತಡದಲ್ಲಿ ಒಮ್ಮಿಂದೊಮ್ಮೆಲೇ ಇಳಿಕೆ, ಅಂತರಿಕ ರಕ್ತಸ್ರಾವ, ಇದ್ದಕ್ಕಿದ್ದಂತೆ ಜ್ವರ ವಸಡು ಮತ್ತು ಮೂಗಿನಲ್ಲಿ ರಕ್ತಸ್ರಾವ, ಮಾಂಸ ಖಂಡ ಮತ್ತು ಕೀಲುಗಳಲ್ಲಿ ನೋವು ವಿಪರೀತ ತಲೆನೋವು, ಉಸಿರಾಟದಲ್ಲಿ ತೊಂದರೆ ಮತ್ತು ದೈಹಿಕ ಆಯಾಸ ಕಾಣಿಸಿಕೊಳ್ಳುತ್ತದೆ. ಈ ರೋಗದ ಲಕ್ಷಣಗಳನ್ನು ಅರಿತು ಅದರ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕೆಂಬುದು ತಜ್ಞ ವೈದ್ಯರ ಸಲಹೆಯಾಗಿದೆ. ರಾಜ್ಯದಲ್ಲಿ ಈವರೆಗೆ ಐದೂವರೆ ಸಾವಿರಕ್ಕೂ ಹೆಚ್ಚು ಡೆಂಗ್ಯೂ ಪ್ರಕರಣಗಳು ವರದಿಯಾಗಿವೆ. ಇದರಲ್ಲಿ ಬಹುತೇಕ ಪ್ರಕರಣಗಳು ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಪತ್ತೆಯಾಗಿವೆ. ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರೂ ಡೆಂಗಿಯಿಂದ ಬಾಧಿತರಾಗಿದ್ದಾರೆ ಎಂಬುದು ಇದರ ತೀವ್ರತೆಗೆ ಉದಾಹರಣೆಯಾಗಿದೆ. ಇದನ್ನು ಗಮನಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಡೆಂಗ್ಯೂ ನಿಯಂತ್ರಣದ ಕುರಿತು ಅಧಿಕಾರಿಗಳ ಸಭೆ ನಡೆಸಿದ್ದಾರೆ.

**ಪ್ರತೀ ವರ್ಷ ಮಳೆಗಾಲದಲ್ಲಿ ಡೆಂಗ್ಯೂ ಹಾವಳಿ ವಿಪರೀತವಾಗಿ ರುತ್ತದೆ ಎಂಬುದು ಎಲ್ಲರಿಗೂ ಗೊತ್ತಿರುವ ಸಂಗತಿ, ಆದರೆ ಆರೋಗ್ಯ ಇಲಾಖೆ, ನಗರ ಪಾಲಿಕೆಗಳು ಪರಿಸ್ಥಿತಿ ಕೈ ಮೀರುವ ಹಂತದಲ್ಲಿ ಒಮ್ಮೆಲೇ ಎಚ್ಚೆತ್ತುಕೊಳ್ಳುತ್ತವೆ. ರಸ್ತೆಯಲ್ಲಿ ಮಳೆ ನೀರು ನಿಂತರೆ ಡೆಂಗ್ಯೂ ಸೊಳ್ಳೆಗಳು ಕಾಣಿಸಿಕೊಳ್ಳುತ್ತವೆ. ಹೀಗೆ ನೀರು ನಿಲ್ಲಲು ಯಾರು ಹೊಣೆ ಮಳೆ ನೀರು ನಿಲ್ಲದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲು ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಇತರ ನಗರ ಪಾಲಿಕೆಗಳು ಯಾಕೆ ಮುಂದಾಗುವುದಿಲ್ಲ. ಇದಕ್ಕಾಗಿ ಮುಖ್ಯಮಂತ್ರಿಗಳೇ ಸಭೆ ಕರೆದು ಎಚ್ಚರಿಕೆ ನೀಡಬೇಕೇ**

ಡೆಂಗ್ಯೂಯನ್ನು ನಿಯಂತ್ರಿಸಲು ಅಗತ್ಯ ಪ್ರಮಾಣದ ಚುಚ್ಚುಮದ್ದು ಮತ್ತು ಪ್ಲೇಟ್ ಲೆಟಗಳನ್ನು ಸಂಗ್ರಹಿಸಲು ಮುಖ್ಯಮಂತ್ರಿಗಳು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆಯನ್ನು ನೀಡಿದ್ದಾರೆ. ಆದರೆ ಪರಿಸ್ಥಿತಿ ಇನ್ನೂ ನಿಯಂತ್ರಣಕ್ಕೆ ಬರುತ್ತಿಲ್ಲ. ಇಂಥ ಸಂದರ್ಭದಲ್ಲಿ ಡೆಂಗಿ ತುರ್ತುಪರಿಸ್ಥಿತಿ ಘೋಷಿಸುವಂತೆ ಸಲಹೆಗಳೂ ಬಂದಿವೆ ಇದಕ್ಕಾಗಿ ರಾಜ್ಯಾದ್ಯಂತ ಸರಕಾರಿ ಆಸ್ಪತ್ರೆಗಳನ್ನು ಸಜ್ಜುಗೊಳಿಸಬೇಕಾಗಿದೆ. ಆಶಾ ಕಾರ್ಯಕರ್ತೆಯರು, ನರ್ಸಿಂಗ್ ವಿದ್ಯಾರ್ಥಿಗಳು ಮನೆ ಮನೆಗೆ ಹೋಗಿ ಡೆಂಗಿ ಬಗ್ಗೆ ಜಾಗೃತಿ ಮೂಡಿಸಬೇಕಾಗಿದೆ. ಮಳೆಗಾಲದಲ್ಲಿ ಡೆಂಗ್ಯೂ ಉಲ್ಬಣಗೊಳ್ಳುತ್ತದೆ ಎಂಬುದು ಗೊತ್ತಿದ್ದರೂ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಇತರ ನಗರಪಾಲಿಕೆಗಳು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದರೆ ಪರಿಸ್ಥಿತಿ ಇಷ್ಟು ಹದಗೆಡುತ್ತಿರಲಿಲ್ಲಮಳೆಗಾಲದಲ್ಲಿ ಮಳೆ ನೀರು ನಿಲ್ಲುವ ಜಾಗಗಳಲ್ಲಿ ಸೊಳ್ಳೆಗಳ ಸಂತತಿ ಜಾಸ್ತಿಯಾಗಿ ಡೆಂಗ್ಯೂ ವ್ಯಾಪಕವಾಗಿ ಹಬ್ಬುತ್ತದೆ ಎಂದು ಗೊತ್ತಿದ್ದರೂ ರಸ್ತೆ ಗಳಲ್ಲಿ ತಗ್ಗುಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳುವಲ್ಲಿ ನಗರ ಪಾಲಿಕೆಗಳು ವಿಫಲಗೊಂಡಿವೆ. ನೀರು ಸರಾಗವಾಗಿ ಹರಿದು ಹೋಗುವಂತೆ ಚರಂಡಿ ಹಾಗೂ ಮೋರಿಗಳನ್ನು ಸುಸ್ಥಿತಿಯಲ್ಲಿಡಲು ಬಿಬಿಎಂಪಿ ಸೇರಿದಂತೆ ಬಹುತೇಕ ನಗರ ಪಾಲಿಕೆಗಳು ವಿಫಲವಾಗಿವೆ.ಡೆಂಗಿಯನ್ನು ನಿಯಂತ್ರಿಸಲು ಸೂಕ್ತ ಚಿಕಿತ್ಸಾ ಕ್ರಮಗಳನ್ನು ಕೈಗೊಂಡರೆ ಮಾತ್ರ ಸಾಲದು, ಅದು ಹರಡದಂತೆ ಮುನ್ನೆಚ್ಚರಿಕೆ ಕ್ರಮಗಳನ್ನೂ ಕೈಗೊಳ್ಳಬೇಕು.ಕೆಲವು ಖಾಸಗಿ ಆಸ್ಪತ್ರೆಗಳು ಪರಿಸ್ಥಿತಿಯನ್ನು ದುರುಪಯೋಗ ಮಾಡಿಕೊಂಡು ರೋಗಿಗಳಿಂದ ಹಣವನ್ನು ಸುಲಿಗೆ ಮಾಡುತ್ತಿವೆ ಎಂದು ವರದಿಗಳಿಂದ ತಿಳಿದು ಬರುತ್ತದೆ ಮನುಷ್ಯತ್ವವನ್ನು ಮರೆತು ಹಣ ಲೂಟಿ ಮಾಡುತ್ತಿರುವ ಇಂಥ ಖಾಸಗಿ ಆಸ್ಪತ್ರೆಗಳ ಮೇಲೆ ಸರಕಾರ ಕ್ರಮ ಕೈಗೊಳ್ಳಬೇಕು. ಕುಡಿಯುವ ನೀರು ಪೂರೈಕೆ ಮಾಡುವ ಟ್ಯಾಂಕುಗಳು ತೆರೆದ ತೊಟ್ಟಿಗಳು ಮತ್ತು ಸಾರ್ವಜನಿಕ ಶೌಚಾಲಯಗಳಲ್ಲಿ ನೀರು ಶೇಖರಣೆ ಮಾಡುವ ತೊಟ್ಟಿಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸುವುದು ಅಗತ್ಯವಾಗಿದೆ. ಮನೆ, ಅಂಗಡಿಗಳ ಮುಂದೆ ಹೊಟೇಲ್ ಮತ್ತು ವಾಣಿಜ್ಯ ಸಂಕೀರ್ಣಗಳ ಬಳಿ ಬಹಳ ಕಾಲ ನೀರು ನಿಲ್ಲದಂತೆ ಕ್ರಮ ಕೈಗೊಳ್ಳಬೇಕು. ಡೆಂಗ್ಯೂಯನ್ನು ಹರಡುವ ಈಡಿಸ್ ಸೊಳ್ಳೆಗಳು ಮನೆಯಲ್ಲಿನ ನೀರಿನ ತೊಟ್ಟಿ ಬ್ಯಾರಲ್ ಡ್ರಮ್‌ಗಳಲ್ಲಿ ಸಂತಾನೋತ್ಪತ್ತಿ ಮಾಡುತ್ತವೆ. ಹಾಗಾಗಿ ಸದರಿ ನೀರಿನ ತೊಟ್ಟ ಬ್ಯಾರಲ್, ಡ್ರಮ್ ಗಳನ್ನು ವಾರಕ್ಕೊಮ್ಮೆ ಖಾಲಿ ಮಾಡಿ ಸ್ವಚ್ಛವಾಗಿಡಬೇಕು. ಹೂವಿನ ಕುಂಡದಲ್ಲಿ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು.ಬೆಂಗಳೂರಿನಲ್ಲಂತೂ ಬೆಂಗಿ ಹಾವಳಿ ವಿಪರೀತವಾಗಿದೆ. ಡೆಂಗಿ ವರದಿಯಾದ ಪ್ರದೇಶಗಳಲ್ಲಿ ಔಷಧಿ ಸಿಂಪಡಿಸಲು ಬಿಬಿಎಂಪಿ ಹಿಂದೆ ಮುಂದೆ ನೋಡಬಾರದು ಪಾಲಿಕೆ ಮಾತ್ರವಲ್ಲ ಆರೋಗ್ಯ ಇಲಾಖೆಯಲ್ಲೂ ಬಿಕ್ಕಟ್ಟಿನ ಸಂದರ್ಭಗಳನ್ನು ಎದುರಿಸುವ ಯೋಜನೆಗಳಿಲ್ಲ ಎಂಬುದು ಕೋವಿಡ್ ವಿಪರೀತವಾಗಿ ಹರಡಿದಾಗ ಸಾಬೀತಾಯಿತು. ಇನ್ನುಮುಂದಾದರೂ ಹೀಗಾಗದಂತೆ ಕ್ರಮ ವಹಿಸಲಿ, ಜನಸಾಮಾನ್ಯರ ಆರೋಗ್ಯದ ಬಗ್ಗೆ ಆಡಳಿತಯಂತ್ರ ನಿರ್ಲಕ್ಷ್ಯ ಧೋರಣೆಯನ್ನು ತಾಳಬಾರದು. ದುಬಾರಿ ಖರ್ಚು, ವೆಚ್ಚಗಳಿಗೆ ಹೆದರಿ ಜನರು ಸ್ವಯಂ ಚಿಕಿತ್ಸಾ ಕ್ರಮಗಳು ಕೈಗೊಳ್ಳುವ ಪರಿಸ್ಥಿತಿ ನಿರ್ಮಾಣವಾಗಬಾರದು. ಜನರ ಆರೋಗ್ಯ ರಕ್ಷಣೆ ಸರಕಾರದ ಹೊಣೆಗಾರಿಕೆ ಯಾಗಿದೆ. ಇಂಥ ಸಂದರ್ಭದಲ್ಲಿ ಬರೀ ಆಡಳಿತ ಯಂತ್ರದ ಲೋಪಗಳನ್ನು ಟೀಕಿಸಿದರೆ ಸಾಲದು. ಸಾರ್ವಜನಿಕರೂ ತಮ್ಮ ಸುತ್ತಮುತ್ತಲಿನ ಪರಿಸರ ಶುದ್ಧವಾಗಿರುವಂತೆ ನೋಡಿಕೊಳ್ಳಬೇಕು. ಡೆಂಗಿ ಅಪಾಯದ ಬಗ್ಗೆ ಜನಸಾಮಾನ್ಯರಲ್ಲಿ ಅರಿವು ಮೂಡಿಸುವ ಅಭಿಯಾನ ನಡೆಯಬೇಕಾಗಿದೆ.



# ಮಹಾಭಾರತ

## ಸ್ತ್ರೀಪರ್ವ

• ಹಿಂದಿನ ಸಂಚಿಕೆಯಿಂದ

ಪಾಂಡವರು ಹಸ್ತಿನಾಪುರವನ್ನು ಬಿಟ್ಟು ಹೊರಟ ದಿನವನ್ನು ವಿದುರನು ಸ್ಮರಿಸಿಕೊಂಡನು.ಈಗಾಗಿರುವುದನ್ನು ದ್ರೌಪದಿಯು ಹದಿನಾಲ್ಕು ವರ್ಷಗಳ ಹಿಂದೆಯೇ ಭವಿಷ್ಯ ನುಡಿದಿದ್ದಳು. ಆಗ ಧೌಮ್ಯನು ಮಾಡಿದ್ದಂತೆ, ಈಗ ಬ್ರಾಹ್ಮಣರು ರುದ್ರ, ಮಂತ್ರಗಳನ್ನು ಪಠಿಸುತ್ತ, ರಾಜನಿಗೆ ದಾರಿ ತೋರಿಸುತ್ತಿದ್ದರು.

ರಾಜಾಸ್ಥಾನದಲ್ಲಿ ಆಗ ನಡೆದ ಪಾಪವು ಈಗ ಫಲ ಕೊಡುತ್ತಿತ್ತು. ವಿದುರನು ಮಾತನಾಡದೆ ಮೌನವಾಗಿ ರಾಜನ ಜೊತೆಯಲ್ಲಿ ನಡೆಯುತ್ತಿದ್ದನು. ದಾರಿಯಲ್ಲಿ ಜೊತೆಗೂಡಿದ ಕೃಪ ಕೃತವರ್ಮ ಅಶ್ವತ್ಥಾಮರು ರಾಜನಿಗೆ ಸಮಾಧಾನದ ಮಾತುಗಳನ್ನು ಹೇಳಿದರು. ತಾವು ಪಾಂಡವ ಪಾಳೆಯದಲ್ಲಿ ನಡೆಸಿದ ಕಗ್ಗೊಲೆಯನ್ನೂ ರಾಜನಿಗೆ ವರದಿ ಮಾಡಿದರು. ಕೃಪನು ''ನಮಗೆ ಪಾಂಡವರ ಭಯ ಬಹಳವಾಗಿದೆ.

ಅವರೂ ನಮ್ಮನ್ನು ಹುಡುಕುತ್ತಿದ್ದಾರೆ. ನಾವು ಹೆಚ್ಚು ಹೊತ್ತು ಇರಲಾರೆವು, ಹೋಗುತ್ತೇವೆ ಎಂದು ಹೊರಟುಹೋದರು. ಸ್ವಲ್ಪ ದೂರ ಹೋದಮೇಲೆ ಅವರು ಪರಸ್ಪರ ಬೀಳ್ಕೊಂಡು ಬೇರೆ ಬೇರೆ ದಿಕ್ಕುಗಳಿಗೆ ಹೊರಟರು. ಕೃಪ ಹಸ್ತಿನಾವತಿಗೂ, ಕೃತವರ್ಮ ದ್ವಾರಕೆಗೂ, ಅಶ್ವತ್ಥಾಮನು ಗಂಗಾತೀರದಲ್ಲಿರುವ ವ್ಯಾಸಾಶ್ರಮಕ್ಕೂ ಹೋದರು. ಮುಂದೆ ಭೀಮನು ಅಶ್ವತ್ಥಾಮ ಅಲ್ಲಿರುವುದನ್ನು ಕಂಡುಹಿಡಿದನು. ಹೀಗೆ ಅಶ್ವತ್ಥಾಮನ ನಿರ್ಗಮನವಾದಮೇಲೆ, ಭೀಮನು ಮಣಿಯನ್ನು ತೆಗೆದುಕೊಂಡು ದ್ರೌಪದಿಯಿದ್ದಲ್ಲಿಗೆ ಧಾವಿಸಿದನು. ಕೃಷ್ಣನು ಅವಳಿಗೆ ನಡೆದುದೆಲ್ಲವನ್ನೂ ತಿಳಿಸಿದನು. ಮಣಿಯೂ ಸಿಕ್ಕು, ಕೊಲೆಗಡುಕನಿಗೆ ಶಿಕ್ಷೆಯಾದುದನ್ನು ತಿಳಿದ ದ್ರೌಪದಿಗೆ ಸ್ವಲ್ಪ ಸಮಾಧಾನವಾಯಿತು. ರಾಜನಿಗೇ ಇದು ಶೋಭಿಸುವುದೆಂದು ಹೇಳಿ ಮಣಿಯನ್ನು ಅವಳು ಯುಧಿಷ್ಠಿರನಿಗೆ ಕೊಡಲು, ಅವನೂ ಅವಳಿಗೆ ಪ್ರೀತಿಯಾಗಲೆಂದು ಅದನ್ನು ಧರಿಸಿದನು.

★ ★ ★ ★

ಪಾಂಡವರು ಹಸ್ತಿನಾಪುರದ ಕಡೆ ಹೊರಟರು. ಅವರು ಬಿಟ್ಟು ಹದಿನಾಲ್ಕು ವರ್ಷಗಳಾಗಿದ್ದವು.ಈಗ ಅವರು ಹೋಗುತ್ತಿರುವುದು ರಾಜ್ಯವಾಳುವುದಕ್ಕೆ. ಯುಧಿಷ್ಠಿರನೇ ರಾಜ. ಆದರೆ ಅಶ್ವತ್ಥಾಮನಿಂದಾಗಿ ಅವರ ಸಂತೋಷವು ಮುಕ್ಕಾಗಿತ್ತು. ಅವನು ನಡೆಸಿದ ಕಗ್ಗೊಲೆಗಳ ದುಃಖ ಅವರ ಮನಸ್ಸುಗಳನ್ನು ಮ್ಲಾನವಾಗಿಸಿತ್ತು. ಸಾತ್ಯಕಿ ಮತ್ತು ಕೃಷ್ಣ ಅವರನ್ನು ಎಚ್ಚರಿಕೆಯಿಂದ ನೋಡಿಕೊಂಡಿದ್ದರು. ಧೃತರಾಷ್ಟ್ರನು ಸ್ತ್ರೀಯರೊಂದಿಗೆ ರಣರಂಗಕ್ಕೆ ಹೋಗಿರುವನೆಂದು ತಿಳಿದ ಅವರು ಅವನನ್ನು ಭೇಟಿ ಮಾಡುವುದಕ್ಕೆಂದು ಅಲ್ಲಿಗೇ ನಡೆದರು. ರಣರಂಗದಲ್ಲಿ ರೋದಿಸುತ್ತಿದ್ದ ಸ್ತ್ರೀಸಮೂಹವು ಅವರನ್ನು ಸ್ವಾಗತಿಸಿತು. ಯುಧಿಷ್ಠಿರನು ನೇರವಾಗಿ ಧೃತರಾಷ್ಟ್ರನಿದ್ದಲ್ಲಿಗೆ ನಡೆದು ಅವನ ಪಾದಗಳಿಗೆ ನಮಸ್ಕರಿಸಿದನು. ತಾನು ಯುಧಿಷ್ಠಿರ, ಇವರು ತನ್ನ ತಮ್ಮಂದಿರು ಎಂದು ಹೇಳಿಕೊಂಡನು. **ಮುಂದುವರಿಯುವುದು...**

# ಸಿಡುಕರಾಗದಿರಿ



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ



ಯಾವುದೇ ಕೆಲಸಕ್ಕೆ ತಡವಾಗುತ್ತಿದ್ದರೆ ಕಿರಿಕಿರಿಯಾಗುತ್ತದೆ.. ನಿರೀಕ್ಷಿತ ಕೆಲಸಗಳು ನಡೆಯದೇ ಇದ್ದಾಗ ಸಿಡಿಮಿಡಿಯಾಗುತ್ತದೆ.. ಸಿಡುಕುತನ ಈಗ ನಮ್ಮ ದೈನಂದಿನ ಬದುಕಿನ ಭಾಗವಾಗಿದೆ. ನಮ್ಮ ಕಿರಿಕಿರಿಯು ಇತರರನ್ನು ನೋಯಿಸುವುದಲ್ಲದೆ ನಮ್ಮ ಸ್ವಂತ ಆರೋಗ್ಯದ ಮೇಲೆ ಬಹಳ ನಕಾರಾತ್ಮಕ ಪರಿಣಾಮಗಳನ್ನು ಬೀರುತ್ತದೆ. ನೀವು ಸಹ ತುಂಬಾ ಸಿಡುಕಿನ ಸ್ವಭಾವದವರಾಗಿದ್ದರೆ ವೈದ್ಯರ ಬಳಿಗೆ ಹೋಗುವ ಮೊದಲು ಕೆಳಗೆ ತಿಳಿಸಲಾದ ಪರಿಹಾರಗಳನ್ನು ಪ್ರಯತ್ನಿಸಿ. ಆದರೆ ಅತಿಯಾದ ಕೆರಳಿಕೆ ಇದ್ದರೆ, ಸಮಯಕ್ಕೆ ವೈದ್ಯರನ್ನು ಸಂಪರ್ಕಿಸಿ. ಹೋಮಿಯೋಪತಿ ಚಿಕಿತ್ಸೆಯು ಮಾನಸಿಕ ಸಮಸ್ಯೆಗಳಿಗೆ ಅತ್ಯಂತ ಪರಿಣಾಮಕಾರಿ ಮತ್ತು ಪ್ರಯೋಜನಕಾರಿ ವಿಧಾನವಾಗಿದೆ. ಆದ್ದರಿಂದ, ಅಗತ್ಯವಿದ್ದಾಗ ಹೋಮಿಯೋಪತಿ ತಜ್ಞರನ್ನೇ ಸಂಪರ್ಕಿಸುವುದು ಹೆಚ್ಚು ಸೂಕ್ತ.

## ಸ್ವಲ್ಪ ವ್ಯಾಯಾಮ ಮಾಡಿ

**ವ್ಯಾಯಾಮ:** ನೀವು ಶೀಘ್ರ ಕೋಪಿಗಳಾಗಿದ್ದರೆ ಪ್ರತಿದಿನ ಸ್ವಲ್ಪ ವ್ಯಾಯಾಮ ಮಾಡಿ. ಬೆಳಿಗ್ಗೆ ಮತ್ತು ಸಂಜೆ 10-10 ನಿಮಿಷಗಳ ಕಾಲ ನಡೆಯುವುದು ಮತ್ತು 20-20 ನಿಮಿಷಗಳ ವಿವಿಧ ವ್ಯಾಯಾಮಗಳನ್ನು ಅಥವಾ ದೈಹಿಕ ಪರಿಶ್ರಮವನ್ನು ಮಾಡಬಹುದು. ವಾರದಲ್ಲಿ ಕನಿಷ್ಠ 5-6 ದಿನ ವ್ಯಾಯಾಮ ಮಾಡುವುದರಿಂದ ನಿಮ್ಮ ಕಿರಿಕಿರಿಯಲ್ಲಿ ವ್ಯತ್ಯಾಸವಾಗುತ್ತದೆ.

**ತೋಟಗಾರಿಕೆ ಮಾಡಿ:** ಇತ್ತೀಚಿನ ದಿನಗಳಲ್ಲಿ ವಿಶೇಷವಾಗಿ ನಗರ ಪ್ರದೇಶಗಳಲ್ಲಿ ಕೈ ತೋಟಗಳಿಗಾಗಿ ಜಾಗದ ಅಭಾವವಿದೆ. ಕೆಲವರಿಗೆ ಜಾಗ ಇದ್ದರೂ ಕೈ ಕೆಸರು ಮಾಡಿಕೊಳ್ಳಲು ಬೇಜಾರು ಎಂದು ತೋಟದ ಕೆಲಸವನ್ನು ಮಾಡುವುದಿಲ್ಲ. ಆದರೆ ತೋಟಗಾರಿಕೆ ಮೆದುಳಿನಲ್ಲಿ ಸಂತೋಷದ ರಾಸಾಯನಿಕಗಳ ಬಿಡುಗಡೆಯನ್ನು ಹೆಚ್ಚಿಸುತ್ತದೆ. ಉಪಕರಣಗಳನ್ನು ಬಳಸದೆಯೇ ನಿಮ್ಮ ಸ್ವಂತ ಕೈಗಳಿಂದ ನೇರವಾಗಿ ತೋಟದ ಕೆಲಸವನ್ನು ಮಾಡಿ. ಚಪ್ಪಲಿ ಅಥವಾ ಬೂಟುಗಳನ್ನು ಬಳಸಬೇಡಿ. ಮಣ್ಣಿನೊಂದಿಗೆ ನೇರ ಸಂಪರ್ಕದಿಂದ ನಮ್ಮ ಶರೀರದಲ್ಲಿ ಭೂಮಿಯ ಎಲೆಕ್ಟ್ರಾನ್ ಗಳ ಪ್ರವೇಶವಾಗುತ್ತದೆ. ಇದು ನಮ್ಮ ಮೆದುಳು ಮತ್ತು ಮನಸ್ಸಿನ ಮೇಲೆ ಸಕಾರಾತ್ಮಕ ಪರಿಣಾಮವನ್ನು ಬೀರುತ್ತದೆ. ಇದು ಕಿರಿಕಿರಿಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಅಲ್ಲದೆ ತೋಟಗಾರಿಕೆಯ ಕೆಲಸದಿಂದ ವ್ಯಾಯಾಮವೂ ಆಗುತ್ತದೆ.

**ಧ್ಯಾನ:** ಧ್ಯಾನ ಯಾವಾಗಲೂ ಒಳ್ಳೆಯದು. ಧ್ಯಾನವು ನಿಮ್ಮ ಗಮನ ವನ್ನು ಸಾತ್ವಿಕ ವಿಷಯದ ಮೇಲೆ ಕೇಂದ್ರೀಕರಿಸುತ್ತದೆ. ಇದು ಮನಸ್ಸಿನಿಂದ ಕಿರಿಕಿರಿಯನ್ನು ಹೆಚ್ಚಿಸುವನಕಾರಾತ್ಮಕ ಆಲೋಚನೆಗಳನ್ನು ಸಹಜವಾಗಿಯೇ ತೆಗೆದುಹಾಕುತ್ತದೆ. ಪರಿಣಾಮವಾಗಿ, ಕಿರಿಕಿರಿಯು ಕಡಿಮೆಯಾಗುತ್ತದೆ.

**ಯೋಗ:** ಯೋಗದಲ್ಲಿ ಕೆಲವು ವಿಧಾನಗಳು ಅಥವಾ ಆಸನಗಳು ದೇಹದ ಸ್ನಾಯುಗಳನ್ನು ಹಿಗ್ಗಿಸುತ್ತವೆ. ಇದು ಹೃದಯ ಬಡಿತ ಮತ್ತು ರಕ್ತದೊತ್ತಡವನ್ನು ನಿಯಂತ್ರಿಸಲು ಮತ್ತು ಕಿರಿಕಿರಿಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಆದಾಗ್ಯೂ, ಯೋಗ ಮಾಡುವ ಮೊದಲು ಯೋಗ ತಜ್ಞರನ್ನು ಸಂಪರ್ಕಿಸಿ ಮಾರ್ಗದರ್ಶನ ಪಡೆದುಕೊಳ್ಳಿ.

**ಮಸಾಜ್:** ಕೈಗಳು, ಕಾಲುಗಳು, ಬೆನ್ನಿನ ಸ್ನಾಯುಗಳು, ಅಂಗಾಂಶಗಳಿಗೆ ಮಸಾಜ್ ಅದ್ಭುತವಾಗಿದೆ. ಇದು ಸ್ನಾಯುಗಳನ್ನು ಹಿಗ್ಗಿಸುತ್ತದೆ ಮತ್ತು ಅವುಗಳಿಗೆ ವಿಶ್ರಾಂತಿ ನೀಡುತ್ತದೆ. ಇದು ಮನಸ್ಸಿನ ಮೇಲೂ ಸಕಾರಾತ್ಮಕ ಪರಿಣಾಮ ಬೀರುತ್ತದೆ. ಪರಿಣಾಮವಾಗಿ ಒತ್ತಡ ಮತ್ತು ಕಿರಿಕಿರಿ ಇರುವುದಿಲ್ಲ.

**ಮಾಂಸಹಾರ ತಪ್ಪಿಸಿ:** ಹೆಚ್ಚು ಮಾಂಸಾಹಾರದಿಂದ ತಾಮಸಿಕ ಪ್ರವೃತ್ತಿಯು ಹೆಚ್ಚಾಗುತ್ತದೆ ಮತ್ತು ವಿವೇಚನಾ ಶಕ್ತಿ ಕುಂದುತ್ತದೆ. ಅಂತಹ ಜನರು ಶಾಂತವಾಗಿರಲು ಸಾಧ್ಯವಿಲ್ಲ. ಸಣ್ಣ ವಿಷಯಗಳು ಒತ್ತಡ ಮತ್ತು ತ್ವರಿತ ಕಿರಿಕಿರಿಯನ್ನು ಉಂಟುಮಾಡಬಹುದು, ಅಲ್ಲದೆ ಕೆಲವರು ಹಿಂಶಾತ್ಮಕವಾಗಿ ಕೂಡ ವರ್ತಿಸುವ ಸಾಧ್ಯತೆ ಇರುತ್ತದೆ. ಸಾತ್ವಿಕ ಸಸ್ಯಹಾರವನ್ನು ಹೆಚ್ಚಾಗಿ ಸೇವಿಸುವುದು, ವಿಶೇಷವಾಗಿ ಹಣ್ಣುಗಳು ಮತ್ತು ತರಕಾರಿಗಳು (ಸಲಾಡ್ ಗಳು) ಮನಸ್ಸನ್ನು ಶಾಂತಗೊಳಿಸಲು ಸಹಾಯ ಮಾಡುತ್ತದೆ.

**ಬಯಕೆಗಳು/ಆಸೆಗಳು:** ನಾವು ವಾಸಿಸುವ ಪರಿಸರ ಮತ್ತು ಸಮಾಜದಲ್ಲಿ ಇತರರ ಜೀವನಶೈಲಿಯನ್ನು ನೋಡಿ, ನಾವು ತಿಳಿಯದೆ ಆ ಜೀವನಶೈಲಿಯ ಕಾಮಕ್ಕೆ ಸಿಲುಕುತ್ತೇವೆ. ಆದರೆ, ಇತರರಿಗೆ ಸುಲಭವಾದ ಕೆಲವು ವಿಷಯಗಳು ನಮಗೆ ತುಂಬಾ ಕಷ್ಟಕರವಾಗಿರುತ್ತದೆ. ಆದ್ದರಿಂದ ನಮ್ಮ ಆಸೆ ಎಂದಿಗೂ ಈಡೇರುವುದಿಲ್ಲ ಮತ್ತು ಕಿರಿಕಿರಿಯು ಹೆಚ್ಚಾಗಲು ಪ್ರಾರಂಭಿಸುತ್ತದೆ. ನಿಮ್ಮ ಅಗತ್ಯಗಳನ್ನು ತಿಳಿದುಕೊಳ್ಳಿ, ನಿಮ್ಮನ್ನು ಇತರರೊಂದಿಗೆ ಹೋಲಿಸಬೇಡಿ, ನೀವು ಸಂತೋಷವಾಗಿರಲು ಸಾಕಷ್ಟು ಇರುವಾಗ ಹೆಚ್ಚು ನಿರೀಕ್ಷಿಸುವುದನ್ನು ತಪ್ಪಿಸಿ. ಇತರರಿಂದ ಹೆಚ್ಚು ನಿರೀಕ್ಷಿಸಬೇಡಿ. ಇರುವುದರಲ್ಲೇ ತೃಪ್ತರಾಗುವ ಅಭ್ಯಾಸವನ್ನು ರೂಢಿಸಿಕೊಳ್ಳಿ. ಯಾರೂ ಈ ಭೂಮಿಯಲ್ಲಿ ಶಾಶ್ವತವಾಗಿ ಉಳಿಯಲು ಹುಟ್ಟಿಲ್ಲ ಮತ್ತು ಇಲ್ಲಿಂದ ಹೋಗುವಾಗ ನಿಮ್ಮೊಂದಿಗೆ ಒಂದು ಬಿಡಿಗಾಸನ್ನೂ ಒಯ್ಯುವುದು ಸಾಧ್ಯವಿಲ್ಲ ಎಂಬುದನ್ನು ಯಾವಾಗಲೂ ನೆನಪಿಡಿ. ಈ ಅರಿವಿನಿಂದ ಲಾಲಸೆಗಳು ಕಡಿಮೆಯಾಗಿ ಕಿರಿಕಿರಿ ಆಗುವುದು ತಪ್ಪುತ್ತದೆ. ಅಲ್ಲದೆ, ನೀವು ಯಾವಾಗಲೂ ಸಂತೃಪ್ತರಾಗಿರಬಹುದು.

### ಶಾಂತ ನಿದ್ರೆ

**ನೀವು ಪ್ರತಿದಿನ ಸಾಕಷ್ಟು ನಿದ್ರೆ ಮಾಡದಿದ್ದರೆ, ಕಿರಿಕಿರಿಯು ಹೆಚ್ಚಾಗುವ ಸಾಧ್ಯತೆಯಿದೆ. ಒಬ್ಬ ವ್ಯಕ್ತಿಗೆ 6-8 ಗಂಟೆಗಳ ನಿದ್ದೆ ಬೇಕು. ಸಾಕಷ್ಟು ಮತ್ತು ಶಾಂತವಾದ ನಿದ್ರೆಗೆ ತಂಪಾದ, ಗಾಢವಾದ ಮತ್ತು ಶಾಂತವಾದ ಕೋಣೆ ಅತ್ಯಗತ್ಯ. ಮಲಗುವ ಮುನ್ನ ಮೊಬೈಲ್, ಟಿವಿ ಅಥವಾ ಕಂಪ್ಯೂಟರ್ ಬಳಸಬೇಡಿ. ಅಲ್ಲದೆ, ನಿಯಮಿತ ವ್ಯಾಯಾಮವು ಶಾಂತ ನಿದ್ರೆಯನ್ನು ಪಡೆಯಲು ಸಹಾಯ ಮಾಡುತ್ತದೆ.**

# ಕಾಣದ ದಾರಿ ಕಾದಂಬರಿ ಅನುಮಾನವೆಂಬ ಹುತ್ತದೊಳಗೆ ಸಿಲುಕಿಕೊಂಡು ವಿಷವರ್ತುಲ ಸೃಷ್ಟಿಸಿಕೊಳ್ಳುವ ಧಾವಂತ ಬದುಕಿನ ದಾರುಣ ಕಥೆ



ಸಾಮಾಜಿಕ ಕಳಕಳಿ

ಹೆಚ್.ಎಸ್. ಪ್ರತಿಮಾ
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ ಶಿಕ್ಷಕಿ, ಹಾಸನ

• ಉದಯವಾಹಿನಿ, ವಿಶೇಷ

319ನೇ ಮನೆ ಮನೆ ಕವಿಗೋಷ್ಠಿಯನ್ನು ಹಾಸನದ ಹೇಮಾವತಿ ನಗರದಲ್ಲಿರುವ ಶ್ರೀಮತಿ ಜಯಶ್ರೀ ಬಾಲಕೃಷ್ಣ ಹಾಗು ಶ್ರೀ ಹೆಚ್.ವಿ ಬಾಲಕೃಷ್ಣ ರವರ ನಿವಾಸದಲ್ಲಿ ಯುವಕವಿ ದಯಾನಂದ ಎಸ್ ರವರ ಕಾಣದ ದಾರಿ ಕಾದಂಬರಿ ಕುರಿತು ಮಾತನಾಡಿದರು.

ಕಾಣದ ದಾರಿ ಕಾದಂಬರಿಯೂ ನೈಜ್ಯ ಘಟನೆಗಳನ್ನು ಆಧರಿಸಿ ದಂತಹ ವಿವಾಹ ಸಂಬಂಧ ಮುರಿದು ಹೋದಂತಹ ವಿಚಾರವನ್ನು ಒಳಗೊಂಡ ಸಾಮಾಜಿಕ ಕಳಕಳಿಯನ್ನು ಒಳಗೊಂಡಂತಹ ಕಾದಂಬರಿಯಾಗಿದೆ. ಅನುಮಾನ ಎಂಬ ಪೆದ್ದರೋಗ ಬೆಳೆಸಿಕೊಂಡು ತನ್ನ ಸಂಸಾರದ ಜೊತೆಗೆ ಅಕ್ಕನ ಸಂಸಾರವನ್ನು ಹಾಳು ಮಾಡಿದಂತಹ ನಿಂಗಪ್ಪನ ಬಗ್ಗೆ, ವಿವಾಹದ ನಂತರ ಡಿವರ್ಸ್ ಎಂದು ಪದ್ಮಾಳನ್ನು ಸಂಸಾರಿಕ ಜೀವನದಿಂದ ಹೊರ ಹಾಕಿದ ನಂತರದಲ್ಲಿ ಆತ ಕಾಣದ ದಾರಿಯಲ್ಲಿ ನಿಂತು ಮುಂದೆ ನಾನು ಹೇಗೆ ಬದುಕಿನ ದಾರಿಯಲ್ಲಿ ಸಾಗಬೇಕು ಎಂದು ಮಾಡಿದ್ದು ತಪ್ಪೇ ಸರಿಯೇ ಎಂದು ಗೊಂದಲದಲ್ಲಿ ಹೇಗೆ ಸಾಗಲಿ ಎಂದು ಯೋಚಿಸುತ್ತಾನೆ ಎಂಬುದು. ಪದ್ಮಳಿಗೆ ಆದ ಅನ್ಯಾಯದ ಕುರಿತು ಯೋಚಿಸಿ ಸಾಮಾಜಿಕ ಕಳಕಳಿಯ ಕಾದಂಬರಿಯಾಗಿದೆ.

ಇತರ ಕಾದಂಬರಿಗಳಿಗಿಂತಲೂ ವಿಭಿನ್ನವಾಗಿದ್ದು ಸಾಮಾಜಿಕ ಕಳಕಳಿಯನ್ನು ಒಳಗೊಂಡಿದ್ದು. ಅನುಮಾನದಿಂದ ತನ್ನ ಸಂಸಾರವನ್ನು ಹಾಳು ಮಾಡಿಕೊಂಡಿರುವ ವಿಚಾರವನ್ನು ಹಾಗೂ ಮದುವೆ ಎಂಬ ಪವಿತ್ರ ಬಂಧನವನ್ನು ಪೊಲೀಸ್ ಸ್ಟೇಷನ್ ಕೋರ್ಟ್ ಕಚೇರಿ ಎಂದು ಯಾವ ರೀತಿ ಮುರಿದುಕೊಳ್ಳುತ್ತಾನೆ.

ಎಂಬ ವಿಚಾರವನ್ನು ಬಹಳ ಸೊಗಸಾಗಿ ಕಾದಂಬರಿಯಲ್ಲಿ ಎಳೆಗಳನ್ನು ಎಳೆದುಕೊಂಡು ಹೋಗಿದ್ದಾರೆ. ಓದುಗರ ಮನಸ್ಸನ್ನು ಭಾವುಕರನ್ನಾಗಿ ಸುವಂತಹ ಕಾದಂಬರಿ ಆಗಿದ್ದು.

ಉದಯವಾಹಿನಿ ಚಿತ್ರ




**ಮನೆ ಮನೆ ಕವಿಗೋಷ್ಠಿ ಇಂದು 319 ತಿಂಗಳು ನಿರಂತರವಾಗಿ ನಡೆದು ಮನೆ ಮಾತಾಗಿದೆ. ಕವಿತೆಗಳಲ್ಲಿ ಹೊಸ ಪದಗಳು ಬರಬೇಕಾದರೆ ನಾವು ಬೇರೆಯವರ ಸಾಹಿತ್ಯ ಓದಲೇ ಬೇಕು. ಗೊರೂರುಅನಂತರಾಜುರವರ ನೇತೃತ್ವದಲ್ಲಿ ಹಾಸನದ ತುಂಬಾ ಸಾಹಿತ್ಯ ಸಿಂಚನವಾಗಿದೆ. ಕವಿತೆಗಳು ಭಾವ್ಯಕ್ಯತೆ ಮೂಡಿಸುವ ನೋವು ನಲಿವು ಸಂಸ್ಕೃತಿಗಳ ಮೇಲೆ ಬೆಳಕು ಚೆಲ್ಲುವ ಕವಿತೆಗಳು ಮನೆ ಮನೆ ಕವಿಗೋಷ್ಠಿಯಲ್ಲಿ ಮೂಡಿಬಂದವು. ಎಂದು ಅಭಿಪ್ರಾಯ ಪಟ್ಟರು.**

ಸಮಾಜಕ್ಕೆ ಒಂದು ಉತ್ತಮ ಸಂದೇಶ ನೀಡುವಲ್ಲಿ ಯಶಸ್ವಿಯಾಗಿದೆ.ಎಂದು ಕಾದಂಬರಿ ಕುರಿತು ಮಾತನಾಡಿದರು. ವೇದಿಕೆಯಲ್ಲಿ ಹಿರಿಯರಾದ ಎ.ವಿ ರುದ್ರಾಪ್ಪಾಜಿ, ಸಹಸಂಚಾಲಕರಾದ ಸಮುದ್ರವಳ್ಳಿ ವಾಸು ಉಪಸ್ಥಿತರಿದ್ದರು. ಸಮಾಜದ ತಲ್ಲಣಗಳಿಗೆ ಸ್ಪಂದಿಸುವ ಸಾಹಿತ್ಯ ರಚನೆಯಾಗಲಿ-ಮಧುನಾಯ್ಕ ಲಂಬಾಣಿ ನಂತರ ನಡೆದ ಕವಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕವಿ, ಸಂಘಟಕರಾದ ಮಧು ನಾಯಕ ಲಂಬಾಣಿಯವರು ಹಾಸನ ಜಿಲ್ಲೆ ಸಾಹಿತ್ಯ ಮತ್ತು ಕಲೆಯ ಆಗರವಾಗಿದೆ. ಕಾರ್ಯಕ್ರಮದಲ್ಲಿ ಪದ್ಮ ಅಶ್ವಥ್, ಯಶೋಧಮ್ಮ, ಕೆ.ಎಂ ಲಕ್ಷ್ಮಿ, ಮಂಜುಳ. ಹೇಮಲತಾ,ಜಯಶ್ರೀ ಬಾಲಕೃಷ್ಣ, ಜೆ.ಆರ್ ರವಿಕುಮಾರ, ಲಲಿತ ಎಸ್, ಬಸವರಾಜು ಹೆಚ್.ಎಸ್, ಹೆಚ್.ಬಿ ಚೂಡಾಮಣಿ, ವೇದ ಶಿವಕುಮಾರ್, ಎನ್.ಕೆ ಶ್ರೀನಿವಾಸ ಶೆಟ್ಟಿ, ಆರ್.ವೆಂಕಟೇಶ, ಎ ನಂಜಪ್ಪ,ತಮ್ಮಣ್ಣಯ್ಯ.ಬಿ ಅನಂತಮೂರ್ತಿ, ರುಮಾನ ಜಬೀರ್, ಮಂಜುಳಾ ಉಮೇಶ್, ನಿಶ್ಚಿತ. ಬಿ ನಾಗರಾಜ್ ದೊಡ್ಡಮನಿ ಚಿದಾನಂದ ಕೆ.ಎನ್ ಮುಂತಾದ ಸಹೃಯರು ಉಪಸ್ಥಿತರಿದ್ದು ಕಾರ್ಯಕ್ರಮ ಯಶಸ್ವಿಯಾಗಿಸಿದರು

# ಎರಡನೇ ಏರ್‌ಪೋರ್ಟ್ ನಿರ್ಮಾಣ, ತಾಂತ್ರಿಕ ವರದಿ : ಡಿಸಿಎಂ ಡಿಕೆಶಿ

• ಉದಯವಾಹಿನಿ, ಬೆಂಗಳೂರು

ವ್ಯಾಪ್ತಿಯ ದೇವನಹಳ್ಳಿಯಲ್ಲಿನ ಹಾಲಿ 'ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರ ದಟ್ಟಣೆ ಕಡಿಮೆ ಮಾಡಲು ರಾಜ್ಯ ಸರ್ಕಾರ ಎರಡನೇ ವಿಮಾನ ನಿಲ್ದಾಣ ನಿರ್ಮಿಸಲು ಯೋಜನೆ ರೂಪಿಸುತ್ತಿದೆ. ಈ ವಿಚಾರ ಭಾರೀ ಚರ್ಚೆ ನಡೆಯುತ್ತಿರುವ ಬೆನ್ನಲ್ಲೇ ಡಿಸಿಎಂ ಡಿಕೆ ಶಿವಕುಮಾರ್ ಅವರು ಮತ್ತೊಂದು ಅಪ್ಡೇಟ್ ಕೊಟ್ಟಿದ್ದಾರೆ. ಈ ಕುರಿತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಪ್ರತಿಕ್ರಿಯಿಸಿದ್ದು, ಬೆಂಗಳೂರಿನಲ್ಲಿ 2ನೇ ವಿಮಾನ ನಿಲ್ದಾಣ ನಿರ್ಮಾಣ ಪ್ರಸ್ತಾವನೆ ಬಗ್ಗೆ ಅವರು ವಿವರಿಸಿದ್ದಾರೆ. ರಾಜ್ಯ ಕೈಗಾರಿಕೆ ಸಚಿವರ ಎಂ.ಬಿ ಪಾಟೀಲ್ ಈಗಾಗಲೇ ಎರಡನೇ ವಿಮಾನ ನಿಲ್ದಾಣದ ಅಗತ್ಯತೆ ಕುರಿತು ಪ್ರಸ್ತಾಪ ಮಾಡಿದ್ದಾರೆ. ಸದ್ಯ ಎರಡನೇ ವಿಮಾನ ನಿಲ್ದಾಣ ನಿರ್ಮಿಸುವ ಕುರಿತು ತಾಂತ್ರಿಕ ವರದಿ ಬರಬೇಕಿದೆ. ಅದೆಲ್ಲ ನೋಡಿಕೊಂಡು ನಾವು 2032ರ ಹೊತ್ತಿಗೆ ಯೋಜನೆ ಸಿದ್ಧಪಡಿಸಬೇಕಿದೆ. ಏಕೆಂದರೆ ಹಾಲಿ ಏರ್‌ಪೋರ್ಟ್ ವ್ಯಾಪ್ತಿಯ ಸುಮಾರು 150 ಕಿಲೋ ಮೀಟರ್ ವ್ಯಾಪ್ತಿಯಲ್ಲಿ ಮತ್ತೊಂದು ಏರ್‌ಪೋರ್ಟ್ ನಿರ್ಮಿಸದಂತೆ ಒಪ್ಪಂದ ಇದೆ. ಗ್ರೇಟರ್ ಬೆಂಗಳೂರು ಪ್ಲಾನಿಂಗ್ ಅಥಾರಿಟಿ ಈ ಒಪ್ಪಂದವರು 2032ಕ್ಕೆ ಮುಗಿಯಲಿದೆ. ಅಷ್ಟರೊಳಗೆ 2ನೇ ವಿಮಾನ ನಿಲ್ದಾಣ ನಿರ್ಮಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆ.

ಅಧಿಕಾರಿಗಳು ಜಾಗದ ಸರ್ವೇ ಮಾಡುತ್ತಿದ್ದಾರೆ. ಎಲ್ಲಿ ನಿರ್ಮಿಸಿದರೆ ಒಳಿತು ಎಂಬ ಪ್ರಾಥಮಿಕ ಚರ್ಚೆಗಳು ಗುತ್ತಿವೆ ಎಂದು ಅವರು ಮಾಹಿತಿ ನೀಡಿದರು. ಬೆಂಗಳೂರಿಗೆ ನಾವು ಮುಂದೆ ಹೊಸ ಪರ್ಯಾಯ ಮಾರ್ಗ ಹುಡುಕಬೇಕಾಗಿದೆ. ನಿಟ್ಟಿನಲ್ಲಿ ಸರ್ಕಾರ ಅನೇಕ ಕಾರ್ಯಕ್ರಮಗಳನ್ನು ರೂಪಿಸುತ್ತಿದೆ. ಬಿಡದಿಯಲ್ಲಿದ್ದ 'ಪ್ಲಾನಿಂಗ್ ಅಥಾರಿಟಿ'ಯನ್ನು 'ಗ್ರೇಟರ್ ಬೆಂಗಳೂರು ಪ್ಲಾನಿಂಗ್ ಅಥಾರಿಟಿ' ಎಂದು ಪರಿವರ್ತನೆ ಮಾಡುತ್ತೇವೆ ಎಂದು ಅವರು ಇದೇ ವೇಳೆ ತಿಳಿಸಿದರು. ಏರ್‌ಪೋರ್ಟ್‌ಗಾಗಿ ವಿವಿಧೆಡೆ ಜಾಗ ಹುಡುಕಾಟ ಸದ್ಯ, ರಾಮನಗರ, ತುಮಕೂರು, ಕನಕಪುರ ಸೇರಿದಂತೆ ಬೆಂಗಳೂರಿನಿಂದ ಸುಮಾರು 40 ಕಿಲೋ ಮೀಟರ್ ಸುತ್ತಮುತ್ತ ಜಾಗದ ಹುಡುಕಾಟ ನಡೆದಿದೆ. ಇತ್ತ ಕೈಗಾರಿಕೆ ಸಚಿವ ಎಂಬಿ ಪಾಟೀಲ್ ಅವರು ಎರಡನೇ ಏರ್‌ಪೋರ್ಟ್ ನಿರ್ಮಿಸಲು ವಿಸ್ತೃತ ವರದಿ ರಚನೆ ಮಾಡುವಂತೆ ಸೂಚಿಸಿದ್ದಾರೆ. ಇದರ ಬೆನ್ನಲ್ಲೇ ಅಧಿಕಾರಿಗಳ ತಂಡ ಜಾಗ ಹುಡುಕಾಟದಲ್ಲಿ ನಿರತವಾಗಿದೆ. ಮತ್ತೊಂದು ಅಧಿಕಾರಿಗಳ ತಂಡ ಡಿಪಿಆರ್ ತಯಾರಿಕೆಗೆ ಇತ್ತೀಚೆಗಷ್ಟೆ ಚಾಲನೆ ನೀಡಿದೆ



### ತಮಿಳುನಾಡು ವಿರುದ್ಧ ಕನ್ನಡಿಗರ ಕಿಡಿ

**ಈ ಮಧ್ಯೆ ಹೊಸೂರು ಬಳಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪಿಸುವುದಾಗಿ ತಮಿಳುನಾಡು ರಾಜ್ಯ ಸರ್ಕಾರ ಘೋಷಣೆ ಮಾಡುವ ಮೂಲಕ ಕರ್ನಾಟಕದ ಅಭಿವೃದ್ಧಿಗೆ ಯೋಜನೆಗೆ ಬ್ರೇಕ್ ಹಾಕಲು ಮುಂದಾಗಿದೆ ಎಂಬ ಆರೋಪ ಕೇಳಿ ಬಂದಿದೆ. ಮೇಕೆದಾಟು, ಕಾವೇರಿ ನೀರು ಹಂಚಿಕೆಯಲ್ಲಿ ವಿವಾದ ಎಬ್ಬಿಸುತ್ತಿದ್ದ ತಮಿಳುನಾಡು ಇದೀಗ ವಿಮಾನ ನಿಲ್ದಾಣ ವಿಚಾರದಲ್ಲಿ ಖ್ಯಾತೆ ತೆಗೆಯುತ್ತಿದೆ ಎಂದು ಹಲವರು ದೂರುತ್ತಿದ್ದಾರೆ.**

# ಪ್ರವಾಸೋದ್ಯಮ ಮಾಸ್ಟರ್ ಪ್ಲಾನ್ ಸಿದ್ಧಪಡಿಸಲು ಡಿಸಿಗಳಿಗೆ ಸಿಎಂ ಸಿದ್ದು ಸೂಚನೆ

## ರಾಜ್ಯಗಳಿಗೆ ಪ್ರವಾಸೋದ್ಯಮವೇ ಪ್ರಮುಖ ಆದಾಯ, ನೆರೆಯ ಕೇರಳದಷ್ಟು ಕೂಡಾ ಪ್ರವಾಸೋದ್ಯಮ ಅಭಿವೃದ್ಧಿ

• ಉದಯವಾಹಿನಿ, ಬೆಂಗಳೂರು

ರಾಜ್ಯ ಪ್ರವಾಸೋದ್ಯಮಕ್ಕೆ ಹೆಚ್ಚು ಅವಕಾಶ ಇರುವ ರಾಜ್ಯ. 320 ಕಿಮಿ ಕರಾವಳಿ ಪ್ರದೇಶವಿದೆ. ಇದುವರೆಗೆ ನಮಗೆ ಅದನ್ನು ಸಮರ್ಪಕವಾಗಿ ಬಳಸಿಕೊಳ್ಳಲು ಸಾಧ್ಯವಾಗಿಲ್ಲ. ಉಡುಪಿ, ಮಂಗಳೂರು, ಉತ್ತರಕನ್ನಡ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಸ್ಥಳೀಯರೊಂದಿಗೆ ಸೇರಿಕೊಂಡು ಪ್ರೇಕ್ಷಣೀಯ ಸ್ಥಳಗಳ ಅಭಿವೃದ್ಧಿಪಡಿಸುವ ಕುರಿತು ಜಿಲ್ಲಾಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಸಿಎಂ ಸೂಚನೆ ನೀಡಿದರು.

ಎರಡನೇ ದಿನದ DC-CEO ಮತ್ತು ಉಸ್ತುವಾರಿ ಕಾರ್ಯದರ್ಶಿಗಳ ಸಭೆಯಲ್ಲಿ ಮಾತನಾಡಿದ ಸಿದ್ದರಾಮಯ್ಯ, ಇದರಿಂದ ಉದ್ಯೋಗ ಸೃಷ್ಟಿ ಸಾಧ್ಯವಿದೆ. ಹೊಸ ಪ್ರವಾಸೋದ್ಯಮ ನೀತಿ ರಚಿಸಲು ನಿರ್ಧರಿಸಲಾಗಿದ್ದು, ಈ ಕುರಿತು ವಿಸ್ತೃತವಾದ ಸಮಾಲೋಚನೆ ನಡೆಸಬೇಕು ಎಂದು ಹೇಳಿದರು. ಅನೇಕ ರಾಜ್ಯಗಳಿಗೆ ಪ್ರವಾಸೋದ್ಯಮವೇ ಪ್ರಮುಖ ಆದಾಯ. ನೆರೆಯ ಕೇರಳದಷ್ಟು ಕೂಡಾ ಪ್ರವಾಸೋದ್ಯಮ ಅಭಿವೃದ್ಧಿ ನಮಗೆ ಸಾಧ್ಯವಾಗಿಲ್ಲ. ಪ್ರವಾಸೋದ್ಯಮದ ಸಮಗ್ರ ಅಭಿವೃದ್ಧಿಗೆ ನೀಲನಕಾಶೆ ಸಿದ್ಧಪಡಿಸಬೇಕು ಪ್ರವಾಸೋದ್ಯಮ ಮೂಲಸೌಲಭ್ಯಗಳು ಅತ್ಯಂತ ಕಡಿಮೆಯಿದೆ ಮಧುಗಿರಿಯಲ್ಲಿರುವ ಏಕಶಿಲಾ ಬೆಟ್ಟ ಹಿಂದಿನ ಬಾರಿ ಸರ್ಕಾರ ಇದ್ದಾಗ ಅಭಿವೃದ್ಧಿ ಬಜೆಟ್‌ನಲ್ಲಿ ಘೋಷಣೆ ಮಾಡಿದ್ದರೂ, ಇದುವರೆಗೆ ಯಾವುದೇ ಅಭಿವೃದ್ಧಿಯಾಗಿಲ್ಲ. ಪ್ರವಾಸೋದ್ಯಮಕ್ಕೆ ಪೂರಕವಾದ ವಾತಾವರಣ ಸೃಷ್ಟಿಸಿದರೆ ಮಾತ್ರ ಬಂಡವಾಳ ಹೂಡಿಕೆದಾರರು ಮುಂದೆ ಬರುತ್ತಾರೆ ಎಂದರು ಜಿಲ್ಲಾಧಿಕಾರಿಗಳು ಪ್ರವಾಸಿ ತಾಣಗಳ ಅಭಿವೃದ್ಧಿ ಸಾಧ್ಯತೆಗಳನ್ನು ಗುರುತಿಸಬೇಕು.

ಖಾಸಗಿ ಸಹಭಾಗಿತ್ವದಲ್ಲಿ ಮಾತ್ರವಲ್ಲ ಸರ್ಕಾರದ ವತಿಯಿಂದಲೂ ಹೆಜ್ಜೆ ಇರಿಸಬೇಕು. ಹೊಸ ಪ್ರವಾಸೋದ್ಯಮ ನೀತಿಯಲ್ಲಿ ಎಲ್ಲಾ ಅಂಶಗಳನ್ನು ಸೇರಿಸಲಾಗುವುದು. ಇದಕ್ಕೆ ಪೂರಕವಾಗಿ ಅನುದಾನವನ್ನು ಒದಗಿಸಲಾಗುವುದು ಎಂದರು. ಇನ್ನೂ ಕರಾವಳಿಯಲ್ಲಿ ಸಿಆರ್‌ಝೆಡ್ ಕಾಯ್ದೆಯಿಂದಾಗಿ ಅಭಿವೃದ್ಧಿಗೆ ಕೆಲವು ತೊಡಕುಗಳಿದ್ದು, ಇದನ್ನು ಬಗೆಹರಿಸಲು ಪ್ರಯತ್ನಿಸಬೇಕು ಎಂದರು ರಾಜ್ಯದಲ್ಲಿ ಕೆಲವೇ ಪ್ರವಾಸೋದ್ಯಮ ತಾಣಗಳಿಗೆ ಫೋಕಸ್ ದೊರೆಯುತ್ತಿದೆ. 25 ಸಾವಿರ ಸ್ಮಾರಕಗಳಿವೆ. ಇವುಗಳ ಪೈಕಿ ಸುಮಾರು 23 ಸಾವಿರ ಸ್ಮಾರಕಗಳು ನಿರ್ಲಕ್ಷ್ಯಕ್ಕೆ ಒಳಗಾಗಿವೆ. ಕರ್ನಾಟಕ ಪ್ರವಾಸೋದ್ಯಮ ವ್ಯಾಪಾರ ಸೌಲಭ್ಯ ಕಾಯ್ದೆ 2015ಯನ್ನು ಸಮರ್ಪಕವಾಗಿ ಅನುಷ್ಠಾನ ಮಾಡಿದರೆ ಪ್ರವಾಸೋದ್ಯಮ ತಾಣಗಳ ಅಭಿವೃದ್ಧಿ ಸಾಧ್ಯವಿದೆ. ಪ್ರವಾಸೋದ್ಯಮತಾಣಗಳ ಸಮೀಕ್ಷೆ, ಸಂರಕ್ಷಣೆ ಇತ್ಯಾದಿಗಳ ಮಾಸ್ಟರ್ ಪ್ಲಾನ್ ಜಿಲ್ಲಾವಾರು ಸಿದ್ಧಪಡಿಸಬೇಕು. ಮೂರು ತಿಂಗಳ ಒಳಗಾಗಿ ಈ ಕಾರ್ಯವನ್ನು ಪೂರ್ಣಗೊಳಿಸಬೇಕು. ಪ್ರವಾಸಿಕ ತಾಣಗಳನ್ನು ಹಂತ ಹಂತವಾಗಿ ಪುನರುಜ್ಜೀವನಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು. ಸ್ಥಳೀಯ ಜನರು, ಎನ್‌ಜಿಓಗಳ ಸಹಯೋಗ ಪಡೆದುಕೊಳ್ಳಬೇಕು. ಜಿಲ್ಲಾ ಪ್ರವಾಸೋದ್ಯಮ ಕುರಿತು ಪುಸ್ತಕಗಳನ್ನು ಬಿಡುಗಡೆಗೊಳಿಸಿ. ಸ್ಮಾರಕ ದತ್ತಿ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗಿದ್ದು, ಆಸಕ್ತರು ಸ್ಮಾರಕಗಳನ್ನು ದತ್ತು ಪಡೆದು ಸಂರಕ್ಷಣೆ ಕಾರ್ಯ ಮಾಡಬಹುದಾಗಿದೆ ಎಂದು ಹೇಳಿದರು



ಉದಯವಾಹಿನಿ ಚಿತ್ರ

### ಸಚಿವ ಹೆಚ್.ಕೆ.ಪಾಟೀಲ್ ಅವರ ಪ್ರಸ್ತಾವನೆ

**ರಾಜ್ಯದಲ್ಲಿ 25 ಸಾವಿರ ಸ್ಮಾರಕಗಳಿವೆ. ಇವುಗಳ ಮಹತ್ವ ಅರಿತು ಗೈಡ್ ಗಳನ್ನು ನೇಮಿಸುವುದಾಗಲಿ, ಸಮೀಕ್ಷೆ ನಡೆಸಿ, ಸಂರಕ್ಷಣೆ ಮಾಡಿ ನಿಮ್ಮ ನಿಮ್ಮ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಮಾಸ್ಟರ್ ಪ್ಲಾನ್ ಸಿದ್ದಪಡಿಸಲು ಅವಕಾಶಗಳಿವೆ. ಇದಕ್ಕೆ ತಕ್ಕಂತೆ ಆಕ್ಷನ್ ಪ್ಲಾನ್ ಮಾಡಿ, ಬಜೆಟ್ ಪ್ಲಾನ್ ಸಿದ್ದಪಡಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ. ನಿಮ್ಮ ನಿಮ್ಮ ಜಿಲ್ಲೆಗಳಲ್ಲಿನ ಅವಕಾಶಗಳನ್ನು ಸರಿಯಾಗಿ ಬಳಸಿಕೊಳ್ಳಬಹುದು.**

## ಹೆಚ್. ಕೆ.ಪಾಟೀಲ್ ಅಭಿಪ್ರಾಯ

ನಿಮ್ಮ ಜಿಲ್ಲೆಗಳಲ್ಲಿ ಎಷ್ಟೆಲ್ಲಾ ಉತ್ತಮ ಸಾಹಿತಿ, ಬರಹಗಾರರು, ಕಲಾವಿದರು ಇದ್ದಾರೆ. ಅವರ ನೆರವು ಪಡೆದು 3 ತಿಂಗಳಲ್ಲಿ ಮಾಸ್ಟರ್ ಪ್ಲಾನ್ ಸಿದ್ದಪಡಿಸಿ ಪ್ರವಾಸೋದ್ಯಮ ಸಮಿತಿ ಮುಂದೆ ಇಡಿ. ಸ್ಮಾರಕಗಳನ್ನು ದತ್ತು ಪಡೆದು ಅಭಿವೃದ್ಧಿ ಪಡಿಸುವವರೂ ಇರ್ತಾರೆ. ಅವರನ್ನು ಗುರುತಿಸಿ. ನೀವು ಸಿದ್ದಪಡಿಸುವ ಮಾಸ್ಟರ್ ಪ್ಲಾನ್ ಗೆ ಹಣಕಾಸು ಒದಗಿಸಲಾಗುವುದು ಎಂದು ಸಚಿವ ಹೆಚ್.ಕೆ.ಪಾಟೀಲ್ ಅಭಿಪ್ರಾಯಪಟ್ಟರು. ಕಪ್ಪತ್ತಗುಡ್ಡ ನಿಸರ್ಗ ಪ್ರದೇಶವನ್ನು ಪ್ರವಾಸೋದ್ಯಮ ಕ್ಷೇತ್ರವಾಗಿ ಇನ್ನಷ್ಟು ಅಭಿವೃದ್ಧಿ ಪಡಿಸಲು ಸಾಧ್ಯವಿದೆ. ಈ ಬಗ್ಗೆ ಗಮನ ಹರಿಸಿ. ಎಲ್ಲಾ ಜಿಲ್ಲಾಧಿಕಾರಿಗಳು ಈ ಬಗ್ಗೆ ಗಮನ ಹರಿಸಿದರೆ ರಾಜ್ಯದ ಪ್ರತೀ ಜಿಲ್ಲೆಗಳನ್ನೂ ಪ್ರವಾಸೋದ್ಯಮ ಜಿಲ್ಲೆಗಳನ್ನಾಗಿ ಮಾಡಬಹುದಾಗಿದೆ ಎಂದು ಸಚಿವ ಹೆಚ್.ಕೆ.ಪಾಟೀಲ್ ಅವರು ಪ್ರಸ್ತಾವನೆಗೆ ಮುಂದಿಟ್ಟರು. ಇದಕ್ಕೆ ಧ್ವನಿಗೂಡಿಸಿದ ಡಿಸಿಎಂ ಡಿ.ಕೆ. ಶಿವಕುಮಾರ್, ರಾಜ್ಯದಲ್ಲಿ ಅತೀ ವಿಸ್ತಾರವಾದ ಕರಾವಳಿ ಪ್ರದೇಶವಿದೆ. ಕರಾವಳಿಯುದ್ದಕ್ಕೂ ನಾವು ಪ್ರವಾಸೋದ್ಯಮ ಬೆಳೆಸುವ, ಅಭಿವೃದ್ಧಿಪಡಿಸುವ ಅವಕಾಶಗಳು ಹೇರಳವಾಗಿವೆ ಎಂದರು.

### ಕರಾವಳಿ ಪ್ರವಾಸೋದ್ಯಮಕ್ಕೆ ಆದ್ಯತೆ

**ಕರಾವಳಿಯಲ್ಲಿ ಮೆಡಿಕಲ್ ಕಾಲೇಜುಗಳು, ಬಂದರುಗಳು, ದೇವಾಲಯಗಳು ಸೇರಿದಂತೆ ಹಲವು ಪ್ರಮುಖ ಸ್ಥಳಗಳು ಇವೆ. ಆದರೆ ಒಂದೇ ಒಂದು ಪಂಚತಾರಾ ಹೊಟೇಲ್ ಇಲ್ಲ. ಸಂಜೆಯಾಗುತ್ತಿದ್ದಂತೆಯೇ ಇಡೀ ಮಂಗಳೂರು ಮುಚ್ಚಿಕೊಳ್ಳುತ್ತದೆ. ಕರಾವಳಿ ಹಾಗೂ ಮಲೆನಾಡು ಪ್ರದೇಶಕ್ಕೆ ಪ್ರತ್ಯೇಕ ಯೋಜನೆಯನ್ನು ರೂಪಿಸಬೇಕಿದೆ. ಕರಾವಳಿಯ ಪ್ರವಾಸೋದ್ಯಮದ ಸಾಧ್ಯತೆಗಳನ್ನು ಕಂಡುಕೊಳ್ಳುವ ಅಗತ್ಯವಿದೆ. ಇದರಿಂದ ತೆರಿಗೆ ಸಂಗ್ರಹ ಹಾಗೂ ಸ್ಥಳೀಯರಿಗೆ ಉದ್ಯೋಗವಕಾಶ ಸೃಷ್ಠಿಸಲು ಸಾಧ್ಯವಿದೆ. ಕರಾವಳಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಮುಂಬೈ, ಗಲ್ಫ್ ದೇಶಗಳಿಗೆ ಉದ್ಯೋಗ ಅರಸಿಕೊಂಡು ಹೋಗುವ ಪರಿಸ್ಥಿತಿ ಬದಲಾಗಬೇಕಿದೆ ಎಂದರು.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಮಧ್ಯಾಹ್ನ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ವಿಶ್ರಾಂತಿಯ ಸಲುವಾಗಿ ನಿಕಟ ಸ್ನೇಹಿತರೊಂದಿಗೆ ಸ್ವಲ್ಪ ಸಮಯ ಕಳೆಯಿರಿ. ಪೂರ್ತಿ ದಿನ ನೀವು ಹಣದ ಬಗ್ಗೆ ಹೋರಾಟ ಮಾಡುತ್ತಿದ್ದೀರಿ, ಆದರೆ ಸಂಜೆಯ ಸಮಯದಲ್ಲಿ ನೀವು ಹಣದ ಲಾಭವನ್ನು ಪಡೆಯಬಹುದು.

**ವೃಷಭ** ನಿಮ್ಮ ದೈಹಿಕ ರಚನೆಯನ್ನು ಕಾಯ್ದುಕೊಳ್ಳಲು ನೆರವಾಗುವ ಕೆಲವು ಕ್ರೀಡಾ ಚಟುವಟಿಕೆಗಳನ್ನು ನೀವು ಇಂದು ನಂದಿಸಬಹುದು. ಇಂದು ನಿಮ್ಮ ಹಣವನ್ನು ಅನೇಕ ವಿಷಯಗಳಿಗೆ ಖರ್ಚು ಮಾಡಬಹುದು.

**ಮಿಥುನ** ಮನೆಯ ವಿಷಯಗಳು ಮತ್ತು ಬಾಕಿಯಿರುವ ಗೃಹಕೃತ್ಯಗಳನ್ನು ಪೂರ್ಣಗೊಳಿಸಲು ಒಂದು ಅನುಕೂಲಕರ ದಿನ. ನೀವು ಸ್ವಲ್ಪ ಪ್ರೀತಿ ಹಂಚಿಕೊಂಡಲ್ಲಿ ಇಂದು ನಿಮ್ಮ ಪ್ರಿಯತಮೆ ನಿಮ್ಮ ದೇವತೆಯಾಗುತ್ತಾಳೆ.

**ಕರ್ಕಾಟಕ** ಖಿನ್ನತೆಯನ್ನು ಹೊಡೆದೋಡಿಸಿ. ಇದ ನಿಮ್ಮನ್ನು ಆವರಿಸಿಕೊಳ್ಳುತ್ತಿದೆ ಮತ್ತು ನಿಮ್ಮ ಪ್ರಗತಿಗೆ ಅಡ್ಡಿಪಡಿಸುತ್ತಿದೆ. ನೀವು ಇಂದು ನಿಮಗೆ ನೀಡಲಾದ ಹೂಡಿಕೆಯ ಯೋಜನೆಗಳ ಬಗ್ಗೆ ಚೆನ್ನಾಗಿ ಆಲೋಚಿಸಬೇಕು.

**ಸಿಂಹ** ಇಂದು ನೀವು ಮನೆಯಲ್ಲಿ ಸೂಕ್ಷ್ಮ ಸಮಸ್ಯೆಯನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ ಮತ್ತು ಪ್ರಭಾವವನ್ನು ಬಳಸಬೇಕಾಗುತ್ತದೆ. ಇಂದು ನಿಮ್ಮ ದೀರ್ಘಕಾಲದ ಜಗಳವನ್ನು ಪರಿಹರಿಸಿಕೊಳ್ಳಿ.

**ಕನ್ಯಾ** ಲೋನ್ ತೆಗೆದುಕೊಂಡಿರುವ ಜನರಿಗೆ ಲೋನ್ ನ ಮೊತ್ತವನ್ನು ಮರು ಪಾವತಿಸುವಲ್ಲಿ ತೊಂದರೆಗಳು ಉಂಟಾಗಬಹುದು. ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ.

**ತುಲಾ** ಸೃಜನಶೀಲ ಆಸಕ್ತಿಗಳು ನಿಮ್ಮನ್ನು ಶಾಂತವಾಗಿರಿಸುತ್ತವೆ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗುತ್ತಿರುವ ಪ್ರಯತ್ನವು ಇಂದು ವಿಫಲ ವಾಗಬಹುದು, ಹೇಗಾದರೂ, ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ.

**ವೃಶ್ಚಿಕ** ನಿಮ್ಮ ಮಕ್ಕಳ ಜೊತೆ ನಿಮ್ಮ ಅಮೂಲ್ಯ ಸಮಯ ಕಳೆಯಿರಿ. ಇದು ಚಿಕಿತ್ಸೆಯ ಅತ್ಯುತ್ತಮ ರೂಪ. ಅವರು ಅನಿಯಮಿತ ಆನಂದದ ಮೂಲವಾಗಿರುತ್ತಾರೆ. ಪ್ರೀತಿಪಾತ್ರರು ಪ್ರಣಯದ ಮೂಡ್‌ನಲ್ಲಿರುತ್ತಾರೆ.

**ಧನಸ್ಸು** ನಿಮ್ಮ ಬಗ್ಗೆ ಕೆಟ್ಟ ಭಾವನೆ ಹೊಂದಿದ್ದಲ್ಲಿ ಯಾರಾದರೂ ವಿಷಯವನ್ನು ಸ್ಪಷ್ಟಗೊಳಿಸಲು ಹಾಗೂ ನಿಮ್ಮ ಜೊತೆ ರಾಜಿ ಮಾಡಿಕೊಳ್ಳಲು ಪ್ರಯತ್ನಿಸುವ ಒಂದು ದಿನ. ನಿಮ್ಮ ದುಃಖ ಇಂದು ಮಂಜುಗಡ್ಡೆಯ ಹಾಗೆ ಕರಗುತ್ತದೆ.

**ಮಕರ** ಒಂದು ಲಾಭಕರ ದಿನ ಮತ್ತು ನೀವು ದೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ವ್ಯಾಪಾರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು.

**ಕುಂಭ** ಸಂತೃಪ್ತಿಯ ಜೀವನಕ್ಕಾಗಿ ನಿಮ್ಮ ಮಾನಸಿಕ ದೃಢತೆಯನ್ನು ಸುಧಾರಿಸಿ. ಇಂದು ನಿಮಗೆ ನೀಡಲಾದ ಹೂಡಿಕೆಯ ಯೋಜನೆಗಳ ಬಗ್ಗೆ ಚೆನ್ನಾಗಿ ಆಲೋಚಿಸಬೇಕು. ಹಳೆಯ ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ.

**ಮೀನ** ನಿಮ್ಮ ಇತರರನ್ನು ಶ್ಲಾಘಿಸುವ ಮೂಲಕ ಅವರ ಯಶಸ್ಸನ್ನು ಆನಂದಿಸುವ ಸಾಧ್ಯತೆಗಳಿವೆ. ಇಂದು ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ.

## ತಂಬಾಕು ಉತ್ಪನ್ನ ಮಾರಾಟ ಅಂಗಡಿಗಳಿಗೆ ದಾಳಿ 33 ಪ್ರಕರಣ ದಾಖಲು, ರೂ.3300 ದಂಡ ವಸೂಲಿ

• ಚಿತ್ರದುರ್ಗ ಉದಯವಾಹಿನಿ


ಉದಯವಾಹಿನಿ ಚಿತ್ರ

ಕೋಟ್ಪಾ-2003ರ ಕಾಯ್ದೆಯ ಕುರಿತು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಸೋಮವಾರ ಚಿತ್ರದುರ್ಗ ನಗರದ ಕೆಎಸ್‌ಆರ್ಟಿಸಿ ಬಸ್‌ನಿಲ್ದಾಣ ಪ್ರದೇಶಗಳಲ್ಲಿ ಜಿಲ್ಲಾ, ತಾಲ್ಲೂಕು ಮಟ್ಟದ ತಂಬಾಕು ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ಭೇಟಿ ನೀಡಿ ದಾಳಿ ನಡೆಸಿ, ದಂಡ ವಿಧಿಸಿದೆ. ಸಾರ್ವಜನಿಕರಲ್ಲಿ ಮತ್ತು ಅಂಗಡಿ ಮಾಲೀಕರಿಗೆ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ, ಪಾನ್ ಮಸಾಲ, ತಂಬಾಕು ಜಗಿದು ಉಗಿಯದಂತೆ ಎಚ್ಚರಿಸಿ ಜಾಗೃತಿ ಮೂಡಿಸಲಾಯಿತು. ಸಂಬಂಧಪಟ್ಟ ಸೆಕ್ಷನ್-4, 6ಎ ಮತ್ತು 6ಬಿ ಬೋರ್ಡ್‌ಗಳನ್ನು ಹಾಕಲು ಸೂಚಿಸಲಾಯಿತು. ಸೆಕ್ಷನ್-4 ಅಡಿಯಲ್ಲಿ 29 ಕೇಸುಗಳನ್ನು ದಾಖಲಿಸಿ ರೂ. 2900/- ದಂಡವನ್ನು ಮತ್ತು ಸೆಕ್ಷನ್-6ಎ ಅಡಿಯಲ್ಲಿ 04 ಕೇಸುಗಳನ್ನು ದಾಖಲಿಸಿ ರೂ. 400/- ದಂಡವನ್ನು ವಸೂಲಿ ಮಾಡಲಾಯಿತು. ತಂಬಾಕು ದಾಳಿಯಲ್ಲಿ ತನಿಖಾ ತಂಡದ ಅಧಿಕಾರಿಗಳಾದ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎಂ.ಪ್ರಭುದೇವ್, ಪೊಲೀಸ್ ಇಲಾಖೆಯ ಬಿ.ಜಯಪ್ರಕಾಶ್, ಆರೋಗ್ಯ ನಿರೀಕ್ಷಣಾಧಿಕಾರಿ ಜಿ.ಕೆ.ಪ್ರವೀಣ್ ಇದ್ದರು.

## ಗ್ರಾಮೀಣಾಭಿವೃದ್ಧಿ ಸಚಿವರ ಪರಿಷ್ಕೃತ ಪ್ರವಾಸ

• ಉದಯವಾಹಿನಿ ಚಿತ್ರದುರ್ಗ

ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಾದ ಪ್ರಿಯಾಂಕ್ ಖರ್ಗೆಯವರು ಇದೇ ಜುಲೈ10ರಂದು ಚಿತ್ರದುರ್ಗ ಹಾಗೂ ತುಮಕೂರು ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಸಚಿವರು ಅಂದು ಬೆಳಿಗ್ಗೆ 7.30ಕ್ಕೆ ಬೆಂಗಳೂರುನಿಂದ ಹೊರಟು ಬೆಳಿಗ್ಗೆ 10.30ಕ್ಕೆ ಪಾವಗಡದ ಎಂ.ಬಿ.ಆರ್-2 ಪರಿವೀಕ್ಷಣೆ ಮಾಡುವರು. ಬೆಳಿಗ್ಗೆ 11.30ಕ್ಕೆ ಚಳ್ಳಕೆರೆಯ ಕ್ಯಾದಿಗುಂಟೆಯ ಐ.ಪಿ.ಎಸ್-3 ಕ್ಯಾದಿಗುಂಟೆ (ಕೆಂಚಮ್ಮನಹಳ್ಳಿ ಗೇಟ್) ಯೋಜನೆಯ ಪ್ರಗತಿ ಪರಿವೀಕ್ಷಣೆ ಅಧಿಕಾರಿಗಳೊಂದಿಗೆ ಚರ್ಚೆ ನಡೆಸುವರು. ನಂತರ ತುಮಕೂರಿಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ಭೀಮಾಶಂಕರ್ ತಿಳಿಸಿದ್ದಾರೆ.

## ಪೊಲೀಸರ ಮೇಲೆ ಮಾರಕಾಸ್ತ್ರಗಳಿಂದ ಹಲ್ಲೆ : ಆರೋಪಿಯ ಮೇಲೆ ಫೈರಿಂಗ್

• ಉದಯವಾಹಿನಿ ಶಿವಮೊಗ್ಗ

ಕೊಲೆ ಆರೋಪಿ ಒಬ್ಬನನ್ನು ಬಂಧಿಸಲು ತೆರಳಿದ್ದ ಪೊಲೀಸ್ ಸಿಬ್ಬಂದಿಗಳ ಮೇಲೆ ಆರೋಪಿ ಮಾರಕಾಸ್ತ್ರಗಳಿಂದ ಹಲ್ಲೆ ಮಾಡಿದ್ದಾನೆ. ಈ ವೇಳೆ ಆತನ ಮೇಲೆ ಗುಂಡಿನ ದಾಳಿ ನಡೆಸಿದ್ದು, ಆರೋಪಿಯ ಕಾಲಿಗೆ ಗುಂಡೇಟು ಬಿದ್ದಿದೆ. ವಿನೋಬ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕೊಲೆ ಆರೋಪಿಯನ್ನು ಬಂಧಿಸಲು ಹೋಗಿದ್ದ ಪೊಲೀಸರ ಮೇಲೆ ಆರೋಪಿ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿದ್ದಾನೆ. ರಜಾಕ್ ಎಂಬಾತ ತುಂಗಾ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕೊಲೆ ಆರೋಪಿಯಾಗಿದ್ದ. ವಿನೋಬ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಗಾಂಜಾ ಮಾರಾಟ, ಕೊಲೆ ಪ್ರಕರಣದಲ್ಲೂ ಈತನ ವಿರುದ್ಧ ಪ್ರಕರಣಗಳಿವೆ. ಆರೋಪಿ ಮೇಲೆ ಐದು ಪ್ರಕರಣಗಳಿದ್ದು ನ್ಯಾಯಾಲಯದಲ್ಲಿ ವಿಚಾರಣೆ ನಡೆಯುತ್ತಿದೆ. ಆದರೆ ಅನೇಕ ದಿನಗಳಿಂದ ನ್ಯಾಯಾಲಯಕ್ಕೂ ಹಾಜಾರಾಗಿರಲಿಲ್ಲ. ಇದೇ ತನಿಖೆಯಲ್ಲಿದ್ದ ಹೊಳೆಹೊನ್ನೂರು ಪೊಲೀಸ್ ಠಾಣೆ ಪಿಐ ಲಕ್ಷ್ಮಿಪತಿ ಅವರಿಗೆ ಆರೋಪಿ ಕುಂಸಿ ಪೊಲೀಸ್ ಠಾಣೆ ವ್ಯಾಪ್ತಿಯ ತ್ಯಾಜುವಳ್ಳಿಯ ಕಾಡಿನಲ್ಲಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ. ನಿಖರ ಮಾಹಿತಿ ಬೆನ್ನಲ್ಲೇ ಆತನನ್ನು ಬಂಧಿಸಲು ಪಿಐ ಮತ್ತು ಸಿಬ್ಬಂದಿ ತೆರಳಿದ್ದರು. ಈ ವೇಳೆ ಪೊಲೀಸ್ ಸಿಬ್ಬಂದಿ ಅರ್ಜುನ್ ಎಂಬವರ ಮೇಲೆ ರಜಾಕ್ ಮಾರಕಾಸ್ತ್ರಗಳಿಂದ ಹಲ್ಲೆ ಮಾಡಿದ್ದಾನೆ.

# ರಾಹುಲ್ ಗಾಂಧಿ ಒಬ್ಬ ದೊಡ್ಡ ಹುಚ್ಚ ಅನ್ನೋದು ಸ್ಪಷ್ಟ : ಭರತ್ ಶೆಟ್ಟಿ

### • ರಾಹುಲ್ ಗಾಂಧಿಯ ಕಪಾಳಕ್ಕೆ ಎರಡು ಬಾರಿಸಿದ್ರೆ ಮಾತ್ರ ಸರಿಯಾಗ್ತಾನೆ: ನಾಲಿಗೆ ಹರಿಬಿಟ್ಟ ಶಾಸಕ

• ಉದಯವಾಹಿನಿ ಮಂಗಳೂರು

ಇತ್ತೀಚೆಗೆ ಸಂಸತ್‌ನಲ್ಲಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹಿಂದೂ ಧರ್ಮ ಮತ್ತು ದೇವರ ಬಗ್ಗೆ ಮಾತನಾಡಿದ್ದರು. ಹಿಂದೂ ಧರ್ಮ ಬಿಜೆಪಿ, ಆರೆಸ್ಸೆಸ್‌ನ ಸೊತ್ತಲ್ಲ ಎಂದು ಹೇಳಿದ್ದರು. ರಾಹುಲ್ ಗಾಂಧಿ ಭಾಷಣಕ್ಕೆ ಸದನದಲ್ಲೇ ನರೇಂದ್ರ ಮೋದಿ ಸೇರಿದಂತೆ ಬಿಜೆಪಿ ನಾಯಕರು ಆಕ್ಷೇಪ ವ್ಯಕ್ತಪಡಿಸಿದ್ದರು.

ಇದೀಗ ರಾಹುಲ್ ಗಾಂಧಿ ಹೇಳಿಕೆ ಖಂಡಿಸಿ ಮಂಗಳೂರಿನಲ್ಲಿ ನಡೆದ ಬಿಜೆಪಿಯ ಪ್ರತಿಭಟನೆಯಲ್ಲಿ ಮಂಗಳೂರು ಉತ್ತರ ಕ್ಷೇತ್ರದ ಬಿಜೆಪಿ ಶಾಸಕ ಭರತ್ ಶೆಟ್ಟಿ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಪ್ರತಿಭಟನೆಯಲ್ಲಿ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಶಾಸಕ ಭರತ್ ಶೆಟ್ಟಿ, ರಾಹುಲ್ ಗಾಂಧಿಗೆ ಯಾರಾದ್ರೂ ಪಾರ್ಲಿಮೆಂಟ್ ಒಳಗೆ ಹೋಗಿ ಕೆನ್ನೆಗೆ ಬಾರಿಸಬೇಕಿತ್ತು ಅನ್ನಿಸ್ತಿದೆ, ರಾಹುಲ್ ಗಾಂಧಿಯ ಕಪಾಳಕ್ಕೆ ಎರಡು ಬಾರಿಸದರೆ ಮಾತ್ರ ಆತ ಸರಿಯಾಗ್ತಾನೆ ಎಂದು ನಾಲಿಗೆ ಹರಿಬಿಟ್ಟದ್ದಾರೆ. ರಾಹುಲ್ ಗಾಂಧಿ ಶಿವನ ಫೋಟೋ ಹಿಡಿದು ನಿಂತಿದ್ದ, ಈ ಹುಚ್ಚನಿಗೆ ಶಿವ ಮೂರನೇ ಕಣ್ಣು ಬಿಟ್ಟರೆ ಸುಟ್ಟು ಬೂದಿಯಾಗ್ತಾನೆ ಅಂತ ಗೊತ್ತಿಲ್ಲ ಎಂದಿರುವ ಶಾಸಕ ಭರತ್ ಶೆಟ್ಟಿ, ಅವನು ಹಿಂದೂ ವಿರೋಧಿ ನೀತಿಯನ್ನ ಅಳವಡಿಸಿಕೊಂಡಿದ್ದಾನೆ. ನಾವು ಅವನಿಗೆ ಯಾವ ಶಬ್ದ ಪ್ರಯೋಗಿಸಬಹುದು ಅಂತ ನೋಡಿ. ರಾಹುಲ್ ಗಾಂಧಿ ಒಬ್ಬ ದೊಡ್ಡ ಹುಚ್ಚ ಅನ್ನೋದು ಸ್ಪಷ್ಟ. ಹಿಂದೂಗಳ ಬಗ್ಗೆ ಏನು ಮಾತನಾಡಿದ್ರೂ ಕೇಳ್ತಾರೆ ಎಂಬ ಭಾವನೆ ರಾಹುಲ್ ಗಾಂಧಿಗೆ ಇರಬಹುದು ಎಂದು ಹೇಳಿದ್ದಾರೆ.

**ಮಂದಿರ ನಮ್ಮ ಕರ್ತವ್ಯ**

ಅವನು (ರಾಹುಲ್ ಗಾಂಧಿ) ಅಲ್ಲಿ ಬೊಗಳುವ ಸಂದರ್ಭ ಇಲ್ಲಿನ ಸ್ಥಳೀಯ ನಾಯಕರು ಬಾಲ ಬಿಚ್ಚಲು ಶುರು ಮಾಡಿದ್ದಾರೆ ಎಂದು ನಾಲಿಗೆ ಹರಿಬಿಟ್ಟಿರುವ ಬಿಜೆಪಿ ಶಾಸಕ ಭರತ್ ಶೆಟ್ಟಿ, ಪೇಜಾವರ ಸ್ವಾಮೀಜಿ ಹೇಳಿಕೆ ಕೊಟ್ಟಿದ್ದನ್ನು ವಿರೋಧಿಸಿ ಸ್ಥಳೀಯ ನಾಯಕರು ಹೇಳಿಕೆ ಕೊಟ್ಟಿದ್ದಾರೆ. ಹಿಂದೂ ಧರ್ಮವನ್ನು ಕಾಪಾಡೋದು ಮಠ, ಮಂದಿರ ನಮ್ಮ ಕರ್ತವ್ಯ. ಹಿಂದೂ ಮತ್ತು ಹಿಂದುತ್ವ ಬೇರೆ ಎಂಬ ಥಿಯರಿ ಹೇಳೋದಕ್ಕೆ ಇವರು ಶುರು ಮಾಡಿದ್ದಾರೆ, ಬಾಯಿಗೆ ಬಂದ ಹಾಗೆ ರಾಹುಲ್ ಗಾಂಧಿ ಬೊಗಳುತ್ತಿದ್ದಾನೆ. 99 ಸೀಟು ಹಿಡಿದುಕೊಂಡು ಏನೋ ಸಾಧನೆ ಮಾಡಿದಾಗೆ ಇವನು ಮಾತನಾಡುತ್ತಿದ್ದಾನೆ ಎಂದು ಭರತ್ ಶೆಟ್ಟಿ ಹೇಳಿದ್ದಾರೆ.


ಉದಯವಾಹಿನಿ ಚಿತ್ರ

> ಬಿಜೆಪಿಯವರ ಪ್ರಕಾರ ನರೇಂದ್ರ ಮೋದಿ ಎಂದರೆ ಹಿಂದೂ ಧರ್ಮ ಎಂದು ಹೇಳುತ್ತಿದ್ದಾರೆ. ಆದರೆ, ವಾಸ್ತವ ಏನೆಂದರೆ, ನರೇಂದ್ರ ಮೋದಿ ಇಡೀ ಹಿಂದೂ ಸಮಾಜವಲ್ಲ. ಬಿಜೆಪಿ ಎಂದರೆ ಇಡೀ ಹಿಂದೂ ಸಮಾಜವಲ್ಲ. ಆರ್‌ಎಸ್‌ಎಸ್ ಇಡೀ ಹಿಂದೂ ಸಮಾಜವಲ್ಲ. ಹಿಂದೂ ಧರ್ಮ ಇದು ಬಿಜೆಪಿಯ ಸ್ವತ್ತಲ್ಲ. ಬಿಜೆಪಿಯವರು ಹಿಂಸಾಚಾರಿ ಹಿಂದೂಗಳು ಎಂದು ಹೇಳಿದ್ದರು.

**ಅಸಹ್ಯಕರ ಎಂದು ಆಕ್ಷೇಪ**

ಈ ವೇಳೆ ಆಕ್ಷೇಪ ವ್ಯಕ್ತಪಡಿಸಿದ ಪ್ರಧಾನಿ ನರೇಂದ್ರ ಮೋದಿ, ಇಡೀ ಹಿಂದೂ ಸಮಾಜವನ್ನು ಹಿಂಸಾಚಾರಿಗಳು ಎಂದು ಕರೆಯುವುದು ಅಸಹ್ಯಕರ ಎಂದು ಆಕ್ಷೇಪ ಎತ್ತಿದರು. ಆಗ, ಬಿಜೆಪಿ ನಾಯಕರು ರಾಹುಲ್ ಗಾಂಧಿ ಭಾಷಣಕ್ಕೆ ಅಡ್ಡಿಪಡಿಸಿದರು. ಈ ವೇಳೆ ರಾಹುಲ್ ಗಾಂಧಿ, ನಾನು ಹೇಳಿದ್ದು, ಆರೆಸ್ಸೆಸ್ ಬಿಜೆಪಿಯ ಬಗ್ಗೆ, ಆರ್‌ಎಸ್‌ಎಸ್ ಹಿಂದೂ ಸಮಾಜವನ್ನು ಗುತ್ತಿಗೆ ಪಡೆದಿಲ್ಲ. ರಾಮಜನ್ಮಭೂಮಿಯಲ್ಲಿ ಬಿಜೆಪಿಗೆ ಸೋಲಾಗಿದೆ ಎಂದು ಹೇಳಿದ್ದರು.

ಶಿವಾಜಿ, ರಾಣಾ ಪ್ರತಾಪ್ ನಮ್ಮ ಸಮಾಜದಲ್ಲೇ ಹುಟ್ಟಿದವರು, ಎಲ್ಲಿ ಶಸ್ತ್ರ ತೆಗೀಬೇಕೊ ಅಲ್ಲಿ ತೆಗಿತೇವೆ ಎಂದು ಪ್ರಚೋದನಕಾರಿಯಾಗಿ ಮಾತನಾಡಿರುವ ಭರತ್ ಶೆಟ್ಟಿ, ಶಸ್ತ್ರ ಪೂಜೆ ಮಾಡಿ ಉತ್ತರ ಕೊಡೋದಕ್ಕೂ ನಮಗೆ ಗೊತ್ತಿದೆ. ಪಾರ್ಲಿಮೆಂಟ್ ಗೆ ಹೋಗಿ ಅವನ ಕೆನ್ನೆಗೆ ಕೊಟ್ಟರೆ ಅವನು ಸರಿಯಾಗಬಹುದು. ಅವ ಕೇರಳಕ್ಕೆ ಬಂದಾಗ ಸೆಕ್ಯುಲರ್, ತಮಿಳುನಾಡಿಗೆ ಹೋದಾಗ ನಾಸ್ತಿಕ ಆಗ್ತಾನೆ, ಗುಜರಾತ್ ಭಾಗಕ್ಕೆ ಹೋದಾಗ ಶಿವಭಕ್ತನಾಗುತ್ತಾನೆ. ಅಂತಾ ದೊಡ್ಡ ಹುಚ್ಚ ರಾಹುಲ್ ಗಾಂಧಿ ಎಂದು ಟೀಕೆ ಮಾಡಿದ್ದಾರೆ.

ಪ್ರತಿಭಟನೆಯಲ್ಲಿ ರಾಹುಲ್ ಗಾಂಧಿ ಪ್ರತಿಕೃತಿ ಧಹಿಸುವ ನಿರ್ಧಾರ ಮಾಡಿದ್ದರು. ಆದ್ರೆ ರಾಹುಲ್ ಗಾಂಧಿ ಪ್ರತಿಕ್ರಿತಿ ದಹಿಸಬೇಡಿ ಎಂದು ಪೊಲೀಸರು ಹೇಳಿದ್ದಾರೆ ಎಂದಿರುವ ಭರತ್ ಶೆಟ್ಟಿ, ಆ ರೀತಿ ಆದ್ರೆ ನಮ್ಮ ವರ್ಗಾವಣೆ ಆಗುತ್ತೆ ಎಂದು ಪೊಲೀಸರು ಹೇಳುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಪೊಲೀಸರು ಸಹ ನಮ್ಮ ಜೊತೆ ಪ್ರತಿಭಟನೆಗೆ ಬರಬಹುದು ಎಂದು ಹೇಳಿದರು. ಮಂಗಳೂರಿನ ಕಾವೂರಿನಲ್ಲಿ ನಡೆದ ಪ್ರತಿಭಟನೆಯಲ್ಲಿ ಸಂಸದ ಬ್ರಿಜೇಶ್ ಚೌಟ, ಶಾಸಕ ಭರತ್ ಶೆಟ್ಟಿ, ವೇದವ್ಯಾಸ ಕಾಮತ್ ಭಾಗಿಯಾಗಿದ್ದರು.

ಮುಂದುವರಿದು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ನೇರ ವಾಗ್ದಾಳಿ ನಡೆಸಿದ್ದ ರಾಹುಲ್ ಗಾಂಧಿ, ದೇಶದಲ್ಲಿ 24 ಗಂಟೆಯು ಬಿಜೆಪಿ ಹಾಗೂ ಆರ್‌ಎಸ್‌ಎಸ್ ದ್ವೇಷ ಹರಡುವುದರಲ್ಲಿ ನಿರತವಾಗಿದೆ.

## ಸನಾತನ ಧರ್ಮದ ರಕ್ಷಣೆಗಾಗಿ ಶಂಕರಾಚಾರ್ಯರ ಹೋರಾಟ: ಬ್ರಹ್ಮಾನಂದ ಶ್ರೀ

• ಉದಯವಾಹಿನಿ ಚಿತ್ತಾಪುರ

ಸನಾತನ ಧರ್ಮವನ್ನು ಉಳಿಸಲು ಶ್ರೀ ಶಂಕರಾಚಾರ್ಯರು ಸತತವಾಗಿ ಹೋರಾಟಮಾಡಿ ಸನಾತನ ಧರ್ಮವನ್ನು ಉಳಿಸಿ ನಮ್ಮ ಸಂಸ್ಕೃತಿಯನ್ನು ಬೆಳಿಸಿದ್ದಾರೆ ಎಂದು ಶಿರಳಗಿ ತಾಲ್ಲೂಕಿನ ಚೈತನ್ಯ ರಾಜಾರಾಮ್ ಕ್ಷೇತ್ರದ ಸಿದ್ದಾಪುರದ ಶ್ರೀಗಳಾದ ಶ್ರೀ ಬ್ರಹ್ಮಾನಂದ ಭಾರತಿ ತೀರ್ಥರು ಉಪನ್ಯಾಸ ನೀಡಿದರು.

ಪಟ್ಟಣದ ಬ್ರಾಹ್ಮಣ ಗಲ್ಲಿಯಲ್ಲಿರುವ ರಾಘವೇಂದ್ರ ಮಠದಲ್ಲಿ ಶ್ರೀ ಶಂಕರ ಉಪದೇಶಾಮೃತ ಉಪನ್ಯಾಸ ಕಾರ್ಯಕ್ರಮದಲ್ಲಿ ವಿಪ್ರ ಬಾಂಧವರಿಗೆ ಉಪನ್ಯಾಸ ನೀಡಿದ ಅವರು ಶಂಕರಾಚಾರ್ಯರು ಜಗತ್ತಿನಲ್ಲಿ ತನ್ನದೆ ಆದ ಅಸ್ತಿತ್ವವನ್ನು ಕಾಪಾಡಿಕೊಂಡು ಬಂದಿರುವ ಸನಾತನ ಧರ್ಮವನ್ನು ಉಳಿಸಲು ಅಖಂಡ ಭಾರತವನ್ನು ಒಂದು ಮಾಡಿ ನಾಲ್ಕು ದಿಕ್ಕುಗಳಲ್ಲಿ ಶಾಖಾಮಠಗಳನ್ನು ಸ್ಥಾಪನೆ ಮಾಡಿ ಅವತ್ತಿನಿಂದ ಇವತ್ತಿನ ವರೆಗೆ ಸನಾತನ ಧರ್ಮವನ್ನು ಎತ್ತಿ ಹಿಡಿದು ರಕ್ಷಣೆ ಮಾಡಿದ್ದಾರೆ. ಭಾರತದಲ್ಲಿ ಬ್ರಿಟಿಷರು, ಫ್ರೇಂಚರು, ಮೋಗಲರು ಬಂದು ಸನಾತನ ಧರ್ಮವನ್ನು ಅಳಿಸಲು ಸಾಕಷ್ಟು ಪ್ರಯತ್ನ ಮಾಡಿದರು ಅದರಂತೆ ವಿದೇಶದ ಅನೇಕ ಮತಗಳು ಸರ್ವನಾಶವಾಗಿ ಹೋದವು ಆದರೆ ಸನಾತನ ಸಂಸ್ಕೃತಿ ನಾಶವಾಗಲಿಲ್ಲ ಮತ್ತೆ ಮುಂದೆಯೂ ನಾಶವಾಗುವುದಿಲ್ಲ ಯಾಕಂದರೆ ಯತಿ ವರಣ್ಯ ಶಂಕರಾಚಾರ್ಯರು ಎಲ್ಲವನ್ನು ಸಂಸ್ಕೃತಿಯ ಉಳಿವಿಗಾಗಿ ಸಮರ್ಪಣೆ ಮಾಡಿದ್ದಾರೆ ಇಂಥವರಿಗೆ ಕೃತಜ್ಞತೆ ಸಲ್ಲಿಸಲು ಪೂಜೆ, ಆರಾಧನೆ, ಪ್ರಾರ್ಥನೆ ಮಾಡಿದರೆ ಸಾಲದು ಹೊರತಾಗಿ ನಮ್ಮ ಸನಾತನ ಧರ್ಮದ ಬಗ್ಗೆ, ಉಪನಿಷತ್ತು, ಭಗವದ್ಗೀತೆ, ಶ್ರೀ ಶಂಕರಾಚಾರ್ಯರ ಬಗ್ಗೆ ಜನರಿಗೆ ಜಾಗೃತಿ ಮೂಡಿಸಬೇಕು ಇದರ ಅರ್ಥಗಳಿಂದ, ಶಂಕರಾಚಾರ್ಯರ ಉಪದೇಶಗಳಿಂದ, ಭಗವದ್ಗೀತೆಯ ಸಾರದಿಂದ ನಮ್ಮ ಬದುಕಿನ ಜೊತೆಗೆ ಪ್ರಪಂಚದ ಎಲ್ಲರ ಬದುರು ಸುಂದರವಾಗಿಸಲು ಸಾಧ್ಯ ಎಂದು ಉಪದೇಶ ಮಾಡಿದರು.


ಉದಯವಾಹಿನಿ ಚಿತ್ರ

**ನಾಲ್ಕು ದಿಕ್ಕುಗಳಲ್ಲಿ ಶಾಖಾಮಠ ಸ್ಥಾಪನೆ**

ಈ ಕಾರ್ಯಕ್ರಮದ ಅಂಗವಾಗಿ ಶೃತಿ ಜಾನಿಬ್, ಉಮಾ ದೇಶಪಾಂಡೆ, ಸಕ್ಕುಬಾಯಿ ಕುಲಕರ್ಣಿ, ಮತ್ತು ಅನೇಕ ಮಹಿಳೆಯರಿಂದ ಭಜನಾ ಕಾರ್ಯ ಕ್ರಮವನ್ನು ನಡೆಸಿಕೊಟ್ಟರು. ಶ್ರೀ ಬ್ರಹ್ಮಾನಂದ ಭಾರತಿ ತೀರ್ಥರ ಆಗಮನಕ್ಕೆ ವಿಪ್ರರು ಸಾಂಪ್ರದಾಯಿಕ ಉಡುಪಿನಲ್ಲಿ ಸ್ವಾಗತ ಕೋರಿದರು. ಈ ಸಂದರ್ಭದಲ್ಲಿ ರಾಘವೇಂದ್ರ ಮಠದ ಅರ್ಚಕ ಗುರುರಾಜಾ ಆಚಾರ್ಯ,ಸಮಾಜದ ಅಧ್ಯಕ್ಷ ಗಿರಿಶ್ ಜಾನಿಬ್, ಕಾರ್ಯದರ್ಶಿ ಅನಂತನಾಗ ದೇಶಪಾಂಡೆ ಸೇರಿದಂತೆ ವಿಪ್ರ ಸಮಾಜದ ಅನೇಕ ಮುಖಂಡರು ಮತ್ತು ಮಹಿಳೆಯರು ಇದ್ದರು.

## ಕಾಳಜಿ ಕೇಂದ್ರಗಳಲ್ಲಿ ಜನರಿಗೆ ಆಶ್ರಯ

• ಉದಯವಾಹಿನಿ ಕಾರವಾರ

ಜಿಲ್ಲೆಯಲ್ಲಿ ಕರಾವಳಿ ಭಾಗದಲ್ಲಿ ವ್ಯಾಪಕ ಮಳೆಯಾಗಿದ್ದು, ಹೊನ್ನಾವರ ತಾಲ್ಲೂಕಿನಲ್ಲಿ ತೆರೆಯಲಾದ 8 ಕಾಳಜಿ ಕೇಂದ್ರಗಳಲ್ಲಿ 313 ಮಂದಿ ಆಶ್ರಯ ಪಡೆದಿದ್ದು, ಅವರಿಗೆ ಎಲ್ಲಾ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಲಕ್ಷ್ಮೀಪ್ರಿಯಾ ತಿಳಿಸಿದ್ದಾರೆ.

ಈ ಬಗ್ಗೆ ಮಾಧ್ಯಮಗಳಿಗೆ ಮಾಹಿತಿ ನೀಡಿರುವ ಅವರು, ಮುನ್ನೆಚ್ಚರಿಕೆಯ ಕ್ರಮವಾಗಿ ಕುಮಟಾ ಹಾಗೂ ಹೊನ್ನಾವರ ತಾಲ್ಲೂಕುಗಳಲ್ಲಿನ ಶಾಲಾ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಜಿಲ್ಲೆಯಲ್ಲಿ ತೀವ್ರ ಮಳೆಯಿಂದ ತೊಂದರೆಗೊಳಗಾದ ವಿವಿಧ ಗ್ರಾಮಗಳ ಸಾರ್ವಜನಿಕರಿಗೆ ಅಗತ್ಯವಿದ್ದಲ್ಲಿ ಇನ್ನೂ ಹೆಚ್ಚಿನ ಕಾಳಜಿ ಕೇಂದ್ರಗಳನ್ನು ತೆರೆಯುವಂತೆ ಸಂಬಂಧಪಟ್ಟ ತಾಲ್ಲೂಕುಗಳ ತಹಶೀಲ್ದಾರ್ ಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

**ಕರಾವಳಿ ಭಾಗದಲ್ಲಿ ವ್ಯಾಪಕ ಮಳೆ**


ಕಾಳಜಿ ಕೇಂದ್ರಗಳಲ್ಲಿ ಆಶ್ರಯ ಪಡೆದಿರುವವರಿಗೆ ಎಲ್ಲಾ ಅಗತ್ಯ ಮೂಲಭೂತ ಸೌಕರ್ಯಗಳೊಂದಿಗೆ ಊಟದ ವ್ಯವಸ್ಥೆ ಮತ್ತು ರಾತ್ರಿ ತಂಗಲು ಅಗತ್ಯವಿರುವ ಎಲ್ಲಾ ಸೌಕರ್ಯಗಳನ್ನು ಒದಗಿಸಲಾಗಿದ್ದು, ವೈದ್ಯರ ತಂಡದಿದ ಆರೋಗ್ಯ ಪರಿಶೀಲನೆ ಮತ್ತು ಅಗತ್ಯವಿರುವ ಔಷಧ ಸೌಲಭ್ಯವನ್ನು ಒದಗಿಸಲಾಗಿದೆ.

## ಮೋಟಾರ್ ಕಳವು : ಕೆಆರ್‌ಎಸ್ ಪಕ್ಷದಿಂದ ದೂರು

• ಉದಯವಾಹಿನಿ ಸಿಂಧನೂರು

ತಾಲ್ಲೂಕಿನ ವಿರುಪಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಲ್ಲದಗುಡ್ಡ ಗ್ರಾಮದ ಕುಡಿಯುವ ನೀರಿನ ಕೊಳವೆ ಬಾವಿಗೆ ಅಳಡಿಸಲು ಖರೀದಿಸಿದ್ದ 5 ಹೆಚ್ ಪಿ ಮೋಟಾರ್ ಕಳುವಾಗಿದ್ದು

ಅದನ್ನ ಹುಡುಕಿ ಕೊಡುವಂತೆ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದಿಂದ ಪಿಡಿಓ ಹುಚ್ಚಪ್ಪ ಅವರಿಗೆ ಸೋಮವಾರ ದೂರು ಸಲ್ಲಿಸಲಾಯಿತು. ವಿರುಪಾಪುರ ಗ್ರಾಮ ಪಂಚಾಯತಿ ವ್ಯಾಪ್ತಿಯ ಮಲ್ಲದ ಗುಡ್ಡ ಗ್ರಾಮದ ಜನರಿಗೆ ಕುಡಿಯುವ ನೀರು ಪೂರೈಸಲು ಕಳೆದ ವರ್ಷ ಗ್ರಾಮ ಪಂಚಾಯಿತಿಯಿಂದ 20,000 ವೆಚ್ಚದಲ್ಲಿ ಮೋಟರ್ ಖರೀದಿಸಲಾಗಿತ್ತು. ವಿದ್ಯುತ್ ಕೊರತೆಯ ಕಾರಣಕ್ಕಾಗಿ ಅಳವಡಿಸಲು ಸಾಧ್ಯವಾಗಲಿಲ್ಲ ಅದನ್ನು ಎಲ್ಲರ ಒಪ್ಪಿಗೆ ಮೇರೆಗೆ ಅದೇ ಗ್ರಾಮದ ಪಂಚಾಯಿತಿ ಸದಸ್ಯನ ಮನೆಯಲ್ಲಿ ಹಿಡಲಾಗುತ್ತೂ. ಈಗ ಐದು ಎಚ್ ಪಿ ಮೋಟಾರ್‌ಗೆ ಜೋಡಿಸಲು ವಿದ್ಯುತ್ ಸೌಕರ್ಯ ಕಲ್ಪಿಸಲಾಗಿದೆ ಆದರೆ ಪಂಚಾಯತಿ ಸದಸ್ಯರ ಮನೆಯಲ್ಲಿ ಇರಿಸಲಾಗಿದ್ದ ಮೋಟಾರ್ ಕಳುವಾಗಿದೆ ಎಂದು ಹೇಳುತ್ತಿದ್ದಾರೆ.


ಉದಯವಾಹಿನಿ ಚಿತ್ರ

ಜನರು ಕುಡಿಯುವ ನೀರಿನ ಕೊರತೆ ಅನುಭವಿಸುತ್ತಿ ದ್ದಾರೆ. ಕೂಡಲೇ ಅಧಿಕಾರಿಗಳು ಕಳವಾದ ಮೋಟಾರ್ ಹುಡುಕಿಸಿ ಮೋಟರ್ ಕಳ್ಳತನ ಮಾಡಿದ ವ್ಯಕ್ತಿಯ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಹಾಗೂ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಬೇಕೆಂದು ಕೆಆರ್ ಎಸ್ ಪಕ್ಷದಿಂದ ಒತ್ತಾಯಿಸಿದರು. ಮನವಿ ಪತ್ರ ಸಲ್ಲಿಕೆ ಸಂದರ್ಭದಲ್ಲಿ ಕೆಆರ್‌ಎಸ್ ಪಕ್ಷದ ಯುವ ಮುಖಂಡರಾದ ನಿರುಪಾದಿ ಕೆ ಗೋಮರ್ಸಿ ತಾಲ್ಲೂಕ ಕಾರ್ಯದರ್ಶಿ ಶರಣಪ್ಪ ಬೇರಿಗೆ , ಬಸವರಾಜ್ ಮಲ್ಲದಗುಡ್ಡ ಸೇರಿದಂತೆ ಇನ್ನು ಹಲವಾರು ಜನ ಸೇರಿದ್ದರು.

## ಸಾಂವಿಧಾನಿಕ ಹುದ್ದೆಯಲ್ಲಿರುವವರಿಂದಲೇ ದ್ವೇಷ ರಾಜಕಾರಣ

• ಉದಯವಾಹಿನಿ ಚಿತ್ತಾಪುರ

ಸಾಂವಿಧಾನಿಕ ಹುದ್ದೆಯಲ್ಲಿ ಇರುವವರೇ ನೇರ ಜಾತಿ ಮತ್ತು ದ್ವೇಷದ ರಾಜಕಾರಣ ಮಾತನಾಡುತ್ತಿರುವುದು ವಿಪರ್ಯಾಸದ ಸಂಗತಿ ಎಂದು ಹೋರಾಟಗಾರ ಮತ್ತು ನ್ಯಾಯವಾದಿ ನಾಗೇಂದ್ರ ಜವಳಿ ಹೇಳಿದರು.

ತಾಲ್ಲೂಕಿನ ವಾಡಿ ಪಟ್ಟಣದ ಡಾ. ಅಂಬೇಡ್ಕರ್ ಸ್ಮಾರಕ ಭವನದಲ್ಲಿ ರವಿವಾರ ಸಂಚಲನ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ಹಮ್ಮಿಕೊಂಡಿದ್ದ ದ್ವೇಷದ ಮನಸುಗಳ ಸಡುವೆ ಪ್ರೀತಿಯ ರಾಜಕಾರಣ ಕವಿಗೋಷ್ಠಿ ಕಾರ್ಯಕ್ರಮ ನಾಗೇಂದ್ರ ಜವಳಿ ಉದ್ಘಾಟಿಸಿ ಮಾತನಾಡಿ, ಮಲ್ಲಿಕಾರ್ಜುನ್ ಖರ್ಗೆ ಅವರಿಗಿಂತ ಜೈರಾಮ ಸಮೇಶ ಸೂಕ್ತ ಎನ್ನುವ ಮೂಲಕ ತಮ್ಮ ದಲಿತ ವಿರೋಧಿ ಮುಖವನ್ನು ತೋರಿಸಿದ್ದಾರೆ. ಇದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು. ಯುವ ಬರಹಗಾರರಾದ ಡಾ. ಕೈಲಾಶ ಘೋಣಿ ಮಾತನಾಡಿ, ಹಲವು ಸಂಘಟನೆಗಳು ಆಯೋಜಿಸುವ ತಾಲ್ಲೂಕು, ಜಿಲ್ಲಾ, ರಾಜ್ಯ ಸಮ್ಮೇಳನದಲ್ಲಿ ಅವಕಾಶ ಸಿಕ್ಕಿಲ್ಲ ಎಂದು ಕೊರಗುವುದು ಬೇಡಿ ಅವೆಲ್ಲವೂ ಸಾಹಿತ್ಯ ರಾಜಕಾರಣ. ಆದರೆ, ಸಂಚಲನ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ಮಾಡುತ್ತಿರುವುದು ಪ್ರೀತಿಯ ರಾಜಕಾರಣ. ಇಲ್ಲಿ ವಾಚನಮಾಡಿದ 17 ಜನ ಕವಿಗಳ ಎಲ್ಲಾ ಕವಿತೆಗಳು ಅದ್ಭುತ ಹಾಗೂ ದ್ವೇಷದ ರಾಜಕಾರಣದಿಂದ ಪ್ರೀತಿಯ ರಾಜಕಾರಣದ ಕಡೆಗೆ ಕರೆ ಕೊಡುತ್ತಿದ್ದವು ಎಂದರು.



ಉದಯವಾಹಿನಿ ಚಿತ್ರ

ವೇದಿಕೆ ಅಧ್ಯಕ್ಷ ಕಾಶೀನಾಥ ಹಿಂದಿನಕೇರಿ, ಶ್ರೀಶೈಲ ಹೊಸಮನಿ, ಖೇಮಲಿಂಗ ಬೆಳಮಗಿ, ಗುರುಪ್ರಸಾದ ವೈದ್ಯ, ಪ್ರಿಯಾಂಕಾ ಮಾವಿನಕರ, ದೇವಿಂದ್ರ ಕರದಳ್ಳಿ, ಮಲ್ಲೇಶ ನಾಟೇಕರ್, ವೀರಣ್ಣ ಯಾರಿ, ರವಿ ಕೋಳಕೂರ, ದಯಾನಂದ ಖಜೂರಿ, ಕೃಷ್ಣ. ವಿ.ಅಚೋಲಿ, ಜಗನ್ನಾಥ ಹಂದರ್ಕಿ, ಬೀರಲಿಂಗ ಪೂಜಾರಿ, ಶ್ರೀನಿವಾಸ ರೆಡ್ಡಿ ರಾಯಚೂರು, ಧರಣಪ್ಪ ಮಂಗಳೂರು, ವಿಕ್ರಮ್ ತೇಜಸ್, ರವಿಕುಮಾರ ಮುತ್ತಗಿ ಕವನ ವಾಚನ ಮಾಡಿದರು. ಮಲ್ಲೇಶ ನಾಟೇಕರ ಸ್ವಾಗತಿಸಿದರು, ಶ್ರಾವಣಕುಮಾರ ಮೋಸಲಗಿ ನಿರುಪಿಸಿದರು. ರಾಯಪ್ಪ ಕೊಟಗಾರ ಅವಂದಿಸಿದರು.

> ನಮ್ಮ ಚಳುವಳಿಗಳು ದಿಕ್ಕು ತಪ್ಪಿವೆ ಹಾಗಾಗಿ, ಈ ದೇಶದ ಹೊಸ ಚರಿತ್ರೆ ಬರೆಯುವ ಮೂಲಕ ಈ ದೇಶದಲ್ಲಿ ಸಾಹಿತ್ಯ ರಾಜಕಾರಣ ಮಾಡಬೇಕು. ಲಂಕೇಶರು ಕುಡಿದ ಸಿಗರೇಟು ಶ್ರೇಷ್ಠ ವಾಗುತ್ತದೆ, ಆನಂದ ಲಕ್ಕೂರು ಅವರ ಕುಡಿತ ಕನಿಷ್ಠವಾಗುತ್ತದೆ. ಇದು ಒಂದು ರೀತಿಯ ರಾಜಕಾರಣ. ಇಂತಹ ಮನಸ್ಥಿತಿಗೆ ಕೊನೆಹಾಡಿ ಹೊಸ ಸಾಹಿತ್ಯ ಯುವ ಬರಹಗಾರರು ಕಟ್ಟಬೇಕು
> -ನ್ಯಾಯವಾದಿ ನಾಗೇಂದ್ರ ಜವಳಿ

## ಭಾವ ಭಕ್ತಿಯಿಂದ ಶಾಂತಿಯುತವಾಗಿ ಮೊಹರಂ ಹಬ್ಬ ಆಚರಿಸಿ: ಯರಿಯಪ್ಪ

• ಉದಯವಾಹಿನಿ ಸಿಂಧನೂರು

ಐತಿಹಾಸಿಕ ಬಳಗಾನೂರ ಮೊಹರಂ ಹಬ್ಬವನ್ನು ಶಾಂತಿಯುತವಾಗಿ ಅಚ್ಚುಕಟ್ಟಾಗಿ ಆರಿಸಬೇಕೆಂದು ಬಳಗಾನೂರ ಪಟ್ಟಣದಲ್ಲಿ ನಡೆದ ಮೊಹರಂ ಹಬ್ಬದ ಶಾಂತಿ ಸಭೆಯಲ್ಲಿ ಬಳಗಾನೂರ ಪೋಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಯರಿಯಪ್ಪ ಮಾತನಾಡಿದರು.

ಬಳಗಾನೂರ ಪಟ್ಟಣದಲ್ಲಿ ಸುಮಾರು ಏಳು ಮಸೀದಿಯಲ್ಲಿ ಪೀರಲ್ ದೇವರು ಕೂಡಿಸುತ್ತಾ. ಹಬ್ಬ ಆಚರಣೆ ಮಾಡುತ್ತಿರುವುದು ಇಡೀ ಸಿಂಧನೂರು ಮತ್ತು ಮಸ್ಕಿ ತಾಲ್ಲೂಕಿನಲ್ಲಿಯೇ ಅತ್ಯಂತ ಹೆಚ್ಚು ಮಸೀದಿಯನ್ನು ಹೊಂದಿರುವದು ಹಿಂದೂ ಮುಸ್ಲಿಂ ಭಾವೈಕ್ಯತೆಗೆ ಎರಡು ತಾಲ್ಲೂಕು ಸಾಕ್ಷಿಯಾಗಿದೆ.


ಉದಯವಾಹಿನಿ ಚಿತ್ರ

ಇಲ್ಲಿನ ಎರಡು ತಾಲ್ಲೂಕಿಗೆ ಒಳಪಡುವ ಕೆಲವೊಂದು ಊರಿನ ಜನರು ವಿವಿಧ ಊರುಗಳಿಂದ ಬಂದಿರುವಂತ ಜನರಿಗೆ ಹೊಂದಾಣಿಕೆ ಮನೋಭಾವನೆ ಪ್ರೀತಿ ವಿಶ್ವಾಸ ದಿಂದ ಮತ್ತು

**ಭಾವೈಕ್ಯತೆಗೆ ಎರಡು ತಾಲ್ಲೂಕು ಸಾಕ್ಷಿ**

ಈ ಸಂದರ್ಭದಲ್ಲಿ ಯಾವುದೇ ಚ್ಯುತಿ ಬರದಂತೆ ಹಬ್ಬ ಆಚರಿಸಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ.ಮರೇಗೌಡ ಮಾಲೀಪಾಟೀಲ್, ಬಳಗಾನೂರ ಪಟ್ಟಣದ ಮುಸ್ಲಿಂ ಸಮುದಾಯದ ಮುಖಂಡರಾದ ಶೆಕ್ಷಾವಲಿ ಜಾಗೀರದಾರ, ಮೋದಿನ್ ಪಾಷಾ ಮುಲ್ಲಾರ್, ಮುಖಂಡರಾದ ಮಹಾಬಳೇಶ, ಬಿ. ತಿಕ್ಕಯ್ಯ, ದಲಿತ ಸಂರಕ್ಷ ಸಮಿತಿಯ ಜಿಲ್ಲಾ ಉಪಾಧ್ಯಕ್ಷರಾದ ಬಿ. ಮೌನೇಶ ಬಳಗಾನೂರ, ಗಣೇಶ ಡಿಶ್, ಇನ್ನಿತರರು ಇದ್ದರು.

## ಅಂಗನವಾಡಿ ಕೇಂದ್ರ ಸ್ಥಳಾಂತರ

• ಉದಯವಾಹಿನಿ ಕೊಪ್ಪಳ

ಶಿಥಿಲಗೊಂಡು ಅವ್ಯವಸ್ಥೆಯ ಗೂಡಾಗಿದ್ದ ಇಲ್ಲಿನ ದಿಡ್ಡಿ ಓಣಿಯಲ್ಲಿರುವ ಅಂಗನವಾಡಿ ಕೇಂದ್ರವನ್ನು ಸ್ಥಳಾಂತರ ಮಾಡಲಾಗಿದೆ.

ಮೇಲಧಿಕಾರಿಗಳ ಸೂಚನೆ ಮೇರೆಗೆ ಕೊಪ್ಪಳ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ರೂಪಾ ಗಂಧದ ಹಾಗೂ ವಲಯದ ಹಿರಿಯ ಮೇಲ್ವಿಚಾರಕಿ ಭುವನೇಶ್ವರಿ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಬೇರೆ ಕಡೆ ಇದ್ದ ಕೇಂದ್ರವನ್ನು ಎರಡು ತಿಂಗಳ ಹಿಂದೆ ಶಿಥಿಲ ಕಟ್ಟಡಕ್ಕೆ ಸ್ಥಳಾಂತರಿಸಲಾಗಿತ್ತು. ಈ ಎರಡೂ ಕಟ್ಟಡಗಳ ಮಾಲೀಕರು ಒಬ್ಬರೇ ಇದ್ದು ಕೇಂದ್ರವನ್ನು ಸ್ಥಳಾಂತರ ಮಾಡಿದ ಬಗ್ಗೆ ಅಂಗನವಾಡಿ ಕಾರ್ಯಕರ್ತೆ ಮೇಲಧಿಕಾರಿಗೆ ಮಾಹಿತಿ ನೀಡಿರಲಿಲ್ಲ ಎನ್ನುವ ವಿಷಯವೂ ಬಹಿರಂಗವಾಗಿದೆ.

ಕೇಂದ್ರಕ್ಕೆ ತೆರಳಿದ ಅಧಿಕಾರಿಗಳು ಅಲ್ಲಿಯೇ ಬಾಲವಿಕಾಸ ಸಮಿತಿ ಸಭೆ ನಡೆಸಿ ಸಮೀಪದ ಸರ್ಕಾರಿ ಹಿರಿಯ ಪ್ರಾಥಮಿಕ ಉರ್ದು ಶಾಲೆಗೆ ದಿಡ್ಡಿ ಕೇರಿಯ ಅಂಗನವಾಡಿ ಕೇಂದ್ರವನ್ನು ಸ್ಥಳಾಂತರಿಸಿದರು.

# ಡಿಜಿಟಲ್ ಸುನಾಮಿ ನಡುವೆ ಪತ್ರಿಕಾ ರಂಗದ ಗಮನಾರ್ಹ ಬೆಳವಣಿಗೆ

### ಪತ್ರಕರ್ತ ಆತಂಕ ಸವಾಲುಗಳ ನಡುವೆಯೂ ಸ್ಮಾರ್ಟ್ ಫೋನ್‌ಗಳ ಪರಿಣಾಮದ ಮಧ್ಯೆ ಕಾರ್ಯ ಮಾಡಬೇಕಾಗಿದೆ: ಪೆರ್ಲ

• ಉದಯವಾಹಿನಿ ಕಲಬುರಗಿ

ಡಿಜಿಟಲ್ ಸುನಾಮಿಯ ಕಾಲಘಟ್ಟದಲ್ಲೂ ಪತ್ರಿಕಾ ಕ್ಷೇತ್ರದ ವ್ಯವಹಾರವು 45,000 ಕೋಟಿ ರೂ.ಯಷ್ಟಾಗಿ ಬೆಳೆದಿರುವುದು ಭಾರತದ ಪತ್ರಿಕಾ ರಂಗದ ಬೆಳವಣಿಗೆಯ ದ್ಯೋತಕ ಎಂದು ಆಕಾಶವಾಣಿಯ ಹಿರಿಯ ನಿವೃತ್ತ ಕಾರ್ಯಕ್ರಮ ನಿರ್ವಹಣಾಧಿಕಾರಿ ಡಾ.ಸದಾನಂದ ಪೆರ್ಲ ಅಭಿಪ್ರಾಯ ಪಟ್ಟರು.

ಕಲ್ಬುರ್ಗಿಯ ಗೋದೂತಾಯಿ ದೊಡ್ಡಪ್ಪ ಅಪ್ಪ ಕಾಲೇಜಿನ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಮಂಗಳವಾರ ನಡೆದ ''ಪತ್ರಿಕಾ ದಿನ'' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಐದು ವರ್ಷಗಳ ಹಿಂದೆ ಭಾರತ ಪತ್ರಿಕಾ ರಂಗದ ವ್ಯವಹಾರವು ರೂ. 30 ಸಾವಿರ ಕೋಟಿ ಇದ್ದು ಈಗ ಅದು 45 ಸಾವಿರ ಕೋಟಿ ರೂಪಾಯಿಯಷ್ಟಾಗಿದೆ. ಆದಾಯದಲ್ಲಿ ಶೇಕಡ 65 ರಷ್ಟು ಹೆಚ್ಚಳವಾಗಿದ್ದು ಪತ್ರಿಕೆಗಳ ಪ್ರಸಾರ ಶೇಕಡ 15 ರಷ್ಟು ಹೆಚ್ಚಳವಾಗಿದೆ.


ಉದಯವಾಹಿನಿ ಚಿತ್ರ

**ಡಿಜಿಟಲ್ ಹಾವಳಿ ತಡೆಗೆ ಪರ್ಯಾಯ ವ್ಯವಸ್ಥೆ**

ಪತ್ರಿಕೆಗಳ ಮುದ್ರಣ ಹಾಗು ಪ್ರಸಾರ ಕುಸಿತಕ್ಕೆ ಕಾರಣವಾಗುವ ಭಯದ ನಡುವೆ ಡಿಜಿಟಲ್ ಹಾವಳಿ ತಡೆಗೆ ಪರ್ಯಾಯ ವ್ಯವಸ್ಥೆ ಗಳೊಂದಿಗೆ ಸ್ಮಾರ್ಟ್ ಆಗಿ ಕೆಲಸ ನಿರ್ವಹಿಸುವ ಕಾಲ ಕೂಡಿಬಂದಿದೆ.

> ಪತ್ರಿಕೋದ್ಯಮ ಪೂರ್ಣಗೊಳಿಸಿದ ವಿದ್ಯಾರ್ಥಿಗಳು ಪತ್ರಿಕೆ, ರೇಡಿಯೋ ಟಿವಿ, ಬಹುರಾಷ್ಟ್ರೀಯ ಕಂಪನಿಗಳ ಸಾರ್ವಜನಿಕ ಸಂಪರ್ಕ ಹುದ್ದೆ, ವಿಶ್ವವಿದ್ಯಾಲಯ ಮತ್ತು ಕಾಲೇಜುಗಳ ಪತ್ರಿಕೋದ್ಯಮ ಮತ್ತು ಸಮೂಹ ಸಮೂಹನ ಭಾಗಗಳಲ್ಲಿ ಉಪನ್ಯಾಸಕರಾಗುವ ಮತ್ತು ಸಚಿವಾಲಯಗಳಲ್ಲಿ ಮಾಧ್ಯಮ ಸಲಹೆಗಾರರಾಗುವ ವಿಫಲ ಉದ್ಯೋಗಾವಕಾಶಗಳು ಸೃಷ್ಟಿಯಾಗುತ್ತಿದ್ದು ನಿರಾಶೆ ಹೊಂದುವ ಆತಂಕ ಬೇಡ. ಪತ್ರಿಕೋದ್ಯಮ ರಂಗಕ್ಕೆ ಹೆಚ್ಚು ಹೆಚ್ಚು ವಿದ್ಯಾರ್ಥಿಗಳು ಆಸಕ್ತರಾಗಿ ಶಿಕ್ಷಣ ಹೊಂದಬೇಕು. -ಡಾ.ಪೆರ್ಲ

**ಅಭಿವೃದ್ಧಿ ಪರ ಕಾರ್ಯ**

ಜನರ ಕೈಗೆ ದೀಪ ಕೊಡುವ ಮತ್ತು ಅಭಿವೃದ್ಧಿ ಪರ ಕಾರ್ಯ ನಿರ್ವಹಿಸುತ್ತಿರುವ ಪತ್ರಕರ್ತ ಆತಂಕ ಸವಾಲುಗಳ ನಡುವೆಯೂ ಸ್ಮಾರ್ಟ್ ಫೋನ್‌ಗಳ ಪರಿಣಾಮದ ಮಧ್ಯೆ ಕಾರ್ಯ ಮಾಡಬೇಕಾಗಿದೆ. ಇದೀಗ ಪತ್ರಿಕಾ ರಂಗವು ಸ್ಮಾರ್ಟ್ ಆಗುವ ಕಾಲ ಪರಿಪಕ್ವವಾಗಿದೆ. ಭಾರತದಲ್ಲಿ ಇನ್ನೆರಡು ವರ್ಷಗಳಲ್ಲಿ ಮೂರನೇ ಒಂದರಷ್ಟು ಯುವಕರು 15 ಮತ್ತು 34ರ ವಯೋಮಾನದವರಾಗಲಿದ್ದು ಶೇ.60ರಷ್ಟು ಯುವಕರು ಅಂದರೆ 25 ಕೋಟಿಯಷ್ಟು ಜನರು ಸಾಮಾಜಿಕ ಜಾಲತಾಣವನ್ನು ಬಳಸುತ್ತಿದ್ದಾರೆ.

ಸಮಾರಂಭದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಪುಟ್ಟಮಣಿ ದೇವಿದಾಸ್ ಮಾತನಾಡಿ ಪತ್ರಿಕೋದ್ಯಮದ ವಿದ್ಯಾರ್ಥಿಗಳು ಪತ್ರಿಕೆ ,ವಿದ್ಯುನ್ಮಾನ ಮಾಧ್ಯಮ, ಸಾಮಾಜಿಕ ಜಾಲತಾಣಗಳನ್ನು ಬಳಸಿ ಜ್ಞಾನ ಸಂಪನ್ನರಾಗಬೇಕು ಎಂದರು.

ವಿಭಾಗದ ಮುಖ್ಯಸ್ಥರಾದ ಕೃಪಾಸಾಗರ್ ಗೊಬ್ಬೂರ್ ಸ್ವಾಗತಿಸಿ ಪ್ರಾಸ್ತಾವಿಕ ಭಾಷಣ ಮಾಡಿ ಹರ್ಮನ್ ಮೋಗ್ಲಿಂಗ್ ನಿಂದ ಆರಂಭಗೊಂಡು 181 ವರ್ಷ ಸಂದ ಕನ್ನಡ ಪತ್ರಿಕಾ ರಂಗವು ಇಂದು ಹೆಮ್ಮರವಾಗಿ ಬೆಳೆದಿದೆ ಎಂದರು. ಕಾರ್ಯಕ್ರಮದಲ್ಲಿ ಸಂಗೀತ ವಿಭಾಗದ ಮುಖ್ಯಸ್ಥರಾದ ಸೀಮಾ ಪಾಟೀಲ್, ವಾಣಿಜ್ಯ ವಿಭಾಗದ ಉಪನ್ಯಾಸಕರಾದ ಪ್ರಸಾದ ಅಷ್ಟಗಿ ಮತ್ತಿತರರು ಉಪಸ್ಥಿತರಿದ್ದರು. ಪತ್ರಿಕೋದ್ಯಮ ವಿದ್ಯಾರ್ಥಿನಿ ರಕ್ಷಿತಾ ದಾಮ ನಿರೂಪಿಸಿದರು. ಪತ್ರಿಕೋದ್ಯಮ ಮತ್ತು ಸಮೂಹ ಸಮೂಹನದ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಅಮೆರಿಕ ಕುಟುಂಬದ ಜೀವ ಉಳಿಸಿತು ತಂತ್ರಜ್ಞಾನ

## ನಡುರಾತ್ರಿ, ಗ್ಯಾಸ್ ಸ್ಟವ್ ಆನ್ ಮಾಡಿದ ಶ್ವಾನ, ಮನೆಯ ಮಾಲೀಕರಿಗೆ ಅತಿಯಾದ ಶಾಖದ ಎಚ್ಚರಿಕೆ ನೀಡಿದ ಡಿಜಿಟಲ್ ಸಾಧನ



ನಾಯಿಯ ಕರಾಮತ್ತು ಬೆಳಕಿಗೆ

**ಅಮೆರಿಕ:** ಅದೊಂದು ಸಾಕು ನಾಯಿ ನಡು ರಾತ್ರಿ ವೇಳೆ ಮನೆಯ ಎಲ್ಲಾ ಸದಸ್ಯರೂ ಗಾಢ ನಿದ್ರೆಯಲ್ಲಿ ಇದ್ದ ವೇಳೆ ಈ ಶ್ವಾನ ಗ್ಯಾಸ್ ಸ್ಟವ್ ಆನ್ ಮಾಡಿದೆ ಆದರೆ ತಂತ್ರಜ್ಞಾನ ಕುಟುಂಬ ಸದಸ್ಯರ ನೆರವಿಗೆ ಬಂದಿದೆ. ಇವರ ಮನೆಯಲ್ಲಿ ಆಪಲ್ ಕಂಪನಿಯ ಹೋಂ ಪಾಡ್ ಅನ್ನು ಅಳವಡಿಕೆ ಮಾಡಲಾಗಿತ್ತು. ಈ ಸಾಧನವು ಮನೆಯಲ್ಲಿನ ಕೆಲಸ ಕಾರ್ಯಗಳಿಗೆ ನೆರವು ನೀಡುತ್ತದೆ.

ಗೃಹೋಪಯೋಗಿ ವಸ್ತುಗಳ ಕಾರ್ಯ ನಿರ್ವಹಣೆಯಲ್ಲಿ ದೋಷ ಎದುರಾದರೆ ಈ ವಿಚಾರವಾಗಿ ಮನೆಯ ಮಾಲೀಕರಿಗೆ ಎಚ್ಚರಿಕೆ ನೀಡುತ್ತದೆ. ಸಾಕು ನಾಯಿಯು ಆಕಸ್ಮಿಕವಾಗಿ ಮನೆಯ ಗ್ಯಾಸ್ ಸ್ಟವ್ ಆನ್ ಮಾಡಿದಾಗ ಶಾಖ ಹೆಚ್ಚಾಗಿದೆ. ಅಡುಗೆ ಮನೆಯ ಕೆಲವು ವಸ್ತುಗಳಿಗೆ ಬೆಂಕಿ ತಗುಲಿದೆ. ಕೆಲವೇ ಕ್ಷಣಗಳಲ್ಲಿ ಈ ಶಾಖ ಅಡುಗೆ ಮನೆಯಲ್ಲಿ ಬೆಂಕಿ ಹೊತ್ತಿಕೊಳ್ಳಲು ಕಾರಣವಾಗುತ್ತದೆ ಎಂದು ಗ್ರಹಿಸಿದ ಸಾಧನ, ಮನೆಯ ಮಾಲೀಕರಿಗೆ ಅತಿಯಾದ ಶಾಖದ ಎಚ್ಚರಿಕೆ ನೀಡಿದೆ. ಆಪಲ್ ಹೋಂ ಪಾಡ್ ಸೈರನ್‌ನಿಂದ ಎಚ್ಚರಗೊಂಡ ಮನೆ ಮಂದಿ ಆನ್ ಆಗಿದ್ದ ಗ್ಯಾಸ್ ಸ್ಟವ್ ಆಫ್ ಮಾಡುವ ಜೊತೆಯಲ್ಲೇ ದೊಡ್ಡ ಮಟ್ಟದ ಅಗ್ನಿ ಅನಾಹುತ ಆಗದಂತೆ ತಡೆದರು. ಅಡುಗೆ ಮನೆಯಲ್ಲಿ ಹೊತ್ತಿಕೊಂಡಿದ್ದ ಬೆಂಕಿ ನಂದಿಸಿದರು. ಬಳಿಕ ಅಡುಗೆ ಮನೆಯಲ್ಲಿ ಅಳವಡಿಕೆ ಮಾಡಲಾಗಿದ್ದ ಸಿಸಿಟಿವಿ ಕ್ಯಾಮರಾದ ದೃಶ್ಯಾವಳಿ ಪರಿಶೀಲನೆ ನಡೆಸಿದ ವೇಳೆ ಸಾಕು ನಾಯಿಯ ಕರಾಮತ್ತು ಬೆಳಕಿಗೆ ಬಂದಿದೆ!

**ಚೇಷ್ಟೆ ಮಾಡುವವರನ್ನ ನಮ್ಮಲ್ಲಿ ಕೋತಿಗೆ ಹೋಲಿಕೆ ಮಾಡುತ್ತಾರೆ. ಆದರೆ, ಅಮೆರಿಕದಲ್ಲಿ ಸಾಕು ನಾಯಿಯೊಂದು ಕೋತಿ ಚೇಷ್ಟೆ ಮಾಡಿದೆ. ನಡುರಾತ್ರಿ, ಈ ನಾಯಿ ಮಾಡಿದ ಚೇಷ್ಟೆಯಿಂದ ಇಡೀ ಮನೆಯೇ ಅಗ್ನಿಗೆ ಆಹುತಿ ಆಗಬೇಕಿತ್ತು. ಆದರೆ, ತಂತ್ರಜ್ಞಾನದ ನೆರವಿನಿಂದ ಮನೆ ಹಾಗೂ ಮನೆ ಮಾಲೀಕರ ಜೀವ ಉಳಿದಿದೆ. ಆಕಸ್ಮಿಕವಾಗಿ ಗ್ಯಾಸ್ ಸ್ಟವ್ ಆನ್ ಮಾಡಿ ಅಡುಗೆ ಮನೆಯಲ್ಲಿ ಬೆಂಕಿ ಹೊತ್ತಿ ಕೊಳ್ಳಲು ಶ್ವಾನ ಕಾರಣವಾಗಿತ್ತು!**

ಅಮೆರಿಕದ ಕೊಲೊರಾಡೋ ರಾಜ್ಯದಲ್ಲಿ ಕಳೆದ ತಿಂಗಳು ನಡೆದ ಈ ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ. ಬೆಳಗಿನ ಜಾವ 4.40ರ ಸುಮಾರಿನಲ್ಲಿ ಮನೆ ಮಂದಿ ಸವಿ ನಿದ್ರೆಗೆ ಜಾರಿದ್ದ ವೇಳೆ ಈ ಘಟನೆ ನಡೆದಿದೆ. ಸಿಸಿಟಿವಿ ದೃಶ್ಯಾವಳಿಯಲ್ಲಿ ಶ್ವಾನವು ಅಡುಗೆ ಮನೆಯ ಕಟ್ಟೆಯ ಬಳಿ ಹೋಗಿ ತನ್ನ ಕಾಲಿನಲ್ಲಿ ಒತ್ತಿದ ಕಾರಣ ಗ್ಯಾಸ್ ಸ್ಟವ್ ಆನ್ ಆಗಿತ್ತು.

ಇನ್ನು ಗ್ಯಾಸ್ ಸ್ಟವ್ ಆನ್ ಆದ ಬಳಿಕ ನಾಯಿಯು ಅತ್ತಿಂದ ಇತ್ತ ಓಡಾಡಿದ ಪರಿಣಾಮ ಕೆಲವು ಡಬ್ಬಗಳು ಗ್ಯಾಸ್ ಸ್ಟವ್ ಬಳಿ ಉರುಳಿ ಅದಕ್ಕೂ ಬೆಂಕಿ ತಗುಲಿತ್ತು. ಅಡುಗೆ ಮನೆ ತುಂಬಾ ಬೆಂಕಿ, ಹೊಗೆ ತುಂಬಿತ್ತು. ಹೀಗಾಗಿ ಹೊಗೆ ಹೆಚ್ಚಳ ಆದ ಕೂಡಲೇ ಫೈರ್ ಅಲಾರ್ಮ್ ಕೂಡಾ ಬಡಿದುಕೊಂಡಿತ್ತು.


ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಮನೆಯನ್ನು ಸಮಗ್ರವಾಗಿ ಪರಿಶೀಲನೆ ನಡೆಸಿದರು. ಘಟನಾ ಸ್ಥಳದ ಸಿಸಿಟಿವಿಯನ್ನೂ ಪರಿಶೀಲನೆಗೆ ಒಳಪಡಿಸಿದರು. ಈ ವೇಳೆ ಶ್ವಾನದ ಕರಾಮತ್ತು ಬೆಳಕಿಗೆ ಬಂತು. ಅಗ್ನಿಶಾಮಕ ದಳ ತನ್ನ ಪರಿಶೀಲಿಸಿದ ಟ್ವಿಟ್ಟರ್ ಖಾತೆಯಲ್ಲಿ ಈ ವಿಡಿಯೋ ಪ್ರಕಟ ಮಾಡಿದ್ದು, ವೈರಲ್ ಆಗಿದೆ. ಇನ್ನು ಬೆಂಕಿ ಹಾಗೂ ಹೊಗೆಯಿಂದಾಗಿ ಅಸ್ವಸ್ಥರಾಗಿದ್ದ ಮನೆ ಮಾಲೀಕರನ್ನು ಕೂಡಲೇ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು.

ಅವರಿಗೆ ಯಾವುದೇ ಗಾಯಗಳಾಗಿಲ್ಲ. ಆದರೆ, ಹೊಗೆ ಸೇವನೆಯಿಂದ ಅಸ್ವಸ್ಥತೆಗೆ ತುತ್ತಾಗಿದ್ದರು. ಈ ಎಲ್ಲಾ ಎಡವಟ್ಟಿಗೂ ಕಾರಣವಾಗಿದ್ದ ನಾಯಿ ಮಾತ್ರ ಗಾಬರಿಯಿಂದ ಮೂಲೆಯಲ್ಲಿ ಮುದುರಿ ಕುಳಿತಿತ್ತು.

### ಎಚ್ಚರಿಕೆ ಸಂದೇಶ ರವಾನೆ

**ಈ ಸಂದರ್ಭದಲ್ಲಿ ಆಪಲ್ ಹೋಂ ಪಾಡ್ ಮನೆ ಮಂದಿಗೆ ಎಚ್ಚರಿಕೆ ಸಂದೇಶ ರವಾನೆ ಮಾಡಿತ್ತು. ಅತಿಯಾದ ಶಾಖದ ನೋಟಿಫಿಕೇಷನ್ ಕಳಿ ಸಿತ್ತು. ಇದೇ ಸಂದೇಶ ಅಗ್ನಿಶಾಮಕ ದಳಕ್ಕೂ ರವಾನೆ ಯಾಗಿತ್ತು ಆದರೆ, ಅಗ್ನಿಶಾಮಕ ದಳದ ಸಿಬ್ಬಂದಿ ತಮ್ಮ ವಾಹನದ ಜೊತೆ ದೌಡಾಯಿಸುವ ಮುನ್ನವೇ ಮನೆ ಮಂದಿ ಬೆಂಕಿ ನಂದಿಸಿ ಸಂಭಾವ್ಯ ಅನಾಹುತ ತಡೆದಿದ್ದರು.**

# ಭಾರತೀಯ ಕಲೆ, ಸಂಸ್ಕೃತಿಗೆ ಸಾಕ್ಷಿಯಾಗಲಿದೆ ನ್ಯೂಯಾರ್ಕ್‌ನ ಲಿಂಕನ್ ಸೆಂಟರ್



**ನ್ಯೂಯಾರ್ಕ್:** ಇಲ್ಲಿನ ಲಿಂಕನ್ ಸೆಂಟರ್‌ನಲ್ಲಿ ಇಂದು ಭಾರತೀಯ ಕಲೆ ಮತ್ತು ಸಂಸ್ಕೃತಿಯ ತಾಣವಾಗಿ ಮಾರ್ಪಡಾಗಲಿದೆ. ಇಂದಿನಿಂದ ಜು.14ರವರೆಗೆ ದೇಶದ ಸಂಗೀತ, ನತ್ಯ, ಕಲೆ, ಪಾಕಪದ್ಧತಿ ಮತ್ತು ಸಾಹಿತ್ಯಿಕ ಪ್ರತಿಭೆಗಳನ್ನು ಪ್ರದರ್ಶಿಸುವ ಹಬ್ಬವನ್ನು ಆಚರಿಸಲಾಗುತ್ತಿದೆ. ಜಾಗತಿಕ ಕಲಾತಕ ಮತ್ತು ಸಾಂಸ್ಕೃತಿಕ ಪ್ರದರ್ಶನಗಳಿಗೆ ನಗರದ ಕೇಂದ್ರವಾಗಿರುವ ಲಿಂಕನ್ ಸೆಂಟರ್, ಜುಲೈ 10-14 ರಂದು ಭಾರತೀಯ ಸಪ್ತಾಹ ವನ್ನು ಆಯೋಜಿಸುತ್ತದೆ, ಇದು ಭಾರತೀಯ ಸಂಸ್ಕೃತಿಯ ಸೌಂದರ್ಯ ಮತ್ತು ಚೈತನ್ಯವನ್ನು ಆಚರಿಸಲಾಗುತ್ತಿದೆ. ಸರಣಿಯು ಭಾರತದ ಸಾಂಸ್ಕೃತಿಕ ಭೂದಶ್ಯದ ಆಳವನ್ನು ಎತ್ತಿ ತೋರಿಸುವ ಹಲವಾರು ಉತ್ಸವಗಳಲ್ಲಿ ಪ್ರೇಕ್ಷಕರನ್ನು ಮುಳುಗಿಸುತ್ತದೆ ಎಂದು ಕೇಂದ್ರವು ತನ್ನ ವೆಬ್ ಸೈಟ್‌ನಲ್ಲಿ ತಿಳಿಸಿದೆ.

ವಾರದ ಪ್ರಮುಖ ಭಾಗವಾಗಿ ಪ್ರಸಿದ್ಧ ತಾಳವಾದ್ಯ ವಾದಕ ಪದಭೂಷಣ ಪ್ರಶಸ್ತಿ ಪುರಸ್ಕೃತ ವಿದ್ವಾನ್ ಟಿ.ಎಚ್. ವಿನಾಯಕರಂ, ಗ್ರ್ಯಾಮಿ-ನಾಮನಿರ್ದೇಶಿತ ಗಾಯಕಿ ಪ್ರಿಯಾ ದರ್ಶಿನಿ, ಪೀಬಾಡಿ ಪ್ರಶಸ್ತಿ ವಿಜೇತ ನಟ ಮತ್ತು ಬರಹಗಾರ ಆಸಿಫ್ ಮಾಂಡವಿ, ಹಾಸ್ಯನಟ ಹರಿ ಕೊಂಡಬೋಲು, ಎಮಿ-ನಾಮನಿರ್ದೇಶಿತ ನಿಮೆಶ್ ಬರಹಗಾರ ಮತ್ತು ಹಾಸ್ಯನಟರನ್ನು ಒಳಗೊಂಡ ಹಾಸ್ಯ ರಾತ್ರಿಯನ್ನು ಒಳಗೊಂಡಿರುತ್ತದೆ. ಪಟೇಲ್ ಮತ್ತು ಅಪರ್ಣಾ ನಾಂಚೆರ್ಲಾ ಅವರು ರೋಲಿಂಗ್ ಸ್ಟೋನ್ ಮೂಲಕ ಈಗಲೇ 50 ತಮಾಷೆಯ ವ್ಯಕ್ತಿಗಳಲ್ಲಿ ಒಬ್ಬರು ಎಂದು ಹೆಸರಿಸಿದ್ದಾರೆ.

ಇದರ ಜೊತೆಗೆ ರಾಜಮೌಳಿ ನಿರ್ದೇಶನದ ಆಸ್ಕರ್ ಪ್ರಶಸ್ತಿ ವಿಜೇತ ಆಕ್ಷನ್ ಬ್ಲಾಕ್‌ಬಸ್ಟರ್ ಆರ್‌ಆರ್‌ಆರ್ ಚಿತ್ರ ಪರ್ದಶನವಿರಲಿದೆ. ಸಂಗೀ ತ ಸಂಯೋಜಕ ಎಂ.ಎಂ. ಕೀರವಾಣಿ ಅವರು ಚಲನಚಿತ್ರದ ಚಾರ್ಟ್‌ಬಸ್ಟರ್ ನತ್ಯ ಸಂಖ್ಯೆ ನಾ ಟು ನಾಟು ಹಾಡಿಗಾಗಿ ಅತ್ಯುತ್ತಮ ಮೂಲ ಗೀತೆಗಾಗಿ ಅಕಾಡೆಮಿ ಪ್ರಶಸ್ತಿಯನ್ನು ಗೆದ್ದ ಮೊದಲ ಭಾರತೀಯ ಕಲಾವಿದರಾಗಿದ್ದಾರೆ.

ಗಾರ್ಬಾವನ್ನು ಆಚರಿ ಸುವ ಸಾಮಾಜಿಕ ನತ್ಯ ಕೂಟವಾದ ಪ್ರಖ್ಯಾತ ಡಿಜೆ ರೇಖಾ ಅವರು ಆಯೋಜಿಸಿರುವ ಮೂಕ ಡಿಸ್ಕೋಗಳನ್ನು ವಾರವು ಆಯೋಜಿಸುತ್ತದೆ, ಸಾಂಪ್ರದಾಯಿಕ ಭಾರತೀಯ ಸಂಗೀತ ಮತ್ತು ಕಲಾ ಪ್ರಕಾರಗಳನ್ನು ಪ್ರದರ್ಶಿಸುವ ವಾಚನಗೋಷ್ಠಿಗಳು ಮತ್ತು ಪ್ರದರ್ಶನಗಳು ಮತ್ತು ಸಾಹಿತ್ಯಿಕ ಕಾರ್ಯಕ್ರಮಗಳು ನೆರವೇರಲಿವೆ. ಘಟಂ, ಮಣ್ಣಿನ ಮಡಕೆ, ಭಾರತದ ಅತ್ಯಂತ ಪುರಾತನ ತಾಳವಾದ್ಯ ವಾದ್ಯಗಳಲ್ಲಿ ಒಂದಾಗಿದ್ದು, ವಿಕ್ಕು ಜಿ ತನ್ನ ಪುತ್ರರು ಮತ್ತು ಮೊಮಕ್ಕಳೊಂದಿಗೆ ಪ್ರದರ್ಶನ ನೀಡುವ ಮೂಲಕ ಕೇಂದ್ರ ಹಂತವನ್ನು ತೆಗೆದುಕೊಳ್ಳುತ್ತದೆ, ಇದು ಅದ್ಭುತವಾದ, ಮುಂದುವರಿದ ಪರಂಪರೆಯ ಶ್ರೇಷ್ಠ ಸಂಗೀತದ ಉದಾಹರಣೆಯಾಗಿದೆ ಎಂದು ಕೇಂದ್ರವು ಹೇಳಿದೆ.

### ಕರ್ನಾಟಕ ಸಂಗೀತದ ಸೆಟ್

**ವಾರದ ಅವಧಿಯ ಆಚರಣೆಗಳ ಪ್ರಮುಖ ಅಂಶವೆಂದರೆ ರಾಜಸ್ಥಾನಿ ಜಾನಪದ ಗುಂಪು, ಸುಮಿತ್ರಾ ದಾಸ್ ಗೋಸ್ವಾಮಿ ಅವರು ರಂಗ-ಎ-ಥಾರ್ ಅನ್ನು ಪ್ರಸ್ತುತಪಡಿಸುತ್ತಾರೆ, ಇದು ಪಶ್ಚಿಮ ರಾಜಸ್ಥಾನದ ಮರುಭೂಮಿಗಳಿಂದ ಸಾಂಪ್ರದಾಯಿಕ ಸಂಗೀತದ ಅಸಂಖ್ಯಾತ ಸುವಾಸನೆಗಳ ಮೂಲಕ ಅನನ್ಯ ಪ್ರದರ್ಶನ ವಾಗಿದೆ. ಪೌರಾಣಿಕ ತಾಳವಾದ್ಯ ವಾದಕರ ನೇತತ್ವದಲ್ಲಿ, ವಿನಾಯಕರಂ ಕುಟುಂಬವು ಪರಂಪರಾವನ್ನು ಪ್ರಸ್ತುತಪ ಡಿಸುತ್ತದೆ, ಇದು ತಾಳವಾದ್ಯ ಮತ್ತು ಹೆಚ್ಚು ಧ್ಯಾನಸ್ಥ, ಟ್ರಾನ್ಸ್ ತರಹದ ಕರ್ನಾಟಕ ಸಂಗೀತದ ಸೆಟ್ ಆಗಿದೆ.**

# ಸ್ಟ್ಯಾನ್ ಸ್ವಾಮಿ ಸಾವಿನ ಬಗ್ಗೆ ತನಿಖೆ ಅಮೆರಿಕ ಸಂಸತ್‌ನಲ್ಲಿ ನಿರ್ಣಯ ಮಂಡನೆ

**ವಾಷಿಂಗ್ಟನ್:** ಜೈಲಿನಲ್ಲಿಯೇ ಮೃತಪಟ್ಟ ಮಾನವ ಹಕ್ಕುಗಳ ಕಾರ್ಯಕರ್ತ ಫಾದರ್ ಸ್ಟ್ಯಾನ್ ಸ್ವಾಮಿ ಅವರ ಬಂಧನ ಮತ್ತು ಸಾವಿನ ಬಗ್ಗೆ ಸ್ವತಂತ್ರ ತನಿಖೆಯನ್ನು ನಡೆಸುವಂತೆ ಭಾರತ ಸರ್ಕಾರವನ್ನು ಒತ್ತಾಯಿಸಿ ಅಮೆರಿಕದ ಸಂಸತ್‌ನಲ್ಲಿ ನಿರ್ಣಯವೊಂದನ್ನು ಮಂಡಿಸಲಾಗಿದೆ. ಸಂಸದರಾದ ಜಿಮ್ ಮೆಕ್‌ಗವರ್ನ್, ಆಂಡ್ರೆ ಕಾರ್ಸನ್, ಜುವಾನ್ ವರ್ಗಾಸ್ ಸಂಸತ್ತಿನಲ್ಲಿ ಈ ನಿರ್ಣಯವನ್ನು ಮಂಡಿಸಿದ್ದಾರೆ. ನಿರ್ಣಯವು ಮಾನವ ಹಕ್ಕುಗಳ ರಕ್ಷಕರು ಮತ್ತು ರಾಜಕೀಯ ವಿರೋಧಿಗಳನ್ನು ಮಣಿಸಲು ಭಯೋತ್ಪಾದನೆ ವಿರೋಧಿ ಕಾನೂನುಗಳ ದುರುಪಯೋಗದ ಬಗ್ಗೆ ಕಳವಳ ವ್ಯಕ್ತಪಡಿಸಿದೆ. 'ಮಾನವ ಹಕ್ಕುಗಳ ಸಾರ್ವತ್ರಿಕ ಘೋಷಣೆ 19ನೇ ವಿಧಿಯಲ್ಲಿ ತಿಳಿಸಿರುವಂತೆ ಅಭಿವ್ಯಕ್ತಿ ಸ್ವಾತಂತ್ರ್ಯವು ಪ್ರತಿಯೊಬ್ಬ ನಾಗರಿಕನ ಮೂಲಭೂತ ಹಕ್ಕಾಗಿದೆ. ಇದು ಭಾರತವೂ ಒಳಗೊಂಡಂತೆ ಪ್ರಪಂಚದ ಎಲ್ಲಾ ಸರ್ಕಾರಗಳಿಗೂ ಅನ್ವಯವಾಗುತ್ತದೆ' ಎಂದು ನಿರ್ಣಯವು ಸ್ಪಷ್ಟಪಡಿಸಿದೆ.

ನಿರ್ಣಯ ಮಂಡಿಸುವ ವೇಳೆ ಮಾತನಾಡಿದ ಸಂಸದ ವರ್ಗಾಸ್, 'ಫಾದರ್ ಸ್ಟ್ಯಾನ್ ಧ್ವನಿಯಿಲ್ಲದವರಿಗೆ ಧ್ವನಿಯಾಗಲು ತಮ್ಮ ಇಡೀ ಜೀವನವನ್ನೇ ಮುಡಿಪಾಗಿಟ್ಟಿದ್ದರು. ಸ್ಥಳೀಯ ಆದಿವಾಸಿ ಜನ ಹಕ್ಕುಗಳಿಗಾಗಿ ದಣಿವರಿಯದೇ ಹೋರಾಡಿದ್ದರು. ಯುವ ಸಮುದಾಯದ ನಾಯಕರಿಗೆ ತರಬೇತಿಯನ್ನೂ ನೀಡಿದ್ದರು. ಭಾರತದಲ್ಲಿನ ಅನೇಕ ಸಮುದಾಯಗಳಿಗೆ ನ್ಯಾಯಕ್ಕಾಗಿ ಕೆಲಸ ಮಾಡಿದ್ದರು' ಎಂದರು. ಜೈಲಿನಲ್ಲಿದ್ದಾಗ ಸ್ಟ್ಯಾನ್ ಸ್ವಾಮಿ ಅವರು ಅನೇಕ ನಿಂದನೆಗಳನ್ನು ಎದುರಿಸಿದ್ದರು. ಅವರಿಗೆ ಸೂಕ್ತ ವೈದ್ಯೋಪಚಾರವನ್ನು ನಿರಾಕರಿಸಲಾಗಿತ್ತು ಎಂಬ ವಿಷಯ ಕೇಳಿ ಗಾಬರಿಯಾಯಿತು. ತಳ ಸಮುದಾಯಗಳ ಒಳಿತಿಗಾಗಿ ಸ್ಟ್ಯಾನ್ ಅವರ ಬದ್ಧತೆಯನ್ನು ಮರೆಯಲಾಗುವುದಿಲ್ಲ ಎಂದು ಖಚಿತಪಡಿಸಿಕೊಳ್ಳಲು ಈ ನಿರ್ಣಯವನ್ನು ಮಂಡಿಸಲಾಗುತ್ತಿದೆ' ಎಂದು ಅವರು ಹೇಳಿದರು. 2017 ಡಿಸೆಂಬರ್ 31 ರಂದು ಪುಣೆಯಲ್ಲಿ, ಭೀಮಾ ಕೋರೆಗಾಂವ್ ಯುದ್ಧದ ಸ್ಮರಣಾರ್ಥವಾಗಿ ಎಲ್ಗಾರ್ ಪರಿಷತ್ ಎಂಬ ಕಾರ್ಯಕ್ರಮದಡಿ 260ಕ್ಕೂ ಹೆಚ್ಚು ಸಂಘಟನೆಗಳು ಬೃಹತ್ ಸಮಾವೇಶ ಸಂಘಟಿಸಿದ್ದವು.1937 ಏಪ್ರಿಲ್ 26 ರಂದು ತಮಿಳುನಾಡಿನ ತಿರುಚನಾಪಳ್ಳಿಯಲ್ಲಿ ಜನಿಸಿದ್ದ ಪಾಧರ್ ಸ್ಟ್ಯಾನ್ ಸ್ವಾಮಿ ಅವರು ಕ್ಯಾಥೋಲಿಕ್ ಪಂಗಡದ ಧರ್ಮಗುರುವಾಗಿ, ಸಾಮಾಜಿಕ ಹೋರಾಟಗಾರರಾಗಿ ಗುರುತಿಸಿಕೊಂಡಿದ್ದರು. ಪ್ರಮುಖವಾಗಿ ಅವರು ಬುಡಕಟ್ಟು ಜನಾಂಗಗಳ ಹಕ್ಕುಗಳಿಗಾಗಿ ತಮ್ಮ ಜೀವಮಾನದುದ್ದಕ್ಕೂ ಹೋರಾಟ ನಡೆಸಿದ್ದರು. ಜುಲೆ 5 2021ರಲ್ಲಿ ಅನಾರೋಗದಿಂದ ಜೈಲಿನಲಿಯೇ ಸಾನ್ ಸ್ವಾಮಿ ಮೃತಪಟಿದರು.

# 10 ವರ್ಷಗಳಲ್ಲಿ ಹುತಾತ್ಮ ಯೋಧರ ಸಂಖ್ಯೆ ನೀಡಿ ಸರ್ಕಾರಕ್ಕೆ ಸಂಜಯ್ ರಾವುತ್ ಮನವಿ



**ಮುಂಬೈ:** ಕಳೆದ 10 ವರ್ಷಗಳಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿ ಭದ್ರತಾ ಪಡೆಯ ಹುತಾತ್ಮರಾದ ಯೋಧರ ನಿಖರ ಸಂಖ್ಯೆ ನೀಡುವಂತೆ ಕೇಂದ್ರ ಸರ್ಕಾರವನ್ನು ಸಂಸದ ಸಂಜಯ್ ರಾವುತ್ ಮಂಗಳವಾರ ಒತ್ತಾಯಿಸಿದ್ದಾರೆ. ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಬಿಜೆಪಿ ಸರ್ಕಾರದ ಅವಧಿಯಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿ ಯೋಧರು ಅತಿ ಹೆಚ್ಚು ಹುತಾತ್ಮರಾಗಿದ್ದಾರೆ. 2019ರಲ್ಲಿ ಜಮ್ಮು ಮತ್ತು ಕಾಶ್ಮೀರಕ್ಕೆ ಸಂವಿಧಾನ 370ನೇ ವಿಧಿಯಡಿ ನೀಡಲಾಗಿದ್ದ ವಿಶೇಷ ಸ್ಥಾನಮಾನ ರದ್ದುಗೊಳಿಸಿದ ಬಳಿಕ ಕೇಂದ್ರಾಡಳಿತ ಪ್ರದೇಶದ ಪರಿಸ್ಥಿತಿ ಹದಗೆಡುತ್ತಿದೆ' ಎಂದು ಹೇಳಿದ್ದಾರೆ.

ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ಹುತಾತ್ಮ ಯೋಧರ ಸಂಖ್ಯೆಯ ಮಾಹಿತಿ ನೀಡುವಂತೆ ನಾವು ಒತ್ತಾಯಿಸುತ್ತೇವೆ ಎಂದು ಅವರು ಹೇಳಿದ್ದಾರೆ.

ಸೋಮವಾರ ಜಮ್ಮು, ಕಾಶ್ಮೀರದ ಕಥುವಾ ಜಿಲ್ಲೆಯ ಮಚೇಡಿ-ಕಿಂಡ್ಲಿ-ಮೊಲ್ಹಾರ್ ರಸ್ತೆಯಲ್ಲಿ ಯೋಧರು ಗಸ್ತು ತಿರುಗುತ್ತಿದ್ದ ವೇಳೆ ಭಯೋತ್ಪಾದಕರು ನಡೆಸಿದ ಗ್ರೆನೇಡ್ ಮತ್ತು ಗುಂಡಿನ ದಾಳಿಯಲ್ಲಿ ಐವರು ಯೋಧರು ಹುತಾತ್ಮರಾಗಿದ್ದು, ಹಲವು ಯೋಧರು ಗಾಯಗೊಂಡಿದ್ದಾರೆ.

ಈ ಘಟನೆ ಬೆನ್ನಲ್ಲೇ ಕೇಂದ್ರ ಸರ್ಕಾರವನ್ನು ಪ್ರಶ್ನಿಸಿರುವ ರಾವುತ್, 'ಕೇಂದ್ರಾಡಳಿತ ಪ್ರದೇಶದಲ್ಲಿ ನಡೆಯುತ್ತಿರುವ ದಾಳಿಗಳನ್ನು ತಡೆಯುವ ಹೊಣೆಗಾರಿಕೆ ಯಾರದು, ಆ ಜವಾಬ್ದಾರಿಯು ಪ್ರಧಾನ ಮಂತ್ರಿ, ಗೃಹ ಮಂತ್ರಿ ಮತ್ತು ರಕ್ಷಣಾ ಮಂತ್ರಿಯವರದ್ದಾಗಿದೆ' ಎಂದು ಅವರು ತಿಳಿಸಿದ್ದಾರೆ.

# ರಷ್ಯಾ ಸೇನೆಯಲ್ಲಿರುವ ಭಾರತೀಯರ ಬಿಡುಗಡೆಗೆ ಪುಟಿನ್ ಸಮ್ಮತಿ



**ಮಾಸ್ಕೋ:** ಮೋದಿ ಮನವಿ ಮೇರೆಗೆ ರಷ್ಯಾ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿರುವ ಎಲ್ಲಾ ಭಾರತೀಯರನ್ನು ಬಿಡುಗಡೆ ಮಾಡಲು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಸಮ್ಮತಿಸಿದ್ದಾರೆ. ಭಾರತದಿಂದ ಮಾನವ ಕಳ್ಳಸಾಗಣೆ ಮೂಲಕ ಭಾರತೀಯರನ್ನು ಅಕ್ರಮವಾಗಿ ರಷ್ಯಾಗೆ ಕರೆತಂದು ಬಲವಂತವಾಗಿ ಸೇನೆಯಲ್ಲಿ ಕೆಲಸಕ್ಕೆ ಸೇರಿಸಲಾಗುತ್ತಿದೆ ಎಂಬ ಆರೋಪಗಳು ಕೇಳಿ ಬಂದಿದ್ದವು. ಈ ಅನುಮಾನ ಕುರಿತಂತೆ ರಷ್ಯಾ ಪ್ರವಾಸದಲ್ಲಿರುವ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಪುಟಿನ್ ಅವರೊಂದಿಗೆ ಚರ್ಚಿಸಿದಾಗ ಸೇನೆಯಲ್ಲಿರುವ ಎಲ್ಲಾ ಭಾರತೀಯರನ್ನು ಬಿಡುಗಡೆ ಮಾಡುವ ಭರವಸೆ ನೀಡಿದ್ದಾರೆ ಎಂದು ವರದಿಯಾಗಿದೆ.

ಉಕ್ರೇನ್ ವಿರುದ್ಧದ ರಷ್ಯಾದ ಸಂಘರ್ಷದಲ್ಲಿ ಹೋರಾಡುತ್ತಿರುವಾಗ ಕನಿಷ್ಠ ಇಬ್ಬರು ಭಾರತೀಯ ನಾಗರಿಕರು ತಮ ಪ್ರಾಣವನ್ನು ಕಳೆದುಕೊಂಡಿದ್ದಾರೆ ಮತ್ತು ಯುದ್ಧ ವಲಯದಲ್ಲಿ ಸಿಲುಕಿಕೊಂಡಿದ್ದಾರೆ ಎಂಬ ಮಾತುಗಳು ಕೇಳಿಬರುತ್ತಿರುವ ಸಂದರ್ಭದಲ್ಲಿ ಮೋದಿ ಅವರ ಶ್ರಮದಿಂದಾಗಿ ಇದೀಗ ಎಲ್ಲಾ ಭಾರತೀಯರು ತಮ ಮನೆಗಳಿಗೆ ತೆರಳಬಹುದಾಗಿದೆ.

ತಡರಾತ್ರಿ ವ್ಲಾಡಿಮಿರ್ ಪುಟಿನ್ ಆಯೋಜಿಸಿದ್ದ ಖಾಸಗಿ ಔತಣಕೂಟದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಈ ವಿಷಯವನ್ನು ಪ್ರಸ್ತಾಪಿಸಿದ್ದಾರೆ ಎಂದು ಮೂಲಗಳು ಸೂಚಿಸಿವೆ. ಪ್ರತಿಕ್ರಿಯೆಯಾಗಿ, ತಮ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿರುವ ಎಲ್ಲಾ ಭಾರತೀಯರನ್ನು ಬಿಡುಗಡೆ ಮಾಡಲು ಮತ್ತು ಅವರು ಹಿಂದಿರುಗಲು ಸಹಾಯ ಮಾಡಲು ರಷ್ಯಾ ಸಮತಿಸಿತು. ರಷ್ಯಾ-ಉಕ್ರೇನ್ ಸಂಘರ್ಷಕ್ಕೆ ನೇಮಕಗೊಂಡ ಭಾರತೀಯರ ಬಗ್ಗೆ ಮಾತನಾಡುತ್ತಾ, ಭಾರತವು ಈ ವಿಷಯವನ್ನು ಪ್ರಬಲ ಪದಗಳಲ್ಲಿ ಪ್ರಸ್ತಾಪಿಸುತ್ತದೆ ಎಂದು ಮೂಲಗಳು ತಿಳಿಸಿವೆ ಎಂದು ಸುದ್ದಿ ಸಂಸ್ಥೆ ಪಿಟಿಐ ಈ ಹಿಂದೆ ವರದಿ ಮಾಡಿತ್ತು. ಉಕ್ರೇನ್ ಸಂಘರ್ಷದಲ್ಲಿ ಹೋರಾಡುತ್ತಿರುವ ಭಾರತೀಯರನ್ನು ರಷ್ಯಾದ ಮಿಲಿಟರಿಯಿಂದ ತ್ವರಿತವಾಗಿ ಬಿಡುಗಡೆ ಮಾಡಲು ನಾವು ಬಯಸುತ್ತೇವೆ ಎಂದು ಹೆಸರಿಸದ ಮೂಲವನ್ನು ಉಲ್ಲೇಖಿಸಿ ಪಿಟಿಐ ಹೇಳಿದೆ.

**ರಶಿಯಾ ಜೊತೆಗಿನ ಭಾರತದ ವ್ಯಾಪಾರ ಅಸಮತೋಲನವನ್ನು ಸರಿಪಡಿಸುವುದು ಮತ್ತು ಉಕ್ರೇನ್ ಯುದ್ಧದಲ್ಲಿ ಹೋರಾಡಲು ದಾರಿ ತಪ್ಪಿದ ಭಾರತೀಯ ನಾಗರಿಕರನ್ನು ಬಿಡುಗಡೆ ಮಾಡುವುದು ಮಾಸ್ಕೋದಲ್ಲಿ ಮೋದಿಯವರ ಪ್ರಮುಖ ಆದ್ಯತೆಗಳಲ್ಲಿ ಒಂದಾಗಿದೆ ಎಂದು ಭಾರತೀಯ ಉನ್ನತ ಅಧಿಕಾರಿಯೊಬ್ಬರು ಕಳೆದ ವಾರ ಸುದ್ದಿ ಸಂಸ್ಥೆಗೆ ತಿಳಿಸಿದ್ದರು.**

# ಹೊಸ ಕ್ರಿಮಿನಲ್ ಕಾನೂನುಗಳಿಗೆ ತಮಿಳುನಾಡು ಸರ್ಕಾರ ತಿದ್ದುಪಡಿ ನಿರ್ಧಾರ ಸ್ವಾಗತಾರ್ಹ



**ನವದೆಹಲಿ:** ಮೂರು ಹೊಸ ಕ್ರಿಮಿನಲ್ ಕಾನೂನುಗಳಿಗೆ ರಾಜ್ಯ-ನಿರ್ದಿಷ್ಟ ತಿದ್ದುಪಡಿಗಳನ್ನು ಸೂಚಿಸಲು ಸಮಿತಿಯನ್ನು ನೇಮಿಸುವ ತಮಿಳುನಾಡು ಸರ್ಕಾರದ ನಿರ್ಧಾರವನ್ನು ಕಾಂಗ್ರೆಸ್ ನಾಯಕ ಪಿ ಚಿದಂಬರಂ ಸ್ವಾಗತಿಸಿದ್ದಾರೆ ಮತ್ತು ತಿದ್ದುಪಡಿಗಳನ್ನು ಮಾಡಲು ಶಾಸಕಾಂಗವು ಸಮ ರ್ಥವಾಗಿದೆ ಎಂದಿದ್ದಾರೆ.

ಕ್ರಿಮಿನಲ್ ನ್ಯಾಯಶಾಸ್ತ್ರದ ಆಧುನಿಕ ತತ್ವಗಳಿಗೆ ಅನುಗುಣವಾಗಿ ಕ್ರಿಮಿನಲ್ ಕಾನೂ ನುಗಳನ್ನು ಜಾರಿಗೊಳಿಸಬೇಕು ಎಂದು ಅವರು ಒತ್ತಿ ಹೇಳಿದ್ದಾರೆ. ಜು 1ರಿಂದ ಜಾರಿಗೆ ಬಂದ ಮೂರು ಕ್ರಿಮಿನಲ್ ಕಾನೂನುಗಳಿಗೆ ರಾಜ್ಯ ತಿದ್ದುಪಡಿಗಳನ್ನು ಸೂಚಿಸಲು ಸಮಿತಿಯನ್ನು ನೇಮಿಸುವ ತಮಿಳುನಾಡು ಸರ್ಕಾರದ ನಿರ್ಧಾರವನ್ನು ನಾನು ಸ್ವಾಗತಿಸುತ್ತೇನೆ ಎಂದು ಮಾಜಿ ಗಹ ಸಚಿವರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಕ್ರಿಮಿನಲ್ ಕಾನೂನು ಸಂವಿಧಾನದ ಏಕಕಾಲಿಕ ಪಟ್ಟಿಯಲ್ಲಿ ಒಂದು ವಿಷಯವಾಗಿದೆ ಮತ್ತು ರಾಜ್ಯ ಶಾಸಕಾಂಗವು ತಿದ್ದುಪಡಿಗಳನ್ನು ಮಾಡಲು ಸಮರ್ಥವಾಗಿದೆ ಎಂದು ಚಿದಂಬರಂ ಹೇಳಿದರು. ನ್ಯಾಯಮೂರ್ತಿ (ನಿವತ್ತ) ಕೆ.ಸತ್ಯನಾರಾಯಣನ್ ಅವರನ್ನು ಏಕವ್ಯಕ್ತಿ ಸಮಿತಿಯನ್ನಾಗಿ ನೇಮಕ ಮಾಡಿರುವುದನ್ನು ನಾನು ಸ್ವಾಗತಿಸುತ್ತೇನೆ. ನ್ಯಾಯಾಧೀಶರು, ವಕೀಲರು, ಪೊಲೀಸರು, ಕಾನೂನು ಶಿಕ್ಷಕರು, ವಿದ್ವಾಂಸರು, ಮಾನವ ಹಕ್ಕುಗಳ ಕಾರ್ಯಕರ್ತರು ಸೇರಿದಂತೆ ಎಲ್ಲಾ ಮಧ್ಯಸ್ಥಗಾರರೊಂದಿಗೆ ಸಮಾಲೋಚನೆ ನಡೆಸುವಂತೆ ನಾನು ಸಮಿತಿಯನ್ನು ಕೋರುತ್ತೇನೆ ಎಂದು ಅವರು ಮನವಿ ಮಾಡಿಕೊಂಡಿದ್ದಾರೆ. ಕೇಂದ್ರ ಕಾನೂನುಗಳಿಗೆ ರಾಜ್ಯ ತಿದ್ದುಪಡಿಗಳ ಕುರಿತು ಚ ರ್ಚಿಸಲು ಇಲ್ಲಿನ ಸೆಕ್ರೆಟ ರಿಯೇಟ್‌ನಲ್ಲಿ ಉನ್ನತ ಮಟ್ಟದ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿದ ಸ್ಟಾಲಿನ್ ಅವರು, ಮದ್ರಾಸ್ ಹೈಕೋರ್ಟ್‌ನ ನಿವತ್ತ ನ್ಯಾಯಾಧೀಶ ನ್ಯಾಯಮೂರ್ತಿ ಎಂ ಸತ್ಯನಾರಾಯಣನ್ ನೇತತ್ವದಲ್ಲಿ ಏಕವ್ಯಕ್ತಿ ಸಮಿತಿಯನ್ನು ರಚಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

**ಹೊಸ ಕ್ರಿಮಿನಲ್ ಕಾನೂನುಗಳಿಗೆ ತಮಿಳುನಾಡು-ನಿರ್ದಿಷ್ಟ ತಿದ್ದುಪಡಿಗಳನ್ನು ಜಾರಿಗೆ ತರಲು ಮೊದಲ ಹೆಜ್ಜೆ ಇಟ್ಟಿರುವ ಮುಖ್ಯಮಂತ್ರಿ ಎಂ ಕೆ ಸ್ಟಾಲಿನ್, ಮೂರು ಕಾನೂನು ಗಳನ್ನು ಅಧ್ಯಯನ ಮಾಡಲು, ಮಾಡಲು ನಿವತ್ತ ಹೈಕೋರ್ಟ್ ನ್ಯಾಯಾಧೀಶರ ನೇತತ್ವದಲ್ಲಿ ಏಕವ್ಯಕ್ತಿ ಸಮಿತಿಯನ್ನು ರಚಿಸಲು ಆದೇಶಿಸಿದ್ದಾರೆ.**

# ದೆಹಲಿಯಲ್ಲಿ ಇಬ್ಬರ ಮೇಲೆ ಗುಂಡಿನ ದಾಳಿ


**ನವದೆಹಲಿ:** ಮಂಗಳವಾರ ಮುಂಜಾನೆ ದೆಹಲಿಯ ಸೀಲಂಪುರ ಪ್ರದೇಶದಲ್ಲಿ ಇಬ್ಬರ ಮೇಲೆ ಗುಂಡಿನ ದಾಳಿ ನಡೆಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.ಉಮರ್ ಮತ್ತು ವಸೀಮ್ ಎಂಬುವರು ಉದ್ಯಾನವನದಲ್ಲಿ ಕುಳಿತಿದ್ದಾಗ, ಬೆಳಗಿನ ಜಾವ 1.40 ರ ಸುಮಾರಿಗೆ ಇಬ್ಬರು ದುಷ್ಕರ್ಮಿಗಳು ಗುಂಡಿನ ದಾಳಿ ನಡೆಸಿ ಪರಾರಿಯಾಗಿದ್ದಾರೆ. ಇಬ್ಬರ ಕಾಲಿಗೆ ಗುಂಡು ತಗುಲಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ದಾಳಿಕೋರರಲ್ಲಿ ಒಬ್ಬನನ್ನು ಮುಸ್ತಫಾಬಾದ್ ನಿವಾಸಿ ಆಜಾದ್ (42) ಎಂದು ಗುರುತಿಸಲಾಗಿದೆ ಎಂದು ಉಪ ಪೊಲೀಸ್ ಆಯುಕ್ತ (ಈಶಾನ್ಯ) ಜಾಯ್ ಟಿರ್ಕಿ ಹೇಳಿದ್ದಾರೆ. ಆತನನ್ನು ಬಂಧಿಸಲಾಗಿದೆ. ಆಜಾದ್ ವಿರುದ್ಧ ಐದು ಕಳ್ಳತನ ಮತ್ತು ದರೋಡೆ ಪ್ರಕರಣಗಳು ದಾಖಲಾಗಿದ್ದು, ಆತನಿಂದ 7.65 ಎಂಎಂ ಪಿಸ್ತೂಲ್ ವಶಪಡಿಸಿಕೊಳ್ಳಲಾಗಿದೆ ಎಂದು ಟಿರ್ಕಿ ಹೇಳಿದ್ದಾರೆ.

ಮತ್ತೊಬ್ಬ ದಾಳಿಕೋರನನ್ನು ಉತ್ತರ ಪ್ರದೇಶದ ಗಾಜಿಯಾಬಾದ್ ನಿವಾಸಿ ಜಾಹಿದ್ ಅಲಿಯಾಸ್ ಚೋರ್ (40) ಎಂದು ಗುರುತಿಸಲಾಗಿದೆ. ಆತನ ವಿರುದ್ಧ ಸರಗಳ್ಳತನ ಪ್ರಕರಣ ದಾಖಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ. ಭಾರತೀಯ ನ್ಯಾಯ ಸಂಹಿತೆಯ (ಬಿಎನ್‌ಎಸ್) ಸೆಕ್ಷನ್ 109 (1), 3 (5) ಮತ್ತು ಶಸಾತ್ರಸ್ತ್ರ ಕಾಯ್ದೆಯ ಸೆಕ್ಷನ್ 25 ರ ಅಡಿಯಲ್ಲಿ ಪ್ರಕರಣವನ್ನು ದಾಖಲಿಸಲಾಗಿದೆ ಎಂದು ಟಿರ್ಕಿ ಹೇಳಿದರು. ಜಾಹಿದ್ ನನ್ನು ಬಂಧಿಸಲು ಪ್ರಯತ್ನ ನಡೆಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

# ಟ್ರಂಪ್ ಆಪ್ತ ವಲಯದಲ್ಲಿ ಭಾರತೀಯ; ಯಾರಿದು ಕಾಶ್ ಪಟೇಲ್?

## ಡೊನಾಲ್ಡ್ ಟ್ರಂಪ್ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡಿರುವ ಭಾರತೀಯ ಮೂಲದ ಕಾಶ್ ಪಟೇಲ್



ಎಫ್‌ಬಿಐ ಅಥವಾ ಸಿಐಎಗೆ ನೇಮಕ

**ಅಮೆರಿಕ:** ಕಾಶ್ ಪಟೇಲ್ ಈ ಹೆಸರು ಇದೀಗ ಡೊನಾಲ್ಡ್ ಟ್ರಂಪ್ ಅವರ ಆಪ್ತ ವಲಯದಲ್ಲಿ ಸಾ ಕಷ್ಟು ಪ್ರಾಮುಖ್ಯತೆ ಗಳಿಸಿದೆ. ಅಮೆರಿಕ ಮಾಜಿ ಅಧ್ಯಕ್ಷರಾಗಿರುವ ಡೊನಾಲ್ಡ್ ಟ್ರಂಪ್, ಇದೀಗ 2024ರ ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ರಿಪಬ್ಲಿಕನ್ ಪಕ್ಷದ ಅಭ್ಯರ್ಥಿಯಾಗಿದ್ದು, ಒಂದು ವೇಳೆ ಟ್ರಂಪ್ ಗೆಲುವು ಸಾಧಿಸಿ ಮತ್ತೆ ಅಮೆರಿಕ ಅಧ್ಯಕ್ಷರಾದರೆ, ಭಾರತೀಯ ಮೂಲದ ಕಾಶ್ ಪಟೇಲ್ ಅವರಿಗೆ ಪ್ರಮುಖ ಹುದ್ದೆ ಸಿಗುವ ಮಾತು ಗಳು ಕೇಳಿ ಬರುತ್ತಿವೆ.

**ಯಾರಿದು ಕಾಶ್ ಪಟೇಲ್?:** ಡೊನಾಲ್ಡ್ ಟ್ರಂಪ್ ಅವರ ಆಪ್ತ ವಲಯದಲ್ಲಿ ಗುರ್ತಿಸಿಕೊಂಡಿರುವ ಭಾರತೀಯ ಮೂಲದ ಕಾಶ್ ಪಟೇಲ್, ಟ್ರಂಪ್ ಅವರ ರಾಷ್ಟ್ರೀಯ ಭದ್ರತಾ ಸಲಹೆಗಾರರು. 44 ವರ್ಷ ವಯಸ್ಸಿನ ಕಾಶ್ ಪಟೇಲ್, ಟ್ರಂಪ್ ಮಾಲೀ ಕತ್ವದ ಟ್ರೂತ್ ಸೋಷಿಯಲ್ ಎಂಬ ಸಾಮಾಜಿಕ ಜಾಲತಾಣ ವೇದಿಕೆಯನ್ನು ನೋಡಿ ಕೊಳ್ಳುತ್ತಿದ್ದಾರೆ. ಟ್ರಂಪ್ ಮೀಡಿಯಾ ಮತ್ತು ಟೆಕ್ನಾಲಜಿ ಗ್ರೂಪ್ ನ ಮಂಡಳಿಯಲ್ಲಿ ಇರುವ ಕಾಶ್ ಪ ಟೇಲ್ ಅವರಿಗೆ ವರ್ಷಕ್ಕೆ 1 ಲಕ್ಷದ 20 ಸಾವಿರ ಡಾಲರ್ ಗೌರವ ಧನ ಸಿಗುತ್ತಿದೆ.

ಜೊತೆಯಲ್ಲೇ ಟ್ರಂಪ್ ಅವರಿಗೆ ರಾಷ್ಟ್ರೀಯ ಭದ್ರತಾ ಸಲಹೆಗಾರರಾಗಿ ಕಾರ್ಯ ನಿರ್ವಹಿಸುತ್ತಿರುವ ಕಾಶ್ ಪಟೇಲ್ ಅವರಿಗೆ ಹೆಚ್ಚುವರಿಯಾಗಿ 3 ಲಕ್ಷ ಅಮೆರಿಕನ್ ಡಾಲರ್ ಗರವ ಧನವೂ ಸಿಗುತ್ತಿದೆ.

ವಕೀಲರಾಗಿ, ಸರ್ಕಾರಿ ಅಭಿಯೋಜಕರಾಗಿ ಹಾಗೂ ವೈಟ್ ಹೌಸ್‌ನ ಸಿಬ್ಬಂದಿಯಾಗಿ ದುಡಿದಿರುವ ಅನುಭವ ಹೊಂದಿರುವ ಕಾಶ್ ಪಟೇಲ್, ರಾಷ್ಟ್ರೀಯ ಭದ್ರತಾ ಅಧಿಕಾರಿಯಾಗಿಯೂ ಕೆಲಸ ಮಾಡಿದ್ದಾರೆ. ಟ್ರಂಪ್ ಅವರ ರಾಜಕೀಯ ದ್ವೇಷಿಗಳನ್ನ ಮಟ್ಟ ಹಾಕುವ ಮೂಲಕ ಹಲವು ಬಾರಿ ಗಮನ ಸೆಳೆದಿದ್ದಾರೆ.

**ಕಾಶ್ ಪಟೇಲ್ ಕೌಟುಂಬಿಕ ಹಿನ್ನೆಲೆ:** ನ್ಯೂಯಾರ್ಕ್‌ನಲ್ಲಿ 1980ರಲ್ಲಿ ಜನಿಸಿದ ಕಾಶ್ ಪಟೇಲ್ ಅವ ರಿಗೆ 44 ವರ್ಷ ವಯಸ್ಸು. ಅವರ ಪೋಷಕರು ಗುಜರಾತ್ ಮೂಲದವರು.

ಅಮೆರಿಕಗೆ ವಲಸೆ ಬಂದು ನೆಲೆಸಿದ್ದಾರೆ. ಅಮೆರಿಕದಲ್ಲೇ ಜನಿಸಿ ಶಿಕ್ಷಣ ಪಡೆದಿರುವ ಕಾಶ್ ಪಟೇಲ್, ರಿಚ್ಮಂಡ್ ವಿವಿಯಲ್ಲಿ ಪದವಿ ಪಡೆದಿದ್ದಾರೆ. ಲಂಡನ್ ವಿವಿ ಕಾಲೇಜಿನಲ್ಲಿ ಅಂತಾರಾಷ್ಟ್ರೀಯ ಕಾನೂನು ವಿಷಯದಲ್ಲಿ ಪ್ರಮಾಣ ಪತ್ರ ಹೊಂದಿದ್ದಾರೆ. ಆರಂಭದಲ್ಲಿ ವಕೀಲರಾಗಿ ತಮ್ಮ ವೃತ್ತಿ ಜೀವನ ಆರಂಭಿಸಿದ ಕಾಶ್ ಪಟೇಲ್, ನಂತರ ಸರ್ಕಾರಿ ಹುದ್ದೆಗಳು ಹಾಗೂ ರಾಜಕೀಯ ರಂಗ ಪ್ರವೇಶಿಸಿದರು. ಟ್ರಂಪ್ ಅವರ ಅನುಯಾಯಿಯಾಗಿ ಗುರ್ತಿಸಿಕೊಂಡರು.

### ಟ್ರಂಪ್ ಮತ್ತೆ ಅಧ್ಯಕ್ಷರಾದರೆ ಕಾಶ್ ಪಟೇಲ್‌ಗೆ ಬಂಪರ್

**ಎರಡನೇ ಅವಧಿಗೆ ಟ್ರಂಪ್ ಅವರು ಅಧ್ಯಕ್ಷರಾಗಿ ಆಯ್ಕೆಯಾದರೆ, ಅಮೆರಿಕದ ಅತ್ಯುನ್ನತ ತನಿಖಾ ಸಂಸ್ಥೆಗಳಾದ ಎಫ್‌ಬಿಐ ಹಾಗೂ ಸಿಐಎನಲ್ಲಿ ಕಾಶ್ ಪಟೇಲ್ ಅವರಿಗೆ ಪ್ರಮುಖ ಹುದ್ದೆ ಸಿಗುವ ಸಾಧ್ಯತೆ ಇದೆ. ಈ ಹುದ್ದೆಗಳನ್ನ ನಿಭಾಯಿಸಲು ಕಾಶ್ ಪಟೇಲ್ ಅವರಿಗೆ ಸೂಕ್ತ ಅರ್ಹತೆ ಇಲ್ಲ ಎಂಬ ಅಪವಾದಗಳೂ ಇವೆಯಾದರೂ, ಬೇಹುಗಾರಿಕಾ ಸಮುದಾಯದಲ್ಲಿ ಕಾಶ್ ಪಟೇಲ್ ಹೆಸರು ಮಾಡಿದ್ದಾರೆ. ಜೊತೆಯಲ್ಲೇ ತಮ್ಮ ಆಶಯವನ್ನ ಕಾಶ್ ಪಟೇಲ್ ಬಹಿರಂಗವಾಗಿಯೇ ವ್ಯಕ್ತಪಡಿಸಿದ್ದಾರೆ. ಅಷ್ಟೇ ಅಲ್ಲ ಟ್ರಂಪ್ ಅವರ ರಾಜಕೀಯ ದ್ವೇಷಿಗಳನ್ನ ಕಟಕಟೆಗೆ ತಂದು ನಿಲ್ಲಿಸುವ ಸವಾಲೊಡ್ಡಿದ್ದಾರೆ.**

**ಭಾರತೀಯ ಮೂಲದವರು ಅಮೆರಿಕದಲ್ಲಿ ಪ್ರಮುಖ ಹುದ್ದೆಗಳನ್ನ ಅಲಂಕರಿಸುತ್ತಿದ್ದಾರೆ. ಈ ಸಾಲಿನಲ್ಲಿ ಟ್ರಂಪ್ ಅವರ ಅನುಯಾಯಿ ಕಾಶ್ ಪಟೇಲ್ ಕೂಡಾ ಸೇರ್ಪಡೆ ಆಗಲಿದ್ದಾರೆ. ಟ್ರಂಪ್ ಅವರ ರಾಷ್ಟ್ರೀಯ ಭದ್ರತಾ ಸಲಹೆಗಾರರಾಗಿರುವ ಕಾಶ್ ಪಟೇಲ್, ಒಂದು ವೇಳೆ ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಟ್ರಂಪ್ ಗೆಲುವು ಸಾಧಿಸಿದರೆ ಸಿಐಎ, ಎಫ್‌ಬಿಐನಲ್ಲಿ ಕಾಶ್ ಪಟೇಲ್ ಪ್ರಮುಖ ಹುದ್ದೆ ಪಡೆಯುವ ಸಾಧ್ಯತೆಗಳಿವೆ ಎಂದು ತಿಳಿದು ಬಂದಿದೆ.**

- **ಟ್ರಂಪ್ ಅವರ ರಾಷ್ಟ್ರೀಯ ಭದ್ರತಾ ಸಲಹೆಗಾರರಾಗಿರುವ 44 ವರ್ಷ ವಯಸ್ಸಿನ ಕಾಶ್ ಪಟೇಲ್**
- **ಟ್ರಂಪ್ ಮಾಲೀಕತ್ವದ ಟ್ರೂತ್ ಸೋಷಿಯಲ್ ಎಂಬ ಸಾಮಾಜಿಕ ಜಾಲತಾಣ ವೇದಿಕೆ ನೋಡಿ ಕೊಳ್ಳುತ್ತಿದ್ದಾರೆ**

# ಮಿನಿ ನ್ಯೂಸ್

## ಸಿಂಗಾಪುರದಲ್ಲಿ ಭಾರತೀಯನಿಗೆ 13 ವರ್ಷ ಜೈಲು ಶಿಕ್ಷೆ

**ಸಿಂಗಾಪುರ:** ಮನೆ ಬಿಟ್ಟು ಬಂದಿದ್ದ 17 ವರ್ಷದ ಬಾಲಕಿಗೆ ಕೆಲಸ ಮಾಡಲು ಅವಕಾಶ ಮಾಡಿಕೊಟ್ಟು ನಂತರ ಆಕೆಯ ಮೇಲೆ ಅತ್ಯಾಚಾರ ನಡೆಸಿದ್ದ ಆರೋಪಕ್ಕೆ ಗುರಿಯಾಗಿದ್ದ ಭಾರತೀಯ ಮೂಲದ ಸಿಂಗಾಪುರದ ಬಾರ್ ಮಾಲೀಕನಿಗೆ 13 ವರ್ಷಗಳ ಜೈಲು ಶಿಕ್ಷೆ ವಿಧಿಸಲಾಗಿದೆ. ಶಿಕ್ಷೆಗೊಳಗಾದ ವ್ಯಕ್ತಿಯನ್ನು ರಾಜ್ ಕುಮಾರ್ ಬಾಲಾ ಎಂದು ಗುರುತಿಸಲಾಗಿದೆ. ಫೆಬ್ರವರಿ 2020 ರಲ್ಲಿ ಸಿಂಗಾಪುರದ ಬಾಲಕಿ ಮನೆಯಿಂದ ಓಡಿಹೋದಾಗ ಸಂತ್ರಸ್ತೆ 17 ವರ್ಷ ವಯಸ್ಸಿನವಳಾಗಿದ್ದಳು ಎಂದು ನ್ಯಾಯಾಲಯವು ಕೇಳಿದೆ.

ಲಿಟಲ್ ಇಂಡಿಯಾ ಆವರಣದಲ್ಲಿರುವ ಹೋಟೆಲ್‌ಗಳು, ಮೋಟೆಲ್‌ಗಳು ಮತ್ತು ತಿನಿಸುಗಳ ಡನ್‌ಲಾಪ್ ಸ್ಟ್ರೀಟ್‌ನಲ್ಲಿರುವ ಬಾಲಾ ಅವರ ಡಾನ್ ಬಾರ್ ಇದೆ. ಅಲ್ಲಿ ಸಂತ್ರಸ್ತೆ ಕೆಲಸಕ್ಕಾಗಿ ಸಂದರ್ಶನಕ್ಕೆ ಬಂದಾಗ ಬಾಲಾ ಅವರನ್ನು ಭೇಟಿಯಾದರು, ಅವರು ಗ್ರಾಹಕರಿಗೆ ಸೇವೆ ಸಲ್ಲಿಸುವುದು ಮತ್ತು ಪಾನೀಯಗಳನ್ನು ತಯಾರಿಸುವುದು ಸೇರಿದಂತೆ ಕೆಲಸದ ಕರ್ತವ್ಯಗಳನ್ನು ವಿವರಿಸಿದರು. ಸಂತ್ರಸ್ತೆ ಬಾರ್‌ನಲ್ಲಿ ಕೆಲವು ದಿನಗಳ ಕಾಲ ಕೆಲಸ ಮಾಡುತ್ತಿದ್ದರು, ಆದರೆ ಪರಾರಿಯಾಗಿರುವ ಮತ್ತು ಅಲ್ಲಿ ಕೆಲಸ ಮಾಡುವವರ ಬಗ್ಗೆ ಪೊಲೀಸರಿಗೆ ಸುಳಿವು ಸಿಕ್ಕಿತು. ಅವರು ಫೆಬ್ರವರಿ 22, 2020 ರ ಮುಂಜಾನೆ ಸ್ಥಳದ ಮೇಲೆ ದಾಳಿ ನಡೆಸಿದ್ದರು.

## 22 ವರ್ಷಗಳ ನಂತರ ಪತ್ತೆಯಾಯ್ತು ಪರ್ವತರೋಹಿ ಪಾರ್ಥಿವ ಶರೀರ

**ಲಿಮಾ:** ಪೆರುವಿನಲ್ಲಿ ಹಿಮಭರಿತ ಶಿಖರವನ್ನು ಏರುತ್ತಿದ್ದಾಗ ಕಣರೆಯಾಗಿದ್ದ ಅಮೆರಿಕದ ಪರ್ವತಾರೋಹಿಯ ದೇಹ 22 ವರ್ಷಗಳ ನಂತರ ಪತ್ತೆಯಾಗಿದೆ. ಹಿಮದ ಪರಿಣಾಮ ಅವರ ದೇಹ ಕೊಳೆಯದೆ ಮಾಮೂಲಿನಂತೆ ಪತ್ತೆಯಾಗಿರುವುದನ್ನು ಪೆರು ಪೊಲೀಸರು ಖಚಿತಪಡಿಸಿದ್ದಾರೆ. ವಿಲಿಯಂ ಸ್ಟ್ಯಾಂಪ್ ಫ್ಲ್ ಅವರು ಕಳೆದ 2002 ರಲ್ಲಿ 59ನೇ ವಯಸ್ಸಿನಲ್ಲಿ ಪರ್ವತಾರೋಹಣ ಮಾಡುತ್ತಿದ್ದಾಗ ಹಿಮ ಕುಸಿತದಿಂದಾಗಿ ಸಾವನ್ನಪ್ಪಿದ್ದರು.6,700 ಮೀಟರ್ (22,000 ಅಡಿ) ಗಿಂತ ಹೆಚ್ಚು ಎತ್ತರವಿರುವ ಹುವಾಸ್ಕಾರನ್ ಪರ್ವತದ ಮೇಲೆ ಅವರು ಸಾವನ್ನಪ್ಪಿದ್ದರಿಂದ ಅವರ ದೇಹವನ್ನು ಪತ್ತೆ ಮಾಡಲು ಇದುವರೆಗೂ ಸಾಧ್ಯವಾಗಿರಲಿಲ್ಲ.

ಇದೀಗ ಅವರ ಅವಶೇಷಗಳು ಆಂಡಿಸ್‌ನ ಕಾರ್ಡಿಲ್ಲೆರಾ ಬ್ಲಾಂಕಾ ಶ್ರೇಣಿಯಲ್ಲಿ ಪತ್ತೆಯಾಗಿದೆ ಎಂದು ಪೆರುವಿಯನ್ ಪೊಲೀಸರು ಹೇಳಿದ್ದಾರೆ. ಸ್ಟಾಂಪ್ ಫ್ಲ್ ಅವರ ದೇಹ, ಹಾಗೆಯೇ ಅವರ ಬಟ್ಟೆ, ರಂಜಾಮು, ಬೂಟುಗಳನ್ನು ಉತ್ತಮ ರೀತಿಯಲ್ಲಿ ಪತ್ತೆಯಾಗಿರುವುದು ಅಚ್ಚರಿಗೆ ಕಾರಣವಾಗಿದೆ. ಆತನ ಪಾಸ್‌ಪೋರ್ಟ್ ಆತನ ಅಸ್ತಿಯಲ್ಲಿ ಪತ್ತೆಯಾಗಿದ್ದು, ಮತದೇಹವನ್ನು ಗುರುತಿಸಲು ಪೊಲೀಸರಿಗೆ ಅವಕಾಶ ಕಲ್ಪಿಸಿದೆ.ಈಶಾನ್ಯ ಪೆರುವಿನ ಪರ್ವತಗಳು, ಹುವಾಸ್ಕರಾನ್ ಮತ್ತು ಕ್ಯಾಶನ್‌ನಂತಹ ಹಿಮಭರಿತ ಶಿಖರಗಳಿಗೆ ನೆಲೆಯಾಗಿದೆ, ಇದು ಪ್ರಪಂಚದಾದ್ಯಂತದ ಪರ್ವತಾರೋಹಿಗಳಿಗೆ ನೆಚ್ಚಿನ ತಾಣವಾಗಿದೆ.

## ಸರ್ಕಾರಕ್ಕೆ ತನಿಖೆಯ ವರದಿ ಸಲ್ಲಿಸಿದ ಎಸ್‌ಐಟಿ

**ಲಕ್ನೋ:** ಹತ್ರಾಸ್ ಕಾಲ್ತುಳಿತದ ತನಿಖೆಗಾಗಿ ರಚಿಸಲಾದ ವಿಶೇಷ ತನಿಖಾ ತಂಡ (ಎಸ್‌ಐಟಿ) ಉತ್ತರ ಪ್ರದೇಶ ಸರ್ಕಾರಕ್ಕೆ ತನ್ನ ವರದಿಯನ್ನು ಸಲ್ಲಿಸಿದೆ. ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ (ಆಗ್ರಾ ವಲಯ) ಅನುಪಮ್ ಕುಲಶ್ರೇಷ್ಠ ಅವರು ಎಸ್‌ಐಟಿಯ ನೇತೃತ್ವ ವಹಿಸಿದ್ದರು. ಎಸ್‌ಐಟಿ ತನ್ನ ವರದಿಯನ್ನು ಸರಕಾರಕ್ಕೆ ಸಲ್ಲಿಸಿದೆ ಎಂದು ಮಾಹಿತಿ ನಿರ್ದೇಶಕ ಶಿರ್ಶಿ ತಿಳಿಸಿದ್ದಾರೆ. ಆದರೆ, ವರದಿಯ ಅಂಶಗಳನ್ನು ಅವರು ಬಹಿರಂಗಪಡಿಸಿಲ್ಲ. ಅಲಹಾಬಾದ್ ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಬ್ರಿಜೇಶ್ ಕುಮಾರ್ ಶ್ರೀವಾಸ್ತವ ಮತ್ತು ನಿವೃತ್ತ ಐಪಿಎಸ್ ಹೇಮಂತ್ ರಾವ್ ನೇತೃತ್ವದ ಪ್ರತ್ಯೇಕ ನ್ಯಾಯಾಂಗ ಆಯೋಗವೂ ಹತ್ರಾಸ್ ಕಾಲ್ತುಳಿತ ಪ್ರಕರಣದ ತನಿಖೆ ನಡೆಸುತ್ತಿದೆ.

## ಉಗ್ರರ ದಾಳಿಯಲ್ಲಿ ಐವರು ಯೋಧರು ಹುತಾತ್ಮ, ಕಂಬನಿ ಮಿಡಿದ ಸಚಿವ

**ನವದೆಹಲಿ:** ಜಮ್ಮು, ಕಾಶ್ಮೀರದ ಕಥುವಾ ಜಿಲ್ಲೆಯಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಐವರು ಸೇನಾ ಸಿಬ್ಬಂದಿಗಳ ಸಾವಿಗೆ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ತೀವ್ರ ಕಂಬನಿ ಮಿಡಿದಿದ್ದಾರೆ. ಕಥುವಾ (ಜೆಕೆ)ಯ ಬದ್ನೋಟಾದಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ನಮ ಐವರು ವೀರ ಭಾರತೀಯ ಸೇನೆಯ ಯೋಧರನ್ನು ಕಳೆದುಕೊಂಡಿದ್ದಕ್ಕಾಗಿ ನಾನು ತೀವ್ರ ದುಃಖಿತನಾಗಿದ್ದೇನೆ ಎಂದು ರಕ್ಷಣಾ ಸಚಿವರು ಎಕ್ಸ್ ನಲ್ಲಿ ಸಂತಾಪ ಸೂಚಿಸಿದ್ದಾರೆ. ಹುತಾತ್ಮರಾದ ಸೈನಿಕರ ಕುಟುಂಬಗಳಿಗೆ ನನ್ನ ಸಂತಾಪಗಳು, ಈ ಕಷ್ಟದ ಸಮಯದಲ್ಲಿ ರಾಷ್ಟ್ರವು ಅವರೊಂದಿಗೆ ದೃಢವಾಗಿ ನಿಂತಿದೆ. ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳು ನಡೆಯುತ್ತಿವೆ ಮತ್ತು ನಮ ಸೈನಿಕರು ಈ ಪ್ರದೇಶದಲ್ಲಿ ಶಾಂತಿ ಮತ್ತು ಸುವ್ಯವಸ್ಥೆಯನ್ನು ತರಲು ನಿರ್ಧರಿಸಿದ್ದಾರೆ.

ಈ ಭೀಕರ ಭಯೋತ್ಪಾದನಾ ದಾಳಿಯಲ್ಲಿ ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ನಾನು ಪ್ರಾರ್ಥಿಸುತ್ತೇನೆ ಎಂದು ಸಿಂಗ್ ಹೇಳಿದರು. ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳು ನಡೆಯುತ್ತಿವೆ ಮತ್ತು ಸೈನಿಕರು ಈ ಪ್ರದೇಶದಲ್ಲಿ ಶಾಂತಿ ಮತ್ತು ಸುವ್ಯವಸ್ಥೆಯನ್ನು ತರಲು ನಿರ್ಧರಿಸಿದ್ದಾರೆ ಎಂದಿದ್ದಾರೆ.

ಕಥುವಾ ದಲ್ಲಿನ ಬದ್ನೋಟಾ ಪ್ರದೇಶದಲ್ಲಿ ಸೋಮವಾರ ಭಾರೀ ಶಸಸಜ್ಜಿ ತ ಭಯೋತ್ಪಾದಕರ ಗುಂಪು ಗಸ್ತು ತಿರುಗುತ್ತಿದ್ದ ಪಾರ್ಟಿಯ ಮೇಲೆ ಹೊಂಚುದಾಳಿ ನಡೆಸಿದಾಗ ಐವರು ಸೇನಾ ಸಿಬ್ಬಂದಿಗಳು ಸಾವನ್ನಪ್ಪಿದ್ದಾರೆ ಮತ್ತು ಹಲವರು ಗಾಯಗೊಂಡಿದ್ದಾರೆ.

## ಅಮೆರಿಕ: ಭಾರತದ ವಿದ್ಯಾರ್ಥಿ ಸಾವು

**ನ್ಯೂಯಾರ್ಕ್:** ಟ್ರೈನ್ ವಿಶ್ವವಿದ್ಯಾಲಯದಲ್ಲಿ ಓದುತ್ತಿದ್ದ 25 ವರ್ಷದ ಭಾರತೀಯ ವಿದ್ಯಾರ್ಥಿ ನ್ಯೂಯಾರ್ಕ್ ಅಲ್ಬನಿಯಲ್ಲಿರುವ ಜಲಪಾತದಲ್ಲಿ ಬಿದ್ದು ಮೃತಪಟ್ಟಿದ್ದಾರೆ. ಮೃತ ವಿದ್ಯಾರ್ಥಿಯನ್ನು ಸಾಯಿ ಸೂರ್ಯ ಅವಿನಾಶ್ ಗಡ್ಡೆ ಎಂದು ಗುರುತಿಸಲಾಗಿದೆ. ಜುಲೈ 7ರಂದು ಬಾರ್ಬರವಿಲ್ಲೆ ಫಾಲ್ಸ್‌ನಲ್ಲಿ ಬಿದ್ದು, ಅವರು ಮೃತಪಟ್ಟಿದ್ದಾರೆ.

ದುಃಖದಲ್ಲಿರುವ ಅವರ ಕುಟುಂಬ ಮತ್ತು ಸ್ನೇಹಿತರಿಗೆ ತೀವ್ರ ಸಂತಾಪಗಳು. ಸಾಯಿ ಸೂರ್ಯ ಅವರ ಪಾರ್ಥಿವ ಶರೀರವನ್ನು ಭಾರತಕ್ಕೆ ಸಾಗಿಸಲು ಅಗತ್ಯವಿರುವ ಎನ್‌ಒಸಿ ವಿತರಣೆ ಸೇರಿದಂತೆ ಕುಟುಂಬಕ್ಕೆ ಅಗತ್ಯ ನೆರವು ನೀಡಲಾಗುವುದು' ಎಂದು ಭಾರತೀಯ ಕಾನ್ಸುಲೇಟ್ ಜನರಲ್ 'ಎಕ್ಸ್'ನಲ್ಲಿ ತಿಳಿಸಿದ್ದಾರೆ. ವರದಿಗಳ ಪ್ರಕಾರ ಸಾಯಿ ಸೂರ್ಯ ಭಾರತದ ತೆಲಂಗಾಣ ರಾಜ್ಯದವರು.

# ಸೆಲಿಬ್ರಿಟಿ ಸ್ಟೇಟಸ್ ಬಗ್ಗೆ ಹೆಚ್ಚು ಯೋಚಿಸಲ್ಲ

ಸೂರ್ಯ ಕುಮಾರ್ ಯಾದವ್ ಅವರನ್ನು 360 ಡಿಗ್ರಿ ಕ್ರಿಕೆಟರ್ ಅಂತಲೂ ಕರೆಯುವುದುಂಟು. ಅದರೆ ಈ ಡೌನ್‌ಟು ಅರ್ಥ್ ಕ್ರಿಕೆಟರ್ ಅಂಥ ಕೀರ್ತಿ ಕೇವಲ ಎಬಿ ಡಿವಿಲಿಯರ್ಸ್‌ಗೆ ಮಾತ್ರ ಸಲ್ಲುತ್ತದೆ, ತಾನೊಬ್ಬ ಸಾಮಾನ್ಯ ಕ್ರಿಕೆಟಿಗ ಅನ್ನುತ್ತಾರೆ. ಪತ್ನಿ ದಿವೀಶಾ ಶೆಟ್ಟಿ ಜೊತೆ ಅವರು ಉಡುಪಿಗೆ ಹತ್ತಿರದ ಕಾಪುನಲ್ಲಿ ಮಾರಿಗುಡಿ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿ ಹರಕೆ ತೀರಿಸಿದ್ದನ್ನು ನಾವು ಈಗಾಗಲೇ ವರದಿ ಮಾಡಿದ್ದೇವೆ. ನಂತರ ಉಡುಪಿ ಜಿಲ್ಲೆಯ ಮಾಧ್ಯಮ ಪ್ರತಿನಿಧಿಗಳೊಂದಿಗೆ ಸೂರ್ಯ ಮನಬಿಚ್ಚಿ ಮಾತಾಡಿದರು.

ದೇವಸ್ಥಾನಕ್ಕೆ ಭೇಟಿ ನೀಡಿದ ಬಳಿಕ ಮನಸ್ಸು ಪ್ರಶಾಂತವಾಗಿದೆ, ಸುಮಾರು 5 ವರ್ಷಗಳ ಹಿಂದೆ ಇಲ್ಲಿಗೆ ಬಂದಿದ್ದೆ ಇದು ಎರಡನೇ ಭೇಟಿ ಎಂದು ಸೂರ್ಯ ಹೇಳಿದರು. ಸೆಲಿಬ್ರಿಟಿ ಸ್ಟೇಟಸ್ ಬಗ್ಗೆ ತಾನು ಹೆಚ್ಚು ಯೋಚಿಸಲ್ಲ ಮತ್ತು ಅದನ್ನು ತಲೆಗೂ ಏರಿಸಿಕೊಳ್ಳಲ್ಲ, ಯಾಕೆಂದರೆ ಅದು ಬದುಕಿನ ಒಂದು ಭಾಗ ಮಾತ್ರ, ಅದು ಮುಗಿದ ಬಳಿಕ ನಾವು ಸಾಮಾನ್ಯನಾಗುತ್ತೇವೆ ಎಂದು ಸೂರ್ಯ ಹೇಳಿದರು. ಭಾರತ ಟಿ20ಐ ವಿಶ್ವಕಪ್ ಗೆದ್ದ ಬಳಿಕ ಬದುಕಿನಲ್ಲಿ ಯಾವತ್ತೂ ಕಟ್ ಮಾಡದಷ್ಟು ಕೇಕ್ ಗಳನ್ನು ಕಟ್ ಮಾಡಿದೆ, ತಮ್ಮ ಮದುವೆಯ ವಾರ್ಷಿಕೋತ್ಸವ ಸಹ ಅವತ್ತೇ ಇದ್ದ ಕಾರಣ ಕೇಕ್ ಕತ್ತರಿಸುವ ಕೆಲಸ ದುಪ್ಪಟ್ಟುಗೊಂಡಿತ್ತು ಎಂದು ಅವರು ನಗುತ್ತಾ ಹೇಳಿದರು.



ಬದುಕಿನ ಒಂದು ಭಾಗ

# ಭಾರತದ ಧ್ವಜಕ್ಕೆ ರೋಹಿತ್ ಅಗೌರವ

## ಟೀಮ್ ಇಂಡಿಯಾ ನಾಯಕನ ವಿರುದ್ಧ ಸೋಷಿಯಲ್ ಮೀಡಿಯಾದಲ್ಲಿ ಆಕ್ರೋಶ

ಟೀಮ್ ಇಂಡಿಯಾ ನಾಯಕ ರೋಹಿತ್ ಶರ್ಮಾ ಭಾರತದ ಧ್ವಜಕ್ಕೆ ಅಗೌರವ ತೋರಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಟಿ20 ವಿಶ್ವಕಪ್ ಗೆದ್ದ ಬಳಿಕ ಹಿಟ್‌ಮ್ಯಾನ್ ತ್ರಿವರ್ಣ ಧ್ವಜದೊಂದಿಗೆ ಸಂಭ್ರಮಿಸಿದ್ದರು. ಇದೇ ವೇಳೆ ಅವರು ಧ್ವಜವನ್ನು ನೆಡಲು ಪ್ರಯತ್ನಿಸಿದ್ದರು. ಈ ಫೋಟೋಗಳು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿತ್ತು.

ಇದೀಗ ಅದೇ ಫೋಟೋವನ್ನು ರೋಹಿತ್ ಶರ್ಮಾ ತಮ್ಮ ಎಕ್ಸ್ ಖಾತೆಯ ಪ್ರೊಫೈಲ್ ಪಿಕ್ಚರ್ ಆಗಿ ಬಳಸಿಕೊಂಡಿದ್ದಾರೆ. ಇದರ ಬೆನ್ನಲ್ಲೇ ವಿವಾದ ಶುರುವಾಗಿದ್ದು, ಟೀಮ್ ಇಂಡಿಯಾ ನಾಯಕನ ವಿರುದ್ಧ ಸೋಷಿಯಲ್ ಮೀಡಿಯಾದಲ್ಲಿ ಅನೇಕರು ಆಕ್ರೋಶ ಹೊರಹಾಕಿದ್ದಾರೆ. ರೋಹಿತ್ ಅವರ ಪ್ರೊಫೈಲ್ ಚಿತ್ರದಲ್ಲಿ ಭಾರತದ ತ್ರಿವರ್ಣ ಧ್ವಜವು ನೆಲವನ್ನು ಸ್ಪರ್ಶಿಸುತ್ತಿರುವುದು ಕಾಣಬಹುದು. ಇದು ಭಾರತಕ್ಕೆ ಮಾಡಿದ ಅವಮಾನ. ಏಕೆಂದರೆ 1971ರ ರಾಷ್ಟ್ರೀಯ ಗೌರವ ಅವಮಾನಗಳ ತಡೆ ಕಾಯಿದೆಯ ಪ್ರಕಾರ, ಧ್ವಜವನ್ನು ಉದ್ದೇಶಪೂರ್ವಕವಾಗಿ ನೆಲ ಅಥವಾ ನೀರಿನಲ್ಲಿ ಸ್ಪರ್ಶಿಸುವಂತೆ ಬಳಸುವಂತಿಲ್ಲ ಎಂದು ಅಭಿಮಾನಿಯೊಬ್ಬರು ಪ್ರತಿಕ್ರಿಯಿಸಿದ್ದಾರೆ.

ಭಾರತದ ಧ್ವಜವು ನೆಲವನ್ನು ಮುಟ್ಟಬಾರದು ಎಂಬುದು ಸರಳ ಕಾನೂನು ಇದು ಕೂಡ ಭಾರತೀಯ ನಾಯಕ ರೋಹಿತ್ ಶರ್ಮಾ ಅವರಿಗೆ ತಿಳಿದಿಲ್ಲವೇ ಎಂದು ಮತ್ತೊಬ್ಬರು ಪ್ರಶ್ನಿಸಿದ್ದಾರೆ. ಇಂತಹ ಸೂಕ್ಷ್ಮ ವಿಷಯಗಳ ಬಗ್ಗೆ ರೋಹಿತ್ ಶರ್ಮಾ ಎಚ್ಚರವಹಿಸಬೇಕೆಂದು ಕೆಲವರು ಕಿವಿಮಾತು ಹೇಳಿದ್ದಾರೆ. ಒಟ್ಟಿನಲ್ಲಿ ರೋಹಿತ್ ಶರ್ಮಾ ತಮ್ಮ ಸೋಷಿಯಲ್ ಮೀಡಿಯಾ ಖಾತೆಯಲ್ಲಿ ಹಂಚಿಕೊಂಡಿರುವ ಫೋಟೋದಲ್ಲಿ ತ್ರಿವರ್ಣ ಧ್ವಜವು ನೆಲಕ್ಕೆ ತಾಗಿರುವುದು ಸ್ಪಷ್ಟ. ಇದೇ ಕಾರಣದಿಂದಾಗಿ ಟೀಮ್ ಇಂಡಿಯಾ ನಾಯಕನ ವಿರುದ್ಧ ಇದೀಗ ಅನೇಕರು ಅಸಮಾಧಾನ ಹೊರಹಾಕಿದ್ದು, ರಾಷ್ಟ್ರಧ್ವಜವನ್ನು ಗೌರವಿಸುವಂತೆ ತಿಳಿಸಿದ್ದಾರೆ. ಅಲ್ಲದೆ ಕೂಡಲೇ ತಮ್ಮ ಪ್ರೊಫೈಲ್ ಪಿಕ್ಚರ್‌ನಿಂದ ಆ ಫೋಟೋವನ್ನು ತೆಗೆದು ಹಾಕುವಂತೆ ಸೂಚಿಸಿದ್ದಾರೆ.



ಹೊಸ ವಿವಾದ ಶುರು

## ಸ್ಫೋಟಕ ಸೆಂಚುರಿ ಸಿಡಿಸಿದ ಫಾಫ್ ಡುಪ್ಲೆಸಿಸ್

ಅಮೆರಿಕದಲ್ಲಿ ನಡೆಯುತ್ತಿರುವ ಮೇಜರ್ ಲೀಗ್ ಕ್ರಿಕೆಟ್ ಟಿ20 ಟೂರ್ನಿಯ 5ನೇ ಪಂದ್ಯದಲ್ಲಿ ಫಾಫ್ ಡುಪ್ಲೆಸಿಸ್ ಭರ್ಜರಿ ಶತಕ ಸಿಡಿಸಿ ಮಿಂಚಿದ್ದಾರೆ. ಮೊರಿಸ್ವಿಲ್ಲೆಯ ಚರ್ಚ್ ಸ್ಟ್ರೀಟ್ ಪಾರ್ಕ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಟೆಕ್ಸಾಸ್ ಸೂಪರ್ ಕಿಂಗ್ಸ್ ಮತ್ತು ವಾಷಿಂಗ್ಟನ್ ಫ್ರೀಡಮ್ ತಂಡಗಳು ಮುಖಾಮುಖಿಯಾಗಿತ್ತು. ಟಾಸ್ ಗೆದ್ದ ವಾಷಿಂಗ್ಟನ್ ಫ್ರೀಡಮ್ ತಂಡದ ನಾಯಕ ಸ್ಟೀವ್ ಸ್ಮಿತ್ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಇನಿಂಗ್ಸ್ ಆರಂಭಿಸಿದ ಟೆಕ್ಸಾಸ್ ಸೂಪರ್ ಕಿಂಗ್ಸ್ ತಂಡಕ್ಕೆ ಡೆವೊನ್ ಕಾನ್ವೆ ಹಾಗೂ ಫಾಫ್ ಡುಪ್ಲೆಸಿಸ್ ಭರ್ಜರಿ ಆರಂಭ ಒದಗಿಸಿದ್ದರು. ಆರಂಭದಿಂದಲೇ ಬಿರುಸಿನ ಬ್ಯಾಟಿಂಗ್‌ಗೆ ಒತ್ತು ನೀಡಿದ ಈ ಜೋಡಿಯು ಸಿಕ್ಸ್-ಫೋರ್‌ಗಳ ಸುರಿಮಳೈಗೈದರು. ಪರಿಣಾಮ ಮೊದಲ 10 ಓವರ್‌ಗಳಲ್ಲಿ ತಂಡದ ಮೊತ್ತ 100ರ ಗಡಿದಾಟಿತು.



# ಆಸೀಸ್‌ನಲ್ಲಿ ನಿರ್ಮಾಣಗೊಳ್ಳಲಿದೆ ಹೊಸ ಕ್ರಿಕೆಟ್ ಸ್ಟೇಡಿಯಂ

ಮಳೆ ಬಂದರೂ ಕೂಡ ಪಂದ್ಯಗಳನ್ನು ಯಾವುದೇ ಅಡೆತಡೆ ಇಲ್ಲದೆ ಆಯೋಜಿಸಲು ಅನುಕೂಲವಾಗುವಂತಹ ಒಳಾಂಗಣ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ ಮಾಡುವ ಸಾಹಸಕ್ಕೆ ಆಸ್ಟ್ರೇಲಿಯಾ ಸರ್ಕಾರ ಕೈ ಹಾಕಿದೆ. ವಿಶ್ವದ ಮೊದಲ ಆಲ್-ವೆದರ್ ಕ್ರಿಕೆಟ್ ಸ್ಟೇಡಿಯಂ ಇದಾಗಲಿದೆ. ಈ ಸ್ಟೇಡಿಯಂನ ವಿನ್ಯಾಸಗಳ ಸಾಂಕೇತಿಕ ಫೋಟೊಗಳು ಸದ್ಯ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದ್ದು, ಸ್ಟೇಡಿಯಂನ ಮೇಲ್ಛಾವಣಿಗೆ ಗೋಲಾಕಾರದಲ್ಲಿ ಗ್ಲಾಸ್‌ಗಳನ್ನು ನೀಡಲಾಗಿದೆ. ಹೀಗಾಗಿ ಮಳೆಯ ನಡುವೆಯೂ ಪಂದ್ಯವು ಸರಾಗವಾಗಿ ನಡೆಯಲಿದೆ. ಈ ಸ್ಟೇಡಿಯಂನಲ್ಲಿ 23,000-ಆಸನಗಳು ಇರಲಿದ್ದು, ಕ್ರಿಕೆಟ್ ಪಂದ್ಯಗಳು ಇಲ್ಲದ ಸಮಯದಲ್ಲಿ ಇತರೆ ಕ್ರೀಡೆಗಳಿಗೂ ಬಳಸುವಂತಹ ವ್ಯವಸ್ಥೆಯನ್ನು ನಿರ್ಮಿಸಲಾಗಿದೆ ಎಂದು ತಿಳಿದುಬಂದಿದೆ. ಈ ಸ್ಟೇಡಿಯಂ ನಿರ್ಮಾಣಕ್ಕೆ ತಗಲುವ ಅಂದಾಜು ವೆಚ್ಚ ಮತ್ತು ಯಾವಾಗ ಕಾಮಗಾರಿ ಶುರುವಾಗಲಿದೆ ಎನ್ನುವ ಮಾಹಿತಿ ಇನ್ನಷ್ಟೇ ತಿಳಿದುಬರಬೇಕಿದೆ.

ಮಳೆ ಬಂದರೂ ಪಂದ್ಯ ನಿಲ್ಲದು

ಸದ್ಯ ಕಾಕ್ಸ್ ಆರ್ಕಿಟೆಕ್ಚರ್ ಸಿಇಒ ಅಲಿಸ್ಟೈರ್ ರಿಚರ್ಡ್‌ಸನ್ ಅವರು, ಈ ಕ್ರೀಡಾಂಗಣದ ವಿನ್ಯಾಸವು ಎಲ್ಲಾ ಸಮಯದಲ್ಲೂ ಕ್ರಿಕೆಟ್ ಆಡಲು ಅನುಕೂಲವಾಗುವಂತೆ ಮಾಡಲಾಗುವುದು, ವಿಶೇಷವಾಗಿ ಇದರ ಮೇಲ್ಛಾವಣಿಯು ಅತೀ ಎತ್ತರದಲ್ಲಿರಲಿದೆ ಎಂದು ಹೇಳಿದ್ದಾರೆ. ಮೆಲ್ಬೋರ್ನ್‌ನಲ್ಲಿ ಮೇಲ್ಛಾವಣಿ ಮುಚ್ಚುವಂತಹ ಟೆನಿಸ್ ಕೋರ್ಟ್ ಇದೆ. ಇದೀಗ ಕ್ರಿಕೆಟ್‌ನಲ್ಲಿಯೂ ಇದೇ ರೀತಿಯ ಸ್ಟೇಡಿಯಂ ನಿರ್ಮಾಣಕ್ಕೆ ಆಸೀಸ್ ಸರ್ಕಾರ ಮುಂದಾಗಿದೆ. ಆದರೆ ಈ ಸ್ಟೇಡಿಯಂ ಕ್ರಿಕೆಟ್ ಆಡಲು ನೆರವಾಗಲಿದೆಯಾ ಎನ್ನುವುದು ಕ್ರಿಕೆಟ್ ಅಭಿಮಾನಿಗಳ ಸಹಜ ಪ್ರಶ್ನೆಯಾಗಿದೆ. ಏಕೆಂದರೆ ಬ್ಯಾಟರ್‌ಗಳು ಚೆಂಡನ್ನು ಎಷ್ಟು ಎತ್ತರಕ್ಕೆ ಹೊಡೆಯಬಲ್ಲರು ಎಂದು ಊಹಿಸಲು ಅಸಾಧ್ಯ. ಚೆಂಡು ಮೇಲ್ಛಾವಣಿಗೆ ಬಡಿಯುವ ಸಾಧ್ಯತೆಯೂ ಅಧಿಕವಾಗಿದೆ.

ಇತ್ತೀಚೆಗೆ ಹಿಮಾಚಲ ಪ್ರದೇಶ ಕ್ರಿಕೆಟ್ ಸಂಸ್ಥೆ (ಎಚ್‌ಪಿಸಿಎ)ಯ ಕ್ರೀಡಾಂಗಣದಲ್ಲಿ ಹೈಬ್ರಿಡ್ ಕ್ರಿಕೆಟ್ ಅಳವಡಿಸಲಾಗಿತ್ತು. ಇದು ಭಾರತದ ಮೊದಲ ಹೈಬ್ರಿಡ್ ಕ್ರಿಕೆಟ್ ಪಿಚ್ ಆಗಿದೆ. ನೆದರ್‌ಲೆಂಡ್ಸ್ ಮೂಲದ ಎಸ್‌ಐಎಸ್ ಸಂಸ್ಥೆಯು ಈ ಪಿಚ್ ಅಳವಡಿಕೆ ಮಾಡಿದ್ದು, ಶೇ.95ರಷ್ಟು ನೈಸರ್ಗಿಕ ಟರ್ಫ್ ಜತೆಗೆ ಶೇ.5ರಷ್ಟು ಸಿಂಥೆಟಿಕ್ ಫೈಬರನ್ನು ಈ ಪಿಚ್ ಒಳಗೊಂಡಿರಲಿದೆ. ಹೈಬ್ರಿಡ್ ಪಿಚ್ ಸಾಮಾನ್ಯ ಪಿಚ್‌ಗಿಂತ ಹೆಚ್ಚು ಸಮಯ ಬಳಕೆಗೆ ಯೋಗ್ಯವಾಗಿರಲಿದೆ. ಚೆಂಡಿನ ಬೌನ್ಸ್‌ನಲ್ಲಿ ಯಾವುದೇ ಏರುಪೇರು ಇರುವುದಿಲ್ಲ, ಪಿಚ್ ಮೇಲಿನ ತೇವಾಂಶವನ್ನು ಅಗತ್ಯ ಎನಿಸಿದಷ್ಟು ಮಟ್ಟಕ್ಕೆ ಕಾಯ್ದುಕೊಳ್ಳಬಹುದಾಗಿದೆ. ಇದರಿಂದಾಗಿ ಮೈದಾನ ಸಿಬ್ಬಂದಿಯ ಮೇಲಿನ ಒತ್ತಡ ಕಡಿಮೆಯಾಗಲಿದೆ. ಜತೆಗೆ ಆಟದ ಗುಣಮಟ್ಟವೂ ಹೆಚ್ಚಾಗಲಿದೆ. ಈಗಾಗಲೇ ಈ ಪಿಚ್‌ಗಳು ಇಂಗ್ಲೆಂಡ್‌ನ ಐತಿಹಾಸಿಕ ಲಾರ್ಡ್ಸ್ ಹಾಗೂ ದಿ ಓವಲ್ ಕ್ರೀಡಾಂಗಣಗಳಲ್ಲಿ ಬಳಕೆಯಾಗುತ್ತಿದೆ. ಈ ಪಿಚ್‌ನಲ್ಲಿ ಸದ್ಯ ಐಪಿಎಲ್ ಪಂದ್ಯಗಳು ನಡೆಯುವುದಿಲ್ಲ. ಕೇವಲ ಅಂತಾರಾಷ್ಟ್ರೀಯ ಪಂದ್ಯಗಳಿಗೆ ಮಾತ್ರ ಸೀಮಿತಗೊಳಿಸಲಾಗಿದೆ ಎಂದು ತಿಳಿದುಬಂದಿದೆ. ದೇಶೀಯ ಪಂದ್ಯಗಳು ಲಭ್ಯವಿಲ್ಲ. ಇತ್ತೀಚೆಗೆ ಟಿ20 ಹಾಗೂ ಏಕದಿನ ಪಂದ್ಯಗಳಿಗೆ ಹೈಬ್ರಿಡ್ ಪಿಚ್‌ಗಳ ಬಳಕೆಗೆ ಅಂತಾರಾಷ್ಟ್ರೀಯ ಕ್ರಿಕೆಟ್ ಸಂಸ್ಥೆ (ಐಸಿಸಿ) ಒಪ್ಪಿಗೆ ನೀಡಿತ್ತು.

# ರಾಹುಲ್ ದ್ರಾವಿಡ್ ಕೆಕೆಆರ್ ತಂಡದ ಮೆಂಟರ್

ಟೀಮ್ ಇಂಡಿಯಾದ ಮಾಜಿ ಕೋಚ್ ರಾಹುಲ್ ದ್ರಾವಿಡ್ ಅವರ ಮುಂದಿನ ನಡೆಯೇನು ಈ ಪ್ರಶ್ನೆಗೆ ಸದ್ಯ ಸಿಗುತ್ತಿರುವ ಉತ್ತರ ಐಪಿಎಲ್ ಮೆಂಟರ್. ಅಂದರೆ ದ್ರಾವಿಡ್ ಅವರನ್ನು ಮೆಂಟರ್ ಆಗಿ ನೇಮಿಸಿಕೊಳ್ಳಲು ಕೊಲ್ಕತ್ತಾ ನೈಟ್ ರೈಡರ್ಸ್ ಫ್ರಾಂಚೈಸಿ ಬಯಸಿದೆ ಎಂದು ವರದಿಯಾಗಿದೆ.

ಕೊಲ್ಕತ್ತಾ ನೈಟ್ ರೈಡರ್ಸ್ ತಂಡದ ಮೆಂಟರ್ ಆಗಿದ್ದ ಗೌತಮ್ ಗಂಭೀರ್ ಭಾರತ ತಂಡದ ಮುಖ್ಯ ಕೋಚ್ ಆಗುವುದು ಬಹುತೇಕ ಖಚಿತವಾಗಿದೆ. ಇದರ ಬೆನ್ನಲ್ಲೇ ಶಾರುಖ್ ಖಾನ್ ಮಾಲೀಕತ್ವದ ಕೆಕೆಆರ್ ಫ್ರಾಂಚೈಸಿಯು ಟೀಮ್ ಇಂಡಿಯಾದ ಮಾಜಿ ಕೋಚ್ ದ್ರಾವಿಡ್ ಅವರನ್ನು ಮೆಂಟರ್ ಹುದ್ದೆಗಾಗಿ ಸಂಪರ್ಕಿಸಿದೆ ಎಂದು ತಿಳಿದು ಬಂದಿದೆ.

ಬಾಲ್ ಟ್ಯಾಂಪರಿಂಗ್ ಆರೋಪ

ಈ ಹಿಂದೆ ರಾಹುಲ್ ದ್ರಾವಿಡ್ ರಾಜಸ್ಥಾನ್ ರಾಯಲ್ಸ್ ತಂಡದ ಮೆಂಟರ್ ಆಗಿ ಕಾರ್ಯ ನಿರ್ವಹಿಸಿದ್ದರು. ಹೀಗಾಗಿ ಈ ಹುದ್ದೆಯು ಅವರ ಪಾಲಿಗೆ ಹೊಸತೇನಲ್ಲ. ಅದರಲ್ಲೂ ಟಿ20 ವಿಶ್ವಕಪ್‌ನಲ್ಲಿ ಭಾರತ ತಂಡವನ್ನು ಯಶಸ್ಸಿನ ಶಿಖರಕ್ಕೇರಿಸಿರುವ ಕಾರಣ ದ್ರಾವಿಡ್ ಅವರನ್ನು ಮೆಂಟರ್ ಆಗಿ ನೇಮಕ ಮಾಡಲು ಕೆಕೆಆರ್ ಹೆಚ್ಚಿನ ಆಸಕ್ತಿ ಹೊಂದಿದೆ.

ಇದಾಗ್ಯೂ ರಾಹುಲ್ ದ್ರಾವಿಡ್ ಅವರ ನಿರ್ಧಾರ ವೇನು ಎಂಬುದು ಇನ್ನೂ ಸಹ ಬಹಿರಂಗವಾಗಿಲ್ಲ. ಒಂದು ವೇಳೆ ಕೆಕೆಆರ್ ಫ್ರಾಂಚೈಸಿಯ ಆಫರ್ ಒಪ್ಪಿದರೆ ಐಪಿಎಲ್ 2025ರಲ್ಲಿ ದಿ ಗ್ರೇಟ್ ವಾಲ್ ಕೊಲ್ಕತ್ತಾ ನೈಟ್ ರೈಡರ್ಸ್ ತಂಡದ ಮಾರ್ಗದರ್ಶಕರಾಗಿ ಕಾಣಿಸಿಕೊಳ್ಳಲಿದ್ದಾರೆ. ಐಪಿಎಲ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು. ರಾಜಸ್ಥಾನ್ ರಾಯಲ್ಸ್ ಪರ ಒಟ್ಟು 89 ಪಂದ್ಯಗಳನ್ನಾಡಿರುವ ರಾಹುಲ್ ದ್ರಾವಿಡ್ 11 ಅರ್ಧಶತಕಗಳೊಂದಿಗೆ ಒಟ್ಟು 2174 ರನ್ ಕಲೆ ಹಾಕಿದ್ದಾರೆ. ಹಾಗೆಯೇ 2014 ಮತ್ತು 2015 ರಲ್ಲಿ ರಾಜಸ್ಥಾನ್ ರಾಯಲ್ಸ್ ತಂಡದ ಮೆಂಟರ್ ಆಗಿಯೂ ಕಾರ್ಯ ನಿರ್ವಹಿಸಿದ್ದಾರೆ. ಹೀಗಾಗಿ ಕೆಕೆಆರ್ ತಂಡದ ಹೊಸ ಮಾರ್ಗದರ್ಶಕರಾಗಿ ರಾಹುಲ್ ದ್ರಾವಿಡ್ ಕಾಣಿಸಿಕೊಂಡರೂ ಅಚ್ಚರಿಪಡಬೇಕಿಲ್ಲ.



# ಕೃಷ್ಣಂ ಪ್ರಣಯ ಸಖಿ ನನ್ನ ಕೆರಿಯರ್‌ನ ಬಿಗ್ ಬಜೆಟ್ ಚಿತ್ರ



ಇದು ನನ್ನ ಜಾನರ್‌ನ ಚಿತ್ರ

ತ್ರಿಶೂಲ್ ಎಂಟರ್‌ಟೈನ್ಮೆಂಟ್ ಲಾಂಛನದಲ್ಲಿ ಪ್ರಶಾಂತ್ ಜಿ ರುದ್ರಪ್ಪ ನಿರ್ಮಿಸಿರುವ, ಶ್ರೀನಿವಾಸರಾಜು ನಿರ್ದೇಶನದಲ್ಲಿ ಗೋಲ್ಡನ್ ಸ್ಟಾರ್ ಗಣೇಶ್ ನಾಯಕರಾಗಿ ನಟಿಸಿರುವ 'ಕೃಷ್ಣಂ ಪ್ರಣಯ ಸಖಿ' ಚಿತ್ರದ ಎರಡು ಹಾಡುಗಳು ಬಿಡುಗಡೆಯಾಗಿದ್ದು, ಎರಡು ಹಾಡುಗಳು ಪ್ರೇಕ್ಷಕರ ಮನಗೆದ್ದಿದೆ. ಇದೀಗ ಈ ಚಿತ್ರದ ಪತ್ರಿಕಾಗೋಷ್ಠಿಯಲ್ಲಿ ನನ್ನ ಕೆರಿಯರ್‌ನ ಬಿಗ್ ಬಜೆಟ್ ಚಿತ್ರವಿದು ಎಂದು ನಟ ಗಣೇಶ್ ಮಾತನಾಡಿದ್ದಾರೆ. 'ದಂಡುಪಾಳ್ಯ' ಚಿತ್ರದ ನಿರ್ದೇಶಕ ಶ್ರೀನಿವಾಸರಾಜು ಅವರು ಚಿತ್ರದ ಕಥೆ ಹೇಳಲು ಬರುತ್ತಿದ್ದಾರೆ ಎಂದಾಗ, ಅವರು ನನ್ನ ಜಾನರ್ ಬದಲಾಯಿಸುವ ಕಥೆ ಮಾಡಿರಬಹುದು ಅಂದು ಕೊಂಡೆ. ಆದರೆ ಆರಂಭದಲ್ಲೇ ಅವರು ಎಂಟು ನಾಯಕಿಯರು ಎಂದಾಗ, ಓ ಇದು ನನ್ನ ಜಾನರ್‌ನ ಚಿತ್ರ ಅನಿಸಿತು. 'ಕೃಷ್ಣಂ ಪ್ರಣಯ ಸಖಿ' ಉತ್ತಮ ಕಥಾಹಂದರ ಹೊಂದಿರುವ ಚಿತ್ರ. ಕನ್ನಡ ಚಿತ್ರರಂಗದ ಹಿರಿಯ ನಟರೊಂದಿಗೆ ಈ ಚಿತ್ರದಲ್ಲಿ ನಟಿಸಿದ್ದು, ನನಗೆ ಸಂತೋಷವಾಯಿತು. ನೋಡುಗರಿಗೂ ಈ ಚಿತ್ರ ಇಷ್ಟವಾಗುತ್ತದೆ. ಅಂತಹ ಉತ್ತಮ ಚಿತ್ರ ಮಾಡಿದ್ದಾರೆ ಶ್ರೀನಿವಾಸರಾಜು. ಪ್ರಶಾಂತ್ ಅದ್ದೂರಿಯಾಗಿ ನಿರ್ಮಾಣ ಮಾಡಿದ್ದಾರೆ. 'ಕೃಷ್ಣಂ ಪ್ರಣಯ ಸಖಿ' ನನ್ನ ಈವರೆಗಿನ ವೃತ್ತಿ ಜೀವನದ ಬಿಗ್ ಬಜೆಟ್‌ನ ಚಿತ್ರ ಎಂದು ಗೋಲ್ಡನ್ ಸ್ಟಾರ್ ಗಣೇಶ್ ಮಾತನಾಡಿದ್ದಾರೆ.

ಇದು ಗಣೇಶ್‌ಗೆ ಸೂಕ್ತವಾದ ಕಥೆ. ಅವರ ಚಿತ್ರದಲ್ಲಿ ನಟಿಸಿರುವ ಎಲ್ಲಾ ಕಲಾವಿದರ ಅಭಿನಯ ಉತ್ತಮವಾಗಿ ಮೂಡಿಬಂದಿದೆ. ತಂತ್ರಜ್ಞರ ಕಾರ್ಯವೈಖರಿ ಕೂಡ ಚೆನ್ನಾಗಿದೆ. ಅರ್ಜುನ್ ಜನ್ಯ ಸಂಗೀತ ನೀಡಿರುವ ಆರು ಹಾಡುಗಳು ಈ ಚಿತ್ರದಲ್ಲಿದ್ದು, ಎರಡು ಹಾಡುಗಳು ಈಗಾಗಲೇ ಆನಂದ್ ಆಡಿಯೋ ಮೂಲಕ ಬಿಡುಗಡೆಯಾಗಿದೆ. ಇತ್ತೀಚೆಗೆ ಬಿಡುಗಡೆಯಾದ 'ಚಿನ್ನಮ್ಮ' ಹಾಡಂತೂ ಈಗಾಗಲೇ ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗಿದೆ. ಸಿನಿಮಾ ನೋಡಿ ಹಾರೈಸಿ ಎಂದು ನಿರ್ದೇಶಕ ಶ್ರೀನಿವಾಸರಾಜು ಮಾತನಾಡಿದ್ದಾರೆ.

ಚಿತ್ರ ಉತ್ತಮವಾಗಿ ಮೂಡಿ ಬಂದಿರುವುದಕ್ಕೆ ನಿರ್ಮಾಪಕರ ಪುತ್ರಿ ಪ್ರೇರಣಾ ಪ್ರಶಾಂತ್ ಧನ್ಯವಾದ ತಿಳಿಸಿದರು. ಮಾಳವಿಕಾ ನಾಯರ್, ಶರಣ್ಯ ಶೆಟ್ಟಿ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ.

# ಕೈ ತುಂಬಾ ಅವಕಾಶವಿರುವಾಗಲೇ ನನಗೆ ಆಕ್ಸಿಡೆಂಟ್ ಆಯ್ತು

ವಜ್ರಕಾಯ, ಇಸ್ಮಾರ್ಟ್ ಶಂಕರ್ ಖ್ಯಾತಿಯ ನಟಿ ನಭಾ ನಟೇಶ್ ಮತ್ತೆ ಸಿನಿಮಾಗೆ ಕಮ್‌ಬ್ಯಾಕ್ ಮಾಡಿದ್ದಾರೆ. 'ಡಾರ್ಲಿಂಗ್' ಸಿನಿಮಾ ಮೂಲಕ ಸದ್ದು ಮಾಡ್ತಿದ್ದಾರೆ. ಈ ಚಿತ್ರದ ಪ್ರಚಾರ ಕಾರ್ಯದಲ್ಲಿ 2 ವರ್ಷಗಳ ಹಿಂದೆ ತನಗೆ ಆದ ಆಕ್ಸಿಡೆಂಡ್ ಕುರಿತು ನಟಿ ಮಾತನಾಡಿದ್ದಾರೆ. ಕರಾಳ ದಿನಗಳ ನೆನೆದು ನಭಾ ಭಾವುಕರಾಗಿದ್ದಾರೆ. 2 ವರ್ಷಗಳ ಹಿಂದೆ ನಟಿಗೆ ಅಪಘಾತದಲ್ಲಿ ಎಡಗೈ ಮತ್ತು ಎಡಭುಜಕ್ಕೆ ಪೆಟ್ಟು ಮಾಡಿಕೊಂಡರು. ಶಸ್ತ್ರಚಿಕಿತ್ಸೆಗೆ ಒಳಗಾದ ನಭಾ ಇದರಿಂದ ಚೇತರಿಸಿಕೊಳ್ಳಲು ಒಂದೂವರೆ ವರ್ಷ ಕಳೆಯಿತು. ಅಂದಿನ ಆ ದಿನ ಹೇಗಿತ್ತು? ಎಂದು ನಟಿ ವಿವರಿಸಿದರು. ಕೈ ತುಂಬಾ ಅವಕಾಶ ಇರುವ ಸಮಯದಲ್ಲಿಯೇ ನನಗೆ ಆಕ್ಸಿಡೆಂಟ್ ಆಯಿತು. ಆ ನಂತರ ಸಿನಿಮಾ ಮಾಡಲು ಸಾಧ್ಯವಾಗಲಿಲ್ಲ. ಆಗ ನನ್ನ ಮನಸ್ಥಿತಿಯೇ ಸಂಪೂರ್ಣ ಬದಲಾಗಿ ಹೋಗಿತ್ತು. ಆಪರೇಷನ್ ಆದ ಹತ್ತು ದಿನಗಳ ನಂತರ ಶೂಟಿಂಗ್ ನಲ್ಲಿ ಭಾಗವಹಿಸಿದ್ದೆ ಆದರೆ ಅದರಿಂದ ಮತ್ತೆ ನನ್ನ ಆರೋಗ್ಯ ಹದಗೆಟ್ಟಿತ್ತು ಎಂದರು. ಆ ನಂತರ ನನಗೆ ಮತ್ತೊಂದು ಶಸ್ತ್ರಚಿಕಿತ್ಸೆ ಮಾಡಲಾಯಿತು ಎಂದು ನಟಿ ಭಾವುಕರಾಗಿದ್ದಾರೆ. ಡಿನನ್ನ ದೇಹಕ್ಕೆ ಖಂಡಿತವಾಗಿಯೂ ವಿಶ್ರಾಂತಿ ಬೇಕು. ಆರೋಗ್ಯವಾಗಿದ್ದರೆ ಮಾತ್ರ ಏನು ಬೇಕಾದರೂ ಮಾಡಬಹುದು ಎಂದು ನನಗೆ ಅರಿವು ಆಗಿದ್ದು ಆಗಲೇ ಹೀಗಾಗಿಯೇ ಗ್ಯಾಪ್ ತೆಗೆದುಕೊಂಡು ಆರೋಗ್ಯದ ಕಡೆ ಹೆಚ್ಚೆಚ್ಚು ಗಮನ ವಹಿಸಿದೆ. ಅವಕಾಶಗಳನ್ನು ನಾನು ಮತ್ತೆ ಎದುರು ನೋಡುತ್ತಿದ್ದಾಗ ಸಿಕ್ಕ ಸಿನಿಮಾನೇ ಈ 'ಡಾರ್ಲಿಂಗ್' ಎಂದಿದ್ದಾರೆ. ಇನ್ನೂ 'ಇಸ್ಮಾರ್ಟ್ ಶಂಕರ್' ಅಂತಹ ಕಮರ್ಷಿಯಲ್ ಸಿನಿಮಾ ಮಾಡಿದ ನಂತರ, 'ಡಾರ್ಲಿಂಗ್'ನಂತಹ ಪ್ರಯತ್ನಕ್ಕೆ ಮುಂದಾಗಿದ್ದೇಕೆ ಎಂದು ಅನೇಕರು ಪ್ರಶ್ನಿಸಿದ್ದರು. ಈಗ ಕಾಲ ಬದಲಾಗಿದೆ. ಬದಲಾದ ಈ ಕಾಲದಲ್ಲಿ ಕಥೆಯೇ ಚಿತ್ರಕ್ಕೆ ಬಹುಮುಖ್ಯವಾದದ್ದು ಎಂದಿದ್ದಾರೆ. ನಿರ್ದೇಶಕ ಅಶ್ವಿನ್ ಅವರು ನನ್ನನ್ನು ಸಂಪರ್ಕಿಸಿದ ರೀತಿ ಮತ್ತು ಅವರು ನನ್ನ ಪಾತ್ರವನ್ನು ಹೆಣೆದ ರೀತಿ ಇಷ್ಟವಾಗಿ ಈ ಚಿತ್ರಕ್ಕೆ ನಾನು ಓಕೆ ಎಂದೆ. ನನ್ನ ಪಾತ್ರ ತುಂಬಾ ಡಿಫರೆಂಟ್ ಆಗಿದೆ. ನಿಮಗೆಲ್ಲ ಈ ಚಿತ್ರ, ಗ್ಯಾರಂಟಿ ಇಷ್ಟವಾಗುತ್ತೆ ಎಂದು ನಭಾ ಭಾವುಕರಾಗಿಯೇ ಮಾತನಾಡಿದ್ದಾರೆ.



ಪಾತ್ರ ತುಂಬಾ ಡಿಫರೆಂಟ್

# ಹೊಸ ಗೆಟಪ್‌ನಲ್ಲಿ ಬಂದ ಶಿವಣ್ಣ



ಹ್ಯಾಟ್ರಿಕ್ ಹೀರೋ ಶಿವರಾಜ್‌ಕುಮಾರ್ ಬಳಿ ಕೈತುಂಬಾ ಸಿನಿಮಾಗಳಿವೆ. ಒಂದು ಸಿನಿಮಾಗಿಂತ ಮತ್ತೊಂದು ಸಿನಿಮಾದಲ್ಲಿ ವಿಭಿನ್ನ ಪಾತ್ರಗಳ ಮೂಲಕ ಶಿವಣ್ಣ ಸದ್ದು ಮಾಡುತ್ತಾರೆ. ಈಗ 'ಭೈರವನ ಕೊನೆ ಪಾಠ' ಹೇಳೋಕೆ ಶಿವಣ್ಣ ಹೊಸ ಗೆಟಪ್‌ನಲ್ಲಿ ಎಂಟ್ರಿ ಕೊಟ್ಟಿದ್ದಾರೆ. 'ಸಪ್ತಸಾಗರದಾಚೆ ಎಲ್ಲೋ' ಸಿನಿಮಾ ನಿರ್ದೇಶಕ ಹೇಮಂತ್ ರಾವ್ ನಿರ್ದೇಶನದ 'ಭೈರವನ ಕೊನೆ ಪಾಠ' ಚಿತ್ರದಲ್ಲಿ ವಯಸ್ಸಾದ ಸೈನಿಕನ ಲುಕ್‌ನಲ್ಲಿ ಶಿವಣ್ಣ ಕಾಣಿಸಿಕೊಂಡಿದ್ದಾರೆ. ಸೈನಿಕನಂತೆ ಕಾಣುವ ಭೈರವನ ಪೋಷಾಕು, ಬತ್ತಳಿಕೆ ಬಾಣ ಎಲ್ಲವೂ ಇದು ದಶಕಗಳ ಹಿಂದಿನ ಕಥೆ ಎನ್ನುವುದನ್ನು ಸಾರಿ ಹೇಳುವಂತಿದೆ. ಭೈರವ ಯಾವುದೋ ರಾಜ್ಯದ ಸೇನಾಪತಿಯಂತೆ ಕಾಣುತ್ತಿದ್ದಾರೆ. ಈ ಲುಕ್ ನೋಡಿ ಫ್ಯಾನ್ಸ್ ಬೆಂಕಿ ಎಂದು ಕಾಮೆಂಟ್ ಮಾಡಿದ್ದಾರೆ. ಪೋಸ್ಟರ್‌ಗೆ ಅಭಿಮಾನಿಗಳು ಮೆಚ್ಚುಗೆ ಸೂಚಿಸಿದ್ದಾರೆ.

ಶಿವಣ್ಣನ ಈ ಸಿನಿಮಾವನ್ನು ವೈಶಾಖ್ ಜೆ. ಗೌಡ ನಿರ್ಮಿಸುತ್ತಿದ್ದಾರೆ. ಕನ್ನಡ, ತೆಲುಗು, ತಮಿಳು, ಮಲಯಾಳಂನಲ್ಲಿ ಸಿನಿಮಾ ಮೂಡಿ ಬರಲಿದೆ.

# ಶೂಟಿಂಗ್‌ಗೆ ಬ್ರೇಕ್ ಹಾಕಿದ ರಿಷಬ್ ಶೆಟ್ಟಿ



ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಮಳೆಯ ಅಬ್ಬರ ಜೋರಾಗಿದೆ. ಮಳೆಯ ಕಾರಣಕ್ಕೆ ಅನೇಕ ಅವಾಂತರಗಳು ಸೃಷ್ಟಿ ಆಗಿವೆ. ಇದರಿಂದ ಸಿನಿಮಾ ಶೂಟಿಂಗ್‌ಗೂ ಬ್ರೇಕ್ ಬಿದ್ದಿದೆ. ಮಳೆ ಅವಾಂತದಿಂದ ಕಾಂತಾರ ಪ್ರೀಕ್ವೆಲ್ ಶೂಟಿಂಗ್‌ಗೆ ರಿಷಬ್ ಶೆಟ್ಟಿ ಬ್ರೇಕ್ ಹಾಕಿದ್ದಾರೆ. 'ಕಾಂತಾರ' ಸಿನಿಮಾದ ಸಕ್ಸಸ್ ನಂತರ 'ಕಾಂತಾರ' ಪ್ರೀಕ್ವೆಲ್ ಚಿತ್ರೀಕರಣ ಕುಂದಾಪುರದಲ್ಲಿ ಭರದಿಂದ ನಡೆಯುತ್ತಿತ್ತು. ಮಳೆ ಅಬ್ಬರ ಜೋರಾದ ಹಿನ್ನಲೆ ಶೂಟಿಂಗ್ ನಿಲ್ಲಿಸಿದ್ದಾರೆ ರಿಷಬ್ ಶೆಟ್ಟಿ.

ಈ ಸಿನಿಮಾಗಾಗಿ ಬೆಂಗಳೂರಿಂದ ಕುಂದಾಪುರಕ್ಕೆ ಫ್ಯಾಮಿಲಿ ಸಮೇತ ರಿಷಬ್ ಶಿಫ್ಟ್ ಆಗಿದ್ದರು. ಅವರ ಇಬ್ಬರು ಮಕ್ಕಳನ್ನು ಅಲ್ಲಿಯೇ ಶಾಲೆಗೆ ಸೇರಿಸಿದ್ದರು. ಮಳೆ ಕಡಿಮೆ ಆದ್ಮೇಲೆ ಮತ್ತೆ ಶೂಟಿಂಗ್‌ಗೆ ಚಾಲನೆ ಸಿಗಲಿದೆ. ಈಗಾಗಲೇ ರಿಲೀಸ್ ಆಗಿರುವ ಪೋಸ್ಟರ್‌ನಲ್ಲಿ ರಿಷಬ್ ಫಸ್ಟ್ ಲುಕ್‌ಗೆ ಅದ್ಭುತ ರೆಸ್ಪಾನ್ಸ್ ಸಿಕ್ಕಿದೆ. ಸಿನಿಮಾಗಾಗಿ ಫ್ಯಾನ್ಸ್ ಎದುರು ನೋಡ್ತಿದ್ದಾರೆ. ಅಂದಹಾಗೆ, ಈ ಚಿತ್ರವನ್ನು ಹೊಂಬಾಳೆ ಸಂಸ್ಥೆ ನಿರ್ಮಾಣ ಮಾಡ್ತಿದೆ.

# ಕನ್ನಡ ಚಿತ್ರಕ್ಕೆ ಎಂಟ್ರಿ ಕೊಟ್ಟ ಅಪ್ಸರ ರಾಣಿ



ರಾಮ್ ಗೋಪಾಲ್ ವರ್ಮ ನಿರ್ದೇಶನದ 'ಡೇಂಜರಸ್' ಚಿತ್ರದ ಮೂಲಕ ಜನಪ್ರಿಯರಾಗಿರುವ ನಟಿ ಅಪ್ಸರ ರಾಣಿ ಇದೇ ಮೊದಲ ಬಾರಿಗೆ ಕನ್ನಡ ಚಿತ್ರದಲ್ಲಿ ನಟಿಸಿದ್ದಾರೆ.

ಎಂ.ಶಂಕರ್ ನಿರ್ದೇಶನದ 'ಮುದುಡಿದ ಎಲೆಗಳು' ಚಿತ್ರದ ಅತಿಥಿ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಅಪ್ಸರ ರಾಣಿ ಅಭಿನಯಿಸಿದ ಹಾಡಿನ ಚಿತ್ರೀಕರಣ ಇತ್ತೀಚಿಗೆ ಹೆಬ್ಬಾಳದ ಪಶು ವೈದ್ಯಕೀಯ ಕಾಲೇಜಿನಲ್ಲಿ ನಡೆಯಿತು. ದುಬಾರಿ ಕಾರೊಂದರಲ್ಲಿ ಕಾಲೇಜ್‌ಗೆ ಕಾಲಿಟ್ಟ ಹುಡುಗಿಯ ಸೌಂದರ್ಯ ಹಾಗೂ ಸ್ಟೈಲ್‌ಗೆ ಕಾಲೇಜು ಹುಡುಗರು ಮಾರು ಹೋಗುತ್ತಾರೆ. ಹೊಸದಾಗಿ ಕಾಲೇಜು ಸೇರಿರುವ ಹುಡುಗಿ ಇರಬಹುದು ಎಂದು ಹುಡುಗರು ಆಲೋಚಿಸುತ್ತಿದ್ದಾಗ, ಅವರು ಕಾಲೇಜು ಸೇರಲು ಬಂದಿರುವ ಹುಡುಗಿಯಲ್ಲ. ಕೆಮಿಸ್ಟ್ರಿ ಟೀಚರ್ ಅಂತ ಗೊತ್ತಾಗುತ್ತದೆ. ಇದನ್ನು ನಿರ್ದೇಶಕರು ಹಾಡಿನ ಮೂಲಕ ತೋರಿಸಿದ್ದಾರೆ. ಭಜರಂಗಿ ಮೋಹನ್ ನೃತ್ಯ ಸಂಯೋಜಿಸಿದ ಈ ಹಾಡಿನಲ್ಲಿ ಅಪ್ಸರ ರಾಣಿ, ರಂಜಿತ್ ಕುಮಾರ್ ಹಾಗೂ ಪಂಕಜ್ ನಾರಾಯಣ್ ಅಭಿನಯಿಸಿದ್ದರು. 'ಮುದುಡಿದ ಎಲೆಗಳು' ಚಿತ್ರಕ್ಕೆ ಈಗಾಗಲೇ ಎಂಭತ್ತರಷ್ಟು ಭಾಗದ ಚಿತ್ರೀಕರಣ ಮುಕ್ತಾಯವಾಗಿದೆ. ಕೆಲವು ಭಾಗಗಳ ಚಿತ್ರೀಕರಣ ಮಾತ್ರ ಬಾಕಿಯದೆ. ಒಂದು ಹಾಡಿನ ಚಿತ್ರೀಕರಣ ಕಾಶ್ಮೀರದಲ್ಲಿ ನಡೆದಿದೆ. ಮತ್ತೊಂದು ಹಾಡು ತಜಿಕಿಸ್ತಾನದಲ್ಲಿ ಚಿತ್ರೀಕರಣಗೊಳ್ಳಲಿದೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**